

ಸುದ್ದಿಗಳ ಹೊನಲು

# ಸಂಜೆ ಮುಗಿಲು

ನೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 157, ಪುಟಗಳು: 8, ಶನಿವಾರ, 16 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ; ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶನಿವಾರ 16, ಮಾರ್ಚ್ -2024)

- ಶ್ರೀ ಶೋಭಕೃತನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಫಾಲ್ಗುಣ ಮಾಸ, ಶುಕ್ಲ ಪಕ್ಷ,
- ನವಮಿ, ಕೃತಿಕಾ ನಕ್ಷತ್ರ.
- ರಾಹುಕಾಲ - 09:04AM 10:40 AM
- ಗುಳಿಕಕಾಲ - 05:52 AM 07:28 AM
- ಯಮಗಂಡಕಾಲ - 1:52 PM 3:28 PM

## ಈಶ್ವರಪ್ಪ ವೈಯಕ್ತಿಕವಾಗಿ ನನ್ನ ಮೇಲೆ ಆರೋಪ ಮಾಡ್ತಿದ್ದಾರೆ

**ಬೆಂಗಳೂರು:** ಟಿಕೆಟ್ ವಿಚಾರದಲ್ಲಿ ನನ್ನ ಪಾತ್ರವಿಲ್ಲ. ಈಶ್ವರಪ್ಪ ವೈಯಕ್ತಿಕವಾಗಿ ನನ್ನ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ಮಾಜಿ ಸಿಎಂ ಯಡಿಯೂರಪ್ಪ ಬೇಸರ ಹೊರಹಾಕಿದರು.



ಈಶ್ವರಪ್ಪ ಅಸಮಾಧಾನ ಕುರಿತು ಮಾತನಾಡಿದ ಬಿಎಸ್‌ವೈ, ಈಶ್ವರಪ್ಪ ಬಳಿ ಕೇಂದ್ರದ ಹಿರಿಯ ನಾಯಕರು ಮಾತಾಡ್ತಾರೆ. ಟಿಕೆಟ್ ವಿಚಾರದಲ್ಲಿ ಕೇಂದ್ರ ನಾಯಕರು ತೀರ್ಮಾನ ಮಾಡಿರೋದು ಎಂದು ಸ್ಪಷ್ಟಪಡಿಸಿದರು.

ಶೋಭಾ ಕರಂದ್ಲಾಜೆ ಹಾಗೂ ಬೊಮ್ಮಾಯಿಯವರಿಗೆ ಟಿಕೆಟ್ ವಿಚಾರವಾಗಿ ಮಾತನಾಡಿ, ಇವರಿಗೆ ಯಡಿಯೂರಪ್ಪ ಅಲ್ರಿ ಟಿಕೆಟ್ ಕೊಟ್ಟಿರೋದು. ಹೈಕಮಾಂಡ್ ನಾಯಕರು ಕೊಟ್ಟಿರೋದು. ಈಶ್ವರಪ್ಪ ವೈಯಕ್ತಿಕವಾಗಿ ನನ್ನ ಮೇಲೆ ಆರೋಪ ಮಾಡ್ತಿದ್ದಾರೆ. ಟಿಕೆಟ್ ವಿಚಾರದಲ್ಲಿ ನನ್ನ ಪಾತ್ರವಿಲ್ಲ ಎಂದು ತಿಳಿಸಿದರು.

ಮೋದಿಯವರು ಕಲಬುರಗಿ ಕಾರ್ಯಕ್ರಮಕ್ಕೆ ಬನ್ನಿ ಎಂದಿದ್ದಾರೆ. ಪ್ರಧಾನಿಗಳ ಕಾರ್ಯಕ್ರಮಕ್ಕೆ ಹೋಗುತ್ತಿದ್ದೇನೆ. ಕಲಬುರಗಿಯಿಂದ ಹೈದರಾಬಾದ್ ಮೂಲಕ ವಾಪಾಸ್ ಆಗ್ತೀನಿ ಎಂದು ಹೇಳಿದರು.

### ಪ್ರತಾಪ್ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದು ಅದನ್ನು ಮುಂದುವರಿಸಿಕೊಂಡು ಹೋಗುವೆ

## ಯದುವೀರ್ ಭರವಸೆ

**ಮೈಸೂರು:** ಈ ಬಾರಿ ಮೈಸೂರು ಕೊಡಗು ಸಂಸದನಾಗಿ ಆಯ್ಕೆಯಾದ್ರೆ ಜಿಲ್ಲೆಯ ಪರಿಸರ ಸಂರಕ್ಷಣೆ ಹಾಗೂ ಕಾಫಿ ಬೆಳೆ ಉತ್ತೇಜನಕ್ಕೆ ಶ್ರಮಿಸುವುದಾಗಿ ಬಿಜೆಪಿ ಅಭ್ಯರ್ಥಿ ಯದುವೀರ್ ಒಡೆಯರ್ ಹೇಳಿದ್ದಾರೆ. ಟಿಕೆಟ್ ಘೋಷಣೆಯಾದ ಮೇಲೆ ಮೊದಲ ಬಾರಿಗೆ ನಿನ್ನೆ ಶುಕ್ರವಾರ ಜಿಲ್ಲೆಗೆ ಭೇಟಿ ನೀಡಿದ ಅವರಿಗೆ ಬಿಜೆಪಿ ಕಾರ್ಯಕರ್ತರು ಆತ್ಮೀಯ ಸ್ವಾಗತ ಕೋರಿದ್ರು.

ಮೈಸೂರು ಕೊಡಗು ಬಿಜೆಪಿ ಅಭ್ಯರ್ಥಿ ರಾಜವಂಶಸ್ಥ ಯದುವೀರ್ ಟಿಕೆಟ್ ಘೋಷಣೆಯಾದ ಮೇಲೆ ಇದೇ ಮೊದಲ ಬಾರಿಗೆ ಕೊಡಗು ಜಿಲ್ಲೆಗೆ ಭೇಟಿ ನೀಡಿದ್ದಾರೆ. ಇವರಿಗೆ ಜಿಲ್ಲೆಯ ವಿವಿಧೆಡೆ ಆತ್ಮೀಯ ಸ್ವಾಗತ ಕೋರಲಾಯಿತು. ಮಡಿಕೇರಿ ನಗರದಲ್ಲಿ ಆಯೋಜಿಸಲಾಗಿದ್ದ ಬಿಜೆಪಿ ಒಬಿಸಿ ಘಟಕದ ಸಮಾವೇಶದಲ್ಲಿ ಅವರು ಪಾಲ್ಗೊಂಡಿದ್ದರು. ಈ ಸಂದರ್ಭ ನಗರಕ್ಕೆ ಆಗಮಿಸಿದ ಅವರಿಗೆ ಸಾಂಪ್ರದಾಯಿಕ ಸ್ವಾಗತ ನೀಡಲಾಯಿತು. ಹೆಂಗೆಳೆಯರು ಆರತಿ ಎತ್ತಿ ತಿಲಕವಿಟ್ಟು ಹೂ ಮಳೆಗರೆದು ಬರಮಾಡಿಕೊಂಡ್ರು. ಮೈಸೂರು ಕೊಡಗು ಕ್ಷೇತ್ರದ ಅಭಿವೃದ್ಧಿಗೆ ತಾವು ಬದ್ಧರಾಗಿರುವುದಾಗಿ ಅವರು ಇದೇ ಸಂದರ್ಭದಲ್ಲಿ ತಿಳಿಸಿದ್ರು. ಸಂಸದ ಪ್ರತಾಪ್ ಸಿಂಹ ಎರಡು ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದು ಅದನ್ನ ಮುಂದುವರಿಸಿಕೊಂಡು ಹೋಗುವುದಾಗಿಯೂ ಭರವಸೆ ನೀಡಿದ್ರು. ಪುಟ 2



## ಸಂಕ್ಷಿಪ್ತ ಸುದ್ದಿ

### ಕೇಜ್ರಿವಾಲ್‌ಗೆ ಜಾಮೀನು ಮಂಜೂರು

**ದೆಹಲಿ:** ದೆಹಲಿ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ದೆಹಲಿಯ ರೂಸ್ ಅವೆನ್ಯೂ ನ್ಯಾಯಾಲಯ ಇಂದು (ಮಾ.16) ಜಾಮೀನು ಮಂಜೂರು ಮಾಡಿದೆ.ಪ್ರಕರಣಕ್ಕೆ ಸಂಬಂಧಿಸಿದಂತೆ ಅರವಿಂದ್ ಕೇಜ್ರಿವಾಲ್ ಅವರಿಗೆ ಇಡಿ 11 ಬಾರಿ ಸಮನ್ಸ್ ನೀಡಿತ್ತು. ಆದರೆ ಯಾವುದಕ್ಕೂ ಉತ್ತರ ನೀಡದ ಕೇಜ್ರಿವಾಲ್ ವಿರುದ್ಧ ಇಡಿ ರೂಸ್ ಅವೆನ್ಯೂ ನ್ಯಾಯಾಲಯದ ಮೊರೆ ಹೋಗಿತ್ತು. ಹಾಗಾಗಿ ಕೋರ್ಟ್ ಕೇಜ್ರಿವಾಲ್ ಅವರಿಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೋರ್ಟ್ ಹಾಜರಾಗುವಂತೆ ಆದೇಶ ನೀಡತ್ತು. ಈ ಹಿನ್ನಲೆಯಲ್ಲಿ ಕೇಜ್ರಿವಾಲ್ ಇಂದು ಕೋರ್ಟ್‌ಗೆ ಹಾಜರಾಗಿದ್ದಾರೆ. ಪುಟ 2



### ಉಜ್ಬೇಕಿಸ್ತಾನ್ ಮಹಿಳೆ ಕೊಲೆ ಇಬ್ಬರ ಬಂಧನ



**ಬೆಂಗಳೂರು:** ರಾಜಧಾನಿಯಲ್ಲಿ ಉಜ್ಬೇಕಿಸ್ತಾನದ ಮಹಿಳೆ ಅನುಮಾನಾಸ್ಪದ ಸಾವು ಪ್ರಕರಣವನ್ನು ಪೊಲೀಸರು ಭೇದಿಸಿದ್ದಾರೆ. ಇದು ಕೊಲೆ ಎಂಬುದು ತನಿಖೆಯಿಂದ ಪೊಲೀಸರಿಗೆ ತಿಳಿದುಬಂದಿದ್ದು, 24 ಗಂಟೆಯಲ್ಲಿ ಕೊಲೆ ಆರೋಪಿಗಳನ್ನು ಬಂಧಿಸಿದ್ದಾರೆ. ಪುಟ 2

### ಬೆಂಕಿ ಅವಘಡದಲ್ಲಿ ಭಾರತೀಯ ಮೂಲದ ಒಂದೇ ಕುಟುಂಬದ ಮೂವರು ಸಾವು

**ಒಟ್ಟಾವೊ:** ಕೆನಡಾದ ಒಂಟಾರಿಯೊ ಪ್ರಾಂತ್ಯದ ಮನೆಯೊಂದರಲ್ಲಿ ಬೆಂಕಿ ಅವಘಡದಿಂದ ಭಾರತೀಯ ಮೂಲದ ದಂಪತಿ ಮತ್ತು ಅವರ ಹದಿಹರೆಯದ ಮಗಳು ಸಾವನ್ನಪ್ಪಿದ್ದಾರೆ. ಘಟನೆಯು ಮಾರ್ಚ್ 7 ರಂದು ನಡೆದಿದೆ. ಪುಟ 2

### ಮಲ್ಲಿಕಾರ್ಜುನ ಖರ್ಗೆ ಕೋಟೆಯಲ್ಲಿ ಮೋದಿ ರಣಕಹಳೆ

# ಕಲಬುರಗಿಯಲ್ಲಿ ರೋಡ್ ಶೋ

**ಕಲಬುರಗಿ:** ಕಲ್ಯಾಣ ಕರ್ನಾಟಕ ಭಾಗದ ಹೆಬ್ಬಾಗಿಲು ಕಲಬುರಗಿ ಜಿಲ್ಲೆಯಲ್ಲಿ ಈ ಬಾರಿ ಬಿಸಿಲಿನ ತಾಪಮಾನದಷ್ಟೇ ಎಲೆಕ್ಷನ್ ಕಾವು ದಿನೇ ದಿನೇ ಹೆಚ್ಚಾಗುತ್ತಿದೆ. ಗ್ಯಾರಂಟಿ ಸಮಾವೇಶದ ನೆಪದಲ್ಲಿ ಲೋಕಸಭಾ ಚುನಾವಣೆ ರಣಕಹಳೆ ಮೊಳಗಿಸಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೋಟೆಯಲ್ಲಿಂದು ನರೇಂದ್ರ ಮೋದಿ ಚುನಾವಣೆ ಪಾಂಚಜನ್ಯ ಮೊಳಗಿಸಲಿದ್ದಾರೆ. ಲೋಕಸಭಾ ಚುನಾವಣೆಗೆ ಮೂಹೂರ್ತ ಫಿಕ್ಸ್ ಆಗೋ ಮುಂಚೆ ಕಲಬುರಗಿಯಲ್ಲಿ ನಮೋ ಬೃಹತ್ ಸಮಾವೇಶ ನಡೆಸುವುದರ ಜೊತೆಗೆ ಕಾರ್ಯಕರ್ತರಿಗೆ ಬೂಸ್ಟರ್ ಡೋಸ್ ನೀಡಲಿದ್ದಾರೆ.

**ಕಲಬುರಗಿಯಲ್ಲಿಂದು ಬಿಜೆಪಿ ಕಾರ್ಯಕರ್ತರ ಬೃಹತ್ ಸಮಾವೇಶ:** 2019ರ ಲೋಕಸಭಾ ಚುನಾವಣೆಯಲ್ಲಿ ಕಲಬುರಗಿಯಿಂದಲೇ ಪ್ರಚಾರ ಆರಂಭಿಸಿದ್ದ ಪ್ರಧಾನಿ ನರೇಂದ್ರ ಮೋದಿ ಇದೀಗ 2024ರಲ್ಲೂ ಕಲಬುರಗಿಯಿಂದಲೇ ಚುನಾವಣೆ ರಣಕಹಳೆ ಮೊಳಗಿಸಲಿದ್ದಾರೆ. ಇಂದು ಮಧ್ಯಾಹ್ನ ಕಲಬುರಗಿಗೆ ಪ್ರಧಾನಿ ಮೋದಿ ಆಗಮಿಸುತ್ತಿದ್ದು ನಗರದ ಎನ್‌ವಿ ಕಾಲೇಜು ಮೈದಾನದಲ್ಲಿ ಬೃಹತ್ ಕಾರ್ಯಕರ್ತರ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನ 1 ಗಂಟೆಗೆ ತೆಲಂಗಾಣದಿಂದ ಕಲಬುರಗಿ ಹೆಲಿಪ್ಯಾಡ್ ಆಗಮಿಸಲಿರೋ ನಮೋ ನಗರದ ಡಿಎಆರ್ ಹೆಲಿಪ್ಯಾಡ್‌ನಿಂದ 2:15ಕ್ಕೆ ವೇದಿಕೆಗೆ ಆಗಮಿಸಲಿದಾರೆ. ಮಧ್ಯಾಹ್ನ 2:15ಕ್ಕೆ ಬೃಹತ್ ಕಾರ್ಯಕರ್ತರ ಸಮಾವೇಶದಲ್ಲಿ ಭಾಗಿಯಾಗಲಿದ್ದು, ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಚುನಾವಣೆ ರಣಕಹಳೆ ಮೊಳಗಿಸಲಿದಾರೆ.

ಇನ್ನೂ ಪ್ರಧಾನಿ ಆಗಮನ ಹಿನ್ನಲೆಯಲ್ಲಿ ಎನ್‌ವಿ ಕಾಲೇಜು ಮೈದಾನದಲ್ಲಿ ಬೃಹತ್ ಪೆಂಡಾಲ್ ಹಾಗೂ ವೇದಿಕೆ ನಿರ್ಮಾಣವಾಗಿದ್ದು, ಬೀದರ್ ಹಾಗೂ ಕಲಬುರಗಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಸುಮಾರು 2 ಲಕ್ಷ ಜನ ಭಾಗಿಯಾಗಲಿದಾರೆ. ಸಮಾವೇಶದಲ್ಲಿ ಮಾಜಿ ಸಿಎಂಗಳಾದ ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ, ವಿಪಕ್ಷ ನಾಯಕ ಆರ್ ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಅನೇಕರು ಭಾಗಿಯಾಗಲಿದ್ದು, ಕಳೆದ ಬಾರಿಯಂತೆ ಈ ಬಾರಿಯೂ ಕಲಬುರಗಿಯಲ್ಲಿ ಕೇಸರಿ ಬಾವುಟ ಹಾರಿಸಿ ರಾಜ್ಯದಲ್ಲಿ ಅತೀಹೆಚ್ಚು ಸೀಟ್‌ಗಳನ್ನ ಗೆಲ್ಲಲು ನಮೋ ರಣತಂತ್ರ ಹೆಣೆಯಲಿದ್ದಾರೆ. ಇತ್ತ ಮೋದಿ ಆಗಮನಿಂದಾಗಿ ಕಳೆಗುಂದಿರೊ ಕಲಬುರಗಿ ಜಿಲ್ಲಾ ಬಿಜೆಪಿಗೂ ಹೊಸ ಚೈತನ್ಯ ಬಂದಿದ್ದು. ಇಂದಿನ ಕಾರ್ಯಕ್ರಮದ ಮೂಲಕ ಮತ್ತಷ್ಟು ಹುರುಪು ಬರೋ ಸಾಧ್ಯತೆ ಇದೆ. ಪುಟ 2




### ಬಿಎಸ್ಪಿ ಪಕ್ಷದಿಂದ ಮೊದಲ ಪಟ್ಟಿ ಬಿಡುಗಡೆ



**ಬೆಂಗಳೂರು:** ಲೋಕಸಭಾ ಚುನಾವಣೆಗೆ ಬಹುಜನ ಸಮಾಜ ಪಾರ್ಟಿ ರಾಜ್ಯದ 28 ಕ್ಷೇತ್ರಗಳ ಪೈಕಿ 25 ಅಭ್ಯರ್ಥಿಗಳ ಪಟ್ಟಿಯನ್ನು ಪಕ್ಷದ ಕಚೇರಿಯಲ್ಲಿ ಮಾರಸಂದ್ರ ಮುನಿಯಪ್ಪ ತಿಳಿಸಿದರು.

ಬೆಂಗಳೂರಿನ ಬಾಂಬುಬಜರ್ ರಸ್ತೆಯಲ್ಲಿರುವ ಬಿಎಸ್ಪಿ ರಾಜ್ಯ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ, 25 ಅಭ್ಯರ್ಥಿಗಳ ಪಟ್ಟಿಯನ್ನು ಪಕ್ಷದ ರಾಜ್ಯಾಧ್ಯಕ್ಷ ಮಾರಸಂದ್ರ ಮುನಿಯಪ್ಪ ಬಿಡುಗಡೆ ಮಾಡಿ ಮಾತನಾಡಿದ ಅವರು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಭಾರತ ದೇಶದ ಮಾನ್ಯತೆ ಪಡೆದ ರಾಷ್ಟ್ರೀಯ ಪಕ್ಷದಲ್ಲಿ 3ನೇ ಅತೀ ದೊಡ್ಡ ಪಕ್ಷವಾದ ಬಹುಜನ ಸಮಾಜ ಪಾರ್ಟಿಯ ರಾಷ್ಟ್ರೀಯ ಅಧ್ಯಕ್ಷರಾದಂತಹ ಬೆಹನ್ ಕುಮಾರಿ ಮಾಯವತಿಯವರ ಆದೇಶದಂತೆ ಕರ್ನಾಟಕ ರಾಜ್ಯದ 28 ಕ್ಷೇತ್ರಗಳ ಪೈಕಿ ಮೊದಲನೇ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಪುಟ 2

### ಉತ್ತರ ಕನ್ನಡ ಲೋಕಸಭೆ ಟಿಕೆಟ್‌ಗೆ ಭಾರಿ ಪೈಪೋಟಿ

## ನಾಯಕರ ಜೊತೆ ಚರ್ಚೆ

**ಕಾರವಾರ:** ಉತ್ತರ ಕನ್ನಡದ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಟಿಕೆಟ್ ಕುತೂಹಲ ಮೂಡಿಸಿದೆ. ಈ ಬಾರಿ ಅನಂತ್ ಕುಮಾರ್ ಹೆಗಡೆ ಅವರಿಗೆ ಟಿಕೆಟ್ ಸಿಗೋದು ಕಷ್ಟ ಎಂದು ಹೇಳಲಾಗುತ್ತಿದೆ. ಮತ್ತೊಂದೆಡೆ ಬಿಜೆಪಿ ರಾಜ್ಯ ಚುನಾವಣಾ ಉಸ್ತುವಾರಿ ರಾಧಾಮೋಹನ್ ದಾಸ್ ಅವರು ಅನಂತ್ ಕುಮಾರ್ ಹೆಗಡೆ ಜೊತೆ ಮಾತುಕತೆ ನಡೆಸಿದ್ದಾರೆ. ಅನಂತ್ ಕುಮಾರ್ ಹೆಗಡೆ ಅವರು ಟಿಕೆಟ್ ಸಿಗುವ ವಿಶ್ವಾಸದಲ್ಲಿದ್ದು ಪುಟ 2



## ನಮ್ಮ ಹೋರಾಟ ಕೇವಲ ಶಿವಮೊಗ್ಗ ಕ್ಷೇತ್ರಕ್ಕೆ ಸೀಮಿತ

**ಶಿವಮೊಗ್ಗ:** ಪುತ್ರನಿಗೆ ಹಾವೇರಿ ಲೋಕಸಭಾ ಟಿಕೆಟ್ ತಪ್ಪಿರುವುದು ಬಿಎಸ್ ಯಡಿಯೂರಪ್ಪ ಎಂದು ಬಹಿರಂಗವಾಗಿ ಹೇಳಿಕೆ ನೀಡಿದ್ದ ಕೆಎಸ್ ಈಶ್ವರಪ್ಪ ಅವರು ಬಿಎಸ್‌ವೈ ಕುಟುಂಬದ ವಿರುದ್ಧ ಸಮರ ಸಾರಿದ್ದಾರೆ. ತಕ್ಕ ಪಾಠ ಕಲಿಸಲು ಯಡಿಯೂರಪ್ಪ ಪುತ್ರ ಬಿವೈ ರಾಘವೇಂದ್ರ ಸ್ಪರ್ಧಿಸುತ್ತಿರುವ ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಂಡಾಯ ಸ್ಪರ್ಧೆ ಮಾಡುವುದಾಗಿ ಈಶ್ವರಪ್ಪ ಘೋಷಿಸಿದ್ದಾರೆ. ಅದರಂತೆ, ಇಂದಿನಿಂದಲೇ ಕ್ಷೇತ್ರದಲ್ಲಿ ಪ್ರಚಾರ ಕಾರ್ಯ ಆರಂಭಿಸಲಿದ್ದಾರೆ.



ಈ ಬಗ್ಗೆ ಮಾತನಾಡಿದ ಕೆಎಸ್ ಈಶ್ವರಪ್ಪ, ನಾನು ಪಕ್ಷೇತರ ಅಭ್ಯರ್ಥಿ ಆಗಿ ಸ್ಪರ್ಧೆ ಮಾಡುತ್ತೇನೆ. ನನ್ನ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ. ಪಕ್ಷ ತಂದೆ ಮಕ್ಕಳ ಕೈಗೆ ಸಿಕ್ಕಿದೆ. ಇದರಿಂದ ಕಾರ್ಯಕರ್ತರು ಪರದಾಡುತ್ತಿದ್ದಾರೆ. ಪಕ್ಷ ಉಳಿಸಲು ನನ್ನ ಈ ಹೋರಾಟವಾಗಿದೆ. ನಾವು ಪಕ್ಷ ಸಂಘಟನೆ ವಿಚಾರಕ್ಕೆ ಯತ್ನಾಳ್, ಸಿಟಿ ರವಿಗೆ ರಾಜ್ಯಾಧ್ಯಕ್ಷ ಸ್ಥಾನ ನೀಡಬೇಕಿತ್ತು. ಆದರೆ ಅದು ಬಿಟ್ಟು ವಿಜಯೇಂದ್ರಗೆ ರಾಜ್ಯಾಧ್ಯಕ್ಷ ಸ್ಥಾನ ನೀಡಿದರು. ನಾನು ಹಿಂದುತ್ವದ ವಿಚಾರದ ಮೇಲೆ ಚುನಾವಣೆ ಮಾಡುತ್ತೇನೆ. ರಾಘವೇಂದ್ರ ಲಿಂಗಾಯತ ಅಂತಾ ಚುನಾವಣೆ ಮಾಡುತ್ತಾರೆ. ಅವರು ಲಿಂಗಾಯತರಿಗೆ ಏನು ಕೊಟ್ಟಿದ್ದಾರೆ ಅವರಿಗೆ ಮಾತ್ರ ಲಿಂಗಾಯತರು ಸಿಮೀತ ಆಗಿಲ್ಲ. ನಮ್ಮ ಜೊತೆ ಕೂಡಾ ಈ ಸಮಾಜ ಇದೆ ಎಂದರು. ಪುಟ 2

## ಜಗದೀಶ್ ಶೆಟ್ಟರ್‌ಗೆ ಬೆಳಗಾವಿ ಟಿಕೆಟ್

**ಬೆಳಗಾವಿ:** ಧಾರವಾಡ ಮತ್ತು ಹಾವೇರಿ ಲೋಕಸಭಾ ಕ್ಷೇತ್ರಗಳ ಬಿಜೆಪಿ ಟಿಕೆಟ್ ಕೈತಪ್ಪಿದ್ದಿಂದ ಗೊಂದಲಕ್ಕೀಡಾಗಿದ್ದ ಜಗದೀಶ್ ಶೆಟ್ಟರ್ ಅವರಿಗೆ ಬೆಳಗಾವಿ ಕ್ಷೇತ್ರದ ಟಿಕೆಟ್ ಫೈನಲ್ ಮಾಡಲಾಗಿದೆ ಎಂದು ತಿಳಿದುಬಂದಿದೆ. ಕ್ಷೇತ್ರದ ಹಾಲಿ ಸಂಸದೆ ಮಂಗಳಾ ಅಂಗಡಿ ಕೂಡ ಹೇಳಿಕೆ ನೀಡಿದ್ದಾರೆ. ಇದರ ಬೆನ್ನಲ್ಲೇ, ಜಿಲ್ಲೆಯ ಬಿಜೆಪಿಯಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗುತ್ತಿದ್ದು, ಹೈಕಮಾಂಡ್ ಘೋಷಣೆಗಾಗಿ ಸ್ಥಳೀಯ ನಾಯಕರು ಕಾಯುತ್ತಿದ್ದಾರೆ.



ಯಾರು ಏನು ಹೇಳಿದ್ದಾರೋ ಗೊತ್ತಿಲ್ಲ, ನಾನು ಟಿವಿ ನೋಡಿಲ್ಲ ಎಂದು ಹೇಳಿದ ಬಿಜೆಪಿ ಶಾಸಕ ಅಭಯ್ ಪಾಟೀಲ್, ನಮ್ಮಲ್ಲಿ ಸ್ಥಳೀಯವಾಗಿ ಅನೇಕ ನಾಯಕರು ಸ್ಪರ್ಧೆಗೆ ಸಮರ್ಥರಿದ್ದಾರೆ. ಹಾಗಾಗಿ ರಾಷ್ಟ್ರೀಯ ನಾಯಕರು ಅಧಿಕೃತವಾಗಿ ಹೇಳುವವರೆಗೂ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದಿದ್ದಾರೆ. ಪುಟ 2

### ಮೈಸೂರಿಗೆ ಅಂತಿಮವಾಗದ ಕೈ ಅಭ್ಯರ್ಥಿ, ಯತೀಂದ್ರ ಸ್ಪರ್ಧೆಗೆ

## ಹೆಚ್ಚಿದ ಒತ್ತಡ

**ಮೈಸೂರು:** ಟಿಕೆಟ್ ಘೋಷಣೆಯಾಗುತ್ತಿದ್ದಂತೆ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಪ್ರಚಾರ ಕಾರ್ಯದಲ್ಲಿ ತೊಡಗಿದ್ದಾರೆ. ಬಿಜೆಪಿ, ಜೆಡಿಎಸ್ ನಾಯಕರ ಮನೆಗಳಿಗೆ ಭೇಟಿ ನೀಡಿ ವಿಶ್ವಾಸಕ್ಕೆ ತೆಗೆದುಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ.



ಟಿಕೆಟ್ ಘೋಷಣೆಯಾದ ಆರಂಭದಲ್ಲೇ ಫುಲ್ ಆಯಕ್ಟಿವ್ ಆದ ಯದುವೀರ್, ಮೊದಲ ದಿನ ಬಿಜೆಪಿ ನಗರಾಧ್ಯಕ್ಷ ಎಲ್. ನಾಗೇಂದ್ರ ಹಾಗೂ ಮಾಜಿ ಸಚಿವ ಎಸ್.ಎ ರಾಮದಾಸ್ ಮನೆಗೆ ಭೇಟಿ ನೀಡಿ ಮಾತುಕತೆ ನಡೆಸಿದರು. ನಿನ್ನೆ ಕೊಡಗು ಪ್ರವಾಸ ಮಾಡಿದ್ದ ಯದುವೀರ್ ಅವರು ಕಾರ್ಯಕರ್ತರೊಂದಿಗೆ ಊಟ ಮಾಡಿದ್ದರು. ಪುಟ 2

### ಮೃತ್ಯುವೆನ್ನುವುದೊಂದು ತೆರೆಯಿಳಿತ, ತೆರೆಯೇರು, ಮತ್ತೆ ತೋರ್ಪುದು ನಾಳೆ; ಡಿವಿಜಿ ಸಾಲು ಹಂಚಿಕೊಂಡ

## ಪ್ರತಾಪ್ ಸಿಂಹ ಟಾಂಗ್

**ಮೈಸೂರು:** ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಹಾಲಿ ಸಂಸದ ಪ್ರತಾಪ ಸಿಂಹಗೆ ಈ ಬಾರಿಯ ಬಿಜೆಪಿ ಟಿಕೆಟ್ ಕೈತಪ್ಪಿದೆ. ಮೈಸೂರು ರಾಜವಂಶಸ್ಥ ಯದುವೀರ ಒಡೆಯರ್ ಅವರನ್ನು ಬಿಜೆಪಿ ಕಣಕ್ಕೆ ಇಳಿಸಿದೆ. ಎರಡು ಬಾರಿ ಸಂಸದರಾಗಿ 10 ವರ್ಷ ಸೇವೆ ಸಲ್ಲಿಸಿದ್ದ ಪ್ರತಾಪ್ ಸಿಂಹ ಅವರು ಮೂರನೆ ಸಲವೂ ಟಿಕೆಟ್ ಸಿಗುವ ನಿರೀಕ್ಷೆಯಲ್ಲಿದ್ದರು. 10 ವರ್ಷಗಳ ಸಾಧನೆಯ ರಿಪೋರ್ಟ್ ಕಾರ್ಡ್ ಅನ್ನು ಕ್ಷೇತ್ರದ ಮತದಾರರಿಗೆ ತಲುಪಿಸಿದ್ದರು. ಆದರೆ ಬಿಜೆಪಿ ಹೊಸ ಅಭ್ಯರ್ಥಿಗೆ ಗಾಳ ಹಾಕಿದ್ದು ಯದುವೀರ ಒಡೆಯರ್ ಅವರಿಗೆ ಟಿಕೆಟ್ ನೀಡಿದೆ. ಸದ್ಯ ಡಿವಿಜಿ ಸಾಲು ಹಂಚಿಕೊಂಡು ವಿರೋಧಿಗಳಿಗೆ ಪ್ರತಾಪ್ ಸಿಂಹ ಟಾಂಗ್ ಕೊಟ್ಟಿದ್ದಾರೆ.



ಬಿಜೆಪಿ ಟಿಕೆಟ್ ನಿಂದ ವಂಚಿತರಾದ ಪ್ರತಾಪ್ ಸಿಂಹ ಮಂಕಾಗಿದ್ದಾರೆ. ಸದ್ಯ ಪ್ರತಾಪ್ ಸಿಂಹ ಅವರು ಮಂಕು ತಿಮ್ಮನ ಕಗ್ಗ ಒಂದನ್ನು ಫೇಸ್‌ಬುಕ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಡಿವಿಜಿ ನನ್ನ ನೆಚ್ಚಿನ ಬರಹಗಾರ ಎಂದು ಸಂಸದ ಪ್ರತಾಪ್ ಸಿಂಹ ಪೋಸ್ಟ್ ಮಾಡಿದ್ದಾರೆ.

**ಸತ್ತೆನೆಂದೆನಬೇಡ, ಸೋತೆನೆಂದನಬೇಡ,**
**ಬತ್ತಿತೆನ್ನೊಳು ಸತ್ತ್ವದೂಟೆಯೆನಬೇಡ**
**ಮೃತ್ಯುವೆನ್ನುವುದೊಂದು ತೆರೆಯಿಳಿತ,**
**ತೆರೆಯೇರು, ಮತ್ತೆ ತೋರ್ಪುದು ನಾಳೆ**
**ಸೋಲು ಗೆಲುವು ಸ್ವಾಭಾವಿಕವೇ, ಒಂದು**
**ಸೋಲಾಗಬಹುದು**
**ಒಂದು ಸಲ ಗೆಲುವಾಗಬಹುದು, ಇಂದು ಬಿದ್ದ**
**ಅಲೆ ನಾಳೆ ಏಳುತ್ತದೆ**
**ಇಂದು ಬಂದ ಸೋಲು ನಾಳೆ ಗೆಲುವಾಗುತ್ತದೆ**

**ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರತಾಪ್ ಸಿಂಹ ಪೋಸ್ಟ್ ಮಾಡಿದ್ದಾರೆ.**

ಬ್ರಹ್ಮವಸ್ತುವು ಆನಂದಪಡುವುದಕ್ಕೋಸ್ಕರ ಪ್ರಕೃತಿಯ ಮೂಲಕವಾಗಿ ಆಟವನ್ನು ನಡೆಸುತ್ತಿದೆ. ತ್ರಿಗುಣಗಳ ವ್ಯತ್ಯಾಸದಿಂದ ಸೋಲು, ಗೆಲವು ಸ್ವಾಭಾವಿಕವೇ. ಈ ಲೀಲೆ ಸತತವಾಗಿ ಕೊನೆಯಿಲ್ಲದೆ ನಡೆಯುತ್ತಿರುವುದರಿಂದ ಇಲ್ಲಿ ಒಂದು ಸಲ ಸೋಲಾಗಬಹುದು, ಇನ್ನೊಂದು ಸಲ ಗೆಲುವಾಗಬಹುದು. ಆದದ್ದರಿಂದ ಈ ತತ್ತ್ವವನ್ನು ಮನದಟ್ಟು ಮಾಡಿಕೊಂಡು, ನನ್ನ ಜೀವನ ಕಟ್ಟಿತು, ಪುಟ 2

### 32 ಕೋಟಿ ತೆರಿಗೆ ಬಾಕಿ; ಮಂತ್ರಿ ಮಾಲ್‌ಗೆ ಬೀಗ ಲೈಸೆನ್ಸ್ ಕ್ಯಾನ್ಸಲ್ ಮಾಡಿದ

## ಬಿಬಿಎಂಪಿ




**ಬೆಂಗಳೂರು:** ಕೋಟಿ ಕೋಟಿ ರೂಪಾಯಿ ತೆರಿಗೆ ಹಣ ಬಾಕಿ ಉಳಿಸಿಕೊಂಡಿರುವ ಹಿನ್ನೆಲೆಯಲ್ಲಿ ಬಿಬಿಎಂಪಿ ಅಧಿಕಾರಿಗಳು ಬೆಂಗಳೂರಿನ ಪ್ರತಿಷ್ಠಿತ ಮಂತ್ರಿ ಮಾಲ್‌ಗೆ ಮತ್ತೊಮ್ಮೆ ಬೀಗ ಜಡಿದಿದ್ದಾರೆ. ಮುಂಜಾನೆಯೇ ಮಾಲ್ ಗೆ ಬೀಗ ಹಾಕಲಾಗಿದ್ದು ಲೈಸೆನ್ಸ್ ಕ್ಯಾನ್ಸಲ್ ಮಾಡಲಾಗಿದೆ. ಮಂತ್ರಿ ಮಾಲ್ ಸುಮಾರು 32 ಕೋಟಿ ವರೆಗೂ ತೆರಿಗೆ ಬಾಕಿ ಉಳಿಸಿಕೊಂಡಿದೆ. ಪಾಲಿಕೆ ಒನ್ ಟೈಂ ಪೇಮೆಂಟ್ ಗೆ ಅವಕಾಶ ಕೊಟ್ಟಿತ್ತು. ಆದರೆ ಸೆಟಲ್ ಆಗದಿರುವ ಕಾರಣ ಮಾಲ್‌ಗೆ ಬೀಗ ಪುಟ 2

### ಅನೈತಿಕ ಸಂಬಂಧ: ಅವಾಯ್ಡ್ ಮಾಡಿದ್ದಕ್ಕೆ ಹತ್ಯೆ

## ಆಂಟಿಯ ಕೊಂದ ಯುವಕ

**ಲಿಂಗಸುಗೂರು:** ಆತ ಅತ್ತೆ ಅತ್ತೆ ಎನ್ನುತ್ತಲೇ ಅತ್ತೆಯಾಗಬೇಕಿದ್ದವಳ ಜೊತೆ ಮಂಚ ಏರಿದ್ದ.. ಚಿಗುರು ಮೀಸೆ ಹುರುಪಲ್ಲಿ ಕಾಮಜಾಲಕ್ಕೆ ಸಿಲುಕಿದ್ದ ಆತ ಜೊತೆಗಿದ್ದವಳ ಕೊಂದು ಹಾಕಿದ್ದ.. ಮಹಿಳೆಯ ಹತ್ಯೆಗೈದು ಊರು ಬಿಟ್ಟಿದ್ದ ಕಿರಾತಕನ್ನ ಸ್ಥಳೀಯ ಪೊಲೀಸರು ಪಡೆ ಹೆಡೆ ಮುರಿ ಕಟ್ಟಿದೆ.

ಹೌದು.. ಅದು ಮಾರ್ಚ್ 10ನೇ ತಾರೀಖು.. ರಾಯಚೂರು ಜಿಲ್ಲೆ ಲಿಂಗಸುಗೂರು ಪಟ್ಟಣದ ಎನ್ ಜಿಎಲ್ ಲಾಡ್ಜ್ ಬಳಿಯ ಪೊದೆಯಲ್ಲಿ ಮಹಿಳೆಯೊಬ್ಬರನ್ನ ಬರ್ಬರವಾಗಿ ಕೊಚ್ಚಿ ಕೊಲ್ಲಲಾಗಿತ್ತು.. ಘಟನಾ ಸ್ಥಳಕ್ಕೆ ಲಿಂಗಸುಗೂರು ಪೊಲೀಸರು ಪರಿಶೀಲನೆ ನಡೆಸಿದಾಗ ಅಲ್ಲೊಂದು ಆಧಾರ್ ಕಾರ್ಡ್ ಸಿಕ್ಕಿತ್ತು.. ಅದರಲ್ಲಿ ವಿಜಯಲಕ್ಷ್ಮೀ ಅನ್ನೋ ಹೆಸರಿನ ಮಹಿಳೆ, ಮಸ್ಕಿ ತಾಲ್ಲೂಕಿನ ಅಂಕುಶದೊಡ್ಡಿ ಗ್ರಾಮದಾಕೆ ಅನ್ನೋದು ಗೊತ್ತಾಗಿತ್ತು.. ನಂತರ ಪೊಲೀಸರು ಮಾಹಿತಿ ಕಲೆ ಹಾಕಿದಾಗ ಆಕೆ ತವರು ಮನೆ ಲಿಂಗಸುಗೂರು ತಾಲ್ಲೂಕಿನ ಯರಡೋಣಾ ಗ್ರಾಮ ಅಂತ ಗೊತ್ತಾಗಿದೆ.. ನಂತರ ಪೊಲೀಸರು ತನಿಖೆ ಶುರುಮಾಡಿದ್ರು.. ಆಗ ಆಕೆ ಹಿನ್ನೆಲೆ ಪತ್ತೆ ಹಚ್ಚಿದಾಗ 22 ವರ್ಷದ ಚಿರ ಯುವಕನ ಹೆಸರು ತಳುಕು ಹಾಕಿಕೊಂಡಿತ್ತು.



ಇತ್ತ ಲಿಂಗಸುಗೂರು ಪೊಲೀಸರು ತಾಂತ್ರಿಕ ಮಾಹಿತಿ ಪಡೆದು ಆರೋಪಿ ದೇವಣ್ಣನನ್ನ ಬಂಧಿಸಿದ್ದಾರೆ.. ತನಿಖೆ ವೇಳೆ ಬೆಚ್ಚಿ ಬೀಳಿಸೊ ವಿಚಾರ ಬೆಳಕಿಗೆ ಬಂದಿದೆ.. ಮೃತ ವಿಜಯಲಕ್ಷ್ಮೀಯನ್ನ ಮಸ್ಕಿ ತಾಲ್ಲೂಕಿನ ಅಂಕುಶದೊಡ್ಡಿ ಗ್ರಾಮದ ಸೋಮನಾಥ ಅನ್ನೋರ ಜೊತೆ ಕಳೆದ ಎಂಟು ವರ್ಷಗಳ ಹಿಂದೆ ಮದುವೆ ಮಾಡಿ ಕೊಡಲಾಗಿತ್ತು.. ಈ ದಂಪತಿಗೆ ಓಬ್ಬ ಮಗ ಹುಟ್ಟಿದ್ದ..

ಈ ಮಧ್ಯೆ ಕಳೆದ ಎರಡು ವರ್ಷಗಳ ಹಿಂದೆ ಪತಿ ಸೋಮನಾಥ ತೀರಿಹೋಗಿದ್ರು.. ಆಗ ಗಂಡನ ಮನೆ ಬಿಟ್ಟು ಮಗನೊಂದಿಗೆ ವಿಜಯಲಕ್ಷ್ಮೀ ತವರು ಸೇರಿದ್ರು.. ಇದಾದ ಬಳಿಕವೇ ಆಕೆ ಜೀವನೇ ಬದಲಾಗಿ ಹೋಗಿತ್ತು.. ಕೂಲಿ ಕೆಲಸ ಮಾಡ್ತಿದ್ದ ವಿಜಯಲಕ್ಷ್ಮೀಗೆ ಗಾರೆ ಕೆಲಸ ಮಾಡುತ್ತಿದ್ದ ಅದೇ ಗ್ರಾಮದ ದೇವಣ್ಣ ಅನ್ನೋನ ಪರಿಚಯವಾಗಿತ್ತು.

ದೇವಣ್ಣ ವಿಜಯಲಕ್ಷ್ಮೀ ಸಿಕ್ಕಾಗಲೆಲ್ಲಾ ಅತ್ತೆ ಅತ್ತೆ ಅಂತ ಕರೆಯುತ್ತಿದ್ದ.. ಪುಟ 2

# ಬಿಎಸ್‌ವೈ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣ ಸಿಐಡಿಗೆ ವರ್ಗಾವಣೆ

**ಬೆಂಗಳೂರು:** 17 ವಯಸ್ಸಿನ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪ್ರಕರಣದ ತನಿಖೆಯನ್ನು ಸಿಐಡಿಗೆ ವರ್ಗಾಯಿಸಿ ಡಿಜಿಪಿ ಆದೇಶ ಹೊರಡಿಸಲಾಗಿದೆ. ಕರ್ನಾಟಕದ ಪೊಲೀಸ್ ಮಹಾನಿರ್ದೇಶಕರ ಕಚೇರಿಯು ಪ್ರಕರಣವನ್ನು ಅಪರಾಧ ತನಿಖಾ ಇಲಾಖೆಗೆ ವರ್ಗಾಯಿಸಲು ಆದೇಶಿಸಿದೆ.



**ಏನಿದು ಪ್ರಕರಣ?:** ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಪೋಕ್ಸೊ ಪ್ರಕರಣ ದಾಖಲಿಸಲಾಗಿದೆ. ಕಳೆದ ಫೆಬ್ರವರಿಯಲ್ಲಿ ದೌರ್ಜನ್ಯ ಎಸಗಿದ ಆರೋಪ ಕೇಳಿಬಂದಿದೆ. ಬಾಲಕಿ ತಾಯಿ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾಳೆ. ಮಾಜಿ ಸಿಎಂ ವಿರುದ್ಧ ಪೋಕ್ಸೊ ಮತ್ತು 354 (ಎ) ಐಪಿಸಿ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಮಂಡ್ಯದಿಂದ ಮತ್ತೆ ನಿಖಿಲ್ ಸ್ಪರ್ಧೆ?, ಮಾರ್ಚ್ 25ಕ್ಕೆ ಘೋಷಣೆ ಸಾಧ್ಯತೆ



**ಮಂಡ್ಯ:** ಮತ್ತೆ ನಿಖಿಲ್ ಕುಮಾರಸ್ವಾಮಿ ಮೈತ್ರಿ ಅಭ್ಯರ್ಥಿಯಾಗಿ ಮಂಡ್ಯದಲ್ಲಿ ಕಣಕ್ಕೆ ಇಳಿಯುತ್ತಾರಾ ಎಂಬ ಪ್ರಶ್ನೆ ಎದ್ದಿದೆ. ಮಂಡ್ಯ ಜೆಡಿಎಸ್‌ನ ಲೋಕಸಭಾ ಚುನಾವಣೆ ಪೂರ್ವಭಾವಿ ಸಭೆಯಲ್ಲಿ ಹಲವು ನಾಯಕರು, ಕಾರ್ಯಕರ್ತರು ಕುಮಾರಸ್ವಾಮಿ ಅಥವಾ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆ ಮಾಡಬೇಕು ಎಂದು ಆಶಯ ವ್ಯಕ್ತಪಡಿಸಿದರು. ನಾಯಕರ ಮನವಿಗೆ ಸ್ಪಂದಿಸಿದ ಕುಮಾರಸ್ವಾಮಿ, ನಿಮ್ಮ ಆಸೆಗೆ ನಾವು ಭಂಗ ತರುವುದಿಲ್ಲ. ನಿಖಿಲ್ ಕುಮಾರಸ್ವಾಮಿಯಲ್ಲಿ ಒಂದು ಮಾತು ಹೇಳುತ್ತೇನೆ. ನಿಮ್ಮ ಭಾವನೆಗಳಿಗೆ ಯಾವುದೇ ಕಾರಣಕ್ಕೂ ನಿರಾಸೆಯಾಗಲ್ಲ. ನಿಮ್ಮ ಆಸೆಯ ಪ್ರಕಾರ ಅದನ್ನು ನೇರವೇರಿಸಿಕೊಳ್ಳುತ್ತೇನೆ ಎಂದು ಭರವಸೆ ನೀಡಿದರು. ಮಾರ್ಚ್ 24ಕ್ಕೆ ನನಗೆ ಅಪರೇಷನ್ ಇದೆ. ಮಾರ್ಚ್ 25ಕ್ಕೆ ಬಂದು ನಾನು ಅಭ್ಯರ್ಥಿ ಹೆಸರನ್ನು ಘೋಷಣೆ ಮಾಡುತ್ತೇನೆ. ನಿಖಿಲ್ ಒಪ್ಪಿಸಲು ನಾನು ಮುಂದಾಗುತ್ತೇನೆ ಎಂದು ಕುಮಾರಸ್ವಾಮಿ ಹೇಳಿದರು. ನಿಖಿಲ್ ಕುಮಾರಸ್ವಾಮಿ ಈ ಬಾರಿಯ ಚುನಾವಣೆಗೆ ನಾನು ಸ್ಪರ್ಧೆ ಮಾಡುವುದಿಲ್ಲ ಎಂದು ಹೇಳಿದ್ದರು. ಆದರೆ ಅಭಿಮಾನಿಗಳು, ನಾಯಕರು ನಿಖಿಲ್ ಸ್ಪರ್ಧೆಯ ಬಗ್ಗೆ ಒಲವು ವ್ಯಕ್ತಪಡಿಸುತ್ತಿರುವ ಕಾರಣ ಈಗ ಅವರ ನಿಲುವು ಏನು ಎನ್ನುವುದು ಸದ್ಯದ ಕುತೂಹಲ.

# ಸಿದ್ದರಾಮಯ್ಯ ಬಗ್ಗೆ ರಾಮಕೃಷ್ಣ ಹೆಗಡೆ ಅವತ್ತೆ ಎಚ್ಚರಿಕೆ ನೀಡಿದ್ದರು

**ಚಿಕ್ಕಮಗಳೂರು:** ಸಿದ್ದರಾಮಯ್ಯ ಬಗ್ಗೆ ಹುಷಾರು ಅಂತಾ ರಾಮಕೃಷ್ಣ ಹೆಗಡೆ ಅವತ್ತೆ ಹೇಳಿದ್ದರು. ಅವರ ಮಾತು ಕೇಳದೆ ಸಿದ್ದರಾಮಯ್ಯಗೆ ಅವಕಾಶ ನೀಡಿದೆ. ನನ್ನ 92ನೇ ವಯಸ್ಸಿನಲ್ಲೂ ನಾನು ಸತ್ಯವನ್ನೇ ಹೇಳುತ್ತಿದ್ದೇನೆ ಎಂದು ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡ ಹೇಳಿದ್ದಾರೆ. ಜಿಲ್ಲೆಯ ಕಡೂರಿನಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಇನ್ನೂ ಬದುಕಿದ್ದಾನೆ, ಅವರನ್ನೇ ಕೇಳಿ ಎಂದು ಹೇಳಿದ್ದಾರೆ. ತನ್ನದೇ ಸಮಾಜದವರನ್ನು ಸಿದ್ದರಾಮಯ್ಯ ಬೆಳೆಯಲು ಬಿಡಲಿಲ್ಲ. ದೇವೇಗೌಡರ ಆಪ್ತರೆಂಬ ಕಾರಣಕ್ಕೆ ಹಲವರನ್ನು ಮಂತ್ರಿ ಮಾಡಲಿಲ್ಲ ಎಂದು ವಾಗ್ದಾಳಿ ಮಾಡಿದ್ದಾರೆ.



ಮೋದಿ ಅವರನ್ನು ಬಿಟ್ಟು ಯಾವುದೇ ಒಬ್ಬ ವ್ಯಕ್ತಿ ಅವರ ಎತ್ತರಕ್ಕೆ ಬೆಳೆಯಲು ಸಾಧ್ಯವಿಲ್ಲ. ಈ ದೇಶದ ಅತ್ಯಂತ ಎತ್ತರಕ್ಕೆ ಬೆಳೆದಂತಹ ರಾಜಕಾರಣಿ ಮೋದಿ. ಕೆಲವು ಪತ್ರಿಕೆಗಳಲ್ಲಿ 18 ಇನ್ನೂ ಕೆಲವು ಪತ್ರಿಕೆಗಳಲ್ಲಿ 24 ಫೀಟ್ ಗೆಲ್ಲುತ್ತೆವೆ ಎಂದಿದ್ದಾರೆ. ಸುಮ್ಮನೆ ಮನಸ್ಸಿಗೆ ಬಂದ ಹಾಗೆ ಮಾತನಾಡುತ್ತಾರೆ. ಜನ ಮೆಚ್ಚಬೇಕಲ್ಲ ಎಂದಿದ್ದಾರೆ.

ಮೋದಿ ದೇಶದ ಸರ್ವೋಚ್ಚ ನಾಯಕ. ಅವರ ಸಮಾನವಾಗಿ ಯಾವ ನಾಯಕನು ದೇಶದಲ್ಲಿ ಇಲ್ಲ. ಋಓಆಋಂ ಕೂಟದಲ್ಲಿ ಮೋದಿ ಸಮಕ್ಕೆ ಯಾರು ಇಲ್ಲ. ಒಂದೊಂದು ಚಾನೆಲ್ನಲ್ಲಿ ಒಂದೊಂದು ಸಮೀಕ್ಷೆ ಬರುತ್ತಿದೆ. ಇದಕ್ಕೆಲ್ಲ ಯಾರು ತಲೆಕೆಡಿಸಿಕೊಳ್ಳಬೇಕಿಲ್ಲ. ಮೋದಿ ಮತ್ತೆ ಪ್ರಧಾನಿಯಾಗುತ್ತಾರೆ. ಪತ್ರಿಕೆಯಲ್ಲಿ ನೋಡಿದೆ ರಾಹುಲ್ ಗಾಂಧಿ ಅಧಿಕಾರಕ್ಕೆ ಬಂದರೆ ಸಾಲ ಮನ್ನಾ ಮಾಡುತ್ತೇನೆ ಎಂದಿದ್ದಾರೆ. ಹಿಂದೆಯೇ ಕುಮಾರಸ್ವಾಮಿ 26 ಸಾವಿರ ಕೋಟಿ ರೂ. ರೈತರ ಸಾಲ ಮನ್ನಾ ಮಾಡಿದ್ದರು ಎಂದರು.

ಹಾಸನ ಲೋಕಸಭಾ ಕ್ಷೇತ್ರ, ಗೆಲುವಿಗೆ ಹೆಚ್‌ಡಿ ದೇವೇಗೌಡ ರಾಜಕೀಯ ತಂತ್ರ ರೂಪಿಸಿದ್ದಾರೆ. ಸಿಎಂ ಸಿದ್ದರಾಮಯ್ಯ ಆಪ್ತ ದಿ.ಕೆಂಪರಾಜು ಪುತ್ರ ಜೆಡಿಎಸ್ ಸೇರ್ಪಡೆ ಆಗಿದ್ದಾರೆ. ಚಿಕ್ಕಮಗಳೂರು ಜಿಲ್ಲೆ ಕಡೂರಿನಲ್ಲಿರುವ ಶಾಸಕ ಶ್ರೀನಿವಾಸ್ ಅಳಿಯ ಚೇತನ್ ಕೆಂಪರಾಜು ಮನೆಗೆ ಹೆಚ್‌ಡಿ ದೇವೇಗೌಡ ಭೇಟಿ ನೀಡಿದ್ದಾರೆ.

# ಬಿಎಸ್ ಯಡಿಯೂರಪ್ಪ ವಿರುದ್ಧ ಮಾಧುಸ್ವಾಮಿ ಕೆಂಡಾಮಂಡಲ

**ತುಮಕೂರು:** ಕೆಎಸ್ ಈಶ್ವರಪ್ಪ ಬೆನ್ನಲ್ಲೇ ಇದೀಗ ಮಾಜಿ ಸಚಿವ ಜೆಸಿ ಮಾಧುಸ್ವಾಮಿ ಅವರು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ತುಮಕೂರು ಟಿಕೆಟ್ ಕೈತಪ್ಪಿದ್ದರಿಂದ ಅಸಮಾಧಾನಗೊಂಡಿರುವ ಮಾಧುಸ್ವಾಮಿ, ಯಡಿಯೂರಪ್ಪ ವಿರುದ್ಧ ಮಾಧುಸ್ವಾಮಿ ಕೆಂಡಾಮಂಡಲರಾಗಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಮಾಧುಸ್ವಾಮಿ, ಮನೆಯಲ್ಲಿ ಕುಳಿತಿದ್ದವರನ್ನ ಚುನಾವಣೆಗೆ ರೆಡಿ ಆಗಿ ಅಂದ್ರು. ಈಗ ನಡು ನೀರಿನಲ್ಲಿ ಕೈ ಬಿಟ್ಟಿದ್ದಾರೆ. ನಂಬಿಸಿ ಕೈಬಿಟ್ಟ ಯಡಿಯೂರಪ್ಪ ಮೇಲೆ ನಮಗೆ ಬೇಸರವಿದೆ ಎಂದು ಹೇಳಿದ್ದಾರೆ. ಸೋಮಣ್ಣ ಅವಕಾಶವಾದಿ, ಅವರು ಅವಕಾಶ ಕೇಳಿದ್ದಾರೆ. ಸೋಮಣ್ಣ ಮೇಲೆ ನಮಗೇನು ಬೇಸರ ಇಲ್ಲ. ಆದ್ರೆ, ನಂಬಿಸಿ ಕೈಬಿಟ್ಟ ಯಡಿಯೂರಪ್ಪ ಮೇಲೆ ನಮಗೆ ಬೇಸರವಾಗಿದೆ. ಬೆಂಗಳೂರಿನಿಂದ ಎಂಎಲ್ ಸಿಗೆ ತಂದು ನಿಲ್ಲಿಸಿದ್ವಿ. ಅವನ ವಿರುದ್ಧ ಬಸವರಾಜು ಮಾಡಿದ್ರು. ಯಾರ್ಯಾರು ನನಗೆ ಅನ್ಯಾಯ ಮಾಡಿದ್ರು ಎಂದು ಪಕ್ಷಕ್ಕೆ 10 ಪೇಜ್ ಬರೆದುಕೊಟ್ಟ. ಇವತ್ತು ಅವರೇ ದೊಡ್ಡವರಾಗಿದ್ದಾರೆ. ನಾವು ಇವತ್ತು ನಿಷ್ಠಾವಂತವಾಗಿ ದುಡಿದವರೇ ಲೆಕ್ಕಕ್ಕಿಲ್ಲ ಅಂದ್ರೆ ನೋವು ಆಗಲ್ವಾ. ನಾವೇನು ಪಾರ್ಲಿಮೆಂಟ್ ನಲ್ಲಿ ಕೊಡಿ, ವಿಧಾನಸಭೆಯಲ್ಲಿ ಕೊಡಿ ಎಂದು ಕೇಳಿಲ್ಲ. ಗೌರವಯುತವಾಗಿ ವರ್ತಿಸದೇ ಇದ್ದರೆ ಹೇಗೆ? ನೋವು ಬಾದಿಸುತ್ತೆ ಅಲ್ವಾ? ಎಂದು ಬೇಸರ ವ್ಯಕ್ತಪಡಿಸಿದರು.

ನಂಬಿದವರೇ ನಮಗೆ ಕೈ ಕೊಡುತ್ತಾರೆ ಎನ್ನುವ ನೋವು. ನಾನು ಬಿಜೆಪಿಗೆ ಹೋಗಬೇಕು ಅಂದ್ರೆ ಯಡಿಯೂರಪ್ಪ ಬಿಟ್ಟು ಬೇರೆ ಕಾರಣ ಇರಲಿಲ್ಲ. ಕೆಜೆಪಿ ಪಾರ್ಟಿ ಮಾಡಿದಾಗ ಯಡಿಯೂರಪ್ಪಗೆ ಶಕ್ತಿ ಕೊಡಬೇಕು ಎಂದು ಕೆಜೆಪಿಗೆ ಹೋದವರು ನಾವು. ಯಡಿಯೂರಪ್ಪ ಬದಲಾದಂಗೆ ಅವರ ಜೊತೆ ಹೋದ್ವಿ ಅದೇ ತಪ್ಪಾ? ನಾವು ಪ್ರಶ್ನೆನೇ ಮಾಡಲಿಲ್ಲ. ಯಾಕೆ ಕೆಜೆಪಿ ಬಿಟ್ಟು ಬಿಜೆಪಿಗೆ ಹೋಗುತ್ತೀರಾ ಎಂದು ಅಂದು ಕೇಳಲಿಲ್ಲ. ಲೀಡರ್ ಒಳ್ಳೆದೋ ಕೆಟ್ಟದೋ ಅವರನ್ನ ಫಾಲೋ ಮಾಡೋಣಾ ಎಂದು ಹೋದ್ವಿ ಎಂದು ಯಡಿಯೂರಪ್ಪ ವಿರುದ್ಧ ಆಕ್ರೋಶ ಹೊರಹಾಕಿದರು. ಮನೆಯಲ್ಲಿ ಕುಳಿತಿದ್ದವರನ್ನ ತಯಾರಾಗು ಅಂತ ಹೇಳಿ ಈಗ ನಡು ನೀರಿನಲ್ಲಿ ಕೈ ಬಿಟ್ಟಿದ್ದಾರೆ. ಸೋಮಣ್ಣ ಅವಕಾಶವಾದಿ ಅವರು ಅವಕಾಶ ಕೇಳಿದ್ದಾರೆ. ಅವರ ಮೇಲೆ ನಮಗೇನು ಬೇಸರ ಇಲ್ಲ ನಂಬಿಸಿ ಕೈಬಿಟ್ಟ ಯಡಿಯೂರಪ್ಪನ ಮೇಲೆ ನಮಗೆ ಬೇಸರ. ನಾನು ಸೋಮಣ್ಣ ಮನೆಗೆ ಬರಬೇಡಿ ಎಂದು ಹೇಳುವಷ್ಟು ಕೆಟ್ಟ ಮನುಷ್ಯ ಅಲ್ಲ. ನಾನು ಸೆಟಲ್ ಆಗಿಲ್ಲ, ನನ್ನ ಮನಸ್ಥಿತಿ ಸರಿಯಾಗಿಲ್ಲ. ನೀನು ಈ ಟೈಮ್ ನಲ್ಲಿ ಬರೋದು ಬೇಡ. ನಾಲ್ಕೈದು ದಿನ ಟೈಮ್ ಕೊಡು ಎಂದು ಹೇಳಿದ್ದೇನೆ ಎಂದು ಸ್ಪಷ್ಟಪಡಿಸಿದರು.

# ಸುಮಲತಾ ಅಕ್ಕ ಇದ್ದಂತೆ, ಸಂಘರ್ಷ ಮುಂದುವರಿಸಲ್ಲ

**ಮಂಡ್ಯ:** ಸುಮಲತಾ ಅಂಬರೀಶ್ ಅವರು ನಮ್ಮ ಅಕ್ಕ ಇದ್ದಂತೆ. ರಾಜಕೀಯದಲ್ಲಿ ಆಗ ಏನೋ ಆಗಿತ್ತು. ಈಗ ನಾವು ಸಂಘರ್ಷ ಮುಂದುವರಿಸಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ.

ಮಂಡ್ಯ ಲೋಕಸಭಾ ಚುನಾವಣೆ ಸಂಬಂಧ ಜೆಡಿಎಸ್ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಚುನಾವಣೆ ವಿಷಯದಲ್ಲಿ ಒಂದು ಮಾತು ಹೇಳುತ್ತೇನೆ. ಅಂಬರೀಶ್, ನಾವೆಲ್ಲ ಒಟ್ಟಾಗಿ, ಪ್ರೀತಿಯಿಂದ ಬೆಳೆದವರು. ನಮ್ಮ ಪಕ್ಷದಿಂದಲೇ ಅಂಬರೀಶ್ ಪಾರ್ಲಿಮೆಂಟ್ ಪ್ರವೇಶ ಮಾಡಿದ್ದರು. ನಾನು ಸಿಎಂ ಆಗಿದ್ದಾಗಲೇ ರಾಜ್‌ಕುಮಾರ್ ಹಾಗೂ ಅಂಬರೀಶ್ ನಿಧನರಾದರು. ರಾಜ್ ಸಮಾಧಿ ಮಾಡಿದ್ದು ನಾನೇ. ಅಂಬರೀಶ್ ಸಮಾಧಿಗೂ ಜಾಗ ಗುರುತಿಸಿ ಗೌರವ ಕೊಟ್ಟೆ. ವಿಷ್ಣುವರ್ಧನ್ ಸಮಾಧಿ ಸ್ಮಾರಕ ಸಮಸ್ಯೆ ಇನ್ನೂ ಬಗೆಹರಿದಿಲ್ಲ ಎಂದರು.

ಅಂಬರೀಶ್ ನನ್ನ ಆತ್ಮೀಯ ಸ್ನೇಹಿತ. ಆತನಿಗೆ ನಮನ ಸಲ್ಲಿಸಬೇಕಾಗಿದ್ದು ನನ್ನ ಕರ್ತವ್ಯ. ಅಂಬರೀಶ್ ಬಡ ಕುಟುಂಬದಿಂದ ಸಿನಿಮಾರಂಗದಲ್ಲಿ ಸಾಧನೆ ಮಾಡಿದ ನಮ್ಮ ಸಮಾಜದ ವ್ಯಕ್ತಿ. ಅಂಬರೀಶ್‌ಗೆ ಗೌರವ ನೀಡುವ ಮೂಲಕ ಮಂಡ್ಯ ಜನರಿಗೂ ಗೌರವ ನೀಡಿದ್ದೇವೆ. 2019, 2023ರ ಚುನಾವಣೆಯಲ್ಲಿ



ಮಂಡ್ಯ ಜಿಲ್ಲೆಯ ಜನತೆ ನಮಗೆ ಅನ್ಯಾಯ ಮಾಡಲಿಲ್ಲ. ಮಂಡ್ಯ ಜಿಲ್ಲೆಯ ಮತದಾರ ಬಂಧುಗಳೇ ನಮ್ಮ ತಂದೆ-ತಾಯಿಯಂದಿರು. ರಾಜಕೀಯವಾಗಿ ನಮ್ಮಿಂದ ಸಣ್ಣಪುಟ್ಟ ತಪ್ಪುಗಳಾಗಿರಬಹುದು. ಈ ಜಿಲ್ಲೆಯ ಜನತೆಗೆ ಸ್ಪಷ್ಟ ಮನವಿ ಮಾಡಲು ಬಯಸುತ್ತೇವೆ. ನಮ್ಮ ತಪ್ಪುಗಳನ್ನು ತಿದ್ದಿಕೊಳ್ಳಲು ನಾವು ಸಿದ್ದರಿದ್ದೇವೆ. ತಪ್ಪು ತಿದ್ದಿಕೊಳ್ಳಲು ಈ ಚುನಾವಣೆಯಲ್ಲಿ ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು.

ಮಂಡ್ಯ ಜಿಲ್ಲೆಯ ಜನರ ಜೊತೆ ಮೊದಲಿಂದಲೂ ನಾನು ಇದ್ದೇನೆ. 2019ರಲ್ಲಿ ಹೊಂದಾಣಿಕೆ ಎಂದು ಕುತ್ತಿಗೆ ಕೊಯ್ದರು. ಅದಕ್ಕೆ ಉತ್ತರ ಕೊಡುವ ಶಕ್ತಿ ಮಂಡ್ಯ ಜನರ ಕೈಯಲ್ಲಿ ಇದೆ. ನನ್ನ ಜನ್ಮ ಭೂಮಿ ಹಾಸನ. ರಾಜಕೀಯ ಭವಿಷ್ಯ ನೀಡಿದ್ದು ರಾಮನಗರ. ನನ್ನ ಜೀವ ಮಿಡಿಯುವುದು ಮಂಡ್ಯಗಾಗಿ. ಸ್ವಾಭಿಮಾನ ಎನ್ನುವುದು ಮಾತಿನಲ್ಲಿ ಅಲ್ಲ, ಕೆಲಸದಲ್ಲಿ ಇದೆ. ನಾಟಿ ಸ್ಟೈಲ್ ರಾಜಕೀಯ ಅಂತಾರೆ ಕೆಲವರು. ದುಡ್ಡಿನಿಂದ ರಾಜಕೀಯ ಮಾಡೋದು ಅಲ್ಲ. ಕೆಲವರಿಗೆ ಈ ಚುನಾವಣೆ ಕಲೆಕ್ಷನ್ ಮಾಡಿಕೊಳ್ಳಲು ಒಳ್ಳೆಯ ಅವಕಾಶ ಎಂದು ಕಿಡಿಕಾರಿದರು.

21ಕ್ಕೆ ನನಗೆ ಆಪರೇಷನ್ ಇದೆ. ನನಗೆ 84 ವರ್ಷ ಆಯಸ್ಸು ಎಂದು ಜ್ಯೋತಿಷಿಗಳು ಹೇಳಿದ್ದಾರೆ. ದೇವೇಗೌಡರು ಜ್ಯೋತಿಷಿಗಳ ಮಾತು ಕೇಳಿ ಬದುಕಿದ್ದಾರೆ. ಈ ಜೀವ ಭೂಮಿಗೆ ಇಷ್ಟು ಬೇಗ ಹೋಗಲ್ಲ. ಜನರು ಸರ್ಟಿಫಿಕೇಟ್ ನೀಡಿದ ಮೇಲೆ ಈ ಜೀವ ಭೂಮಿಗೆ ಹೋಗೋದು. ಜನರ ಋಣ ತೀರಿಸಿದ ಮೇಲೆ ನಾನು ಭೂಮಿಗೆ ಹೋಗೋದು. ಅಲ್ಲಿಯವರೆಗೆ ನಾನು ಭೂಮಿಗೆ ಹೋಗಲ್ಲ. ನಾನು ರಾಜಕೀಯಕ್ಕೆ ಬರಬೇಕು ಎಂದುಕೊಂಡವನಲ್ಲ. ಸಿನಿಮಾ ಹಂಚಿಕೆದಾರನಾಗಿ ನಾನು ಕೆಲಸ ಮಾಡುತ್ತಿದ್ದೆ. ಆಕಸ್ಮಿಕವಾಗಿ ನಾನು ರಾಜಕೀಯಕ್ಕೆ ಬಂದಿದ್ದು ಎಂದರು.

# ಬಿಜೆಪಿ ಟಿಕೆಟ್ ಕೈತಪ್ಪಿದ್ದಕ್ಕೆ ಸಂಸದ ಸಂಗಣ್ಣ ಕರಡಿ ಕಣ್ಣೀರು



**ರಾಯಚೂರು:** ಕೊಪ್ಪಳ ಲೋಕಸಭಾ ಟಿಕೆಟ್ ಕೈ ತಪ್ಪಿದ ಹಿನ್ನೆಲೆ ಸಂಸದ ಸಂಗಣ್ಣ ಕರಡಿ ಕಾರ್ಯಕರ್ತರ ಎದುರು ವೇದಿಕೆಯಲ್ಲಿ ಕಣ್ಣೀರು ಹಾಕಿದ್ದಾರೆ. ರಾಯಚೂರಿನ ಸಿಂಧನೂರಿನಲ್ಲಿ ನೂತನ ರೈಲು ಆರಂಭ ಕಾರ್ಯಕ್ರಮದಲ್ಲಿ ಭಾವುಕರಾದ ಸಂಗಣ್ಣ ಕರಡಿ ಕಾರ್ಯಕರ್ತರ ಎದುರು ಕಣ್ಣೀರಿಟ್ಟರು. ವೇದಿಕೆಯ ಮೇಲೂ ಭಾವುಕರಾಗಿ ನಿವೃತ್ತಿ ಬಗ್ಗೆ ಭಾಷಣ ಮಾಡಿದರು. ಸಿಂಧನೂರಿಗೆ ರೈಲು ಬಂದಿರುವುದು ಎಲ್ಲರಿಗೂ ಖುಷಿಯಾಗಿದೆ. ಕಾರ್ಯಕರ್ತರಿಗೆ ಸಂಗಣ್ಣನವರು ನಮ್ಮನ್ನ ಬಿಟ್ಟರು ಎನ್ನುವ ಭಾವನೆ ಮೂಡುತ್ತಿದೆ. ಆ ಒಂದು ಕೊರಗಿಗೆ ನಾನು ಭಾವುಕನಾಗಿ ಮಾತನಾಡಿದ್ದೇನೆ. ಅದನ್ನು ಬಿಟ್ಟರೆ ಏನಿಲ್ಲ. ನಮ್ಮಲ್ಲಿ ಸ್ಥಳೀಯವಾಗಿ ಬಹಳ ಜನ ನಾಯಕರಿದ್ದಾರೆ ಅವರು ನಾಯಕತ್ವ ವಹಿಸಿಕೊಳ್ಳುತ್ತಾರೆ ಎಂದರು. ಯಾರಿಗೆ ಹೃದಯ ಇರುತ್ತೆ ಅವರಿಗೆ ಭಾವುಕತೆ ಬರುತ್ತೆ. ನಾನು ಕಾರ್ಯಕರ್ತರನ್ನು ನೋಡಿ ಭಾವುಕನಾಗಿದ್ದೇನೆ, ಅಧಿಕಾರ ಹೋಗುತ್ತೆ ಅಂತಲ್ಲಾ. ನನಗೆ ಟಿಕೆಟ್ ಕೊಡದಿರುವುದಕ್ಕೆ ಕಾರಣ ಇರಬಹುದು, ಅದು ವರಿಷ್ಠರಿಗೆ ಗೊತ್ತು. ಯುವಕರಿಗೆ ಕೊಡಬೇಕು ಅನ್ನೋ ಕಾರಣಾನೂ ಇರಬಹುದು. ಆದರೆ ನನಗೆ ಕೆಲಸದ ಅಭಾವ ಇದೆ. ನನಗೆ ಯಾವ ಶಾಪ್ ಇಲ್ಲಾ ಬ್ಯುಸಿನೆಸ್ ಇಲ್ಲಾ. ತೋಟದಲ್ಲಿನ ಮಾವು ಸಹ ಒಣಗಿಹೋಗಿ ನಷ್ಟವಾಗಿದೆ ಎಂದು ಭಾವುಕರಾದರು.

## ಯದುವೀರ್ ಭರವಸೆ

ಇದೇ ವೇಳೆ, ತಮ್ಮ ಅನಿರೀಕ್ಷಿತ ರಾಜಕೀಯ ಎಂಟ್ರಿ ಬಗ್ಗೆಯೂ ಮಾತನಾಡಿದ್ರು. ಕೊಡಗು ತನಗೆ ಹೊಸದೇನಲ್ಲ, ಆದ್ರೆ ಅಭ್ಯರ್ಥಿಯಾಗಿ ಇದೇ ಮೊದಲ ಬಾರಿಗೆ ಬಂದಿದ್ದೇನೆ. ಕೊಡಗಿನ ಜೊತೆಗೆ ತನಗೆ ಭಾವನಾತ್ಮಕ ಸಂಬಂಧ ಹೊಂದಿರುವುದು ತನಗೆ ಅಭಿವೃದ್ಧಿ ಕಾರ್ಯದಲ್ಲಿ ತೊಡಗಿಕೊಳ್ಳಲು ಖುಷಿ ಕೊಡುತ್ತದೆ ಎಂದು ಹೇಳಿದ್ರು.

ರಾಜಕೀಯ ಜೀವನಕ್ಕೆ ಬಂದಮೇಲೆ ಜನಸಾಮಾನ್ಯರ ಕೈಗೆ ತಾನು ಖಂಡಿತ ಸಿಗುತ್ತೇನೆ ಎಂದು ಭರವಸೆ ನೀಡಿದ್ರು. ಅಲ್ಲದೆ ಕೊಡಗಿನ ಪ್ರಕೃತಿ ರಕ್ಷಣೆಯೊಂದಿಗೆ ಅಭಿವೃದ್ಧಿ ಮಾಡುವುದು ಹಾಗೂ ಕಾಫಿ ಉದ್ಯಮದ ಪುನಶ್ಚೇತನಕ್ಕೆ ತಾನು ಶ್ರಮಿಸುವುದಾಗಿ ಅವರು ಇದೇ ಸಂದರ್ಭ ಆಶ್ವಾಸನೆ ನೀಡಿದ್ರು.

ಒಟ್ಟಾರೆ ನಿನ್ನೆಯವರೆಗೂ ತಮ್ಮ ಅಭ್ಯರ್ಥಿ ಪ್ರತಾಪ್ ಸಿಂಹನೇ ಎಂದು ನಂಬಿದ್ದ ಕೊಡಗಿನ ಬಿಜೆಪಿ ಪಾಳ್ಯಕ್ಕೆ ಇದೀಗ ಯದುವೀರ್ ಹೊಸ ಅಚ್ಚರಿಯಾಗಿ ಎಂಟ್ರಿಯಾಗಿದ್ದಾರೆ. ಜೊತೆಗೆ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಇಬ್ಬರು ಎಂಎಲ್ ಎಗಳು ಸೋತ ಬಳಿಕ ನಿಸ್ತೇಜವಾಗಿದ್ದ ಕೊಡಗು ಬಿಜೆಪಿಗೆ ಮಹಾರಾಜ ಯದುವೀರ್ ಹೊಸ ಕಳೆ ತರುತ್ತಾರಾ ಕಾದು ನೋಡಬೇಕಿದೆ.

## ಕಲಬುರಗಿಯಲ್ಲಿ ರೋಡ್ ಶೋ

2:05 ನಿಮಿಷಕ್ಕೆ ಮೋದಿ ಮಿನಿ ರೋಡ್ ಶೋ ಆರಂಭವಾಗಲಿದೆ. ಕಲಬುರಗಿ ಡಿ.ಆರ್ ಮೈದಾನದಿಂದ ಎಸ್ ಪಿ ಕಚೇರಿ ರಸ್ತೆ, ಅಲ್ಲಿಂದ ಆರ್ಚಿಡ್ ಮಾಲ್ ಬಳಿ ಬರಲಿದೆ. ಅಲ್ಲಿ ನೆರೆಯೋ ಜನರತ್ತ ಮೋದಿ ಕೈ ಬೀಸಲಿದ್ದು ಅಲ್ಲಿಂದ ಎಸ್. ಎಂ. ಪಂಡಿತ್ ರಂಗಮಂದಿರ ಕಡೆ ಪ್ರಯಾಣ ಬೆಳೆಸಲಿದ್ದಾರೆ. ರಂಗಮಂದಿರ ಕಾರ್ನರ್ ನಲ್ಲಿ ಸಾಕಷ್ಟು ಜನ ಜಮಾಯಿಸೋ ಸಾಧ್ಯತೆ ಇದೆ. ಅಲ್ಲಿಯೂ ಮೋದಿ ಜನರತ್ತ ಕೈ ಬೀಸಲಿದ್ದಾರೆ. ಬಳಿಕ ಸಾರ್ವಜನಿಕ ಉದ್ಯಾನವನ ಒಳಗಡೆ ರಸ್ತೆಯಿಂದ ರೋಟರಿ ಕ್ಲಬ್ ರಸ್ತೆ, ಅಲ್ಲಿಂದ ನೇರವಾಗಿ ಎನ್.ವಿ. ಮೈದಾನದ ಕಡೆಗೆ ಪ್ರಯಾಣ ಬೆಳೆಸಲಿದ್ದಾರೆ. 2:15 ನಿಮಿಷಕ್ಕೆ ಮೋದಿಯವರು ವೇದಿಕೆಗೆ ಆಗಮಿಸಲಿದ್ದು 45 ನಿಮಿಷ ವೇದಿಕೆ ಕಾರ್ಯಕ್ರಮ ನಡೆಯಲಿದೆ. 3 ಗಂಟೆಗೆ ಕಾರ್ಯಕ್ರಮ ಮುಕ್ತಾಯಗೊಳ್ಳಲಿದೆ.

## ನಾಯಕರ ಜೊತೆ ಚರ್ಚೆ

ಸಂಘ ಪರಿವಾರದ ಮುಖಂಡರು ಅನಂತ್ ಕುಮಾರ್ ಹೆಗಡೆ ಪರ ಬ್ಯಾಟ್ ಬೀಸಿದ್ದಾರೆ.

ಜಿಲ್ಲಾ ಸಂಘ ಪರಿವಾರ ಮುಖಂಡ, ಹನುಮಂತ ಶಾನಭಾಗ್, ಜಗದೀಶ್ ಕಾರಂತ್ ಅವರು ಮಾತುಕತೆ ನಡೆಸಿ ಜಿಲ್ಲೆಯಲ್ಲಿ ಯಾವುದೇ ಪ್ರಯೋಗ ಬೇಡ ಎಂದು ರಾಜ್ಯ ಬಿಜೆಪಿ ಘಟಕಕ್ಕೆ ಸೂಚನೆ ನೀಡಿದ್ದಾರೆ. ಇನ್ನೊಂದೆಡೆ ವಿಶ್ವೇಶ್ವರ ಹೆಗಡೆ ಕಾಗೇರಿ ಜೊತೆಯೂ ಹಿರಿಯ ನಾಯಕರು ಮಾತುಕತೆ ನಡೆಸಿದ್ದಾರೆ. ಈ ಬಾರಿ ಬದಲಾವಣೆಯ ವಿಶ್ವಾಸದಲ್ಲಿ ವಿಶ್ವೇಶ್ವರ ಹೆಗಡೆ ಕಾಗೇರಿ ಇದ್ದಾರೆ. ಕಾಗೇರಿ ಅವರು ನಾಲ್ಕು ದಿನಗಳಲ್ಲಿ ಸಾಕಷ್ಟು ಬದಲಾವಣೆ ಆಗಿದೆ ಎಂಬ ಸಂದೇಶ ರವಾನೆ ಮಾಡಿದ್ದಾರೆ. ಅನಂತ್ ಕುಮಾರ್ ಹೆಗಡೆ ಅವರು ಸಾಕಷ್ಟು ಚರ್ಚೆಗಳ ನಡುವೆಯೂ ಬಿರುಸಿನ ಪ್ರಚಾರ ನಡೆಸುತ್ತಿದ್ದಾರೆ.

ಆರು ಬಾರಿ ಬಿಜೆಪಿ ಗೆದ್ದಿರುವ ಉತ್ತರ ಕನ್ನಡ ಕ್ಷೇತ್ರದ ಟಿಕೆಟ್ ಇದುವರೆಗೂ ಘೋಷಣೆ ಮಾಡದ ವಿಚಾರಕ್ಕೆ ಸಂಬಂಧಿಸಿ ಶಿರಸಿಯಲ್ಲಿ ಮಾಜಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿದ್ದು, ಈ ಲೋಕಸಭಾ ಚುನಾವಣೆಯನ್ನ ಸಮರ್ಥವಾಗಿ ಎದುರಿಸಲು ಪೂರ್ವ ಸಿದ್ದತೆ ಮಾಡಲಾಗಿದೆ. ಬಿಜೆಪಿ ಒಂದೇ 370ಕ್ಕೂ ಹೆಚ್ಚು ಸೀಟು ಗೆಲ್ಲಬೇಕೆಂದು ಪ್ರಧಾನಿ ಮೋದಿ ಗುರಿ ಹಾಕಿದ್ದಾರೆ. ಮೋದಿಯವರ ಗುರಿ ತಲುಪಲು ರಾಜ್ಯದಲ್ಲಿ 28ಕ್ಕೆ 28 ಕ್ಷೇತ್ರ ಗೆಲ್ಲಲು ಪ್ರಯತ್ನ ನಡೆದಿದೆ. ಪ್ರಮುಖವಾಗಿ ಉತ್ತರ ಕನ್ನಡ ಜಿಲ್ಲೆಯಲ್ಲಿ ನಮ್ಮ ಪಕ್ಷದ ಸಂಘಟನೆ ಬಲಿಷ್ಟವಾಗಿದೆ. ನರೇಂದ್ರ ಮೋದಿಯವರ ಗ್ಯಾರಂಟಿಯಿಂದ ಉತ್ತರ ಕನ್ನಡ ಕ್ಷೇತ್ರದಲ್ಲಿ ಮತ್ತೆ ಗೆಲ್ಲುವ ವಿಶ್ವಾಸ ಇದೆ. ಈಗಾಗಲೇ ಅಭ್ಯರ್ಥಿ ಆಯ್ಕೆ ವಿಚಾರವಾಗಿ ರಾಜ್ಯ ಸಮಿತಿಯಿಂದ ರಾಷ್ಟ್ರಿಯ ನಾಯಕರಿಗೆ ಪಟ್ಟಿ ತಲುಪಿದೆ. ಈಗಾಗಲೇ ರಾಜ್ಯದ 20 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಘೋಷಣೆ ಮಾಡಲಾಗಿದೆ ಎಂದರು.

ಇನ್ನು ರಾಜ್ಯದ ಕೆಲವು ಕ್ಷೇತ್ರದಂತೆ ಉತ್ತರ ಕನ್ನಡ ಕ್ಷೇತ್ರಕ್ಕೂ ಅಚ್ಚರಿ ಅಭ್ಯರ್ಥಿ ಕಣಕ್ಕಿಳಿಯುತ್ತಾರೆ ಎಂಬ ವಿಚಾರಕ್ಕೆ ಸಂಬಂಧಿಸಿ ಪ್ರತಿಕ್ರಿಯೆ ನೀಡಿದ ಅನಂತ್ ಕುಮಾರ್ ಹೆಗಡೆ, ಈ ಕ್ಷೇತ್ರವನ್ನ ದಾಖಲೆ ಮತಗಳ ಅಂತರದಿಂದ ಗೆಲ್ಲಲು ವರಿಷ್ಠರು ಯೋಚಿಸಿದ್ದಾರೆ. ವರಿಷ್ಠರ ಯೋಚನೆಯಂತೆ ಯಾವ ತೀರ್ಮಾನ ಕೈಗೊಳ್ಳುತ್ತಾರೆ ಅದಕ್ಕೆ ನಾವು ಬದ್ಧ. ಉತ್ತರ ಕನ್ನಡ ಕ್ಷೇತ್ರದಲ್ಲಿ ದಾಖಲೆ ಮತಗಳ ಅಂತರದಿಂದ ಗೆಲ್ಲಲು ತಯಾರಿ ನಡೆದಿದೆ ಎಂದರು. ರಾಜ್ಯ ಸಮಿತಿಯಿಂದ ಕಳಿಸಿರುವ ಪಟ್ಟಿಯಲ್ಲಿ ಕಾಗೇರಿ ಹೆಸರಿದೆ ಎಂಬ ವಿಚಾರಕ್ಕೆ ಸಂಬಂಧಿಸಿ ಮಾತನಾಡಿದ ಅವರು, ರಾಜ್ಯ ಸಮಿತಿಯಿಂದ ಕಳಿಸಿರುವ ಪಟ್ಟಿಯಲ್ಲಿ ಯಾರ ಹೆಸರು ಇದೆ, ಇಲ್ಲ ಎಂಬುವುದು ಆಂತರಿಕ ವಿಚಾರ. ಆದ್ರೆ ಅಭ್ಯರ್ಥಿಗಳ ಆಯ್ಕೆ ವಿಚಾರವಾಗಿ ಆಂತರಿಕ ವಲಯದಲ್ಲಿ ಚರ್ಚೆ ಮಾಡಿ ವರದಿ ನೀಡಲಾಗುತ್ತೆ. ಅಭ್ಯರ್ಥಿಗಳ ಆಯ್ಕೆ ವಿಚಾರವಾಗಿ ಆಂತರಿಕವಾಗಿ ಚರ್ಚೆ ಮಾಡಿರುವುದು ನಿಜ. ಸಾಮಾನ್ಯ ಕಾರ್ಯಕರ್ತರ ಅಭಿಪ್ರಾಯ ಕೂಡ ಸಂಗ್ರಹಣೆ ಮಾಡಲಾಗಿದೆ. ಉತ್ತರ ಕನ್ನಡ ಕ್ಷೇತ್ರದ ಅಭ್ಯರ್ಥಿಗಳ ಆಯ್ಕೆಯ ಕುರಿತ ವರದಿ ಈಗಾಗಲೆ ಪಕ್ಷದ ನಾಯಕರಿಗೆ ಹಾಗೂ ಪ್ರಧಾನಿಗೆ ತಲುಪಿದೆ. ಅದರ ಆಧಾರದ ಮೇಲೆ ಯಾರನ್ನ ಕಣಕ್ಕಿಳಿಸುತ್ತಾರೆ ಎಂಬುವುದನ್ನ ಕಾದು ನೋಡಬೇಕಿದೆ. ವರದಿಗಳನ್ನ ಆಧರಿಸಿ ವರಿಷ್ಠರು ಯಾವ ಅಭ್ಯರ್ಥಿಯನ್ನ ಕಣಕ್ಕಿಳಿಸುತ್ತಾರೆ ಅವರನ್ನು ಗೆಲ್ಲಿಸುತ್ತೆವೆ. ಒಟ್ಟಾರೆ ದಾಖಲೆ ಮತಗಳ ಅಂತರದಿಂದ ಉತ್ತರ ಕನ್ನಡದ ಅಭ್ಯರ್ಥಿ ಗೆಲುವು ಸಾಧಿಸುತ್ತಾರೆ ಎಂದರು.

## ಮೊದಲ ಪಟ್ಟಿ ಬಿಡುಗಡೆ

ರಾಜ್ಯದಲ್ಲಿ 3 ಜಿಲ್ಲೆಗಳನ್ನು ಹೊರತುಪಡಿಸಿ 25 ಜಿಲ್ಲೆಗಳ ಎಲ್ಲಾ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಸೂಕ್ತ ಅಭ್ಯರ್ಥಿಗಳನ್ನು ಅಕ್ಕ ಮಾಯಾವತಿಯವರೇ ಅಂತಿಮಗೊಳಿಸಿದ್ದಾರೆ. ನಮ್ಮ ಪಕ್ಷದಲ್ಲಿ ಯಾವುದೇ ಹಣ, ಮದ್ಯ, ಹುಡುಗೊರೆ ನೀಡದೆ, ಯಾವುದೇ ಪಕ್ಷದ ಪ್ರಣಾಳಿಕೆಯನ್ನು ನೀಡದೆ, ಸಂವಿಧಾನವೇ ನಮ್ಮ ಪ್ರಣಾಳಿಕೆಯಾಗಿದೆ ಎಂದು ತಿಳಿಸಿದರು.

ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ನಲ್ಲಿರುವ ಹಾಗೆ ಸಾರ್ವಜನಿಕರಿಗೆ ಯಾವುದೇ ಆಮಿಷಗಳನ್ನು ಒಡ್ಡುವುದಿಲ್ಲ, ಜನರು ಪಕ್ಷ ಒಪ್ಪಿ,ಕೆಲಸ ಕಾರ್ಯಗಳನ್ನು ಗಮನದಲ್ಲಿ ಇಟ್ಟುಕೊಂಡು ಮತ ನೀಡಬೇಕೆಂದು ಕೇಳಿಕೊಂಡರು. ರಾಷ್ಟ್ರೀಯ ಪಕ್ಷಗಳು ಹಿಂದಿನಿಂದಲೂ, ಈಗಲೂ ವಾಮ ಮಾರ್ಗದಲ್ಲಿ ಚುನಾವಣೆಯನ್ನು ಗೆಲ್ಲುತ್ತಿರುವುದು ನೋಡುತಿದ್ದೇವೆ, ಅವೆಲ್ಲವನ್ನೂ ಬಿಟ್ಟು ಚುನಾವಣೆಯಲ್ಲಿ ಗೆಲುವನ್ನು ಪಡೆಯಲಿ ಎಂದು ಸವಾಲಾಕಿದರು. ಇನ್ನು ಇದೇವೇಳೆ ಈ ಭಾರಿಯ ಚುನಾವಣೆಯಲ್ಲಿ 2ರಿಂದ 3 ಸೀಟುಗಳನ್ನು ಗೆಲ್ಲುತ್ತೇವೆ ಎಂದು ಮಾರಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ಬಹುಜನ ಸಮಾಜ ಪಾರ್ಟಿಯ ರಾಜ್ಯ ಖಜಾಂಚಿ ಡಾ. ಚಿನ್ನಪ್ಪ ವೈ.ಚಿಕ್ಕಹಾಗಡೆ ಮಾತನಾಡಿ, ಬೆಂಗಳೂರು ಗ್ರಾಮಾಂತರದಿಂದ ಅದರಲ್ಲೂ ಆನೇಕಲ್ ಕ್ಷೇತ್ರದಿಂದ ಸ್ಪರ್ಧೆ ಮಾಡಲಾಗಿದೆ, ನನಗೆ ಉತ್ತಮ ಸ್ಪಂದನೆ ಸಿಕ್ಕಿದೆ, ಹೀಗಾಗಿ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿ ಜನರ ಕಷ್ಟ, ನೋವು, ನಲಿವು ತಿಳಿಯುವ, ಜನರ ಸೇವೆ ಮಾಡುವ ಅವಕಾಶ ಸಿಕ್ಕಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಬಿಎಸ್ಪಿ ಪಕ್ಷದ ಉತ್ತರ, ದಕ್ಷಿಣ ಜಿಲ್ಲಾಧ್ಯಕ್ಷರು, ಟಿಕೆಟ್ ಸಿಕ್ಕಿರುವ ಅಭ್ಯರ್ಥಿಗಳು, ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಶಿವಮೊಗ್ಗ ಕ್ಷೇತ್ರಕ್ಕೆ ಸೀಮಿತ

ನಾನು ಪಕ್ಷೇತರ ಅಭ್ಯರ್ಥಿ ಘೋಷಣೆ ಬಳಿಕ ರಾಜ್ಯಾದ್ಯಂತ ಬೆಂಬಲ ಸಿಗುತ್ತಿದೆ. ರಾಜ್ಯದ ವಿವಿಧ ಭಾಗಗಳಿಂದ ಬಂದು ಜನರು ಶಿವಮೊಗ್ಗ ಲೋಕಸಭೆ ಚುನಾವಣೆ ಮಾಡುತ್ತಾರೆ. ನಿನ್ನೆ ಸಭೆಯ ಬಳಿಕ ಎಲ್ಲಡೆಯಿಂದ ಉತ್ತಮ ಬೆಂಬಲ ಸಿಗುತ್ತಿದೆ ಎಂದರು.

ಈ ಬಗ್ಗೆ ಮಾತನಾಡಿದ ಕೆಇ ಕಾಂತೇಶ್, ಇಂದಿನಿಂದ ಪ್ರಚಾರ ಆರಂಭ ಮಾಡುತ್ತೇವೆ. ಸಾಗರದ ವರದಹಳ್ಳಿ ಶ್ರೀಧರ್ ಆಶ್ರಮಕ್ಕೆ ಈಶ್ವರಪ್ಪ ಭೇಟಿ ನೀಡಲಿದ್ದಾರೆ. ಆಶ್ರಮಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ಪ್ರಚಾರ ಆರಂಭಿಸಲಾಗುವುದು. ಈ ನಮ್ಮ ಹೋರಾಟ ಕೇವಲ ಶಿವಮೊಗ್ಗ ಕ್ಷೇತ್ರಕ್ಕಷ್ಟೇ. ಇತರೆ ಕ್ಷೇತ್ರದಲ್ಲಿ ಬಿಜೆಪಿ ಗೆಲುವಿಗೆ ಸಮಸ್ಯೆಯಾಗಲ್ಲ ಎಂದರು.

**ಅಪ್ಪ-ಮಕ್ಕಳು - ಹಿಂದುತ್ವದ ಸ್ಪರ್ಧೆ**

ಮೋದಿ ಅವರು ಮತ್ತೆ ಪ್ರಧಾನಿ ಆಗಬೇಕು ಎಂಬುದು ನಮ್ಮ ಉದ್ದೇಶವಾಗಿದೆ ಎಂದು ಹೇಳಿದ ಕಾಂತೇಶ್ ಅವರು ಯಡಿಯೂರಪ್ಪ ಕುಟುಂಬದ ವಿರುದ್ಧ ವಾಗ್ದಾಳಿ ನಡೆಸಿದರು.

## ಮೊದಲನೇ ಪುಟದಿಂದ...

ಶಿವಮೊಗ್ಗದಲ್ಲಿ ಅಪ್ಪ-ಮಕ್ಕಳು- ಹಿಂದುತ್ವದ ಸ್ಪರ್ಧೆ ನಡೆಯಲಿದೆ ಎಂದರು. ಶಿವಮೊಗ್ಗ ಚುನಾವಣೆ ಗೆಲ್ಲಲು ಎಲ್ಲರ ಬೆಂಬಲ ಇದೆ. ಶಿವಮೊಗ್ಗ ಲೋಕಸಭೆ ಕ್ಷೇತ್ರ, ಗೆಲ್ಲುತ್ತೇವೆ ಎಂದರು.

ಮತ್ತೆ ನಮ್ಮ ಬೆಂಬಲ ಮೋದಿ ಅವರಿಗೆ ಇರುತ್ತದೆ. ನಾನು ಕೂಡಾ 8 ವಿಧಾನ ಸಭೆ ಕ್ಷೇತ್ರದಲ್ಲಿ ತಂದೆಯ ಪರ ಕೆಲಸ ಮಾಡುತ್ತೇನೆ. ಇಲ್ಲಿ ಈಶ್ವರಪ್ಪ ಅಭ್ಯರ್ಥಿ ಅಲ್ಲ, ಪ್ರತಿಯೊಬ್ಬ ಹಿಂದೂಗಳು ಅಭ್ಯರ್ಥಿ ಆಗಿದ್ದಾರೆ ಎಂದರು.

## ಬೆಳಗಾವಿ ಟಿಕೆಟ್

ಜಿಲ್ಲೆಯ ಪ್ರತಿಯೊಬ್ಬರು ಅಪೇಕ್ಷಿತರಿದ್ದಾರೆ. ಈ ಹಿಂದೆ ಬಾಬಾಗೌಡ, ಸುರೇಶ್ ಅಂಗಡಿ ಹಾಗೂ ಮಂಗಲಾ ಅಂಗಡಿಯವರು ನಮ್ಮ ಜಿಲ್ಲೆಯವರಿದ್ದರು. ನಮ್ಮ ಜಿಲ್ಲೆಯವರೇ ಅಭ್ಯರ್ಥಿ ಆಗಬೇಕು ಎಂಬುದು ಎಲ್ಲರ ಅಪೇಕ್ಷೆ ಇದೆ ಎಂದು ಹೇಳುವ ಮೂಲಕ ಪರೋಕ್ಷವಾಗಿ ಹೊರಗಿನವರಿಗೆ ಟಿಕೆಟ್ ನೀಡದಂತೆ ಬಿಜೆಪಿ ನಾಯಕರಿಗೆ ಎಚ್ಚರಿಕೆ ಸಂದೇಶ ರವಾನಿಸಿದರು.

ಪ್ರಭಾಕರ್ ಕೋರೆ ಮನೆಯಲ್ಲಿ ರಹಸ್ಯ ಸಭೆ ವಿಚಾರವಾಗಿ ಮಾತನಾಡಿದ ಅಭಯ್ ಪಾಟೀಲ್, ಕೋರ್ ಕಮಿಟಿ ಸಭೆಯಲ್ಲಿ ಅನೇಕ ವಿಷಯಗಳು ಚರ್ಚೆ ಆಗಿವೆ. ಅದನ್ನ ಹಿರಿಯರ ಗಮನಕ್ಕೆ ತರುವ ಕೆಲಸ ಸಾಮೂಹಿಕವಾಗಿ ಮಾಡಲಾಗುತ್ತದೆ. ಒಬ್ಬರೆ ಟಿಕೆಟ್ ಫೈನಲ್ ಮಾಡುವಂತದ್ದು ಅಲ್ಲ, ಪಕ್ಷದ ಎಲ್ಲರೂ ಕೂಡಿ ನಿರ್ಣಯ ತೆಗೆದುಕೊಳ್ಳುತ್ತಾರೆ. ಕಳೆದ ಬಾರಿ ಲೀಡ್ ಗಿಂತ 10 ಪಟ್ಟು ಹೆಚ್ಚಿನ ಲೀಡ್ ಪಡೆದುಕೊಳ್ಳುವ ಬಗ್ಗೆ ಚರ್ಚೆ ಮಾಡಿದ್ದೇವೆ. ಟಿಕೆಟ್ ವಿಚಾರ ಬಂದಾಗ ಅದನ್ನೂ ಚರ್ಚೆ ಮಾಡುತ್ತೇವೆ ಎಂದರು.

ಊಹಾಪೋಹಗಳಿಗೆ ಉತ್ತರ ಕೊಡಲ್ಲ: ಈರಣ್ಣ ಕಡಾಡಿ

ಬೆಳಗಾವಿ ಕ್ಷೇತ್ರಕ್ಕೆ ಜಗದೀಶ್ ಶೆಟ್ಟರ್ ಹೆಸರು ಫೈನಲ್ ವಿಚಾರವಾಗಿ ಮಾತನಾಡಿದ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಸಾಕಷ್ಟು ಹೆಸರುಗಳು ಬಂದಿವೆ. ಆದರೆ ನಮ್ಮ ನಾಯಕರು ಅಧಿಕೃತವಾಗಿ ಅಭ್ಯರ್ಥಿ ಘೋಷಣೆ ಮಾಡಿಲ್ಲ. ಸ್ಥಳೀಯವಾಗಿ ಸಾಕಷ್ಟು ಮುಖಂಡರು ಟಿಕೆಟ್ ಆಕಾಂಕ್ಷಿಗಳು ಇದ್ದಾರೆ. ಅಧಿಕೃತವಾಗಿ ರಾಷ್ಟ್ರೀಯ ನಾಯಕರು ಬಿ ಫಾರಂ ಕೊಡಲಿದ್ದಾರೆ ಎಂದು ಹೇಳುವ ಮೂಲಕ ಬೆಳಗಾವಿ ಕ್ಷೇತ್ರಕ್ಕೆ ಶೆಟ್ಟರ್ ಹೆಸರು ಘೋಷಣೆ ಮಾಡಿದ ಯಡಿಯೂರಪ್ಪ ಅವರಿಗೆ ಪರೋಕ್ಷವಾಗಿ ತಿರುಗೇಟು ನೀಡಿದರು.

ಅಲ್ಲದೆ, ಟಿಕೆಟ್ ಘೋಷಣೆಯಾಗುವ ಮುನ್ನ ಯಾವುದೇ ಪ್ರತಿಕ್ರಿಯೆ ನೀಡುವುದು ಒಳ್ಳೆಯದಲ್ಲ. ಊಹಾಪೋಹಗಳಿಗೆ ಉತ್ತರ ಕೊಡುವುದಿಲ್ಲ ಎಂದ ಈರಣ್ಣ ಕಡಾಡಿ, ಜೆಡಿಎಸ್ ಜೊತೆಗೆ ಸ್ಥಳ ಹೊಂದಾಣಿಕೆ, ಸಾಮಾಜಿಕ ನ್ಯಾಯದಡಿ ಅವಕಾಶ ಕೊಡುವ ಚರ್ಚೆ ನಡೆದಿದೆ ಎಂದರು.

## ಹೆಚ್ಚಿದ ಒತ್ತಡ

ಅಡಿಕೆ ತಟ್ಟೆಯಲ್ಲಿ ಊಟ ಮಾಡಿದ್ದ ಯದುವೀರ್, ನಂತರ ಜೆಡಿಎಸ್ ನಾಯಕ ಜಿ.ಟಿ.ದೇವೇಗೌಡ ಅವರನ್ನು ಭೇಟಿಯಾಗಿ ಸಹಕಾರ ಕೋರಿದ್ದರು. ಫುಟ್ ಪಾತ್ ನಲ್ಲಿ ಕಾರ್ಯಕರ್ತರ ಜೊತೆ ಟೀ ಕುಡಿದು ಗಮನ ಸೆಳೆದಿದ್ದರು. ಬಹಳ ಉತ್ಸುಕತೆಯಿಂದ ಚುನಾವಣೆಯಲ್ಲಿ ಓಡಾಟ ನಡೆಸುತ್ತಿರುವ ರಾಜ ವಂಶಸ್ಥ ಯದುವೀರ್, ತಮ್ಮ ನಡೆಯ ಮೂಲಕ ಜನರ ಮಧ್ಯೆ ಇರುತ್ತೇನೆಂಬ ಸಂದೇಶ ರವಾನಿಸಿದ್ದಾರೆ.

ಯತೀಂದ್ರ ಸಿದ್ದರಾಮಯ್ಯ ಸ್ಪರ್ಧೆಗೆ ಒತ್ತಡ

ಮೈಸೂರು ಕೊಡಗು ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಪ್ರಚಾರ ಕಾರ್ಯ ಆರಂಭಿಸಿದ್ದರೂ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಕಸರತ್ತು ಮುಂದುವರಿದಿದೆ. ನಿನ್ನೆ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಯತೀಂದ್ರ ಸಿದ್ದರಾಮಯ್ಯ ಅವರನ್ನು ಕಣಕ್ಕಿಳಿಸುವಂತೆ ಮುಖಂಡರು ಒತ್ತಾಯಿಸಿದ್ದಾರೆ. ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಎದುರು ಯತೀಂದ್ರ ಮಾತ್ರ ಪ್ರಬಲ ಅಭ್ಯರ್ಥಿಯಾಗಲಿದ್ದಾರೆ ಸಿದ್ದರಾಮಯ್ಯಗೆ ಕೈ ನಾಯಕರು ಮನದಟ್ಟು ಮಾಡುವ ಪ್ರಯತ್ನ ನಡೆಸಿದ್ದಾರೆ.

ಇಂದು ಈ ಬಗ್ಗೆ ಮಹತ್ವದ ನಿರ್ಧಾರ ಕೈಗೊಳ್ಳಲಿರುವ ಸಿಎಂ ಸಿದ್ದರಾಮಯ್ಯ, ಅಂತಿಮ ಹಂತದಲ್ಲಿ ಯಾರನ್ನು ಆಯ್ಕೆ ಮಾಡುತ್ತಾರೆ ಎಂಬುದು ಕುತೂಹಲ ಮೂಡಿಸಿದೆ. ಅಲ್ಲದೆ, ಕೊನೇ ಕ್ಷಣದಲ್ಲಿ ಯತೀಂದ್ರ ಅವರನ್ನೇ ಕಣಕ್ಕಿಳಿಸಿದರೂ ಅಚ್ಚರಿ ಪಡಬೇಕಿಲ್ಲ.

## ಆಂಟಿಯ ಕೊಂದ ಯುವಕ

ಈ 22 ವರ್ಷದ ದೇವಪ್ಪ ಮಾತ್ರ ಸದ್ದಿಲ್ಲದೇ ವಿಜಯಲಕ್ಷ್ಮೀಗೆ ಹತ್ತಿರವಾಗಿದ್ದ.. ಪರಿಚಯದಿಂದ ಆ ಸಲುಗೆ ಅನೈತಿಕ ಸಂಬಂಧಕ್ಕೆ ನಾಂದಿ ಹಾಡಿತ್ತು.. ಮನೆಯಲ್ಲಿ ಯಾರೂ ಇಲ್ಲದ ವೇಳೆ ಇಬ್ಬರೂ ಸೇರುತ್ತಿದ್ದರು.. ಪಟ್ಟಣಕ್ಕೆ ಹೋದಾಗಲೂ ಸೇರುತ್ತಿದ್ರು.

ಓಮ್ಮೊಮ್ಮೆ ವಿಜಯಲಕ್ಷ್ಮೀ ಕೈಗೆ ಸಿಗದೇ ಇದ್ದಾಗ ಮಾಳಿಗೆ ಏರಿ ಆಕೆಯನ್ನ ಭೇಟಿಯಾಗೋಕೆ ದೇವಣ್ಣ ಮುಂದಾಗ್ತಿದ್ದ..ಈ ವಿಚಾರ ವಿಜಯಲಕ್ಷ್ಮೀ ಅಣ್ಣ ಚೌಡಪ್ಪನಿಗೆ ಗೊತ್ತಾಗಿ ದೇವಣ್ಣಗೆ ಹಲವು ಬಾರಿ ಬೈದು ವಾರ್ನ್ ಮಾಡಿದ್ದ.. ಆದ್ರೆ ಆತ ಮಾತ್ರ ಬುದ್ದಿ ಕಲಿತಿರ್ಲಿಲ್ಲ.. ಕೊಲೆನೆ ಚೌಡಪ್ಪ ತಂಗಿ ವಿಜಯಲಕ್ಷ್ಮೀಗೆ ಹೊಡೆದು ಬುದ್ದಿ ಹೇಳಿದ್ದ.. ನಂತ್ರ ಆಕೆ ದೇವಣ್ಣನ ಸಂಪರ್ಕ ಬಿಟ್ಟಿದ್ಲು.

ಆದರೆ ಕಳೆದ ಎರಡು ತಿಂಗಳಿನಿಂದ ದೇವಣ್ಣನನ್ನ ಅವಾಯ್ಡ್ ಮಾಡಿದ್ಲು.. ಇದರಿಂದ ದೇವಣ್ಣನ ಪಿತ್ತ ನೆತ್ತಿಗೇರಿತ್ತು.. ಹದಿಹರೆಯದರಲ್ಲೇ ಮೋಹದ ಜಾಲಕ್ಕೆ ಸಿಲುಕಿದ್ದ ಆಸಾಮಿಗೆ ವಿಜಯಲಕ್ಷ್ಮೀ ಬಿಟ್ಟಿರಲಾಗಲಿಲ್ಲ..ಈ ಮಧ್ಯೆ ಇದೇ ಮಾರ್ಚ್10 ರಂದು ಆಕೆ ಮುದಗಲ್ ಬಳಿಯ ದೇವಸ್ಥಾನಕ್ಕೆ ಹೋಗಿದ್ಲು..ಆ ಮಾಹಿತಿ ತಿಳಿದು ಆತನು ಆಕೆಯ ಜೊತೆ ಹೋಗಿದ್ದ.. ನಂತರ ವಾಪಸ್ ಬರೋವಾಗ ಆಕೆಯನ್ನ ಪುಸಲಾಯಿಸಿ ಲಿಂಗಸುಗೂರು ಪಟ್ಟಣದ ಪೊದೆಯೊಂದರ ಒಳಗೆ ಕರೆದೊಯ್ದಿದ್ದ.. ಅಲ್ಲಿ ತನ್ನ ಕಾಮ ತೃಷೆ ತೀರಿಸಿಕೊಂಡಿದ್ದ.. ನಂತರ ನನ್ನನ್ನ ಯಾಕೆ ಅವಾಯ್ಡ್ ಮಾಡ್ತಿದಿಯಾ ಅಂತ ಕ್ಯಾತೆ ತೆಗೆದಿದ್ದ.. ನಂತರ ಆಕೆಯನ್ನ ಕಲ್ಲಿನಿಂದ ತಲೆಗೆ ಹೊಡೆದು, ಆಕೆಯ ಸೀರೆಯಿಂದಲೇ ಉಸಿರುಗಟ್ಟಿಸಿ ಕೊಲೆಗೈದಿದ್ದ ಅನ್ನೋದು ತನಿಖೆ ವೇಳೆ ಗೊತ್ತಾಗಿದೆ. ಸದ್ಯ ಪೊಲೀಸರು ಆರೋಪಿ ದೇವಪ್ಪನ ಹೇಳಿಕೆ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

## ಬಿಬಿಎಂಪಿ

ಜಡಿದಿದೆ. ಈ ಹಿಂದೆಯೂ ಅನೇಕ ಬಾರಿ ತೆರಿಗೆ ವಿಚಾರವಾಗಿ ಮಂತ್ರ ಮಾಲ್ ಗೆ ಬೀಗ ಹಾಕಲಾಗಿತ್ತು. ಇದೀಗ ಮತ್ತೆ ಇಂದು ಮುಂಜಾನೆ ಬಿಬಿಎಂಪಿ ಅಧಿಕಾರಿಗಳು ಮಾಲ್ ಗೆ ಬೀಗ ಹಾಕಿದ್ದಾರೆ. ಮಾರ್ಷಲ್ ಹಾಗೂ ಪೊಲೀಸರ ಬಿಗಿ ಭದ್ರತೆಯಲ್ಲಿ ಮಾಲ್ ಮುಖ್ಯ ಪ್ರವೇಶ ದ್ವಾರಕ್ಕೆ ಬೀಗ ಜಡಿಯಲಾಗಿದೆ. ತೆರಿಗೆ ಪಾವತಿಸದ ಹಿನ್ನೆಲೆ ಲೈಸೆನ್ಸ್ ಕೂಡ ರದ್ದು ಮಾಡಲಾಗಿದೆ.

ಮಾಲ್‌ನ ಮುಖ್ಯ ದ್ವಾರಕ್ಕೆ ಬೀಗ ಹಾಕುವುದರೊಂದಿಗೆ ನೋಟಿಸ್ ಕೂಡ ಅಂಟಿಸಲಾಗಿದೆ. ಬಿಬಿಎಂಪಿ ಕಾಯ್ದೆ 2020ರ ಕಲಂ 156 ಹಾಗೂ ದಿನಾಂಕ 2023ರ ಡಿಸೆಂಬರ್ 06 ರ ಸುತ್ತೋಲೆಯಂತೆ, ನಿಮ್ಮ ವ್ಯಾಪಾರ ಪರವಾನಗಿಯನ್ನು ಅಮಾನತುಗೊಳಿಸಲಾಗಿದೆ. ಬಿಬಿಎಂಪಿ ಆದೇಶ ಮೇರೆಗೆ ಬಾಕಿ ಆಸ್ತಿ ತೆರಿಗೆಗಳನ್ನು ಪಾವತಿಸದ ಕಾರಣಕ್ಕಾಗಿ ಆಸ್ತಿಯನ್ನು ಸೀಲ್ ಮಾಡಲಾಗಿದೆ ಎಂದು ಬ್ಯಾನರ್ ಅಳಡಿಸಲಾಗಿದೆ.

## ಪ್ರತಾಪ್ ಸಿಂಹ ಟಾಂಗ್

ನಾನು ಸಾಧಿಸಬೇಕಾದದ್ದನ್ನು ಸಾಧಿಸದೆಯೇ ಸಾಯುತ್ತಿದ್ದೇನೆ, ನಾನು ಸೋತೆ. ನನ್ನ ಒಳಸತ್ಯ ಬತ್ತಿಹೋಗಿದೆ, ನಾನು ಕೆಲಸಕ್ಕೆ ಬಾರದವನಾದೆ ಎಂದು-ನಿರಾಸೆಯ ಮನೋಭಾವವನ್ನು ತಳೆಯುವುದು ತಪ್ಪು ಎನ್ನುತ್ತಾರೆ ತಿಮ್ಮಗುರು.

ಮೃತ್ಯು ಎಂಬುದು ಒಂದು ಅಲೆಯಂತೆ, ಅಲೆ ಮೇಲೇಳುತ್ತದೆ ಮತ್ತೆ ಬೀಳುತ್ತದೆ, ಇನ್ನೊಂದು ಸಲ ಏಳುತ್ತದೆ. ಹೀಗೆ ನಮ್ಮ ಜೀವನ ಒಂದೇ ಜನ್ಮದಲ್ಲಿ ಮುಗಿದುಹೋಗುವುದಿಲ್ಲ. ಇಂದು ಬಿದ್ದ ಅಲೆ ನಾಳೆ ಏಳುತ್ತದೆ. ಇಂದು ಬಂದ ಸೋಲು ನಾಳೆ ಗೆಲುವಾಗುತ್ತದೆ.

ಈ ಹಿಂದೆ 2020ರಲ್ಲಿ ಸಿ.ಟಿ. ರವಿ ಅವರು ಕೂಡ ಇದೇ ಸಾಲುಗಳನ್ನು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದರು.

## ಮಂಜೂರು

ಪ್ರಕರಣಕ್ಕೆ ಸಂಬಂಧಿಸಿದಂತೆ ಕೋರ್ಟ್ ಅವರಿಗೆ ವಿಚಾರಣೆ ನಡೆಸಿ ಜಾಮೀನು ನೀಡಿದೆ. ಈ ಹಿಂದೆ ಕೇಜ್ರಿವಾಲ್ ಅವರು ಜಾಮೀನು ಅರ್ಜಿಯನ್ನು ಸಲ್ಲಿಸಿದರು. ಮಾರ್ಚ್ 16 ರಂದು ತನ್ನ ಮುಂದೆ ಹಾಜರಾಗುವಂತೆ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ದಿವ್ಯಾ ಮಲ್ಹೋತ್ರಾ ನೀಡಿದ್ದ ಆದೇಶದ ವಿರುದ್ಧ ಅರವಿಂದ್ ಕೇಜ್ರಿವಾಲ್ ರೂಸ್ ಅವೆನ್ಯೂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ದೆಹಲಿ ಮದ್ಯದ ಅಬಕಾರಿ ನೀತಿಯಲ್ಲಿ ಅಕ್ರಮ ಹಣ ವರ್ಗಾವಣೆ ನಡೆಸಿದ್ದಾರೆ ಎಂದು ಸಮನ್ಸ್ ನೀಡಲಾಗಿತ್ತು. ಈ ಸಮನ್ಸ್ ಗೆ ಕೇಜ್ರಿವಾಲ್ ಅವರು ಅವಿಧೇಯರಾಗಿದ್ದರು. ಈ ಕಾರಣಕ್ಕೆ ಅವರ ವಿರುದ್ಧ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಎರಡು ದೂರುಗಳನ್ನು ಸಲ್ಲಿಸಲಾಗಿತ್ತು. ಆದರೆ ಕೇಜ್ರಿವಾಲ್ ಅವರು ಯಾವುದೇ ಅಸಹಕಾರ ತೋರಿಲ್ಲ ಎಂದು ಅವರು ಪರ ವಕೀಲ ರಮೇಶ್ ಗುಪ್ತಾ ಅವರು ಕೋರ್ಟ್ ಮುಂದೆ ಹೇಳಿದ್ದಾರೆ.

ಈ ಹಿಂದೆ ನಡೆದ ವಿಚಾರಣೆಯಲ್ಲಿ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ರಾಕೇಶ್ ಸೈಲ್ ಅವರು ಕೇಜ್ರಿವಾಲ್ ಮತ್ತು ಜಾರಿ ನಿರ್ದೇಶನಾಲಯವನ್ನು ಪ್ರತಿನಿಧಿಸುವ ವಕೀಲರ ವಾದವನ್ನು ಆಲಿಸಿ, ಫೆಬ್ರವರಿ 17ರಂದು ವೀಡಿಯೊ ಕಾನ್ಫರೆನ್ಸ್ ಮೂಲಕ ಹಾಜರಾಗಲು ಅನುಮತಿ ನೀಡಿದರು. ಆದರೆ ಮಾ.16ಕ್ಕೆ ಕೋರ್ಟ್ ಗೆ ದೈಹಿಕವಾಗಿ ಹಾಜರಾಗಬೇಕು ಎಂದು ಹೇಳಿದರು.

## ಇಬ್ಬರ ಬಂಧನ

ಅಸ್ಸಾಂನ ಅಮೃತ್ ಹಾಗೂ ರಾಬರ್ಟ್ ಬಂಧಿತರು. ಇವರು ಕೆಲಸ ಅರಸಿಕೊಂಡು ಬೆಂಗಳೂರಿಗೆ ಬಂದಿದ್ದರು. ಬಿಡಿಎ ಸಮೀಪದ ಹೋಟೆಲ್‌ನ ಸ್ವಚ್ಛತಾ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದರು. ವಿದೇಶಿ ಮಹಿಳೆ ಜರೀನಾ ಬಳಿ ತುಂಬಾ ಹಣವಿದೆ ಎಂದು ಹಣದಾಸೆಗೆ ಈ ಕೃತ್ಯ ಎಸಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಶೇಷಾದ್ರಿಪುರಂನ ಜಗದೀಶ್ ಹೋಟೆಲ್‌ನಲ್ಲಿ ಉಜ್ಬೇಕಿಸ್ತಾನದ ಮಹಿಳೆ ಸಾವನ್ನಪ್ಪಿದ್ದರು. ವಿಚಾರ ತಿಳಿದು ಸ್ಥಳಕ್ಕೆ ಹೋದ ಪೊಲೀಸರು ರಾಯಭಾರ ಕಚೇರಿಯಿಂದ ಅನುಮತಿ ಪಡೆದು ಮರಣೋತ್ತರ ಪರೀಕ್ಷೆ ಮಾಡಿಸಿದ್ದಾರೆ. ಇದು ಅನುಮಾನಾಸ್ಪದ ಸಾವಲ್ಲ, ಕೊಲೆ ಅನ್ನೋದು ಬೆಳಕಿಗೆ ಬಂದಿದೆ. ಈ ಮಹಿಳೆ ಕಳೆದ ಕೆಲ ವರ್ಷಗಳಿಂದ ಭಾರತ ಪ್ರವಾಸ ಮಾಡ್ತಿದ್ದು, 50 ಕ್ಕೂ ಹೆಚ್ಚು ಬಾರಿ ಭಾರತಕ್ಕೆ ಬಂದಿದ್ದರು. ಆದರೆ ಬೆಂಗಳೂರಿನಲ್ಲಿ ಕೊಲೆಯಾಗಿದ್ದಾರೆ.

ಮಹಿಳೆ ಹೋಟೆಲ್‌ಗೆ ಬಂದಾಗ ರಷ್ಯನ್ ಕಾಲ್‌ಗರ್ಲ್ ಅಂತಾ ಕಸ್ಟಮರ್ ಒಬ್ಬ ಬಂದಿದ್ದಾನೆ. ಈಕೆ ರಷ್ಯನ್ ಅಲ್ಲ ಅಂತಾ ಗೊತ್ತಾದಾಗ 7,000 ಹಣ ಕೊಟ್ಟು ಹೊರಟು ಹೋಗಿದ್ದಾನೆ. ಅಸ್ಸಾಂ ಮೂಲದ ಇಬ್ಬರು ಹೋಟೆಲ್‌ನಲ್ಲಿ ಹೌಸ್ ಕೀಪಿಂಗ್ ಕೆಲಸ ಮಾಡ್ತಿದ್ದರು. ಯಾವಾಗ ಈಕೆ ಕಾಲ್‌ಗರ್ಲ್ ಎಂದುಕೊಂಡು ಈಕೆಯನ್ನ ಬಲೆಗೆ ಬೀಳಿಸಲು ಯತ್ನಿಸಿದ್ದಾರೆ. ಅನುಚಿತವಾಗಿ ಮಾಡಿದ ಯುವಕರಿಗೆ ವಿದೇಶಿ ಮಹಿಳೆ ಕಪಾಳಮೋಕ್ಷ ಮಾಡಿದ್ದಾಳೆ. ಇದರಿಂದ ಕೋಪಗೊಂಡು ಮಹಿಳೆಯನ್ನ ಉಸಿರುಗಟ್ಟಿಸಿ ಕೊಲೆ ಮಾಡಿದ್ದಾರೆ.

ಕೊಲೆ ಬಳಿಕ ಮಹಿಳೆ ಬಳಿಯಿದ್ದ ವಿದೇಶಿ ಹಣ, ರೂಪಾಯಿ, ಮೊಬೈಲ್ ತೆಗೆದುಕೊಂಡು ಕೇರಳ ರಾಜ್ಯದಲ್ಲಿ ತಲೆ ಮರಿಸಿಕೊಂಡಿದ್ದರು. ಆರೋಪಿಗಳಿಂದ 13 ಸಾವಿರ ರೂ. ನಗದು, 2,000 ಮುಖಬೆಲೆಯ ಉಜ್ಬೇಕಿಸ್ತಾನದ ಎರಡು ನೋಟುಗಳು 5,000 ಮುಖಬೆಲೆಯ ಒಂದು ನೋಟನ್ನು ಸೀಜ್ ಮಾಡಲಾಗಿದೆ. ರೂಮ್ ಸರ್ವಿಸ್‌ಗೆ ಹೋಗಿದ್ದಾಗ ಮಹಿಳೆಯನ್ನ ದಿಂಬಿನಿಂದ ಉಸಿರುಗಟ್ಟಿಸಿ ಹತ್ಯೆ ಮಾಡಿ ಇದೀಗ ಜೈಲು ಸೇರಿದ್ದಾರೆ.

## ಸಾವು

ಮೂವರು ಒಂದೇ ಕುಟುಂಬದವರು ಎಂದು ಅವಶೇಷಗಳಿಂದ ತಿಳಿದುಬಂದ ನಂತರ ಸುದ್ದಿ ವರದಿಯಾಗಿದೆ. ಕುಟುಂಬವು ಬ್ರಾಂಪ್ಟನ್‌ನ ಬಿಗ್ ಸ್ಕೈ ವೇ ಮತ್ತು ವ್ಯಾನ್ ಕಿರ್ಕ್ ಡ್ರೈವ್ ಪ್ರದೇಶದಲ್ಲಿ ವಾಸಿಸುತ್ತಿತ್ತು.

ಮೃತರ ನೆರೆಹೊರೆಯ ಜನರು ತಿಳಿಸಿದಾಗ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಅಗ್ನಿಶಾಮಕದಳ ಬೆಂಕಿಯನ್ನು ನಂದಿಸಿದಾಗ ಮೃತರ ಅವಶೇಷಗಳು ಪತ್ತೆಯಾಗಿವೆ.

ರಾಜೀವ್ ವಾರಿಕೂ (51), ಅವರ ಪತ್ನಿ ಶಿಲ್ಪಾ ಕೋಥಾ (47) ಮತ್ತು ಅವರ ಮಗಳು ಮಾಹೆಕ್ ವಾರಿಕೂ (16) ಮೃತರು ಎಂದು ಗುರುತಿಸಲಾಗಿದೆ.

ಮನೆಯಲ್ಲಿ ಬೆಂಕಿ ಅವಘಡ ಸಂಭವಿಸಲು ಕಾರಣವೇನು ಎಂಬ ಬಗ್ಗೆ ನಿಖರ ಮಾಹಿತಿ ಸಿಕ್ಕಿಲ್ಲ. ಈ ಸಂಬಂಧ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಮೃತರ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಕುಟುಂಬಗಳನ್ನು ಸಬಲೀಕರಣಗೊಳಿಸಿ

**ಮಂಡ್ಯ:** ಸರ್ಕಾರ ಜಾರಿಗೆ ತಂದಿರುವ ಯೋಜನೆಗಳನ್ನು ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳಿಗೆ ಒದಗಿಸಿ ಅವರ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಅಧಿಕಾರಿಗಳು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮ್ಯಾನುಯಲ್ ಸ್ಕಾವೆಂಜರ್ ಗಳ ವೃತ್ತಿ ನಿಷೇಧ ಮತ್ತು ಅವರ ಪುನರ್ ವಸತಿ ಕಾಯ್ದೆ 2013 ರ ಹಾಗೂ ನಿಯಮ 2023 ರನ್ನು ಅನುಷ್ಠಾನಗೊಳಿಸುವ ಸಂಬಂಧ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದ ಮಕ್ಕಳು ವಂಶ ಪಾರಂಪರ್ಯವಾಗಿ ಅದೇ ವೃತ್ತಿಯನ್ನು ಮಾಡದೇ , ಅದನ್ನು ಹೊರತುಪಡಿಸಿ ಅವರ ಆಸಕ್ತಿ ಹಾಗೂ ವಿದ್ಯಾಭ್ಯಾಸಕ್ಕೆ ಅನುಗುಣವಾಗಿ ಕೌಶಲ್ಯಾಧಾರಿತ ತರಬೇತಿ ನೀಡಿ ಉದ್ಯೋಗಗಳನ್ನು ಕಲ್ಪಿಸಬೇಕು. ತರಬೇತಿ ನೀಡುವ ಮೊದಲು ಅವರ ಆಸಕ್ತಿಯ ಬಗ್ಗೆ ಸರ್ವೆ ನಡೆಸಿ ನಂತರ ತರಬೇತಿ ಆಯೋಜಿಸಿ ಎಂದರು.

ಜಿಲ್ಲೆಯಲ್ಲಿ ಈಗಾಗಲೇ ಗ್ರಾಮೀಣ ಪ್ರದೇಶದಲ್ಲಿ ಒಟ್ಟು 567 ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳನ್ನು ಗುರುತಿಸಲಾಗಿದೆ. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ 280 ಜನರನ್ನು ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗುರುತಿಸಲಾಗಿದ್ದು, ಗುರುತಿನ ಚೀಟಿಯನ್ನು ನೀಡಲಾಗಿರುತ್ತದೆ.

ಮ್ಯಾನ್ಯುಯಲ್ ಸ್ಕಾವೆಂಜರ್ ಹಾಗೂ ಅವರ ಕುಟುಂಬಗಳಲ್ಲಿರುವ ಮಕ್ಕಳಿಗೆ ನಿಯಮನುಸಾರ ಪುನರ್ ವಸತಿ, ಶಿಕ್ಷಣ, ವಿದ್ಯಾರ್ಥಿ ವೇತನ ಇನ್ನಿತರೆ ಸೌಲಭ್ಯ ಕಲ್ಪಿಸಿ ಕೊಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.



ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಕುಟುಂಬಗಳ ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಯನ್ನು ಪರಿಶೀಲಿಸಿ, ಸರ್ಕಾರದಿಂದ ಬರುವ ಸೌಲಭ್ಯವನ್ನು ದೊರಕಿಸಬೇಕು. ನಿವೇಶನ ಹೊಂದಿರುವ ಹಾಗೂ ನಿವೇಶನ ರಹಿತ ಕುಟುಂಬಗಳ ಬಗ್ಗೆ ಪಟ್ಟಿಯನ್ನು ಸಂಬಂಧಪಟ್ಟ ಅಧಿಕಾರಿಯವರು ಸಲ್ಲಿಸಬೇಕು. ನಿವೇಶನ ರಹಿತ ಕುಟುಂಬಗಳಿಗೆ ಅಂಬೇಡ್ಕರ್ ವಸತಿ ಯೋಜನೆ ಅಡಿಯಲ್ಲಿ ನಿವೇಶನವನ್ನು ನೀಡಲಾಗುವುದು ಎಂದರು. ನಗರ ಸ್ಥಳೀಯ ಸಂಸ್ಥೆಗಳ ಆಯವ್ಯಯದಲ್ಲಿ ಈಗಾಗಲೇ ಪೌರ ಕಾರ್ಮಿಕರ ಆರೋಗ್ಯ ತಪಾಸಣೆಗಾಗಿ ಅನುದಾನವನ್ನು ಮೀಸಲಿಡಲಾಗಿದೆ. ಸಮಿತಿಯ ಸದಸ್ಯರು ಪೌರ ಕಾರ್ಮಿಕರು ಆರೋಗ್ಯ ತಪಾಸಣೆಗೆ ಒಳಪಟ್ಟಿರುವುದನ್ನು ಖಾತ್ರಿ ಪಡಿಸಿಕೊಳ್ಳಬೇಕು ಎಂದರು.

ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಪ್ರಕಾರಣದ ಬಗ್ಗೆ ದೂರು ಬಂದ ತಕ್ಷಣ ನಗರ ಸ್ಥಳೀಯ ಸಂಸ್ಥೆ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸಂಬಂಧಿಸಿದ ಪರಿಶೀಲನಾಧಿಕಾರಿ(ಇನ್ ಪೆಕ್ಟರ್ಸ್) ತುರ್ತಾಗಿ ಸ್ಥಳ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ಆರೋಗಕ್ಕೆ ವರದಿ ಸಲ್ಲಿಸಬೇಕು ಎಂದು ತಿಳಿಸಿದರು. ತಾಲ್ಲೂಕು ಮಟ್ಟದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳ ಬಗ್ಗೆ ತಹಶೀಲ್ದಾರರು ಹಾಗೂ ಕಾರ್ಯ ನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆಸಬೇಕು ಎಂದರು.

ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಹಾಗೂ ಮೃತಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳ ಮಕ್ಕಳಿಗೆ ನವೆಂಬರ್ 1 ರಂದು ಪ್ರತಿಭಾ ಪುರಸ್ಕಾರ ನೀಡಬೇಕು. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಮತ್ತು ಪೌರ ಕಾರ್ಮಿಕರ ಮಕ್ಕಳಿಗೆ ಶೇ. 5 ರಷ್ಟು ಪ್ರವೇಶ ಕಲ್ಪಿಸಲಾಗಿದೆ ಎಂದರು.

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ 2017-18ನೇ ಸಾಲಿನಲ್ಲಿ ವಿಶೇಷ ನೇರ ನೇಮಕಾತಿ ಅಡಿ 85 ಜನ ಪೌರ ಕಾರ್ಮಿಕರನ್ನು ಕಾಯಂಗೊಳಿಸಲಾಗಿರುತ್ತದೆ. 2022-23 ನೇ ಸಾಲಿನಲ್ಲಿ 103 ಜನ ಪೌರ ಕಾರ್ಮಿಕರನ್ನು ನೇರ ನೇಮಕಾತಿ ಮಾಡಿಕೊಳ್ಳಲಾಗಿದೆ. ಅವರಿಗೆ ಸುರಕ್ಷಾ ಪರಿಕರಗಳನ್ನು ವಿತರಿಸಲಾಗಿದೆ.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್. ಯತೀಶ್, ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವೀರ್ ಆಸಿಫ್, ಉಪವಿಭಾಗಾಧಿಕಾರಿ ಮಹೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸಿದ್ದಲಿಂಗೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಕೆ. ಮೋಹನ್, ಪೌರಾಯುಕ್ತ ಆರ್. ಮಂಜುನಾಥ್, ರಾಜ್ಯ ಸಫಾಯಿ ಕರ್ಮಚಾರಿ ಮೇಲುಸ್ತುವಾರಿ ಸದಸ್ಯ ಡಿ. ಆರ್. ರಾಜು ಸೇರಿದಂತೆ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ಧನಸಹಾಯ

**ಬೆಂಗಳೂರು:** ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ಶೈಕ್ಷಣಿಕ ಧನ ಸಹಾಯವನ್ನು ಪ್ರತಿ ವರ್ಷ ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಶೈಕ್ಷಣಿಕ ಧನಸಹಾಯವನ್ನು ಪಡೆಯಲು ಎಲ್ಲಾ ಅರ್ಹ ಫಲಾನುಭವಿಗಳು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ (ಎಸ್ ಎಸ್ ಪಿ) ಮೂಲಕ ಅರ್ಜಿಯನ್ನು ಮೇ 31 ರೊಳಗೆ ಸಲ್ಲಿಸುವುದು. 2023-24 ನೇ ಸಾಲಿಗಾಗಿ ಈಗಾಗಲೇ ಎಸ್ ಎಸ್ ಪಿ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳು ಪುನಃ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. 2023-24 ನೇ ಸಾಲಿನಲ್ಲಿ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಶೈಕ್ಷಣಿಕ ಧನ ಸಹಾಯವನ್ನು ಎಸ್ ಎಸ್ ಪಿ ತಂತ್ರಾಂಶದ ಮೂಲಕ ನೀಡಲು ಅನುಕೂಲವಾಗುವಂತೆ ಮಂಡಳಿಯಲ್ಲಿ ನೋಂದಣಿಯಾಗಿರುವ ಎಲ್ಲಾ ಕಾರ್ಮಿಕರು https://kbocwwb.karnataka.gov.inಲಿಂಕ್ ಅನ್ನು ಉಪಯೋಗಿಸಿಕೊಂಡು ಮಂಡಳಿಯ ತಂತ್ರಾಂಶದಲ್ಲಿ Already Existing Seva Sindhu Construction Worker / E-Karmika Construction Worker ಟ್ಯಾಬ್‌ನಲ್ಲಿ ತಮ್ಮ ನೋಂದಣಿ ಸಂಖ್ಯೆ ಮತ್ತು ಉಲ್ಲೇಖ ಸಂಖ್ಯೆಯನ್ನು ನಮೂದಿಸಿ ಆಧಾರ್ ಸಂಖ್ಯೆಯನ್ನು ಲಿಂಕ್ (ಸೀಡ್) ಮಾಡತಕ್ಕದ್ದು. ಮಂಡಳಿಯಿಂದ ಶೈಕ್ಷಣಿಕ ಸಹಾಯವನ್ನು ಪಡೆಯಲು ಇದು ಅತ್ಯವಶ್ಯಕವಾಗಿರುವುದರಿಂದ ಈಗಾಗಲೇ ಆಧಾರ್ ಸಂಖ್ಯೆಯನ್ನು ಲಿಂಕ್ ಮಾಡದೇ ಇರುವ ಎಲ್ಲಾ ಕಾರ್ಮಿಕರು ಕಡ್ಡಾಯವಾಗಿ ಜೂನ್ 30 ರೊಳಗಾಗಿ ಆಧಾರ್ ಸಂಖ್ಯೆಯನ್ನು ಲಿಂಕ್ ಮಾಡಬಹುದಾಗಿದೆ. ಎಲ್ಲಾ ನೋಂದಾಯಿತ ಕಾರ್ಮಿಕರು ತಮ್ಮ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಯೊಂದಿಗೆ ಜೋಡಣೆ ಮಾಡಿ NPCI (National Payments Corporation of India) ಮ್ಯಾಪಿಂಗ್ ಮಾಡಿಸತಕ್ಕದ್ದು. ಆಧಾರ್ ಸೀಡ್ ಹಾಗೂ ಎನ್‌ಪಿಸಿಐ ಮಾಡಿಸದೇ ಇರುವ ಕಾರ್ಮಿಕರಿಗೆ ಶೈಕ್ಷಣಿಕ ಧನ ಸಹಾಯ ನೀಡಲು ಸಾಧ್ಯವಾಗುವುದಿಲ್ಲವಾದ್ದರಿಂದ ಕಡ್ಡಾಯವಾಗಿ ಸೀಡಿಂಗ್ ಮಾಡಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದರು.

# ಡಿ.ಇ.ಎಲ್.ಇ.ಡಿ ದಾಖಲಾತಿ ಪ್ರಕ್ರಿಯೆ ಪ್ರಾರಂಭ

**ಮೈಸೂರು:** 2023-24ನೇ ಸಾಲಿನ ಡಿ.ಇ.ಎಲ್.ಇ.ಡಿ (ಟಿ.ಸಿ.ಹೆಚ್- ಪ್ರಾಥಮಿಕ ಶಾಲಾ ಶಿಕ್ಷಕರ ತರಬೇತಿ) ದಾಖಲಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ. ಈ ಹಿನ್ನೆಲೆಯಲ್ಲಿ ದ್ವಿತೀಯ ಪಿ.ಯು.ಸಿ. ಪರೀಕ್ಷಾ ಫಲಿತಾಂಶದಲ್ಲಿ ಸಾಮಾನ್ಯ ಅಭ್ಯರ್ಥಿಗಳು ಶೇ.30ರಷ್ಟು ಪ್ರ.ಜಾತಿ ಅಥವಾ ಪ.ಪಂಗಡ ವಿದ್ಯಾರ್ಥಿಗಳು ಶೇ.45ರಷ್ಟು ಅಂಕಗಳನ್ನು ಪಡೆದಿರಬೇಕು ಮತ್ತು ಪಿ.ಯು.ಸಿ ಪೂರಕ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿಗಳಿಗೂ ಅವಕಾಶವಿರುತ್ತದೆ. ಪ.ಜಾತಿ ಅಥವಾ ಪ.ಪಂಗಡದ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಶುಲ್ಕವಿರುವುದಿಲ್ಲ,ಸಾಮಾನ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕ ರೂ.3065 (ವಿದ್ಯಾರ್ಥಿವೇತನ ಶುಲ್ಕ ಮರುಪಾವತಿಗೆ ಅವಕಾಶವಿರುತ್ತದೆ,ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ರೂ.25000ವಿದ್ಯಾರ್ಥಿವೇತನ ಇರುತ್ತದೆ). ಆಸಕ್ತ ಅಭ್ಯರ್ಥಿಗಳು ಕಛೇರಿಯ ಪಿ.ಎಸ್.ಟಿ.ಇ. ನೋಡಲ್ ಅಧಿಕಾರಿಗಳಾದ ಅಮಿತ್ ಡಿ.ಆರ್ ರವರ ಕಛೇರಿಯ ದೂ.ಸಂ:8971265899ನ್ನು ಸಂಪರ್ಕಿಸಬಹುದು ಎಂದು ವಸಂತಮಹಲ್‌ನ ಡಯೆಟ್ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು ತಿಳಿಸಿದ್ದಾರೆ.

# ಮುಕ್ತ ವಿವಿಯಲ್ಲಿ ಕಾರ್ಯಾಗಾರ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅರ್ಥಶಾಸ್ತ್ರಅಧ್ಯಯನ ಮತ್ತು ಸಂಶೋಧನ ವಿಭಾಗದ ವತಿಯಿಂದ ನವ ದೆಹಲಿಯ ಐಎಸ್‌ಎಸ್‌ಆರ್ ಪ್ರಾಯೋಜತ್ವದಲ್ಲಿ ಮಾ.16ಬೆಳಗ್ಗೆ11ಗಂಟೆಗೆ''ಗ್ರಾಮೀಣ ಕರ್ನಾಟಕದಲ್ಲಿ ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿಯಲ್ಲಿ ಸಾಮಾಜಿಕ ಆರ್ಥಿಕ ಮೌಲ್ಯಮಾಪನ''ಎಂಬ ವಿಷಯದ ಕುರಿತು ಒಂದು ದಿನದ ರಾಷ್ಟ್ರೀಯ ಕಾರ್ಯಾಗಾರವನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ನಳ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ಮಂಡ್ಯ ವಿಶ್ವವಿದ್ಯಾಲಯದ ಸರ್ ಎಂ.ವಿ. ಪಿ.ಜಿ ಕೇಂದ್ರ ಅರ್ಥಶಾಸ್ತ್ರವಿಭಾಗದ ಪ್ರಾಧ್ಯಾಪಕರಾದ ಪ್ರೊ. ಎಚ್.ಆರ್.ಉಮಾ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಜಂಟಿ ನಿರ್ದೇಶಕರಾದ ಡಾ.ಕೆ.ರಾಮೇಶ್ವರಪ್ಪ ಅವರು ಕೀಲಿ ಟಿಪ್ಪಣಿ ಮಾಡುವರು. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಶರಣಪ್ಪ ವಿ.ಹಲಸೆ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸುವರು ಹಾಗೂ ಎಲ್ಲಾ ಶಾಸನಬದ್ಧ ಅಧಿಕಾರಿಗಳು ಉಪಸ್ಥಿತರಿರುವರು.

# 19 ಬಹಿರಂಗ ಹರಾಜು

**ರಾಮನಗರ:** ಅಗತ್ಯ ವಸ್ತುಗಳ ಕಾಯ್ದೆಯಡಿ ತಾಲ್ಲೂಕಿನಲ್ಲಿ ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ ಅಕ್ಕಿ ಮತ್ತು ರಾಗಿ ದಾಸ್ತಾನನ್ನು ಇದೇ ಮಾ. 19 ರಂದು ಬೆಳಿಗ್ಗೆ 11 ಗಂಟೆಗೆ ಬಿ.ಎಂ ರಸ್ತೆ ಕಬ್ಬಾಳಮ್ಮ ವೇ ಬ್ರಿಡ್ಜ್ ಹಿಂಬಾಗದಲ್ಲಿರುವ ಎಸ್.ಡಬ್ಲ್ಯೂ.ಸಿ (ಟಿ.ಎ.ಪಿ.ಸಿ.ಎಮ್.ಎಸ್ ಲಗತ್ತು ಕೆ.ಎಫ್.ಸಿ.ಎಸ್.ಸಿ) ಆಹಾರ ಸಗಟು ಮಳಿಗೆಯಲ್ಲಿ 32.25 ಕ್ವಿಂಟಾಲ್ ರಾಗಿ ಹಾಗೂ ಅದೇ ದಿನ ಮಧ್ಯಾಹ್ನ 12 ಗಂಟೆಗೆ ಜಾನಪದ ಲೋಕದ ಎದುರಿರುವ ಕೆ.ಎಫ್.ಸಿ.ಎಸ್.ಸಿ ಆಹಾರ ಸಗಟು ಮಳಿಗೆಯಲ್ಲಿ 67.71 ಕ್ವಿಂಟಾಲ್ ಅಕ್ಕಿಯನ್ನು ಪ್ರತ್ಯೇಕವಾಗಿ ಷರತ್ತುಗಳಿಗೆ ಒಳಪಟ್ಟು ಸಾರ್ವಜನಿಕ ಬಹಿರಂಗ ಹರಾಜು ನಡೆಸಲಾಗುವುದು. ಆಸಕ್ತಿದಾರರು ಹರಾಜಿನಲ್ಲಿ ಭಾಗವಹಿಸಲು ಹೆಚ್ಚಿನ ಮಾಹಿತಿಗಾಗಿ ಚನ್ನಪಟ್ಟಣ ತಾಲ್ಲೂಕು ಕಚೇರಿಯನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ತಾಲ್ಲೂಕು ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆ ಪತ್ತೆಗೆ ಮನವಿ

**ರಾಮನಗರ:** ಬಿಡದಿ ಹೋಬಳಿಯ ಬೈರಮಂಗಲ ಗ್ರಾಮದ ನಿವಾಸಿ ಉಷಾರಾಣಿ ಸಿ.ಕೆ. (52 ವರ್ಷ) ಕಾಣೆಯಾಗಿದ್ದಾರೆ



ಎಂದು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಚಹರೆಯ ವಿವರ:- ಕೋಲುಮುಖ, ಗೋಧಿ ಮೈಬಣ್ಣ, ದೃಢಕಾಯ ಶರೀರ, ಇವರು ಕಾಣೆಯಾಗುವಾಗ ಪಾಚಿ ಹಸಿರು ಬಣ್ಣದ ಸೀರೆ ಹಾಗೂ ರವಿಕೆ ಧರಿಸಿರುತ್ತಾರೆ. ಇವರು ಕಂಡು ಬಂದರೆ ಠಾಣಾಧಿಕಾರಿಗಳು, ಬಿಡದಿ ಪೋಲಿಸ್ ಠಾಣೆಯನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಆಹಾರದಲ್ಲಿ ಔಷಧೀಯ ಗುಣ ಇರಬೇಕೆ ಹೊರತು ಔಷಧಿಯೇ ಆಹಾರ ಆಗಬಾರದು

**ಮೈಸೂರು:** ಆಹಾರ ಪದಾರ್ಥಗಳಲ್ಲಿ ಔಷಧೀಯ ಗುಣಗಳನ್ನು ಪಡೆಯಬೇಕೇ ವಿನ: ಔಷಧಿಯೇ ಆಹಾರ ಆಗಬಾರದು ಎಂದು ಆಹಾರ ತಜ್ಞೆ ಜಿ.ಎಮ್. ಸುನಿತಾ ತಿಳಿಸಿದರು.

ನಗರದ ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮಹಿಳಾ ದಿನಾಚರಣೆಯ ಪ್ರಯುಕ್ತ ಆಯೋಜಿಸಿದ ರಾಗಿಯಿಂದ ತಯಾರಿಸುವ ಅಡುಗೆ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಕಾಲದಲ್ಲಿ ಆರೋಗ್ಯವನ್ನು ಮೂಲೆಗೆ ದೂಡಿ ಸಂಪಾದನೆಗಾಗಿ ಓಡುತ್ತಿದ್ದೇವೆ. ಆರೋಗ್ಯವೇ ಭಾಗ್ಯವಾಗಬೇಕು, ಉತ್ತಮ ಆರೋಗ್ಯವಿದ್ದರೇ ನಾವು ದೊಡ್ಡ ಸಾಧನೆಗಳಿಗೆ ಪ್ರಯತ್ನಿಸಬಹುದು. ನಿಮ್ಮ-ನಿಮ್ಮ ಆರೋಗ್ಯಕ್ಕಾಗಿ ಒಂದು ಗಂಟೆಯ ಕಾಲ ಸಮಯ ಮೀಸಲಿಡಿ ಎಂದು ಸಲಹೆ ನೀಡಿದರು.

ಬಾಯಿ ಚಪಲಕ್ಕಾಗಿ ಜಂಕ್ ಫುಡ್ ಗಳಾದ ಪಿಜ್ಜಾ, ಬರ್ಗರ್ ಹಾಗೂ ಇತ್ಯಾದಿ ತಿನಿಸುಗಳನ್ನು ತ್ಯಜಿಸಿ ಪ್ರೋಟೀನ್ ದೊರೆಯುವಂತಹ ಮೊಳಕೆ ಕಾಳು , ಸೊಪ್ಪುಗಳನ್ನು ಹೆಚ್ಚೆಚ್ಚು ಬಳಸಿ. ಇಂದು ಅತ್ಯಂತ ವಿಟಮಿನ್ -ಯುಕ್ತ ಆಹಾರ ಪದಾರ್ಥವಾದ ರಾಗಿ ಸಹಾಯದಿಂದ ಅಡುಗೆ ಸ್ಪರ್ಧೆ ನಡೆಯುತ್ತಿರುವುದು ಬಹಳ ಸಂತಸ ತಂದಿದೆ. ಉತ್ತಮ ಆರೋಗ್ಯಕ್ಕಾಗಿ ಮೊದಲು ಮನೆಯ ಮಹಿಳೆ ಬದಲಾಗಬೇಕು ಆಗ ಸಂಪೂರ್ಣ ಮನೆಯ ಜೀವನ ಶೈಲಿ ಬದಲಾಯಿಸಲು ಸಾಧ್ಯ ಎಂದರು.

ನಂತರ ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷೆ ಜೆ. ಶೋಭ ರಮೇಶ್ ಮಾತನಾಡಿ, ರಾಗಿಯ ತಿನಿಸುಗಳು ಅಂದಾಕ್ಷಣ ನಮ್ಮಲ್ಲಿ ಉತ್ಸಾಹವೇ ಇರುವುದಿಲ್ಲ, ಇಂತಹ ಸಂದರ್ಭದಲ್ಲಿ ಇಂದು 20ಕ್ಕೂ ಹೆಚ್ಚು ಸ್ಪರ್ಧಿಗಳು ಬಹಳ ಸಡಗರದಿಂದ ಭಾಗವಹಿಸುತ್ತಿರುವುದು ಬಹಳ ವಿಶೇಷ. ನಮ್ಮ ಸಂಸ್ಥೆಯು ಪ್ರೋತ್ಸಾಹ ನೀಡುವ ಸಲುವಾಗಿ ಇಂತಹ ಹಲವು ಕಾರ್ಯಕ್ರಮ ಮಾಡತ್ತಲೇ ಇರುತ್ತದೆ ಎಂದರು.

ಸ್ಪರ್ಧೆಯಲ್ಲಿ ಪಾಲ್ಗೊಂಡ ಮಹಿಳೆಯರು ಬಹಳ ಹುರುಪಿನಿಂದ ರಾಗಿ ಹಾಲು, ರಾಗಿಯಿಂದ ತಯಾರಿಸಿದ ನೀರು ದೋಸೆ, ರಾಗಿ ಪೂರಿ, ಉಪ್ಪಿಟ್ಟು, ತಂಬಿಟ್ಟು, ವಡೆ ಹೀಗೆ ಹತ್ತು ಹಲವು ಅಡುಗೆ ತಯಾರಿ ಮಾಡಿ ಎಲ್ಲರ ಪ್ರಶಂಸೆಗೆ ಪಾತ್ರರಾದರು. ಅಡುಗೆ ಸ್ಪರ್ಧೆ ಕಾರ್ಯಕ್ರಮದ ನಂತರ ತೋರಣ ಕಟ್ಟುವ ಸ್ಪರ್ಧೆ ಹಾಗೂ ಇತರೆ ಆಟದ ಸ್ಪರ್ಧೆಗಳನ್ನು ಆಯೋಜಿಸಿದ್ದು ಮಹಿಳೆಯರು ಭಾಗವಹಿಸಿ ಸಂಭ್ರಮಿಸಿದರು. ತೀರ್ಪುಗಾರರಾಗಿ ಆಹಾರ ತಜ್ಞೆ ಜಿ.ಎಮ್. ಸುನಿತಾ ಹಾಗೂ ಸಂಗೀತ ವಿದ್ವಾನ್ ರಘು ಭಾಗವಹಿಸಿದ್ದರು. ಮಾ.29 ರಂದು ಸಂಸ್ಥೆಯಿಂದ ಅಂತರಾಷ್ಟ್ರೀಯ ಮಹಿಳಾ ದಿನಚರಣೆ ಕಾರ್ಯಕ್ರಮ ನಡೆಯಲಿದ್ದು ಅಂದಿನ ದಿನ ಮೊದಲ 3 ಸ್ಥಾನ ಪಡೆದ ವಿಜೇತರಿಗೆ ಬಹುಮಾನ ಹಾಗೂ ಭಾಗವಹಿಸಿದ ಎಲ್ಲಾ ಸ್ಪರ್ಧಿಗಳಿಗೂ ಪ್ರಮಾಣ ಪತ್ರ ನೀಡುವುದಾಗಿ ತಿಳಿಸಿದರು. ಮಾ.29 ರಂದು ನಡೆಯುವ ಕಾರ್ಯಕ್ರಮಕ್ಕೆ ಆಗಮಿಸುವ ಮಹಿಳೆಯರು ಪ್ರವೇಶ ಶುಲ್ಕ 600.ರೂ ಪಾವತಿಸಿ ಕಾರ್ಯಕ್ರಮಕ್ಕೆ ಪಾಲ್ಗೊಳಬಹುದು. ಹೆಚ್ಚಿನ ಮಾಹಿತಿಗಾಗಿ 9483453005 ಸಂಪರ್ಕಿಸಿ ಎಂದು ಸಂಸ್ಥೆ ತಿಳಿಸಿದೆ. ಸಂಸ್ಥೆಯ ಅಧ್ಯಕ್ಷೆ ಜೆ. ಶೋಭ ರಮೇಶ್, ಆಹಾರ ತಜ್ಞೆ ಜಿ.ಎಮ್. ಸುನಿತಾ ಹಾಗೂ ಸಂಗೀತ ವಿದ್ವಾನ್ ರಘು, ಖಜಾಂಚಿ ಅನಿತಾ ಹೇಮಂತ್, ಕಾರ್ಯದರ್ಶಿ ಬಿ.ಪಿ. ಉಷಾ ರಾಣಿ, ಮತ್ತು ಇತರೆ ಪದಾಧಿಕಾರಿಗಳು ಹಾಜರಿದ್ದರು.



## ಸಾಹಿತಿ ಬನ್ನೂರು ರಾಜು ಹೇಳಿಕೆ

# ಬಸವತತ್ವ ಮನುಷ್ಯತ್ವದ ಸಂಜೀವಿನಿ

**ಮೈಸೂರು:** ವಿಶ್ವಗುರು ಬಸವಣ್ಣ ಬರೀ ಕರ್ನಾಟಕದ ಸಾಂಸ್ಕೃತಿಕ ನಾಯಕರಷ್ಟೇ ಆಗಿರದೆ ಸರ್ವವಿಧದ ಸರ್ವತೋಮುಖದಲ್ಲೂ ಇಡೀ ಜಗತ್ತಿನ ಮಾನವ ಕುಲದ ಉದ್ಧಾರಕರೆಂದು ಪತ್ರಕರ್ತರೂ ಆದ ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಪಟ್ಟರು.

ಹನ್ನೆರಡನೇ ಶತಮಾನದಲ್ಲಿ ಮಾನವೀಯತೆಯ ನೆಲೆಯಲ್ಲಿ ಬಸವಯುಗವನ್ನೇ ಸೃಷ್ಟಿಸಿದ ಜಗಜ್ಯೋತಿ ಬಸವೇಶ್ವರರನ್ನು ನಮ್ಮ ರಾಜ್ಯ ಸರ್ಕಾರ ಪ್ರಸ್ತುತ ಕರ್ನಾಟಕದ ಸಾಂಸ್ಕೃತಿಕ ನಾಯಕರೆಂದು ಘೋಷಿಸಿದ ಹಿನ್ನೆಲೆಯಲ್ಲಿ ನಗರದ ಕೆ.ಆರ್.ಮೊಹಲ್ಲಾದ ಕೃಷ್ಣಮೂರ್ತಿಪುರಂನ ನಮನ ಕಲಾ ಮಂಟಪದಲ್ಲಿ ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ಆಶ್ರಯದಲ್ಲಿ ಆಯೋಜಿಸಿದ್ದ ಬಸವೇಶ್ವರರ ಭಾವಚಿತ್ರವುಳ್ಳ ಬಹುವರ್ಣದ ದಿನದರ್ಶಿಕೆ ಬಿಡುಗಡೆ ಮತ್ತು ಶರಣಯುವಸಿರಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಜ್ಯೋತಿ ಬೆಳಗುವುದರ ಮೂಲಕ ಉದ್ಘಾಟಿಸಿದ ಅವರು, ಇವನಾರವನೆನ್ನದೆ ಎಲ್ಲರನ್ನೂ ನಮ್ಮವನೆನ್ನುವ ಮನುಷ್ಯತ್ವವೇ ಬಸವ ತತ್ವವೆಂದರು.

ಸರ್ವ ಜನಾಂಗದ ಶಾಂತಿಯ ತೋಟದ ಆಶಯದಲ್ಲಿ ಸಕಲರಿಗೂ ಲೇಸನ್ನುಂಟು ಮಾಡುವ, ಸರ್ವರಲ್ಲೂ ಒಳಿತನ್ನು ಬಿತ್ತುವ ಮಾನವ ಕುಲೋದ್ಧಾರದ ಸಂಜೀವಿನಿ ಯಾದ ಬಸವ ತತ್ವವು ಬರೀ ಭಾಷಣಗಳಾಗದೆ, ಕೇವಲ ಉಲ್ಲೇಖಿತ ಮಾತುಗಳಾಗದೆ ಪ್ರಾಮಾಣಿಕ ಅನುಸರಣೆಯಾಗಿ ಪ್ರತಿಯೊಬ್ಬರ ಅಂತರಾಳದಲ್ಲೂ ಅಮೃತ ಧಾರೆಯಾಗಿ ಹರಿದು ಲೋಕೋದ್ಧಾರವಾಗಬೇಕು. ಇದಾದಾಗ ಮಾತ್ರವೇ ಬಸವಣ್ಣನ ಆಶಯಕ್ಕೊಂದು ಅರ್ಥ ಹಾಗೂ ಸಾರ್ಥಕ್ಯ ದೊರೆಯುವುದು.ನಮ್ಮ ಮಾನವಜನ್ಮವೂ ಸಾರ್ಥಕವಾಗುವುದು. ಬಸವಣ್ಣ ಎಂಬುದು ಕೇವಲ ಒಂದು ಹೆಸರಾಗಿರದೆ ಅದೊಂದು ಅದ್ಭುತ ಧೀಶಕ್ತಿಯಾಗಿದ್ದು ಮೌಢ್ಯತೆಯ, ಅಸಮಾನತೆಯ ಕಾರ್ಗತ್ತಲಲ್ಲಿರುವ ಜಗತ್ತನ್ನು ಬೆಳಕಿನತ್ತ ಕರೆತರುವ ಜಗಜ್ಯೋತಿಯಾಗಿದೆ. ಬಸವಣ್ಣ ಈ ಭುವಿಯಲ್ಲಿ ಅವತರಿಸಿದ್ದೇ ಮನುಷ್ಯರಂತೆ ಕಾಣುವ ಮನುಷ್ಯರಲ್ಲಿ ಮನುಷ್ಯತ್ವವನ್ನು ತುಂಬಿ ಅವರನ್ನು ನಿಜವಾದ ಮನುಷ್ಯರನ್ನಾಗಿ ಮಾಡಲು. ಈ ನಿಟ್ಟಿನಲ್ಲಿ ಅವರು ಸಾಕಷ್ಟು ಯಶಸ್ವಿಯೂ ಆಗಿ ಸಮ ಸಮಾಜದ



ಜಗತ್ತನ್ನು ನಿರ್ಮಿಸುವಲ್ಲಿ ಬೆಳಕಾಗಿದ್ದಾರೆ. ಬೆಳಕಿನ ಮಹಾಪರ್ವವಾಗಿ ಕರ್ನಾಟಕದಲ್ಲಿ ಅವರು ಅವತರಿಸಿದವರು. ಅವರ ಅವತಾರವೆಂಬುದು ಸಾಮಾನ್ಯವಲ್ಲ. ವಚನ ಚಳವಳಿಯ ಅಸ್ತ್ರದಿಂದ ಬಸವ ಬೆಳಕು ಚೆಲ್ಲಿ ಮಾನವತೆಯ ಜ್ಯೋತಿ ಹಚ್ಚಿದ ಪರಿ ಇದೆಯಲ್ಲ ಅದು ಇಂದಿಗೂ ವಿಶ್ವವ್ಯಾಪಿ ಇತಿಹಾಸವಾಗಿದೆ ಎಂದ ಅವರು, ಅದ್ದಕ್ಕೇನೆ ಬಸವಣ್ಣ ಜಗಜ್ಯೋತಿ ಎನಿಸಿದ್ದೆಂದು ತಿಳಿಸಿದ ಬನ್ನೂರು ರಾಜು ಅವರು ವಿಶೇಷವಾಗಿ ಬಸವಾದಿ ಶರಣರು ತಮ್ಮ ಅತ್ಯಂತ ಸರಳವೂ, ಸಹಜವೂ, ಬಹು ಮೌಲಿಕವೂ ಆದ ವಚನ ಸಾಹಿತ್ಯದಿಂದ ಕನ್ನಡವನ್ನು ದೇವಭಾಷೆಯಾಗಿಸಿದವರು ಮಾತ್ರವಲ್ಲ ನಮ್ಮ ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನ ಮಾನದ ಬಹು ದೊಡ್ಡ ಗೌರವ ದೊರೆಯಲು ವಚನಕಾರರೇ ಕಾರಣಕರ್ತರೆಂದು ಹೇಳಿದರು.

ಕನ್ನಡ ಚಳವಳಿ ನಾಯಕ ಮೂಗೂರು ನಂಜುಂಡಸ್ವಾಮಿ ಮಾತನಾಡಿ, ಜಗತ್ತಿನ ಮಹಾನ್ ಮಾನವತಾವಾದಿ ಬಸವಣ್ಣನವರು ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ ಎಂದು ಹೇಳಿದರು. ಆದರೆ ಈಗ ಇದಕ್ಕೆ ತದ್ವಿರುದ್ಧವಾಗಿ ನಮ್ಮ ಸಮಾಜ ಸಾಗುತ್ತಿದೆ ಎಂದು ವಿಷಾದಿಸಿದ ಅವರು, ನಮ್ಮ ಸಾಂಸ್ಕೃತಿಕ ನಗರಿ ಮೈಸೂರಿನ ವಿಮಾನ ನಿಲ್ದಾಣಕ್ಕೆ ಬಸವಣ್ಣನಂತಹ ಮಹಾತ್ಮನ ಹೆಸರನ್ನು ಇಟ್ಟು ಗೌರವಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಪ್ರಧಾನ ಭಾಷಣಕಾರರಾಗಿ ಆಗಮಿಸಿದ್ದ ಕವಿ ಜಯಪ್ಪ ಹೊನ್ನಾಳಿ ಅವರು, ಬಸವಣ್ಣನ ವಚನ ಚಳವಳಿ, ಬದುಕು, ಬರಹ, ಸಾಧನೆ, ಸಿದ್ಧಿ ಕುರಿತಂತೆ ಸುದೀರ್ಘವಾಗಿ ಉಪನ್ಯಾಸ ನೀಡಿದರು.ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಹಾಗೂ ನಗರಪಾಲಿಕೆ ಮಾಜಿ ಸದಸ್ಯ ಎಂ.ಪ್ರದೀಪ್ ಕುಮಾರ್ ಅವರು ಬಸವೇಶ್ವರರ ಭಾವಚಿತ್ರವುಳ್ಳ ದಿನದರ್ಶಿಕೆ ಯನ್ನು ಬಿಡುಗಡೆ ಮಾಡಿದರು. ವಿವಿಧ ಕ್ಷೇತ್ರಗಳ ಸಾಧಕರಾದ ಸುಮಾ ರಾಜ್ ಕುಮಾರ್ (ಕಲಾ ಕ್ಷೇತ್ರ), ಪುಷ್ಪಾ (ಉದ್ಯಮಕ್ಷೇತ್ರ), ನಜರ್ ಬಾದ್ ನಟರಾಜ್ (ಸಮಾಜ ಸೇವೆ ) ಅವರುಗಳಿಗೆ ಶರಣ ಯುವಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಪ್ರಶಸ್ತಿ ಪುರಸ್ಕೃತರ ಪರವಾಗಿ ಖ್ಯಾತ ಜಾದು ಕಲಾವಿದೆ ಸುಮಾ ರಾಜ್ ಕುಮಾರ್ ಮಾತನಾಡಿ ಕೃತಜ್ಞತೆ ಸಲ್ಲಿಸಿದರು. ಸಮಾಜ ಸೇವಕ, ಸಂಸ್ಕೃತಿ ಚಿಂತಕ ರಘುರಾಮ್ ವಾಜಪೇಯಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಮೈಸೂರು ಜಿಲ್ಲಾ ಸರ್ಕಾರಿ ನೌಕರರ ಸಂಘದ ಉ ಪಾಧ್ಯಕ್ಷ ಮಾಲಂಗಿ ಸುರೇಶ್, ಉದ್ಯಮಿ ರವಿಕುಮಾರ್, ಸಮಾಜ ಸೇವಕಿ ವಿದ್ಯಾ ಇನ್ನಿತರರಿದ್ದರು. ಪ್ರಾರಂಭದಲ್ಲಿ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಬಸವ ರಾಜೇಂದ್ರ ಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನೂ ಆತ್ಮೀಯವಾಗಿ ಸ್ವಾಗತಿಸಿದರು. ವಿದ್ಯಾ ಅವರು ವಂದನಾರ್ಪಣೆ ಮಾಡಿದರು.

# ಸಮಾಜದಲ್ಲಿ ಮಾದರಿಯಾಗಿರಬೇಕು

**ಮೈಸೂರು :** ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಮಹಿಳೆಯರಿಗೆ ಹೆಚ್ಚಿನ ಪ್ರೋತ್ಸಾಹ ನೀಡುತಿರುವುದರಿಂದ ಮಹಿಳೆಯರು ಸಮಾಜದಲ್ಲಿ ಮಾದರಿಯಾಗಿರಬೇಕು ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಕರೆ ನೀಡಿದರು. ನಗರದ ಜಗನ್ಮೋಹನ ಅರಮನೆಯಲ್ಲಿ ಶ್ರೀರಾಂಪುರದ ನವೋದಯ ಚಾರಿಟೇಬಲ್ ಸೊಸೈಟಿ ವತಿಯಿಂದ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಮಾಜದಲ್ಲಿ ಸಮಾನತೆ ಬರಬೇಕಾದರೆ ಹೆಣ್ಣು ಮಕ್ಕಳಿಗೆ ಸಮಾನ ಪ್ರಾಶಸ್ತ್ಯ ನೀಡಬೇಕು. ಹೆಣ್ಣು ಮಕ್ಕಳು ಎಲ್ಲಾ ರಂಗಗಳಲ್ಲಿಯೂ ಇಂದು ಕೆಲಸ ಮಾಡುತ್ತಿದ್ದಾರೆ. ಆದರೆ ಕಡಿಮೆ ಪ್ರಮಾಣದಲ್ಲಿದ್ದಾರೆ. ಸರ್ಕಾರ ರಾಜಕೀಯ, ಸರ್ಕಾರಿ ಕೆಲಸ ಎಲ್ಲದರಲ್ಲೂ ಶೇ. 50% ಮೀಸಲಾತಿಯನ್ನು ಏಕೆ ಕೊಡಬಾರದು. ಬದುಕಿನ ಎಲ್ಲಾ ಸವಾಲುಗಳನ್ನು ಎದುರಿಸುತ್ತಾ, ನೋವುಗಳನ್ನು ನುಂಗಿಕೊಂಡು ಗಂಡ ಮಕ್ಕಳಿಗೋಸ್ಕರ ತನ್ನ ಜೀವನವನ್ನೇ ತ್ಯಾಗ ಮಾಡುವ ಮಹಾತಾಯಿ ಹೆಣ್ಣು ಆ ಹೆಣ್ಣನ್ನು ಪ್ರತಿಯೊಬ್ಬರು ಗೌರವಿಸಬೇಕು. ಹೆಣ್ಣು ಮಗಳಾಗಿ, ಪತ್ನಿಯಾಗಿ, ಪತ್ನಿಯಾಗಿ, ತಂಗಿಯಾಗಿ, ತಾಯಿಯಾಗಿ, ಸ್ನೇಹಿತೆಯಾಗಿ ಎಲ್ಲಾ ಸ್ಥಾನಗಳನ್ನು ತುಂಬುವ ಏಕೈಕ ಶಕ್ತಿ ಮಹಿಳೆಯರಿಗಿದೆ. ಆದ್ದರಿಂದ ಹೆಣ್ಣು ತ್ಯಾಗಮಯಿಯಾಗಿದ್ದಾರೆ. ಭೂ ತಾಯಿ ಹೆಣ್ಣು, ಭುವನೇಶ್ವರಿ ಹೆಣ್ಣು, ಭಾರತಾಂಬೆ ಹೆಣ್ಣು, ನಮ್ಮನ್ನು ಹಡೆದ ತಾಯಿ ಹೆಣ್ಣು, ಹೆಣ್ಣಿಲ್ಲದಿದ್ದರೆ ಈ ಜಗತ್ತೇ ಶೂನ್ಯವಾಗುತ್ತದೆ. ಆದ್ದರಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹೆಣ್ಣನ್ನು ಎದುರು ಹಾಕಿಕೊಂಡು ಸರ್ಕಾರ ನಡೆಸಲು ಸಾಧ್ಯವಿಲ್ಲದ್ದರಿಂದ ಹೆಣ್ಣಿಗೆ ಹೆಚ್ಚಿನ ಮಹತ್ವವನ್ನು ಕೊಡುತ್ತಿದ್ದಾರೆ. ಸರ್ಕಾರದ ಎಲ್ಲಾ ಯೋಜನೆ ಸವಲತ್ತುಗಳನ್ನು ಉಪಯೋಗಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕು, ಒಗ್ಗಟ್ಟಿನಲ್ಲಿ ಬಲವಿದೆ ಎಲ್ಲರು ಸಂಘಟಿತರಾಗಿ ನಿಮ್ಮ ಹಕ್ಕುಗಳನ್ನು ಪಡೆಯಿರಿ ಹೊರದೇಶದ ಮಹಿಳೆಯರು ಭಾರತದ ಮಹಿಳೆಯರ ಸಂಸ್ಕೃತಿಯನ್ನು ಅನುಸರಿಸುತ್ತಿದ್ದಾರೆ. ನಿಮ್ಮ ಮಕ್ಕಳಿಗೆ ಶಿಕ್ಷಣ ನೀಡಿ, ಹೊಡೆಯಬೇಡಿ, ಬೇರೆ ಮಕ್ಕಳೊಂದಿಗೆ ನಿಮ್ಮ ಮಕ್ಕಳನ್ನು ಹೋಲಿಕೆ ಮಾಡಬೇಡಿ ಎಂದ ಅವರು ಎಲ್ಲರಿಗೂ ಶುಭಾಶಯ ಕೋರಿದರು. ಸಮಾರಂಭದಲ್ಲಿ ಸಿಸ್ಟರ್ ಜ್ಯೋತಿ, ಸ್ವಾಮಿ, ದೇವಸ್ಸಿ ಕಾಡ ಪರಂಬಿಲ್, ಉಷಾದೇವಿ, ಶೈನಿ ಮಂಗರಿಲ್, ವೀಣಾ ವಿಲಿಯಂ, ಫಾದರ್ ಜಾನ್ ಫೀಟರ್, ಶೋಭಾ, ದಿನೇಶ್‌ಗೌಡ ಹಾಜರಿದ್ದರು.



# ಗ್ಯಾರಂಟಿ ಯೋಜನೆಗಳು ಐದು ವರ್ಷವೂ ಚಾಲ್ತಿಯಲ್ಲಿರಲಿವೆ

**ಮೈಸೂರು:** ನಮ್ಮ ಸರ್ಕಾರ ಜಾರಿಗೊಳಿಸಿರುವ ಎಲ್ಲ ಗ್ಯಾರಂಟಿ ಯೋಜನೆಗಳು ಐದು ವರ್ಷದವರೆಗೂ ಚಾಲ್ತಿಯಲ್ಲಿರುತ್ತವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಜಿಲ್ಲಾಡಳಿತದಿಂದ ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಶುಕ್ರವಾರ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಅವರು ಮಾತನಾಡಿದರು.

ಲೋಕಸಭೆ ಚುನಾವಣೆ ನಂತರ ಈ ಯೋಜನೆಗಳನ್ನು ನಿಲ್ಲಿಸಲಾಗುತ್ತದೆ ಎಂಬ ವಿರೋಧ ಪಕ್ಷದವರ ಅಪಪ್ರಚಾರಕ್ಕೆ ಯಾರೂ ಕಿವಿಗೊಡಬಾರದು. ನಮಗೆ ಐದು ವರ್ಷದವರೆಗೆ ಜನಾದೇಶದೊಂದಿಗೆ ಅಧಿಕಾರ ನೀಡಿದ್ದೀರಿ. ಬಿಜೆಪಿಯವರ ಆರೋಪಗಳಿಗೆ ಕಿವಿಗೊಡಬೇಡಿ. ಯಾವುದೇ ಸಂಶಯವನ್ನು ಇಟ್ಟುಕೊಳ್ಳಬೇಡಿ. ಲೋಕಸಭಾ ಚುನಾವಣೆಯಲ್ಲೂ ನಿಮ್ಮ ಆಶೀರ್ವಾದ ನಮ್ಮ ಮೇಲಿರಲಿ ಎಂದು ಕೋರಿದರು.

ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಸಬ್‌ಕಾ ಸಾಥ್ ಸಬ್‌ಕಾ ವಿಕಾಸ್ ಎಂದು ಮೋದಿ ಹೇಳುತ್ತಾರೆ. ಆದರೆ, ಅವರ ಪಕ್ಷದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಗಡ್ಡಧಾರಿಗಳು, ಟೋಪಿ ಹಾಕಿದವರಿಗೆ ನಮ್ಮ ಕಚೇರಿಗೆ ಪ್ರವೇಶವಿಲ್ಲ ಎನ್ನುತ್ತಾರೆ. ಬಿಜೆಪಿಯ ಸಂಸದ ಅನಂತ್ ಕುಮಾರ್ ಹೆಗಡೆ ಸಂವಿಧಾನವನ್ನು ಬದಲಿಸುವ ಮಾತುಗಳನ್ನು ಪದೇ ಪದೇ ಹೇಳುತ್ತಲೇ ಇರುತ್ತಾರೆ. ಅವರ ವಿರುದ್ಧ ಕ್ರಮ ಕೈಗೊಂಡಿದ್ದಾರೆಯೇ, ಪಕ್ಷದಿಂದ ಅಮಾನತು ಮಾಡಿದ್ದಾರೆಯೇ ಇದರ ಅರ್ಥವೇನು ಎಂದು ಕೇಳಿದರು.

ಮೋದಿ ಹೇಳುವುದೆಲ್ಲವೂ ಸುಳ್ಳು. ಅವರ ಕಾರ್ಯಸೂಚಿಗಳನ್ನು ಮತ್ತೊಬ್ಬರಿಂದ ಹೇಳಿಸುತ್ತಾರೆ. ಸಂವಿಧಾನ ಇರಬಾರದು ಎಂಬುದು ಅವರ ಅಚಲವಾದ ನಂಬಿಕೆ ಹಾಗೂ ಬಿಜೆಪಿಯ ರಹಸ್ಯ ಕಾರ್ಯಸೂಚಿಯೂ ಹೌದು. ಸಂವಿಧಾನ ಜಾರಿಗೊಳಿಸುವುದು ಅವರಿಗೆ ಇಷ್ಟವಿಲ್ಲ ಎಂದು ದೂರಿದರು.

# ನಾಳೆ ವಿದ್ಯುತ್ ವ್ಯತ್ಯಯ

**ಮೈಸೂರು:** ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ ಕೆ.ಹೆಚ್.ಬಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ4ನೇ ತ್ರೈ ಮಾಸಿಕ ನಿರ್ವಹಣಾ ಕೆಲಸದ ನಿಮಿತ್ತ ಮಾ.17ರಂದು ಬೆಳಿಗ್ಗೆ10:00ಗಂಟೆಯಿಂದ ಸಂಜೆ6:00ಗಂಟೆಯವರೆಗೆ ಈ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಕೆ.ವಿ ಕೆ.ಹೆಚ್.ಬಿ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ಪ್ರದೇಶಗಳು:ವಿಜಯನಗರ4ನೇ ಹಂತ,ಕೆ.ಹೆಚ್.ಬಿ ಕಾಲೋನಿ,ಹೂಟಗಳ್ಳಿ ಗ್ರಾಮ,ಬೆಳವಾಡಿ ಗ್ರಾಮ,ಬಸವನಪುರ,ಮರಟಿಕ್ಯಾತನಹಳ್ಳಿ,ಪಂಚಚಾರ್ಯ ಲೇಔಟ್,ಕೆ. ಹೆಮ್ಮನಹಳ್ಳಿ,ಲಿಂಗದೇವರಕೊಪ್ಪಲು,ಇಲವಾಲ,ಹೂಟಗಳ್ಳಿ ಕೆ.ಆರ್.ಎಸ್.ರೋಡ್,ಆದಿತ್ಯಾ ಬಡಾವಣೆ,ಎಸ್.ಆರ್.ಎಸ್. ಕಾಲೋನಿ,ಕೂರ್ಗಳ್ಳಿ ಗ್ರಾಮ,ಎನ್.ಹೆಚ್.ಬಿ ಕಾಲೋನಿ,ಬೆಳವಾಡಿ ಕೈಗಾರಿಕಾ ಪ್ರದೇಶ,ಶಾಹಿ ಗಾರ್ಮೆಂಟ್ಸ್,ಹೂಟಗಳ್ಳಿ ಕೈಗಾರಿಕಾ ಪ್ರದೇಶ,ಕೂರ್ಗಳ್ಳಿ ಕೈಗಾರಿಕಾ ಪ್ರದೇಶ,ಗ್ರ್ಯಾಂಡ್ ಮೌರ್ಯ ಹೋಟೆಲ್,ರಿಲಾಯನ್ಸ್,ಮಾಸ್ ಫರ್ನಿಚರ್ಸ್,ಯಶಸ್ವಿನಿ ಕಲ್ಯಾಣ ಮಂಟಪ,ಸೌಪರ್ಣಿಕ ಅಪಾರ್ಟ್ಮೆಂಟ್ ಹಿನಕಲ್,ಎಸ್.ವಿ.ಇ.ಐ ಕಾಲೇಜು ಸುತ್ತಮುತ್ತ,ಜಟ್ಟಿಹುಂಡಿ ಹಾಗೂ ಸುತ್ತಮುತ್ತಲಿನಪ್ರದೇಶಗಳಲ್ಲಿವಿದ್ಯುತ್ ವ್ಯತ್ಯಯವಾಗಲಿದ್ದುಸಾರ್ವಜನಿಕರು ಸಹಕರಿಸಬೇಕೆಂದು ವಿ.ವಿ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ.) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರು ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು

**ಬೆಂಗಳೂರು:** ವ್ಯಾಪಾರ ಹಾಗೂ ಕೌಶಲ್ಯ ಕೇಂದ್ರಿತ ಉದ್ದಿಮೆ ಹಾಗೂ ಇತರೆ ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ತಮ್ಮನ್ನು ತೊಡಗಿಸಿಕೊಂಡು ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ಎಲೆಕ್ಟ್ರಾನಿಕ್ಸ್, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಏಕ್‌ರೂಪ್ ಕೌರ್ ಅವರು ತಿಳಿಸಿದರು. ಭಾರತೀಯ ಸಣ್ಣ ಕೈಗಾರಿಕಾ ಅಭಿವೃದ್ಧಿ ಬ್ಯಾಂಕ್, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಉದ್ಯಮಿಗಳ ಸಂಸ್ಥೆ ಸಹಯೋಗದಿಂದ ಕರ್ನಾಟಕ ಚಿತ್ರಕಲಾ ಪರಿಷತ್ ನಲ್ಲಿ ಮಾರ್ಚ್ 15 ರಿಂದ 17 ರವರೆಗೆ ಹಮ್ಮಿಕೊಳ್ಳಲಾದ ಸ್ವಾವಲಂಬನ್ ಮೇಳ- 2024 ಮತ್ತು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅನ್ನು ಉದ್ಘಾಟಿಸಿ ಮಾತನಾಡಿದರು. ಮಹಿಳೆಯರು ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ಮಹಿಳೆಯರು ಸ್ವಂತ ಉದ್ಯಮ ಹೊಂದಿ ಮುಖ್ಯವಾಹಿನಿಗೆ ಬರಬೇಕು. ಮಹಿಳೆಯರು ಸಶಕ್ತರಾಗಲು ಸರ್ಕಾರವು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಮಹಿಳೆಯರು ಸರ್ಕಾರದ ವಿವಿಧ ಯೋಜನೆಯ ಸದುಪಯೋಗಪಡಿಸಿಕೊಳ್ಳಬೇಕು. ಸರ್ಕಾರ ಮಹಿಳೆಯರಿಗೆ ನೀಡುವ ವಿವಿಧ ಸಾಲ ಸೌಲಭ್ಯದ ಕುರಿತು ಮಾಹಿತಿಯನ್ನು ನೀಡಿದರು. ಮಹಿಳೆಯರು ಶಾಲಾ ಬಸ್ಸು ಮತ್ತು ಕ್ಯಾಬ್‌ಗಳ ಚಾಲನೆಯಲ್ಲಿ ತೊಡಗಿಸಿಕೊಳ್ಳಲು ವಿಪುಲ ಅವಕಾಶವಿದೆ. ಮಹಿಳೆಯರು ಈ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ಸಿಡ್ಬಿ ಮುಖ್ಯ ಕಾರ್ಯನಿರ್ವಾಹಕ ನಿರ್ದೇಶಕರಾದ ಎಸ್.ರಮಣ್ ಮಾತನಾಡಿ, ಪ್ರಾರಂಭದಿಂದ ದೊಡ್ಡ ಮಟ್ಟಕ್ಕೆ ತಲುಪುವವರೆಗೂ ಮಹಿಳಾ ಉದ್ದಿಮೆದಾರರು ಹಲವು ಸವಾಲುಗಳನ್ನು ಎದುರಿಸಬೇಕಾಗಿದೆ. ಮಹಿಳಾ ಉದ್ದಿಮೆದಾರರಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಅವರು ಪ್ರಾರಂಭಿಸುವ ಸ್ಟಾರ್ಟ್ ಅಪ್‌ಗಳಿಗೆ ಸಾಲದ ಸೌಲಭ್ಯವನ್ನು ಬ್ಯಾಂಕುಗಳು ನೀಡುತ್ತಿದೆ. ಬೆಂಗಳೂರು ಇಂದು ಅತಿ ವೇಗವಾಗಿ ಬೆಳೆಯುತ್ತಿದ್ದು, ಮಾಹಿತಿ ತಂತ್ರಜ್ಞಾನ ಬಹು ಮುಖ್ಯ ಪಾತ್ರ ವಹಿಸಿದೆ. ಈಗ ಉದ್ದಿಮೆದಾರರು ತಮ್ಮ ಉತ್ಪನ್ನಗಳನ್ನು ಆನ್‌ಲೈನ್ ಮೂಲಕ ಸಹ ಮಾರಾಟ ಮಾಡಬಹುದಾಗಿದೆ. ಇದರಿಂದ ಹೆಚ್ಚು ಪರಿಶ್ರಮವಿಲ್ಲದೆ ಕಡಿಮೆ ಸಮಯದಲ್ಲಿ ಅಧಿಕ ಲಾಭಗಳಿಸಬಹುದು ಎಂದರು.ಸ್ವಾವಲಂಬನ್ ಮೇಳವು ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ಮಾರ್ಚ್ 15 ರಿಂದ 17 ರವರೆಗೆ ಬೆಳಿಗ್ಗೆ 11 ರಿಂದ ರಾತ್ರಿ 9 ಘಂಟೆಯವರೆಗೆ ನಡೆಯಲಿದೆ.

ಕಾರ್ಯಕ್ರಮದಲ್ಲಿ ಸಿಡ್ಬಿಯ ಮುಖ್ಯ ಜನರಲ್ ಮ್ಯಾನೇಜರ್ ಮತ್ತು ಪ್ರಾದೇಶಿಕ ಮುಖ್ಯಸ್ಥರಾದ ಸತ್ಯಕಿ ರಸ್ತೋಗಿ, ಸಿಡ್ಬಿಯ ಡಿಜಿಎಂ ಉಲಗಿಯನ್, ಅವೇಕ್ ಅಧ್ಯಕ್ಷರಾದ ಶ್ರೀಮತಿ ಆಶಾ ಎನ್. ಆರ್. ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಮಹಿಳಾ ಉದ್ಯಮಿಗಳು ಉಪಸ್ಥಿತರಿದ್ದರು.

**ಬೆಂಗಳೂರು ನಗರ ಜಿಲ್ಲಾ ಪಂಚಾಯತಿ**
ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಜಿಲ್ಲಾ ಪಂಚಾಯತಿ ಕಟ್ಟಡ, ಮೊದಲನೇ ಮಹಡಿ, ಎಸ್. ಕರಿಯಪ್ಪ ರಸ್ತೆ, ಬನಶಂಕರಿ, ಬೆಂಗಳೂರು - 560070.
ಸಂಖ್ಯೆ:ಕಾಅ/ಪಂರಾಇಂವಿ/ಬೆಂನ/ಎಇ-2/ಟೆಂಡರ್/44/2023-24 ದಿನಾಂಕ: 15-03-2024
**ಕೆಪಿಪಿ ಪೋರ್ಟಲ್ ಅಲ್ಪಾವಧಿ ಸರ್ವಿಸ್ ಟೆಂಡರ್ ಪ್ರಕಟಣೆ**
ಕಾರ್ಯಪಾಲಕ ಅಭಿಯಂತರರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಕಛೇರಿಯಿಂದ 2059-00-101-0-26-034 Grants ಅನುಮೋದನೆಯಾಗಿರುವ ಕಾಮಗಾರಿಗಳಿಗಾಗಿ ದ್ವಿ-ಲಕೋಟೆ ಪದ್ಧತಿಯಲ್ಲಿ ಕೆ.ಪಿ.ಪಿ. ಪೋರ್ಟಲ್ ಮುಖಾಂತರ ಟೆಂಡರ್ ಅನ್ನು ಕರೆಯಲಾಗಿದೆ. ವೆಬ್‌ಸೈಟ್ ಮೂಲಕ ಟೆಂಡರ್ ಫಾರಂಗಳನ್ನು ದಿನಾಂಕ: **30-03-2024** ರಂದು **ಸಂಜೆ 4.00 ಗಂಟೆಯುವರೆಗೆ** ಪಡೆದು ಸಲ್ಲಿಸಬಹುದಾಗಿರುತ್ತದೆ. ಕಾಮಗಾರಿವಾರು ವಿವರಗಳನ್ನು ವೆಬ್‌ಸೈಟ್ ಮೂಲಕ ಪಡೆಯುಬಹುದಾಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಕಛೇರಿ ವೇಳೆಯಲ್ಲಿ ಕಛೇರಿಯನ್ನು ಸಂಪರ್ಕಿಸಲು ಅಥವಾ ವೆಬ್‌ಸೈಟ್: **https://www.kppp.karnataka.gov.in** ನಲ್ಲಿ ವಿವರಗಳನ್ನು ಪಡೆಯಬಹುದಾಗಿರುತ್ತದೆ.
ಸಹಿ/- ಕಾರ್ಯಪಾಲಕ ಅಭಿಯಂತರರು,
ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ,
ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
ವಾಸಾಸಂಇ/ವಾ.ಪ್ರ/4352/ಅಡ್ವರ್ಟೋರ್/2023-24

**ಜಿಲ್ಲಾ ಆಸ್ಪತ್ರೆ**
ಜಿಲ್ಲಾ ಶಸ್ತ್ರ ಚಿಕಿತ್ಸಕರ ಕಾರ್ಯಾಲಯ, ರಾಮನಗರ - 562 159.
ದೂ.: 080-2991 3667, ಇಮೇಲ್ : dsramanagaram@gmail.com
ಸಂಖ್ಯೆ : ಜಿ.ಆ.ರಾ./ಸ.ರ.ಬ./ಗ್ರೂಪ್-ಡಿ/01/2023-24 ದಿನಾಂಕ : 15-03-2024
**ಟೆಂಡರ್ ಪ್ರಕಟಣೆ**
ಜಿಲ್ಲಾ ಆಸ್ಪತ್ರೆ ರಾಮನಗರ ಇಲ್ಲಿಗೆ 2024-25 ನೇ ಸಾಲಿಗೆ ಅವಶ್ಯವಿರುವ ಗ್ರೂಪ್-ಡಿ ನೌಕರರ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲು ಅರ್ಹ ಸಂಸ್ಥೆಗಳಿಂದ ಕೆ.ಪಿ.ಪಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ **www.kppp.karnataka.gov.in** ನಲ್ಲಿ ಇ-ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ನ ಪ್ರಕ್ರಿಯೆಯ ವಿವರ ಈ ಕೆಳಕಂಡಂತಿದೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.
**1) ಟೆಂಡರ್ ಫಾರಂ ಅನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡುವುದು ದಿನಾಂಕ : 15-03-2024 ರಿಂದ, 2) ಆನ್‌ಲೈನ್‌ನಲ್ಲಿ ಟೆಂಡರ್‌ಗಳನ್ನು ಸಲ್ಲಿಸಲು / ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ : 15-04-2024 ಸಂಜೆ 5.30 ಗಂಟೆಯವರೆಗೆ, 3) ಆನ್‌ಲೈನ್‌ನಲ್ಲಿ ಸಲ್ಲಿಸಲಾದ ಟೆಂಡರ್‌ಗಳ ಟೆಕ್ನಿಕಲ್ ಬಿಡ್ ತೆರೆಯುವುದು ದಿನಾಂಕ : 16-04-2024 ಸಂಜೆ 4.00 ರ ನಂತರ, 4) ಹಣಕಾಸಿನ ಬಿಡ್ ತೆರೆಯುವುದು ದಿನಾಂಕ : 17-04-2024 ಸಂಜೆ 4.00 ರ ನಂತರ, 5) ಟೆಂಡರ್‌ನ ಅಂದಾಜು ಮೊತ್ತ : ರೂ. 32.5 ಲಕ್ಷಗಳು, 6) ಇ.ಎಂ.ಡಿ. ಮೊತ್ತ (ಇ-ಪೋರ್ಟಲ್ ಮೂಲಕ) 2.5% : ರೂ. 81,250/-.**
ಸಹಿ/- ಜಿಲ್ಲಾ ಶಸ್ತ್ರ ಚಿಕಿತ್ಸಕರು,
ಜಿಲ್ಲಾ ಆಸ್ಪತ್ರೆ, ರಾಮನಗರ.
ಡಿಐಪಿಆರ್/ರಾಮನಗರ/610/ಮಣಿಪಾಲ್/2023-24

### ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಮಾರ್ಗದರ್ಶನ

# ಮಕ್ಕಳ ಬೆಳವಣಿಗೆಗೆ ಪೋಷಕರು ಗಮನ, ಸಮಯ ನೀಡಿ

**ಚಿಕ್ಕಬಳ್ಳಾಪುರ:** ಪ್ರತಿ ತಂದೆ ತಾಯಿ ಮತ್ತು ಪೋಷಕರು ತಮ್ಮ ಮಕ್ಕಳ ಬೆಳವಣಿಗೆ ಬಗ್ಗೆ ಗಮನ ಹರಿಸಬೇಕು. ಅವರೊಂದಿಗೆ ಗೆಳೆಯರಾಗಿ ಬೆರೆತು ಹೆಚ್ಚಿನ ಸಮಯ ನೀಡಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಮನವಿ ಮಾಡಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡುತ್ತಾ, ಅತ್ಯಾಚಾರ ಪ್ರಕರಣಗಳು, ಕೌಟುಂಬಿಕ ಪ್ರಕರಣಗಳು, ಪೋಕ್ಸೋ ಪ್ರಕರಣಗಳು, ಬಹುತೇಕ ತಮ್ಮ ಸುತ್ತಮುತ್ತಲಿನ ಸಂಬಂಧಿಕರು, ಪರಿಚಯಸ್ತರಿಂದಲೇ ಜರುಗುತ್ತಿರುವುದು ಬೇಸರದ ಸಂಗತಿ. ಆದ್ದರಿಂದ ತಂದೆ ತಾಯಿಗಳು ಈ ಬಗ್ಗೆ ಹೆಚ್ಚಿನ ಜಾಗೃತಿ ಹೊಂದಿ ಮನೆಯಿಂದಲೇ ಮಕ್ಕಳಿಗೆ ವಾಸ್ತವಿಕ ಪ್ರಾಪಂಚಿಕ ಜ್ಞಾನವನ್ನು ತಿಳಿಸಬೇಕು. ಪ್ರಾಪ್ತ ವಯಸ್ಸಿನಲ್ಲಾಗುವ ಬದಲಾವಣೆಗಳು, ಕುತೂಹಲಗಳ ಬಗ್ಗೆ ತಿಳಿಸಿಕೊಟ್ಟು ಮಕ್ಕಳ ಸುರಕ್ಷತೆಗೆ ಪೂರಕವಾದ ವಿಚಾರಗಳನ್ನು ತಿಳಿಸಿಕೊಡಬೇಕು. ಅವರೊಂದಿಗೆ ಹೆಚ್ಚಿನ ಸಮಯ ಕಳೆದು ಮಕ್ಕಳಿಗೆ ಅತ್ಯಗತ್ಯವಾಗಿ ಬೇಕಿರುವ ಶಿಕ್ಷಣ, ಪೌಷ್ಠಿಕ ಆಹಾರ ನೀಡಿಕೆ ಮತ್ತು ಉತ್ತಮ ಬೆಳವಣಿಗೆಗೆ ಪೂರಕವಾದ ಪರಿಸರವನ್ನು ಸೃಷ್ಟಿಸಬೇಕು ಎಂದರು.

2024ನೇ ಸಾಲಿನಲ್ಲಿ ಜಿಲ್ಲೆಯಲ್ಲಿ 108 ಮಹಿಳೆಯರ ನಾಪತ್ತೆ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 84 ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ. ಬಾಕಿ ಪ್ರಕರಣಗಳ ಪತ್ತೆ ಕ್ರಮವಹಿಸಲಾಗುತ್ತಿದೆ. ಈ ವರ್ಷದಲ್ಲಿ 5 ಅತ್ಯಾಚಾರ ಪ್ರಕರಣಗಳು ದಾಖಲಾಗಿದ್ದು, ಅವುಗಳ ಹಾಗೂ




ಇತರ ಪ್ರಕರಣಗಳ ಬಗ್ಗೆ ಸಂಪೂರ್ಣ ವರದಿಯನ್ನು ತೆಗೆದುಕೊಳ್ಳಲಾಗಿದ್ದು, ಸೂಕ್ತ ಕ್ರಮವಹಿಸುವುದಾಗಿ ತಿಳಿಸಿದರು.

ಸಖೀ ಒನ್ ಸ್ಟಾಪ್ ಗೆ ಮೆಚ್ಚುಗೆ: ರಾಜ್ಯದಲ್ಲಿ ಸಖೀ ಒನ್ ಸ್ಟಾಪ್ ಕೇಂದ್ರಗಳನ್ನು ರಾಜ್ಯ ಸರ್ಕಾರ ಜಿಲ್ಲಾ ಮಟ್ಟದಲ್ಲಿ ತೆರೆದು ಒಂದೇ ಸೂರಿನಡಿ ವೈದ್ಯಕೀಯ ನೆರವು, ಕಾನೂನು ನೆರವು, ಸಾಂತ್ವಾನ, ತಾತ್ಕಾಲಿಕ ಆಶ್ರಯ, ಆಪ್ತ ಸಮಾಲೋಚನೆ, ಪೊಲೀಸ್ ರಕ್ಷಣೆಯ ಸವಲತ್ತುಗಳನ್ನು ನೀಡುತ್ತಿರುವುದು ಶ್ಲಾಘನೀಯವಾದದ್ದು. ಮಹಿಳೆಯರು ಮತ್ತು ಮಕ್ಕಳ ಮೇಲೆ ಯಾವುದೇ ರೀತಿಯ ದೌರ್ಜನ್ಯ, ಶೋಷಣೆ ನಡೆಯುತ್ತಿರುವುದು ತಮ್ಮ ಸುತ್ತಮುತ್ತಲ ಪ್ರದೇಶಗಳಲ್ಲಿ ಗಮನಕ್ಕೆ ಬಂದರೆ ಕೂಡಲೆ ಜಿಲ್ಲಾ ಮಟ್ಟದಲ್ಲಿರುವ ಸಖೀ ಒನ್ ಸ್ಟಾಪ್ ಸೆಂಟರ್ ಗೆ, ತಾಲ್ಲೂಕು ಮಟ್ಟದಲ್ಲಿರುವ ಸಾಂತ್ವಾನ ಕೇಂದ್ರಗಳಿಗೆ ಅಥವಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಥವಾ ಇತರ ಸಕ್ಷಮ ಪ್ರಾಧಿಕಾರ ಇಲಾಖೆಗಳಿಗೆ ಮಾಹಿತಿ ನೀಡಿ ಸಾರ್ವಜನಿಕರು ಸಾಮಾಜಿಕ ಜವಾಬ್ದಾರಿ ತೋರಬೇಕು ಎಂದು ಮನವಿ ಮಾಡಿದರು. ಮಾಹಿತಿದಾರರ ವಿವರವನ್ನು ಗೌಪ್ಯವಾಗಿಡಲಾಗುವುದು ಎಂದರು.

ಬಾಲ್ಯ ವಿವಾಹ ಬೇಡ: ಯಾವುದೇ ಪೋಷಕರು ತಮ್ಮ ಮಕ್ಕಳಿಗೆ ಅಪ್ರಾಪ್ತ ವಯಸ್ಸಿನಲ್ಲಿ ವಿವಾಹ ಮಾಡಿ ಅವರ ಉತ್ತಮ ಭವಿಷ್ಯ, ಜೀವನವನ್ನು ಬಲಿ ಕೊಡಬೇಡಿ, ಅದರ ಬದಲಾಗಿ ಶಿಕ್ಷಣಕ್ಕೆ ಒತ್ತು ನೀಡಿ ಮಹಿಳೆಯರ ,ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೂಡಿಕೆಯನ್ನು ಮಾಡಿ ಅದು ನಿಮಗೆ ಉತ್ತಮ ಫಲ ನೀಡುತ್ತದೆ. ಇದಕ್ಕೆ ಸ್ಪಷ್ಟ ನಿದರ್ಶನವಾಗಿ ನಾನಿದ್ದೇನೆ. ನಾನು ಅಪ್ರಾಪ್ತಳಾಗಿದ್ದಾಗ ವಿವಾಹವಾಗುವಂತೆ ಸಾಕಷ್ಟು ಸಂಬಂಧಿಕರು ನಮ್ಮ ತಂದೆಗೆ ಒತ್ತಡ ತಂದರು. ಅದನ್ನು ಧಿಕ್ಕರಿಸಿ ನನ್ನ ತಂದೆ ನನಗೆ ಹೆಚ್ಚಿನ ಶಿಕ್ಷಣ ನೀಡಿ ದಂತ ವೈದ್ಯೆಯನ್ನಾಗಿ ಮಾಡಿದರು. ಅದರಿಂದಾಗಿ ಇಂದು ಇಂತಹ ಗೌರವಾನ್ವಿತ ಪದವಿಯಲ್ಲಿ ಇರಲು ಸಾಧ್ಯವಾಗಿದೆ ಎಂದರು.

ಜಾಗೃತಿ ಮೂಡಿಸಲು ಸೂಚನೆ: ಬಾಲ್ಯ ವಿವಾಹ .ಪೋಕ್ಸ್ ಕಾಯ್ದೆ, ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಕೇವಲ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಅರಿವು ಕಾರ್ಯಕ್ರಮಗಳನ್ನು ಮೂಡಿಸುವುದರ ಜೊತೆಗೆ ಖಾಸಗಿ ಶಾಲಾ ಕಾಲೇಜುಗಳನ್ನು ಒಳಗೊಳ್ಳುವಂತಾಗಬೇಕು. ಪೊಲೀಸ್ ಇಲಾಖೆಯವರು 24ಫ಼7 ನಿಯಮಿತವಾಗಿ ಸುತ್ತವಳಿ (ಪೆಟ್ರೋಯಂ)ಗಳನ್ನು ಮಾಡಬೇಕು .ಯಾವುದೇ ಮಹಿಳಾ ದೌರ್ಜನ್ಯದ ಪ್ರಕರಣ ದಾಖಲಾದರೂ ಆದ್ಯತೆ ಮೇಲೆ ಕ್ರಮವಹಿಸಬೇಕು. ಪ್ರಕರಣ ದಾಖಲಿಸಲು ಹಿಂದೇಟು ಹಾಕಬಾರದು. ಎಲ್ಲೆಲ್ಲಿ ಥಿ.ಥಿ.ಣ ಅಳವಡಿಸಲಾಗಿದೆ ಅವುಗಳ ಮೇಲೆ ನಿರಂತರ ನಿಗಾ ಇಡಬೇಕು . ಒಟ್ಟಾರೆ ಮಹಿಳೆ ಮತ್ತು ಮಕ್ಕಳ ರಕ್ಷಣೆ, ಬೆಳವಣಿಗೆಯಲ್ಲಿ ಮಾದರಿ ಜಿಲ್ಲೆಯಾಗಿ ಚಿಕ್ಕಬಳ್ಳಾಪುರ ಹೊರಹೊಮ್ಮ ಬೇಕು. ಪೋಕ್ಸೋ ಪ್ರಕರಣ ಹಿಂದೆ ಎಷ್ಟೇ ಬಲಿಷ್ಠ ವ್ಯಕ್ತಿಗಳು ಇದ್ದರೂ ನಿರ್ದಾಕ್ಷಿಣ್ಯವಾಗಿ ಕಾನೂನುತ್ಮಕವಾಗಿ ಕ್ರಮ ಜರುಗಿಸಬೇಕು ಎಂದು ಸೂಚನೆಗಳನ್ನು ನೀಡಿದರು.ಬಾಲ್ಯವಿವಾಹ ತಡೆಗಟ್ಟುವ ಸಮಿತಿಗಳು ಗ್ರಾಮ ಪಂಚಾಯಿತಿ, ಹೋಬಳಿ, ತಾಲ್ಲೂಕು ಜಿಲ್ಲಾ ಹಂತದಲ್ಲಿ ಚುರುಕಾಗಿ,ನಿರಂತರವಾಗಿ ಕಾರ್ಯನಿರ್ವಹಿಸಬೇಕು. ಮಹಿಳೆಯರು ತಮ್ಮ ಮಕ್ಕಳ ರಕ್ಷಣೆಗಾಗಿ ಚಿತ್ರದುರ್ಗ ಜಿಲ್ಲೆಯಲ್ಲಿ ಓಬವ್ವ ಪಡೆ, ಮೈಸೂರಿನಲ್ಲಿ ಚಾಮುಂಡಿ ಪಡೆ, ತುಮಕೂರಿನಲ್ಲಿ ಕಲ್ಪತರು ಪಡೆಗಳು ಬಹಳ ಜಾಗೃತವಾಗಿ ಕಾರ್ಯನಿರ್ವಹಿಸುತ್ತಿವೆ. ಅದೇ ರೀತಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ಪ್ರತ್ಯೇಕ ಪಡೆ ನಿರ್ಮಿಸಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿರುವುದಾಗಿ ತಿಳಿಸಿದರು. ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಆರ್.ಐ. ಕಾಸಿಂ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೆಂಕಟೇಶರೆಡ್ಡಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಉತ್ತಮ ಆರೋಗ್ಯಕ್ಕಾಗಿ ಜೀವನ ಶೈಲಿ ಬದಲಾಯಿಸಿಕೊಳ್ಳಲು ಸಲಹೆ

**ಕೋಲಾರ:** ಸಾರ್ವಜನಿಕರಿಗೆ ಆಹಾರ ಆರೋಗ್ಯದ ಬಗ್ಗೆ ಮತ್ತು ದಿನನಿತ್ಯದ ಜೀವನದ ಚಟುವಟಿಕೆಗಳ ಕುರಿತು ನಿರಂತರವಾಗಿ ಪತ್ರಿಕೆಗಳಲ್ಲಿ ಪ್ರಕಟಿಸುತ್ತಿದ್ದು, ಸಮಾಜದ ಸಕಾರಾತ್ಮಕ ನಕಾರಾತ್ಮಕ ವಿಷಯಗಳ ಬಗ್ಗೆ ಅರಿವು ಮೂಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಜಗದೀಶ್ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವಾರ್ತಾ ಇಲಾಖೆಯ ಸಹಯೋಗದಿಂದಿಗೆ ಜರುಗಿದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದ ಹಾಗೂ ಆರೋಗ್ಯ ದಿನಾಚರಣೆಗಳ ಕುರಿತು ಮಾಧ್ಯಮ ಮಿತ್ರರಿಗೆ ಅರಿವು ಮೂಡಿಸುವ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಈಗಿನ ದಿನಗಳಲ್ಲಿ ಜೀವನ ಶೈಲಿಯು ತುಂಬಾನೇ ಬದಲಾವಣೆಯಾಗುತ್ತಿದ್ದು, ಉತ್ತಮ ಆರೋಗ್ಯಕ್ಕಾಗಿ ನಮ್ಮ ದಿನನಿತ್ಯದ ಬದುಕಿನಲ್ಲಿ ಒಳ್ಳೆಯ ಆಹಾರ- ವಿಹಾರ ವ್ಯಾಯಾಮವನ್ನು ಅಳವಡಿಸಿಕೊಳ್ಳಬೇಕು ಎಂದರು. ಹೊರಗಿನ ಆಹಾರಾಗಳಾದ ಪಾನಿಪುರಿ, ಗೋಬಿ ಮಂಚೂರಿ ಇನ್ನು ಮುಂತಾದ ಕಲರ್ ಹಾಗೂ ಟೇಸ್ಟಿ ಪದಾರ್ಥವನ್ನು ಬಳಸುವ ಆಹಾರವನ್ನು ತ್ಯಜಿಸಬೇಕೆಂದರು. ಸ್ವಚ್ಚತೆಯಿಲ್ಲದ ಕಡೆ ಆಹಾರ ತಿನ್ನುವುದರಿಂದ ಸಂಕ್ರಾಮಿಕ ರೋಗಗಳು ಹರಡುತ್ತವೆ. ಡೆಂಗೀ ಮತ್ತು ಚಿಕನ್ ಗುನ್ಯ, ಎಚ್.ಐ.ವಿ, ಟಿ.ವಿ ಕಾಯಿಲೆ ಕುಷ್ಠರೋಗ ನಿಯಂತ್ರಿಸಲು ಕೆಲವು ಕ್ರಮಗಳನ್ನು ಪಾಲಿಸಿದರೆ ಈ ರೋಗಗಳು ಸಂಪೂರ್ಣವಾಗಿ ಮಟ್ಟ ಹಾಕಬಹುದು. ಆರೋಗ್ಯಕ್ಕೆ ಸಂಬಂಧಪಟ್ಟ ಕೆಲವೊಂದು ಸುದ್ದಿಗಳನ್ನು ಪ್ರಕಟಿಸುವ ಮುನ್ನ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ ಪ್ರಕಟಿಸಬೇಕೆಂದು ಎಂದು ಮಾಧ್ಯಮದವರಿಗೆ ಹೇಳಿದರು.

ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿ ಡಾ. ನಾರಾಯಣಸ್ವಾಮಿ ಎನ್ .ಸಿ ಅವರು ಮಾತನಾಡಿ ನಿರಂತರ ತಲೆನೋವು, ಕಣ್ಣು ಕೆಂಪಾಗುವುದು, ಕಣ್ಣಿನಲ್ಲಿ ನೋವು, ಬೆಳಕಿನ ಮೂಲಕ ಸುತ್ತ ಬಣ್ಣಬಣ್ಣದ ವೃತ್ತಗಳು ಕಾಣುವುದು. ಹೊಟ್ಟೆಯಲ್ಲಿ ಅಸಮಾಧಾನ ಮತ್ತು ವಾಂತಿ ಗ್ಲಾಕೋಮಾದ ಲಕ್ಷಣಗಳಾಗಿದ್ದು, ತಕ್ಷಣವೇ ವೈದ್ಯರನ್ನು ಭೇಟಿ ಮಾಡಬೇಕು. ಪದೇ ಪದೇ ಕನ್ನಡಕವನ್ನು ಬದಲಾಯಿಸುತ್ತಿದ್ದರೆ, ಕಡ್ಡಾಯವಾಗಿ ಕಣ್ಣಿನ ಒತ್ತಡ ಪರೀಕ್ಷೆಯನ್ನು ಮಾಡಿಸಿಕೊಳ್ಳಿ, ಕಣ್ಣಿಗೆ ಯಾವುದೇ ರೀತಿಯಲ್ಲಿ ಗಾಯಗಳನ್ನು ಉಂಟು ಮಾಡುವ ಕೆಲಸ ನಿರ್ವಹಿಸುವಾಗ ನಿಮ್ಮ ಕಣ್ಣುಗಳನ್ನು ರಕ್ಷಿಸಿಕೊಳ್ಳಬೇಕು. 40ವರ್ಷ ವಯಸ್ಸಿನ ನಂತರ ಪ್ರತಿಯೊಬ್ಬರು ವರ್ಷಕ್ಕೊಮ್ಮೆ ಕಣ್ಣಿನ ಒತ್ತಡದ ಪರೀಕ್ಷಿಸಿಕೊಳ್ಳಬೇಕು. ಮಧುಮೇಹ, ರಕ್ತದೊತ್ತಡ ಹಾಗೂ ದೃಷ್ಟಿ ದೋಷವಿರುವವರಲ್ಲಿ ಹೆಚ್ಚು ಗ್ಲಾಕೋಮಾ ಕಂಡುಬರುತ್ತದೆ ಎಂದರು.

ಕೋಲಾರ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷರಾದ ಕೆ.ಎಸ್. ಗಣೇಶ್ ಮಾತನಾಡಿದರು.

### ಸಾಗರೋಪಾದಿಯಲ್ಲಿ ಹರಿದು ಬಂದ ಭಕ್ತ ಸಾಗರ

# ಮಸಣೀಕಮ್ಮನವರ ರಥೋತ್ಸವ

**ಪಿರಿಯಾಪಟ್ಟಣ:** ಇತಿಹಾಸ ಪ್ರಸಿದ್ದ ಚಂಗಾಳ್ವರ ನಾಡಿನ ಅಧಿದೇವತೆ, ಪಿರಿಯಾಪಟ್ಟಣದ ಗ್ರಾಮದೇವತೆ ಶ್ರೀ ಮಸಣೀಕಮ್ಮನವರ (ಪಿರಿಯಾಪಟ್ಟಣದಮ್ಮ) ಬ್ರಹ್ಮ ರಥೋತ್ಸವವು ಗುರುವಾರ ಸಂಭ್ರಮ ಸಡಗರದಿಂದ ಲಕ್ಷಾಂತರ ಭಕ್ತಾಧಿಗಳ ನಡುವೆ ವಿಜೃಂಭಣೆಯಿಂದ ನೆರವೇರಿತು.

ಕಳೆದ 15 ದಿನಗಳ ಹಿಂದೆಯೇ ದೇವಾಲಯದ ವಿಧಿವಿಧಾನದಂತೆ ಮುಹೂರ್ತ ಕಾರ್ಯ ನೆರವೇರಿಸಿದ ನಂತರ ಪ್ರತಿದಿನ ದೇವಾಲಯದಲ್ಲಿ ವಿವಿಧ ಪೂಜಾ ವಿಧಾನಗಳನ್ನು ನೆರವೇರಿಸಿ ಕಳೆದ ಸೋಮವಾರದಿಂದ ಬೆಳಗಿನ ಜಾವ ದೇವಾಲಯದಲ್ಲಿ ದೇವರಿಗೆ ವಿಶೇಷ ಪೂಜೆ ಹಾಗೂ ಕೈಂಕರ್ಯ ಹಾಗೂ ವಿಶೇಷ ಪೂಜೆ ಹೋಮ ಹವನಾದಿಗಳು ನಡೆದಿದ್ದು. ಗುರುವಾರ ಬೆಳಗ್ಗೆ 10.30ರಿಂದ 12.15 ಗಂಟೆಯೊಳಗೆ ಸಲ್ಲುವ ಬ್ರಾಹ್ಮೀ ಮುಹೂರ್ತದ ವೃಷಭ ಲಗ್ನದಲ್ಲಿ ಮಸಣೀಕಮ್ಮನವರ ಬ್ರಹ್ಮ ರಥೋತ್ಸವವನ್ನು ಭಕ್ತ ಸಾಗರದ ನಡುವೆ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಹೂಗಳಿಂದ ಅಂಲಕೃತಗೊಂಡ ರಥದಲ್ಲಿ ಮಸಣೀಕಮ್ಮದೇವಿಯ ಉತ್ಸವ ಮೂರ್ತಿಯನ್ನು ದೇವಾಲಯದ ಸುತ್ತಲೂ ಪ್ರದಕ್ಷಿಣೆ ಮುಖಾಂತರ ಮೆರವಣಿಗೆ ನಡೆಸಲಾಯಿತು. ನಂತರ ರಥದಲ್ಲಿ ಮೂರ್ತಿಯನ್ನು ಪ್ರತಿಷ್ಠಾಪಿಸಿ ನೆರೆದಿದ್ದ ಲಕ್ಷಾಂತರ ಭಕ್ತರು ಭಕ್ತಿಪರವಶತೆಯಿಂದ ತೇರನ್ನು ಎಳೆದು ಹಣ್ಣುಜವನ ಎಸೆದು ಪುನೀತರಾದರು.

ಹರಿದು ಬಂದ ಭಕ್ತಸಾಗರ: ಪಿರಿಯಾಪಟ್ಟಣ ತಾಲೂಕಿನ ಅಧಿದೇವತೆಯಾದ ಶ್ರೀ ಮಸಣೀಕಮ್ಮ ದೇವರ ರಥೋತ್ಸವಕ್ಕೆ ಹೊರ ರಾಜ್ಯಗಳಾದ ತಮಿಳುನಾಡು, ಮಹಾರಾಷ್ಟ್ರ, ಕೇರಳ, ಆಂಧ್ರಪ್ರದೇಶ ತೇಲಂಗಾಣ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಮಂದಿ ಭಕ್ತರು ಆಗಮಿಸಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಸರದಿ ಸಾಲಿನಿಂದ ದೇವಾಲಯದ ಆವರಣ ಜನಜಂಗುಳಿಯಿಂದ ಕೂಡಿತ್ತು.

ಪಟ್ಟಣದ ಬಿ.ಎಂ.ರಸ್ತೆಯ ಉಪ್ಪಾರಗೇರಿ ಗೇಟ್ ಭಗೀರಥ ಸರ್ಕಲ್ ನಿಂದ ಹಿಡಿದು ಪಟ್ಟಣದ ಬಸ್



ನಿಲ್ದಾಣದ ವೃತ್ತದ ವರೆಗೆ ಪಟ್ಟಣದ ಉಪ್ಪಾರಬೀದಿ, ಒಳಕೋಟೆ, ಕರಿಬಸಪ್ಪ ಬಡಾವಣೆ, ದೇವೇಗೌಡನ ಕೊಪ್ಪಲಿನ ಉಪ್ಪಾರ ಸಮಾಜ, ಮಸಣಿಕೇರಿ, ಕೆ.ವೆಂಕಟೇಶ್ ಅಭಿಮಾನಿ ಬಳಗ, ಅಪ್ಪು ಅಭಿಮಾನಿ ಬಳಗ, ಆಟೋ-ಕಾರು ಚಾಲಕರ ಸಂಘ, ಪಿರಿಯಾಪಟ್ಟಣ ತರಕಾರಿ ಮಾರಾಟಗಾರರ ಸಂಘ, ಜೈನ್ ಮತ್ತು ವೀರಶೈವ ಸಮಾಜದ ಬಂದುಗಳು, ಬೆಟ್ಟದಪುರ ಸರ್ಕಲ್ ಯುವಕರ ಸಂಘದವರು ವಿವಿಧ ಭಾಗಗಳಿಂದ ಜಾತ್ರೆಗೆಂದು ಬಂದಿದ್ದ ಅಮ್ಮನವರ ಭಕ್ತರು ಸೇರಿದಂತೆ ನೂರಾರು ಸ್ಥಳೀಯ ಸಂಘ ಸಂಸ್ಥೆಗಳು ಜಾತ್ರೆಗೆ ಬಂದಂತಹ ಭಕ್ತ ಸಮೂಹಕ್ಕೆ ಅನ್ನದಾನ ಮತ್ತು ಪ್ರಸಾದ ವಿನಿಯೋಗ ಬಾತು, ಮೊಸರನ್ನ, ಪುಳಿಯೋಗರೆ, ಮಜ್ಜಿಗೆ, ಪಾನಕ, ಕಲ್ಲಂಗಡಿ ಹಣ್ಣು ಮೈಸೂರು ಪಾಕ್, ಜಿಲೇಬಿ ಮತ್ತು ತಿಂಡಿಗಳನ್ನು ವಿತರಿಸಿದರು. ಹಲವೆಡೆ ಪಾನಕ ಮಜ್ಜಿಗೆ ವಿತರಣೆ ಮಾಡಿದರಲ್ಲದೆ ಹಲವೆಡೆ ಜ್ಯೂಸ್ ಮತ್ತು ಐಸ್ಕ್ರೀಂಗಳನ್ನು ವಿತರಣೆ ಮಾಡುವ ಮೂಲಕ ದೇವರಿಗೆ ತಮ್ಮ ಭಕ್ತಿ ಮತ್ತು ಹರಕೆ ಸಮರ್ಪಿಸಿದರು.

ಸಂಚಾರ ನಿಯಂತ್ರಸಿಸಲು ಬಿಗಿ ಬಂದುಬಸ್ತ್:

ಜಾತ್ರಾ ಮಹೋತ್ಸವಸ ಅಂಗವಾಗಿ ಬೆಳಿಗ್ಗಿನಿಂದಲೇ ಸಾವಿರಾರು ಭಕ್ತರು ದೇವಾಲಯಕ್ಕೆ ಆಗಮಿಸುತ್ತಿದ್ದ ಕಾರಣ ದೇವಾಲಯದ ಆವರಣ, ಸಂತೆಮಾಳ ಹಾಗೂ ಬಿ.ಎಂ.ರಸ್ತೆಯಲ್ಲಿ ಜನಸಂದಣಿ ಹೆಚ್ಚಾಗಿ ವಾಹನ ಸಂಚಾರ ಅಸ್ತವ್ಯಸ್ತವಾಯಿತು. ಮದ್ಯಾಹ್ನ ರಥ ಬಿ.ಎಂ.ರಸ್ತೆಗೆ ಬಂದ ಕೂಡಲೇ ಮೈಸೂರು-ಮಡಿಕೇರಿ ಮುಖ್ಯರಸ್ತೆಯಲ್ಲಿ ಸಾಗರದ ರೀತಿಯಲ್ಲಿ ಜನಸಂದಣಿ ತುಂಬಿಹೋಯಿತು. ರಥವನ್ನು ಬಿ.ಎಂ.ರಸ್ತೆಯ ಬದಿಯಲ್ಲಿಯೇ ನಿಲುಗಡೆ ಮಾಡಿದ್ದರ ಪರಿಣಾಮ ಬಿ.ಎಂ.ರಸ್ತೆ ಭಾಗಶಃ ಬಂದ್ ಆಗಿತ್ತಾದರೂ. ಪೊಲೀಸರು ಏಕಮುಖ ಸಂಚಾರ ವ್ಯವಸ್ಥೆ ಕೈಗೊಂಡು ಪಾದಯಾತ್ರಿಗಳು, ವಾಹನ ಚಾಲಕರು ಸಂಚರಿಸಲು ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಅನುವು ಮಾಡಿಕೊಟ್ಟರು.

**ಅಮ್ಮನವರ ಉತ್ಸವ ಹಾಗೂ ಮೆರವಣಿಗೆ:** ಶ್ರೀ ಮಸಣೀಕಮ್ಮನವರ ಉತ್ಸವವು ಗುರುವಾರ ಸಂಜೆಯಿಂದ ಪಟ್ಟಣದಲ್ಲಿ ಹಾಗೂ ಮಾ.15ರ ಶುಕ್ರವಾರರಂದು ಪಟ್ಟಣದ ಒಳಕೋಟೆ, ಕರಿಬಸಪ್ಪ ಬಡಾವಣೆ, ಪೇಟೆಬೀದಿ, ಸಣ್ಣಯ್ಯನಬೀದಿ, ಬಿ.ಎಂ.ರಸ್ತೆ, ದೇವೇಗೌಡನ ಕೊಪ್ಪಲು, ಉಪ್ಪಾರಬೀದಿಗಳಲ್ಲಿ ದೇವರ ಉತ್ಸವ ಮೂರ್ತಿಯನ್ನು ಮೆರವಣಿಗೆ ನಡೆಸಿ ಮಾ.16ರ ಶನಿವಾರರಂದು ರಾತ್ರಿ 8 ಗಂಟೆಗೆ ಪಟ್ಟಣದ ಉಪ್ಪಾರಬೀದಿ ಒಳಕೋಟೆ ಮಧ್ಯದಲ್ಲಿರುವ ಚಿಕ್ಕಕೆರೆಯಲ್ಲಿ ತೆಪ್ಪೋತ್ಸವ ಜರುಗಲಿದೆ.

## ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ

**ಬೆಂಗಳೂರು:** 2023-24ನೇ ಶೈಕ್ಷಣಿಕ ವರ್ಷಕ್ಕೆ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ, ಕೆ.ಆರ್ ವೃತ್ತ, ಬೆಂಗಳೂರು ಇಲ್ಲಿ Engineering Mathematics (ತಾಂತ್ರಿಕೇತರ) ವಿಷಯಗಳನ್ನು ಬೋಧನೆ ಮಾಡಲು ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ, ಎಐಸಿಟಿಇ/ ಯುಜಿಸಿ ನಿಯಮಗಳಾನುಸಾರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಹಾಗೂ ಸಂಬಂಧಿತ ಮಾಹಿತಿಗಳನ್ನು ವಿಶ್ವವಿದ್ಯಾಲಯದ ವೆಬ್ ಸೈಟ್ www.uvce.ac.in ನಿಂದ ಡೌನ್‌ಲೋಡ್ ಮಾಡಿಕೊಂಡು, ಸಂಬಂಧಿತ ದಾಖಲೆಗಳ ಪ್ರತಿಗಳೊಂದಿಗೆ ಮಾರ್ಚ್ 28 ಸಂಜೆ 5 ಗಂಟೆಗಳೊಳಗೆ ಸಲ್ಲಿಸುವುದು. ನಿಗಧಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಕುಲಸಚಿವರ ಕಛೇರಿ ಯುವಿಸಿಇ, ಕೆ.ಆರ್ ವೃತ್ತ, ಬೆಂಗಳೂರು-01 ರಲ್ಲಿ ಸಂಪರ್ಕಿಸಬಹುದು.

## ಏ.11ರಿಂದ ವ್ಯಕ್ತಿತ್ವ ವಿಕಸನ ತರಬೇತಿ ಶಿಬಿರ

**ಬೆಂಗಳೂರು:** ದಕ್ಷಿಣ ತಾಲ್ಲೂಕಿನ ರಾಮೋಹಳ್ಳಿಯ ಶ್ರೀ ಸಿದ್ಧಾರೂಢ ಮಿಷನ್ ಆಶ್ರಮದಲ್ಲಿ ಬರುವ ಎಪ್ರಿಲ್ 11 ರಿಂದ 17 ರವರೆಗೆ ವಸತಿ ಸಹಿತ ವ್ಯಕ್ತಿತ್ವ ವಿಕಸನ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. 6 ನೇ ತರಗತಿಯಿಂದ ಪಿಯುಸಿವರೆಗಿನ ವಿದ್ಯಾರ್ಥಿ - ವಿದ್ಯಾರ್ಥಿನಿಯರಿಗೆ ಪ್ರವೇಶವಿದ್ದು ವೇದಮಂತ್ರ ಸಂಸ್ಕೃತ ವಚನ ಯೋಗ ಮುಂತಾದವುಗಳ ಜೊತೆಗೆ ವಿದ್ಯಾರ್ಥಿಗಳಿಗೆ ಅಗತ್ಯವಾದ ಭಾರತೀಯ ಸಾಂಸ್ಕೃತಿಕ ಜೀವನ ಮೌಲ್ಯಗಳನ್ನು ಹೇಳಿಕೊಡಲಾಗುವುದು. ಆಸಕ್ತರು ಎಪ್ರಿಲ್ 5 ರೊಳಗೆ ಹೆಸರನ್ನು 9731004160 ಸಂಖ್ಯೆಗೆ ವಾಟ್ಸಾಪ್ ಸಂದೇಶ ಕಳಿಸುವ ಮೂಲಕ ನೋಂದಾಯಿಸಲು ಕೋರಲಾಗಿದೆ.

## ಸ್ಪರ್ಧೆ ಮನೋಭಾವನೆ ಬೆಳೆಸಿಕೊಳ್ಳಿ ಎಸ್ ಪಿ ಪದ್ಮಿನಿ ಸಾಹು

**ಚಾಮರಾಜನಗರ:** ಪ್ರತಿಯೊಬ್ಬ ವಿದ್ಯಾರ್ಥಿಗಳು ಸ್ಪರ್ಧೆ ಮಾಡುವ ಅಭಿರುಚಿ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ತಿಳಿಸಿದರು.

ಶುಕ್ರವಾರ ಸಂಜೆ. ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯ. ಬಿ ಎಡ್ ಕಾಲೇಜ್. ವತಿಯಿಂದ ಏರ್ಪಡಿಸಿದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ವಿಧವಿಧ ಸ್ಪರ್ಧೆಯಲ್ಲಿದ್ದಾರೆ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಿ ನಂತರ ಮಾತನಾಡಿದವರು. ಸ್ಪರ್ಧೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಅಭಿರುಚಿ ಬೆಳೆಸಿಕೊಂಡಾಗ ಮಾತ್ರ. ವಿದ್ಯಾರ್ಥಿ ಜೀವನ ಯಶಸ್ವಿಯಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ. ಮಹಿಳಾ ದಿನಾಚರಣೆಯಂದು. ಸಡಗರ ಸಂಭ್ರಮದಿಂದ. ಆಚರಣೆ ಮಾಡುತ್ತಿರುವುದು ಮೆಚ್ಚುಗೆ ವಿಷಯ. ಇದರ ಜೊತೆ. ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಿ. ಪರೀಕ್ಷೆಯಲ್ಲಿ



ಉನ್ನತ ಅಂಕ ಗಳಿಸಿ. ಕಾಲೇಜಿಗೆ. ಪೋಷಕರಿಗೆ ಕೀರ್ತಿ ತನ್ನಿ ಎಂದು ಕರೆ ನೀಡಿದರು. ಆರ್ ಮಧುಶ್ರೀ. ರವರು ವಕೀಲರಾಗಿ ಸೇವೆ ಸಲ್ಲಿಸಿ. ಇವಾಗ ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ. ಕಾಲೇಜಿನ ಪ್ರಾಂಶುಪಾಲ ಕೆ ಸಿ.ಬಸವಣ್ಣ ಸನ್ಮಾನಿಸಿದರು. ವಿದ್ಯಾರ್ಥಿಗಳಾದ ಮಾಳವಿಕಾ. ಶಿಲ್ಪ. ಮಹಿಳಾ ದಿನಾಚರಣೆ ಕುರಿತು. ಭಾಷಣ ಮಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಿಎಡ್ ಕಾಲೇಜ್. ಪ್ರಾಂಶುಪಾಲ ಪ್ರೊ ಕೆ ಸಿ ಬಸವಣ್ಣ ಮಾತನಾಡಿ. ಜೇಸಸಯಯ ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ವಿದ್ಯಾಭ್ಯಾಸ ಮಾಡಿದ ಸಾವಿರಾರು ವಿದ್ಯಾರ್ಥಿಗಳು. ಜಿಲ್ಲಾ. ಹಾಗೂ ರಾಜ್ಯದ ವಿವಿಧ ಭಾಗಗಳಲ್ಲಿ ಉತ್ತಮ ಶಿಕ್ಷಕರಾಗಿ ಸೇವೆ ಮಾಡುತ್ತಿರುವ ಸಂತೋಷದ ವಿಷಯ ಎಂದು ತಿಳಿಸಿದರು. ಉಪನ್ಯಾಸಕರಾದ ಕೆ ಎಂ ಯೋಗೇಶ್, ಶಿವರಾಜ್ ಅರಸ್. ಕೆ ಎಸ್ ಸಿದ್ದರಾಜು. ಎನ್ ನಾಗರಾಜು. ಎನ್ ಮಲ್ಲೇಶ್. ಎಸ್ ಎನ್ ರಾಜು. ಡಿ ಎನ್ ಶಿವಕುಮಾರ್. ಎಂ ಗೀತಾ. ಸೇರಿದಂತೆ ಇತರರು ಹಾಜರಿದ್ದರು.

## ನಾಮಫಲಕದಲ್ಲಿ ಕನ್ನಡ ಭಾಷೆ ಕಡ್ಡಾಯ

**ರಾಮನಗರ:** ಹಾರೋಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ ಎಲ್ಲಾ ಉದ್ದಿಮೆದಾರರು ರಾಜ್ಯ ಸರ್ಕಾರವು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2024ರ ರೀತ್ಯಾ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಯಾದ ಅಧಿಸೂಚನೆಯಲ್ಲಿ ವಾಣಿಜ್ಯ ಕೈಗಾರಿಕೆಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನೆ ಕೇಂದ್ರಗಳು, ಹೋಟೆಲ್‌ಗಳು, ಇತರೆ ಉದ್ದಿಮೆಗಳು ನಾಮಫಲಕಗಳಲ್ಲಿ ಶೇ. 60 ರಷ್ಟು ಕನ್ನಡ ಭಾಷೆಯನ್ನು ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿಸಬೇಕಿರುತ್ತದೆ. ಹಾಗಾಗಿ ಈ ಪ್ರಕಟಣೆಯಾದ 7 ದಿನಗಳೊಳಗಾಗಿ, ತಮ್ಮ ನಾಮಫಲಕದಲ್ಲಿ ಶೇ. 60 ರಷ್ಟು ಕನ್ನಡ ಭಾಷೆಯನ್ನು ಪ್ರದರ್ಶಿಸಬೇಕು ಹಾಗೂ ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿಸಲು ಕ್ರಮ ವಹಿಸಬೇಕು ತಪ್ಪಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಹಾರೋಹಳ್ಳಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಂದರ್ಶನಕ್ಕೆ ಆಹ್ವಾನ

**ರಾಮನಗರ:** ರಾಮನಗರ ಜಿಲ್ಲಾ ಪಿ.ಸಿ.ಪಿ.ಎನ್.ಡಿ.ಟಿ ಸಲಹಾ ಸಮಿತಿಯನ್ನು ಪುನರ್ ರಚಿಸಲು ಸಲಹಾ ಸಮಿತಿ ಸದಸ್ಯರ ಆಯ್ಕೆ ಮಾಡಲು ಅರ್ಹ ಸದಸ್ಯರುಗಳನ್ನು ನೇರ ಸಂದರ್ಶನಕ್ಕೆ ಆಹ್ವಾನಿಸಲಾಗಿದೆ. ಒಂದು ಸ್ತ್ರೀರೋಗ ತಜ್ಞರು (ಐ.ಆರ್.ಐ.ಎ ಪ್ರತಿನಿಧಿಸುವ), ಒಂದು ಪ್ರಸೂತಿ ಶಾಸ್ತ್ರತಜ್ಞರು (ಎಫ್ ಒಜಿಎಸ್‌ಐ) 3 ಪ್ರಖ್ಯಾತ ಸಾಮಾಜಿಕ ಕಾರ್ಯಕರ್ತರು (ಅರ್ಹ ಸರ್ಕಾರೇತರ ಸಂಸ್ಥೆಗಳ (ಎನ್.ಜಿ.ಒ) ಪೈಕಿ ಮಹಿಳಾ ಸಂಘ ಸಂಸ್ಥೆಗಳ ಪ್ರತಿನಿಧಿಗಳ ಒಬ್ಬರನ್ನು, ಒಳಗೊಂಡಿರಬೇಕು) ದಾಖಲಾತಿಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಗೆ ಮುಚ್ಚಿದ ಲಕೋಟೆಯಲ್ಲಿ ಇದೇ ಇದೇ ಮಾ. 13 ರಿಂದ 16 ರ ಸಂಜೆ 4.30ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ರಾಮನಗರ ಜಿಲ್ಲೆ ಈ ಕಚೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಟೆಂಡರ್ ಆಹ್ವಾನ

**ರಾಮನಗರ:** ರಾಮನಗರ ಜಿಲ್ಲಾ ವ್ಯಾಪ್ತಿಯ ಪ್ರಧಾನ ಹಿರಿಯ ಸಿವಿಲ್ ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ಕಚೇರಿ ಮತ್ತು ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕನಕಪುರ ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ಆಸಕ್ತರಿಂದ ಜೆರಾಕ್ಸ್ ಮಿಷನ್ ಅಳವಡಿಸಿ ಜೆರಾಕ್ಸ್ ಕಾಫಿ ಮಾಡಿಕೊಡಲು ಟೆಂಡರ್ ಆಹ್ವಾನಿಸಲಾಗಿದೆ. ಅರ್ಹತೆ ಇರುವ ಆಸಕ್ತರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ರಾಮನಗರ ಇವರ ಹೆಸರಿಗೆ ಭದ್ರತಾ ಠೇವಣಿ 10,000 ರೂ.ಗಳ ಡಿಡಿಯನ್ನು ಪಡೆದು ಮುಚ್ಚಿದ ಲಕೋಟೆಯಲ್ಲಿ 2024ರ ಏಪ್ರಿಲ್ 15ರ ಸಂಜೆ 5 ಗಂಟೆಯೊಳಗೆ ತಲುಪಿಸಬೇಕು. ಹೆಚ್ಚಿನ ಮಾಹಿತಿಗೆ ಕಚೇರಿ ವೇಳೆಯಲ್ಲಿ ಮುಖ್ಯ ಆಡಳಿತಾಧಿಕಾರಿಗಳು ದೂ.ಸಂಖ್ಯೆ: 27271449, 27275090 ಹಾಗೂ ರಾಮನಗರ ನ್ಯಾಯಾಲಯದ ವೆಬ್‌ಸೈಟ್ (ಜಾಲತಾಣ) https://districts.ecourts.gov.in/ramnagar ನಲ್ಲಿ ವಿವರವಾದ ಮಾಹಿತಿಯನ್ನು ಪ್ರಕಟಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಣಬೆ ಬೇಸಾಯ ತರಬೇತಿ

**ರಾಮನಗರ:** ಶ್ರೀಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್ ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಅಣಬೆ ಬೇಸಾಯ ಕುರಿತ 10 ದಿನಗಳ ಉಚಿತ ತರಬೇತಿಯು 2024ರ ಏಪ್ರಿಲ್ 15 ರಿಂದ ಆಯೋಜಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಏಪ್ರಿಲ್ 10 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9241482541, 8884554510, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನು ಮಾರಾಟಗಾರರಿಂದ ಅರ್ಜಿ

**ಮಂಡ್ಯ:** ಸ್ಥಳೀಯವಾಗಿ ಮೀನು ಸೇವನೆಯನ್ನು ಪ್ರೋತ್ಸಾಹಿಸಲು ಹಾಗೂ ತಾಜಾ ಮೀನು ಮತ್ತು ಮೀನು ಉತ್ಪನ್ನಗಳ ಮಾರಾಟಕ್ಕಾಗಿ ಮಚ್ಚೆವಾಹಿನಿ ಯೋಜನೆ ಅಡಿ ತ್ರಿಚಕ್ರವಾಹನಗಳನ್ನು ಪರವಾನಿಗೆ ಆಧಾರದಲ್ಲಿ ಪಡೆಯಲು ಆಸಕ್ತ ಮೀನು ಮಾರಾಟಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಒಟ್ಟು ಮಂಡ್ಯ ಜಿಲ್ಲೆಗೆ ಮೂರು ಭೌತಿಕ ಗುರಿಗಳಿದ್ದು, ಆಯ್ಕೆಯಾಗುವ ಅರ್ಜಿದಾರರು ಇಲಾಖೆಗೆ ಭದ್ರತಾ ಠೇವಣಿ ಮೊತ್ತ ( ರೂ.ಒಂದು ಲಕ್ಷ, ಸಾಮಾನ್ಯ ವರ್ಗದವರು, 0.50 ಲಕ್ಷ ಪರಿಶಿಷ್ಟ ಜಾತಿ/ ಪಂಗಡ/ ಮಹಿಳೆ) ಯನ್ನು ನೀಡಬೇಕಾಗಿರುತ್ತದೆ ಹಾಗೂ ಮಾಸಿಕ ರೂ. 3000/- ಬಾಡಿಗೆ ಮೊತ್ತವನ್ನು ಪಾವತಿಸಬೇಕಾಗಿರುತ್ತದೆ. ಅರ್ಜಿ ಸಲ್ಲಿಸಲು ಮಾರ್ಚ್ 19 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಮಂಡ್ಯ, ಮದ್ದೂರು, ಮಳವಳ್ಳಿ, ಕೆ.ಆರ್. ಪೇಟೆ, ಪಾಂಡವಪುರ, ನಾಗಮಂಗಲ ಹಾಗೂ ಶ್ರೀರಂಗಪಟ್ಟಣದ ಮೀನುಗಾರಿಕೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು.

# ಹೆಣ್ಣು ಮಕ್ಕಳ ಸ್ಥಿತಿಗತಿಗಳ ಮೇಲೆ ಅಭಿವೃದ್ಧಿಯನ್ನು ಗುರುತಿಸಬಹುದು

ಚಿಕ್ಕಬಳ್ಳಾಪುರ: ಪೋಷಕರು ತಮ್ಮ ಹೆಣ್ಣುಮಕ್ಕಳ ಶಿಕ್ಷಣದ ಮೇಲೆ ಹೂಡುವ ಹೂಡಿಕೆ ಇಂದಲ್ಲ ನಾಳೆ ಎಂದಿದ್ದರೂ ಉತ್ತಮ ಪ್ರತಿಫಲವನ್ನು ನೀಡುತ್ತದೆ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌದರಿ ಅವರು ತಿಳಿಸಿದರು.

ಶುಕ್ರವಾರ ಮುದ್ದೇನಹಳ್ಳಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯುಕ್ತಶ್ರಯದಲ್ಲಿ ಗ್ರಂಥಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ದೇಶದ ಅಭಿವೃದ್ಧಿಯನ್ನು ಅಳೆಯಬೇಕಾದರೆ ಆ ದೇಶದ ಹೆಣ್ಣುಮಕ್ಕಳ ಸ್ಥಿತಿಗತಿಗಳನ್ನು ಪ್ರಮುಖವಾಗಿ ಪರಿಗಣಿಸಬೇಕು ಎಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ತಿಳಿಸಿದ್ದಾರೆ. ಅಂಬೇಡ್ಕರ್ ಅವರ ಆಶಯಗಳಂತೆ ಹೆಣ್ಣು ಮಕ್ಕಳ ಸ್ಥಿತಿಗತಿ ಸುಧಾರಣೆ ಮತ್ತು ಅವರ ಪ್ರಗತಿಯ ಕಡೆ ಹೆಚ್ಚು ಗಮನ ಕೊಡಬೇಕಾಗಿದೆ. 21 ನೇ ಶತಮಾನದಲ್ಲಿಯೂ ಹೆಣ್ಣುಮಕ್ಕಳು ತಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡುತ್ತಿರುವುದು ಶೋಚನೀಯ ಎಂದು ಬೇಸರ ವ್ಯಕ್ತಪಡಿಸಿದರು.

ಅಧಿಕಾರ ಮತ್ತು ಸಂಪತ್ತುಗಳ ಹಂಚಿಕೆ ವಿಚಾರದಲ್ಲಿ ಹೆಚ್ಚಾಗಿ ಹೆಣ್ಣು ಮಕ್ಕಳು ಅಲ್ಪಸಂಖ್ಯಾತರಾಗಿ ಅವಕಾಶ ವಂಚಿತರಾಗುತ್ತಿದ್ದಾರೆ ಆದರೂ ಕೂಡ ಹೆಣ್ಣುಮಕ್ಕಳು ಸುಸಂಸ್ಕೃತ ಸಮಾಜ ನಿರ್ಮಾಣದಲ್ಲಿ ದಾಪುಗಾಲು ಹಾಕುತ್ತಿದ್ದಾಳೆ ಎಂದರು.

ಇಂದಿಗೂ ಹೆಣ್ಣುಮಕ್ಕಳು ಶೋಷಣೆಗೆ ಒಳಗಾಗುತ್ತಿದ್ದು, ಅವರ ಸಮಾನತೆಯ ಹಕ್ಕುಗಳಿಗೆ ಮನೆಯಿಂದಲೇ ಸ್ಫೂರ್ತಿ ತುಂಬ ಬೇಕು. ಗ್ರಾಮೀಣ ವಿದ್ಯಾರ್ಥಿಗಳು ಸಾಧಕರಾಗಲು ಎಲ್ಲಾ ಅರ್ಹತೆಗಳನ್ನು ಹೊಂದಿದ್ದು, ಅದರಲ್ಲೂ ಗ್ರಾಮೀಣ ಹೆಣ್ಣು ಮಕ್ಕಳಲ್ಲಿ ಆತ್ಮಸ್ಥೈರ್ಯ, ಅಂತಃ ಶಕ್ತಿ ಮತ್ತು ಆತ್ಮಾಭಿಮಾನ ಹೆಚ್ಚಾಗಿರುತ್ತದೆ. ಯಾವುದೇ ಕಾರಣಕ್ಕೂ ಹೆಣ್ಣು ಮಕ್ಕಳು ಸಾಧನೆಯ ಹಾದಿಯಲ್ಲಿ ಇಟ್ಟ ಹೆಜ್ಜೆಯನ್ನು ಹಿಂತೆಗೆಯಬಾರದು. 21 ನೇ ಶತಮಾನದಲ್ಲಿ ಸಾಧನೆಗೆ ವಿಪುಲ ಅವಕಾಶಗಳಿದ್ದು, ಅವುಗಳನ್ನೇ ಅಸ್ತ್ರಗಳನ್ನಾಗಿ ಬಳಸಿಕೊಂಡು ಎತ್ತರಕ್ಕೇರಬೇಕು ಎಂದು ವಿದ್ಯಾರ್ಥಿಗಳಲ್ಲಿ ಸ್ಫೂರ್ತಿ, ಉತ್ಸಾಹ ತುಂಬಿದರು.

ಈ ಕಾರ್ಯಕ್ರಮದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜಕ ಜಿ.ಎಸ್ ವೆಂಕಟೇಶ್, ಮಹಿಳಾ ಸಬಲೀಕರಣ ಸಮಿತಿ ಅಧಕ್ಷೆ ಟಿ. ಸಿ ತನುಜಾ, ಸದಸ್ಯೆ ನಿರ್ಮಲ ಹಿರೇಮಠ ಹಾಗೂ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಭೋದಕ ವರ್ಗ ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಅಂತಾರಾಷ್ಟ್ರೀಯ ಮಟ್ಟದ ಮಿಸಸ್ ಅಂಡ್ ಮಿಸ್ಟರ್ ಗ್ಯಾಲಕ್ಸಿ ಸ್ಪರ್ಧೆ

# ಶಿವಪುರ ಗಿರೀಶ್‌ಗೆ 1 ಚಿನ್ನ, 2 ಕಂಚಿನ ಪದಕ

**ಚಾಮರಾಜನಗರ:** ಯುನೈಟೆಡ್ ವಲ್ಡ್ ಸ್ಪೋರ್ಟ್ಸ್ ಫಿಟ್ ನೆಸ್ ಫೆಡರೇಶನ್ ವತಿಯಿಂದ ಇತ್ತೀಚಿಗೆ ಥೈಲ್ಯಾಂಡ್‌ನ ಸಿರಾಚಾಪಾಟಿಯಾದಲ್ಲಿ ನಡೆದ ಅಂತಾರಾಷ್ಟ್ರೀಯ ಮಟ್ಟದ ಮಿಸಸ್ ಅಂಡ್ ಮಿಸ್ಟರ್ ಗ್ಯಾಲಕ್ಸಿ 2024ರ ಸ್ಪರ್ಧೆಯಲ್ಲಿ ತಾಲೂಕಿನ ಶಿವಪುರ ಗ್ರಾಮದ ಗಿರೀಶ್ ಭಾಗವಹಿಸಿ ಉತ್ತಮ ಪ್ರದರ್ಶನ ನೀಡುವ ಮೂಲಕ ಒಂದು ಚಿನ್ನದಪದಕ, 2 ಕಂಚಿನ ಪದಕ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಶಿವಪುರ ಗ್ರಾಮದ ಜೂಂಜೇಗೌಡ, ಚಂದ್ರಮ್ಮ ದಂಪತಿ ಮತ್ರರಾಗಿದ್ದು, ಆಟೋ ಚಾಲಕರಾಗಿದ್ದು, ನಗರದ ಚಾಮರಾಜ ಚಿಮ್ ನಲ್ಲಿ ತರಬೇತಿ ಪಡೆದು ಅಂತಾರಾಷ್ಟ್ರೀಯ ಮಟ್ಟದ ಮಿಸಸ್ ಅಂಡ್ ಮಿಸ್ಟರ್ ಗ್ಯಾಲಕ್ಸಿ 2024ರ ಸ್ಪರ್ಧೆಯಲ್ಲಿ ಭಾಗವಹಿಸಿ ಸಾಧನೆ ಮಾಡಿದ್ದಾರೆ.

ಸಂಘದ ಅಧ್ಯಕ್ಷ ಜಯಕುಮಾರ್ ಮಾತನಾಡಿ, ಗ್ರಾಮೀಣ ಪ್ರತಿಭೆಯಾದ ಶಿವಪುರ ಗ್ರಾಮದ ಗಿರೀಶ್, ಚಾಮರಾಜ ಜಿಮ್ ಮಾಲೀಕ, ತರಬೇತು ಪ್ರವೀಣ್ ಅವರು ಥೈಲ್ಯಾಂಡ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಮಟ್ಟದ ಮಿಸ್ಟರ್ ಗ್ಯಾಲಕ್ಸಿ 2024ರ ಸ್ಪರ್ಧೆಯಲ್ಲಿ ಭಾಗವಹಿಸಿ ಒಂದು ಚಿನ್ನ, ಎರಡು ಕಂಚಿನ ಪದಕ ಪಡೆಯುವ ಮೂಲಕ ಗಡಿಜಿಲ್ಲೆಯ ಹಿರಿಮೆ, ಕೀರ್ತಿ ಹೆಚ್ಚಿಸಿದ್ದಾರೆ. ಸಾಧನೆ ಸುಲಭದ ಮಾತಲ್ಲ. ಅವರ ಸಾಧನೆ ನಿಜಕ್ಕೂ ಹೆಮ್ಮೆಪಡುವಂತಹದ್ದು

ಸನ್ಮಾನ : ನಗರದ ಭ್ರಮರಾಂಬ ಬಡಾವಣೆಯಲ್ಲಿರುವ



ಚಾಮರಾಜ ಜಿಮ್‌ನಲ್ಲಿ ಜಿಲ್ಲಾ ಉಪ್ಪಾರ ಯುವಕರ ಸಂಘದ ವತಿಯಿಂದ ಗಿರೀಶ್ ಮತ್ತು ತರಬೇತಿದಾರ, ಜಿಮ್ ಮಾಲೀಕ ಪ್ರವೀಣ್ ಅವರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿದ ಗಿರೀಶ್ ಮಾತನಾಡಿ, ಅಂತಾರಾಷ್ಟ್ರೀಯ ಮಟ್ಟದ ಮಿಸಸ್ ಅಂಡ್ ಮಿಸ್ಟರ್ ಗ್ಯಾಲಕ್ಸಿ ಸ್ಪರ್ಧೆಯಲ್ಲಿ 13 ದೇಶಗಳಿಂದ ಭಾಗವಹಿಸಿದ್ದು ಭಾರತದಿಂದ 48 ಮಂದಿ ಭಾಗವಹಿಸಿದ್ದು, ಕರ್ನಾಟಕದಿಂದ 8 ಮಂದಿ ಭಾಗವಹಿಸಿದು. ನಮ್ಮ ತಂಡದಲ್ಲಿ 4 ನಾಲ್ಕು ಮಂದಿ ಭಾಗವಹಿಸಿದ್ದು ಅದರಲ್ಲಿ ನಾನು ನ್ಯಾಚುರಲ್ ದೇಹದಾರ್ಢ್ಯಯಲ್ಲಿ ಒಂದು ಚಿನ್ನದ ಪದಕ, 2 ಕಂಚಿಕ ಪದಕ ಪಡೆದಿದ್ದೇವೆ ಇದು ನನಗೆ ತುಂಬಾ ಖುಷಿಯಾಗಿದೆ. ನನ್ನ ಈ ಸಾಧನೆಗೆ ನನ್ನ ಪತ್ನಿ ಸೌಮ್ಯ, ಗುರುಗಳಾದ ಪ್ರವೀಣ್‌ರವರು ಕಾರಣ ಎಂದರು.

ಒಳ್ಳೆಯ ಗುರುಗಳು ಸಿಕ್ಕಿದ್ದರಿಂದ ದೇಹದಾರ್ಢ್ಯಯಲ್ಲಿ ಸಾಧನೆ ಮಾಡಲು ಸಾಧ್ಯವಾಯಿತು. ಎಲ್ಲ ಈವೆಂಟ್‌ಗೆ ಹೋಗುತ್ತಿದ್ದೇವೆ. ನಮ್ಮ ಗುರುಗಳು ಕರೆದುಕೊಂಡು ಹೋಗುತ್ತಿದ್ದರು. ನನ್ನಲ್ಲಿರುವ ಅಶಕ್ತಿ ನೋಡಿ ಗುರುಗಳು ಒಳ್ಳೆಯ ಕೋಚಿಂಗ್ ಕೊಟ್ಟರು. ಎಲ್ಲ ರೀತಿಯಲ್ಲಿ ಬೆಂಬಲವಾಗಿ ನಿಂತರು. ನಿತ್ಯ ಬೆಳಿಗ್ಗೆ, ಸಂಜೆ 3 ಗಂಟೆಕಾಲ ಬಾಡಿವರ್ಕ್ ಔಟ್ ಮಾಡುತ್ತಿದ್ದೆ ಎಂದರು.

ಒಂದು ಚಿನ್ನ, 2 ಕಂಚಿನ ಪದಕ ಹೆಮ್ಮೆಯಪಡುವಂಹದ್ದು: ಚಾಮರಾಜ ಜಮ್ ಮಾಲೀಕ, ತರಬೇತುದಾರ ಪ್ರವೀಣ್ ಮಾತನಾಡಿ, ??ರೀಶ್ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ಒಂದು ಚಿನ್ನ, 2 ಕಂಚಿನ ಪದಕ ಪಡೆದಿರುವುದು ಹೆಮ್ಮೆಯ ವಿಷಯವಾಗಿದ್ದು, ತುಂಬಾ ಸಂತಸವಾಗಿದೆ. ದೇಹದಾರ್ಢ್ಯಯಲ್ಲಿ ತ್ಯಾಗ ಮಾಡಬೇಕು ತಪಸ್ಸು ತರ ಒಂದೇ ಕಡೆ ಜ್ಞಾನಕೊಟ್ಟು ಮಾಡಬೇಕು ಮಾಡಿದಾಗ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದರು. ಕಾರ್ಯಕ್ರಮದಲ್ಲಿ ದೇಹದಾರ್ಢ್ಯ ಪಟುಗಳು ಹಾಜರಿದ್ದರು.

# ಸಂಜೆ ಟಿಪ್ಸ್



## ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ಶಾಖೆ ಆರಂಭ

ಭಾರತದ ಅತಿದೊಡ್ಡ ಸಣ್ಣ ಹಣಕಾಸು ಬ್ಯಾಂಕ್ ಆಗಿರುವ ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ಬೆಂಗಳೂರಿನ ಸಂಜಯನಗರದಲ್ಲಿ ಹೊಸ ಶಾಖೆಯನ್ನು ಆರಂಭಿಸಿದೆ. ಇದು ಕರ್ನಾಟಕದಲ್ಲಿ ಬ್ಯಾಂಕಿನ 12ನೇ ಶಾಖೆಯಾಗಿದ್ದು, ಬೆಂಗಳೂರಿಗೆ ಕೊಡುಗೆನೀಡಲು ಮತ್ತು ದಕ್ಷಿಣ ಭಾರತದ ಗ್ರಾಹಕರಿಗೆ ತಂತ್ರಜ್ಞಾನ ಆಧಾರಿತ ಹಣಕಾಸು ಸೇವೆಗಳನ್ನು ಒದಗಿಸುವಲ್ಲಿ ಬ್ಯಾಂಕಿಗೆ ಇರುವಬದ್ಧತೆಯನ್ನು ಸೂಚಿಸುತ್ತದೆ. ಮಾಜಿ ಮುಖ್ಯಮಂತ್ರಿ ಮತ್ತು ಸಂಸತ್ ಸದಸ್ಯ ಡಿ.ವಿ. ಸದಾನಂದಗೌಡ ಹೊಸ ಶಾಖೆಯನ್ನು ಉದ್ಘಾಟಿಸಿದರು. ಬ್ಯಾಂಕಿನ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಕರ್ನಾಟಕ ಹೊಂದಿರುವ ಸದೃಢ ಅರ್ಥವ್ಯವಸ್ಥೆಯಿಂದಾಗಿ ಠೇವಣಿ ಮತ್ತು ಸಾಲ ಸೇವೆಗಳಿಗೆ ಅಪಾರ ಅವಕಾಶವಿದೆ. ಬೆಂಗಳೂರುನಗರವೊಂದೇ ಕರ್ನಾಟಕದ ಒಟ್ಟು ಠೇವಣಿಗಳಲ್ಲಿ 9 ಲಕ್ಷ ಠೇವಣಿ ಹೊಂದಿದ್ದು, ದಕ್ಷಿಣ ಭಾರತದಲ್ಲಿ ಎಯು ಎಸ್‌ಎಫ್‌ಬಿ ಹೊಂದಿರುವವಿಸ್ತರಣಾ ಕಾರ್ಯತಂತ್ರದ ಕೇಂದ್ರಸ್ಥಾನವಾಗಿದೆ. ಉತ್ತಮ ಮೂಲಸೌಕರ್ಯ, ವಿಲಾಸಿ ವಸತಿ ಯೋಜನೆಗಳು, ಗುಣಮಟ್ಟದ ಶಿಕ್ಷಣಸಂಸ್ಥೆಗಳು ಮತ್ತು ಆರೋಗ್ಯ ಸೇವೆಗಳ ಲಭ್ಯತೆಯಿಂದಾಗಿ ಸಂಜಯನಗರ ಉತ್ತಮ ಸ್ಥಾನವಾಗಿದೆ.ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಅವರು ''ಬೆಂಗಳೂರು ಉದ್ಯಮ ಕೇಂದ್ರವಾಗಿದ್ದು, ರಾಜ್ಯದ ಮತ್ತು ರಾಷ್ಟ್ರದ ಅರ್ಥವ್ಯವಸ್ಥೆಗೆ ಗಣನೀಯ ಕೊಡುಗೆ ನೀಡುತ್ತಿದೆ. ಹಲವು ವರ್ಷಗಳಿಂದ ಎಯು ಎಸ್‌ಎಫ್‌ಬಿ ಗ್ರಾಹಕಕೇಂದ್ರಿತ ಬ್ಯಾಂಕಿಂಗ್ ಪರಿಹಾರಗಳನ್ನು ಒದಗಿಸುತ್ತಿರುವುದಕ್ಕೆ ಹೆಸರಾಗಿದೆ. ಈ ಶಾಖೆಯಿಂದಾಗಿ ಸಂಜಯನಗರದ ನಿವಾಸಿಗಳುಪ್ರಯೋಜನ ಪಡೆಯಲಿದ್ದಾರೆ. ಉತ್ತಮ ಬ್ಯಾಂಕಿಂಗ್ ಸೇವೆ ಹೆಚ್ಚು ಪ್ರಮಾಣದಲ್ಲಿ ಉದ್ಯಮಿಗಳು ಮತ್ತು ಜನಸಾಮಾನ್ಯರಿಗೆದೊರೆಯುತ್ತಿದ್ದರೆ, ರಾಜ್ಯ ಇನ್ನಷ್ಟು ಸಂಪತ್ಭರಿತವಾಗುವುದರಲ್ಲಿ ಸಂಶಯವಿಲ್ಲ'' ಎಂದು ಹೇಳಿದರು.ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕಿನ ಎಕ್ಸಿಕ್ಯೂಟಿವ್ ಡೈರೆಕ್ಟರ್ ಉತ್ತಮ್ ಟಿಬ್ರೆವಾಲ್ ಮಾತನಾಡಿ ''ಗ್ರಾಹಕ ಕೇಂದ್ರಿತ ಬ್ಯಾಂಕ್‌ಆಗಿ ನಾವು ಬೆಂಗಳೂರಿನ ಗ್ರಾಹಕರಿಗೆ ದೀರ್ಘಾವಧಿ ಸಂಬಂಧ ಉಳಿಸಿಕೊಳ್ಳುವ ದೃಷ್ಟಿಯಿಂದಲೇ ಸೇವೆ ಒದಗಿಸುತ್ತಿದ್ದೇವೆ.ಎಂದರು.

## ಹೆಸರು ಬೇಳೆ ಹಲ್ವಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಹೆಸರು ಬೇಳೆ - 1/2, ಬೆಲ್ಲ - 1/2 ಬಟ್ಟಲು, ಹಾಲು - 2 ಬಟ್ಟಲು, ತುಪ್ಪ 1/2 ಬಟ್ಟಲು, ಗೋಡಂಬಿ- ಸ್ವಲ್ಪ, ದ್ರಾಕ್ಷಿ-ಸ್ವಲ್ಪ, ಬಾದಾಮಿ-ಸ್ವಲ್ಪ, ಏಲಕ್ಕಿ ಪುಡಿ - 1/2 ಚಮಚ

### ಮಾಡುವ ವಿಧಾನ

ಮೊದಲು ಹೆಸರು ಬೇಳೆಯನ್ನು ತೆಗೆದುಕೊಂಡು ಎರಡು ಬಾರಿ ಚೆನ್ನಾಗಿ ತೊಳೆದು ಕಾಟನ್ ಬಟ್ಟೆಯ ಮೇಲೆ ಹಾಕಿ ನೀರು ಹೋಗುವಂತೆ ಮಾಡಿ.ನಂತರ ಅದನ್ನ ಬಾಣಲೆಗೆ ಹಾಕಿ ಸಣ್ಣ ಉರಿಯಲ್ಲಿ ಹುರಿದುಕೊಳ್ಳಿ. ಅದರ ಹಸಿ ವಾಸನೆ ಹೋಗಿ ಕಂದು ಬಣ್ಣಕ್ಕೆ ತಿರುಗುತ್ತಿದ್ದಂತೆ ಉರಿಯನ್ನ ಆರಿಸಿ. ಹುರಿದ ಹೆಸರುಕಾಳನ್ನು ಮಿಕ್ಸರ್ ಜಾರ್ಗೆ ಹಾಕಿ ಪುಡಿ ಮಾಡಿಕೊಳ್ಳಿ.ಇದರ ಜೊತೆಜೊತೆಗೇ ಮತ್ತೊಂದು ಪಾತ್ರೆಯಲ್ಲಿ ಅರ್ಧ ಬಟ್ಟಲು ಬೆಲ್ಲವನ್ನ ತೆಗೆದುಕೊಂಡು ಅದಕ್ಕೆ ಸ್ವಲ್ಪ ನೀರು ಸಿಂಪಡಿಸಿ ಸಣ್ಣ ಉರಿಯ ಮೇಲಿಟ್ಟು ಬೆಲ್ಲದ ಸಿರಪ್ ತಯಾರಿಸಿಟ್ಟುಕೊಳ್ಳಿ. ಈಗ ಸ್ವಲ್ಪ ದಪ್ಪ ತಳದ ಬಾಣಲೆಯನ್ನ ತೆಗೆದುಕೊಂಡು ಅದಕ್ಕೆ ಒಂದು ಟೇಬಲ್ ಸ್ಪೂನ್ ತುಪ್ಪ ಹಾಕಿ ಗೋಡಂಬಿ, ದ್ರಾಕ್ಷಿ ಹಾಗೂ ಬಾದಾಮಿ ಚೂರುಗಳನ್ನು ಹಾಕಿ ಕೆಂಪಗೆ ಹುರಿದು ತೆಗೆದಿಟ್ಟುಕೊಳ್ಳಿ.ನಂತರ ಬಾಣಲೆಯಲ್ಲಿ ಉಳಿದಿದ್ದ ತುಪ್ಪಕ್ಕೆ ಇನ್ನೊಂದು ಟೇಬಲ್ ಸ್ಪೂನ್ ತುಪ್ಪ ಸೇರಿಸಿ ಅದಕ್ಕೆ ಹೆಸರು ಬೇಳೆಯ ಹಿಟ್ಟನ್ನು ಹಾಕಿ ಹುರಿಯಿರಿ ತುಪ್ಪದೊಂದಿಗೆ ಸೇರಿ ಹೆಸರು ಬೇಳೆಯ ಪುಡಿ ಮೆತ್ತಗಾಗುತ್ತಿದ್ದಂತೆ ಅದಕ್ಕೆ ಬಿಸಿ ಹಾಲನ್ನು ಹಾಕಿ ಚನ್ನಾಗಿ ಕಲಕಿ. ಹಾಲಿನಲ್ಲಿ ಹೆಸರು ಬೇಳೆಯ ಹಿಟ್ಟು ಬೇಯುತ್ತಿದ್ದಂತೆ ಉಳಿದ ತುಪ್ಪ ಮತ್ತು ಬೆಲ್ಲದ ಸಿರಪ್ನ್ನು ಸೇರಿಸಿ ಸಣ್ಣ ಉರಿಯಲ್ಲಿ ಸರಿಯಾಗಿ ತಿರುವಿ.ಮಿಶ್ರಣ ಸರಿಯಾಗಿ ಬೆಂದಾಗ ಅದು ತುಪ್ಪ ಬಿಡುತ್ತದೆ. ಆಗ ಹಲ್ವಾ ಸಿದ್ಧಗೊಂಡಿದೆ ಎಂದು ಅರ್ಥ.

## ದಾಖಲೆ ಬರೆದ ರಶ್ಮಿಕಾ ಮಂದಣ್ಣ



ಪ್ಯಾನ್ ಇಂಡಿಯಾ ಸ್ಟಾರ್ ಆಗಿ ಮಿಂಚುತ್ತಿರುವ ರಶ್ಮಿಕಾ ಮಂದಣ್ಣ ಸಧ್ಯ ಬಾಲಿವುಡ್ನ ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಪುಷ್ಪಾ ಸಿನಿಮಾದಿಂದ ಕ್ರೇಜ್ ಗಿಟ್ಟಿಸಿಕೊಂಡ ಸುಂದರಿ ನಟಿಸಿರುವ ಎಲ್ಲಾ ಚಿತ್ರಗಳು ಸೂಪರ್ ಹಿಟ್ ಆಗುತ್ತಿವೆ.

ಇದರ ನಡುವೆ ಸಧ್ಯ ನಾಷುನಲ್ ಕ್ರಶ್ ವಿಶಿಷ್ಠ ಗೌರವಕ್ಕೆ ಪಾತ್ರರಾಗಿದ್ದಾರೆ.

ಹೌದು.. ಇತ್ತೀಚಿಗೆ ರಶ್ಮಿಕಾ ಮಂದಣ್ಣ ?ಕ್ರಾಂಚಿರಾ ರೋಲ್ ಅನಿಮೆ ಅವಾಡ್ರ್? (ಅಡಿಣಟಿಥಿಧಿ ಖಿಂಟಟ ಂಟಿಟಜ ಂತಿಚಿಡಿಜ) ಅಂಗವಾಗಿ ಭಾರತದ ಪರವಾಗಿ ಜಪಾನ್ನ ಟೋಕಿಯೊಗೆ ಹೋಗಿದ್ದರು. ಜಾಗತಿಕ ಕಾರ್ಯಕ್ರಮವಾಗಿ ನಡೆಯುತ್ತಿರುವ ಈ ಪ್ರಶಸ್ತಿ ಸಮಾರಂಭದಲ್ಲಿ ರಶ್ಮಿಕಾ ಭಾರತವನ್ನು ಪ್ರತಿನಿಧಿಸಿದ್ದರು.

ಈ ಗೌರವಕ್ಕೆ ಪಾತ್ರರಾದ ಏಕೈಕ ನಟಿಯಾಗಿ ರಶ್ಮಿಕಾ ಹೊರಹೊಮ್ಮಿದ್ದಾರೆ. ರಶ್ಮಿಕಾ ಮಂದಣ್ಣ ಬ್ರಾಂಡ್ ಅಂಬಾಸಿಡರ್ ಆಗಿರುವ ಜಪಾನೀಸ್ ಫ್ಯಾಶನ್ ಬ್ರ್ಯಾಂಡ್ ಒನಿಟ್ಸುಕಾ ಟೈಗರ್, ಮಿಲನ್ ಫ್ಯಾಶನ್ ವೀಕ್ನಲ್ಲಿ ಟಾಪ್ 10 ಬ್ರ್ಯಾಂಡ್ಗಳಲ್ಲಿ ಸ್ಥಾನ ಪಡೆದುಕೊಂಡಿದೆ.

ಮಾಧ್ಯಮದ ಪ್ರಕಾರ, ಒನಿಟ್ಸುಕಾ ಟೈಗರ್ ಫ್ಯಾಷನ್ ಬ್ರ್ಯಾಂಡ್ 75 ಲಕ್ಷ ಡಾಲರ್ ಮೌಲ್ಯವನ್ನು ಹೊಂದಿದೆ. ಕಳೆದ ತಿಂಗಳು 20ರಿಂದ 26ರವರೆಗೆ ಇಟಲಿಯ ಮಿಲಾನ್ ನಲ್ಲಿ ನಡೆದ ಫ್ಯಾಷನ್ ವೀಕ್ ನಲ್ಲಿ ರಶ್ಮಿಕಾ ಮಂದಣ್ಣ ರ್ಯಾಂಪ್ ವಾಕ್ ಮಾಡಿದ್ದರು. ರಶ್ಮಿಕಾ ಈ ಫ್ಯಾಷನ್ ಶೋನಲ್ಲಿ ಭಾಗವಹಿಸುವ ಮೂಲಕ ಒನಿಟ್ಸುಕಾ ಟೈಗರ್ ಬ್ರ್ಯಾಂಡ್ ಅನ್ನು ಪ್ರಚಾರ ಮಾಡಿದರು.

ಸದ್ಯ ರಶ್ಮಿಕಾ ಮಂದಣ್ಣ ಪುಷ್ಪಾ 2, ದಿ ಗರ್ಲ್ ಫ್ರೆಂಡ್ ಸಿನಿಮಾಗಳ ಜೊತೆಗೆ ಹಿಂದಿ ಪ್ರಾಜೆಕ್ಟ್ ಒಂದರಲ್ಲಿ ಬ್ಯುಸಿಯಾಗಿದ್ದಾರೆ. ಅಲ್ಲದೆ, ಇನ್ಸ್ಟಾಗ್ರಾಮ್ನಲ್ಲಿ ರಶ್ಮಿಕಾ ಮಂದಣ್ಣ 40 ಮಿಲಿಯನ್ಗಿಂತಲೂ ಹೆಚ್ಚು ಫಾಲೋವರ್ಸ್‌ಗಳನ್ನು ಹೊಂದಿದ್ದಾರೆ.



## ಪಾಮ್ ಆಯಿಲ್, ಪೌಷ್ಟಿಕಾಂಶ ಹೊಂದಾಣಿಕೆ

### ಹೆಲ್ತ್ ಟಿಪ್ಸ್



ಪಾಮ್ ಆಯಿಲ್ ಒಂದು ವ್ಯಾಪಕವಾಗಿ ಬಳಸಲ್ಪಡುವ ಮತ್ತು ವೈವಿಧ್ಯಮಯ ಅಡುಗೆ ಎಣ್ಣೆ ಆಗಿದೆ. ಅದು ಅದರ ಅಡುಗೆ ಬಳಕೆಗಳಿಗೆ ಮಾತ್ರವೇ ಹೆಸರು ಗಳಿಸಿಲ್ಲ. ಬದಲಾಗಿ ಅದರಲ್ಲಿರುವ ಹೇರಳವಾದ ಪೌಷ್ಟಿಕಾಂಶಗಳಿಂದಾಗಿಯೂ ಮನ್ನಣೆ ಗಣಿಸಿದೆ. ನಮ್ಮ ಇಷ್ಟದ ಖಾದ್ಯಗಳ ರುಚಿಯನ್ನು ಹೆಚ್ಚಿಸುವುದಲ್ಲದೆ ಪಾಮ್ ಆಯಿಲ್ ನಮ್ಮ ಯೋಗಕ್ಷೇಮಕ್ಕೆ ಅಪಾರ ಕೊಡುಗೆ ನೀಡುವ ಪೋಷಕಾಂಶಗಳ ವಿಶಿಷ್ಟ ಮಿಶ್ರಣವನ್ನು ಹೊಂದಿದೆ. ಪಾಮ್ ಆಯಿಲ್ ಅದರ ಸಮತೋಲಿತ ಫ್ಯಾಟಿ ಆಸಿಡ್ಸ್ ಸಂಯೋಜನೆಗೂ ಹೆಸರುವಾಸಿಯಾಗಿದೆ. ಇದು ಸ್ಯಾಚುರೇಟೆಡ್(ಅತ್ಯಧಿಕ ಸಂಖ್ಯೆಯ ಹೈಡ್ರೊಜನ್ ಪರಮಾಣುಗಳಿಂದ ಕೂಡಿದ) ಮತ್ತು ಅನ್ ಸ್ಯಾಚುರೇಟೆಡ್ ಕೊಬ್ಬಿನ ಮಿಶ್ರಣವನ್ನು ಒಳಗೊಂಡಿದೆ. ಪಾಮ್ ಆಯಿಲ್ ನಿಂದ ಪಡೆದ ಘನ ಕೊಬ್ಬು ಆರೋಗ್ಯಕ್ಕೆ ಕೊಡುಗೆ ನೀಡುತ್ತದೆ. ಜೊತೆಗೆ ಅದು ಹೈಡ್ರೋಜಿನೇಷನ್ ಪ್ರಕ್ರಿಯೆಯನ್ನು ತಪ್ಪಿಸುತ್ತದೆ. ತೈಲಗಳ ಭಾಗಶಃ ಹೈಡ್ರೋಜೀನೇಷನ್ ನಿಂದಾಗಿ ಟ್ರಾನ್ಸ್ ಫ್ಯಾಟಿ ಆಸಿಡ್ಸ್ (ಟಿಎಫ್ಎ), ಸ್ಯಾಚುರೇಟೆಡ್ ಫ್ಯಾಟಿ ಆಸಿಡ್ಸ್ ಮತ್ತು ಸಿಸ್-ಫ್ಯಾಟಿ ಆಸಿಡ್ಸ್ ಮಾರ್ಪಾಡುಗಳ ಸೃಷ್ಟಿ ಆಗಬಹುದಾಗಿದೆ. ಹಲವಾರು ವೈಜ್ಞಾನಿಕ ಅಧ್ಯಯನಗಳು ಟಿಎಫ್‌ಎಗಳು ಮತ್ತು ಸ್ತನ ಕ್ಯಾನ್ಸರ್, ಕೊಲೊನಿಕ್ ಕ್ಯಾನ್ಸರ್ ಮತ್ತು ಹೃದ್ರೋಗದಂತಹ ಪರಿಸ್ಥಿತಿಗಳ ಮಧ್ಯೆ ಸಂಬಂಧ ಇದೆ ಎಂದು ಸಾರಿವೆ. ಅಲ್ಲದೇ, ಟಿಎಫ್‌ಎಗಳು ಟೈಪ್ 2 ಮಧುಮೇಹ ಮತ್ತು ನವಜಾತ ಶಿಶುಗಳ ಮೆದುಳಿನ ಬೆಳವಣಿಗೆಯ ಮೇಲಿನ ಪರಿಣಾಮಕ್ಕೂ ಕಾರಣವಾಗುತ್ತದೆ ಎನ್ನಲಾಗಿದೆ.

ಪಾಮ್ ಆಯಿಲ್, ಟೊಕೊಟ್ರಿಯೆನಾಲ್‌ಗಳು ಮತ್ತು ಟೊಕೊಫೆರಾಲ್‌ಗಳಿಂದ ಸಮೃದ್ಧವಾಗಿದೆ ಮತ್ತು ಇವು ಜೊತೆಯಾಗಿ ವಿಟಮಿನ್ ಇ ಅನ್ನು ಒದಗಿಸುತ್ತದೆ. ಪಾಮ್ ಆಯಿಲ್ ನಲ್ಲಿರುವ ವಿಟಮಿನ್ ಇ, ನೈಸರ್ಗಿಕವಾಗಿ ವಯಸ್ಸಾದಾಗ ಬೆಳವಣಿಗೆ ಪ್ರಕ್ರಿಯೆ ನಿಧಾನಗೊಳ್ಳುವಾಗ ನಿರ್ದಿಷ್ಟ ದೀರ್ಘಕಾಲದ ಕಾಯಿಲೆಗಳ ರಕ್ಷಣೆಯಲ್ಲಿ ಮಹತ್ತರ ಪಾತ್ರ ವಹಿಸುತ್ತದೆ ಮತ್ತು ದೇಹದ ಜೀವಕೋಶಗಳನ್ನು ಆಕ್ಸಿಡೇಟಿವ್ ಒತ್ತಡದಿಂದ ರಕ್ಷಿಸುತ್ತದೆ. ರೋಗನಿರೋಧಕ ಶಕ್ತಿಯನ್ನು ಬಲಪಡಿಸುವುದು ಮತ್ತು ಚರ್ಮದ ಆರೋಗ್ಯವನ್ನು ಬೆಳೆಸುವ ಕಾರ್ಯವನ್ನು ಮಾಡುತ್ತದೆ. ನಿರ್ದಿಷ್ಟವಾಗಿ, ಅನೇಕ ಆರೋಗ್ಯ ಅಧ್ಯಯನಗಳು ಪಾಮ್ ಆಯಿಲ್ ನಲ್ಲಿರುವ ಟೊಕೊಟ್ರಿನಾಲ್ ಗಳ ಪ್ರಯೋಜನವನ್ನು ಹೇಳಿವೆ ಮತ್ತು ಪಾಮ್ ಆಯಿಲ್ ಅನ್ನು ಡಯಟ್ ನಲ್ಲಿ ಬಳಸುವುದರಿಂದಾಗುವ ಸಂಭಾವ್ಯ ಉಪಯೋಗಗಳನ್ನು ತಿಳಿಸಿವೆ.

ಪಾಮ್ ಆಯಿಲ್ ಅತ್ಯಗತ್ಯ ಯಾಕೆಂದರೆ ಅದು ಕೊಬ್ಬಿನಾಮ್ಲಗಳು(ಫ್ಯಾಟಿ ಆಸಿಡ್) ಮತ್ತು ವಿವಿಧ ಫೈಟೊನ್ಯೂಟ್ರಿಯಂಟ್ ಗಳನ್ನು ಒದಗಿಸುತ್ತದೆ. ಕೊಬ್ಬಿನಾಮ್ಲಗಳು ದೇಹದ ವಿವಿಧ ಭಾಗಗಳಲ್ಲಿನ ಜೀವಕೋಶ ಪೊರೆಗಳನ್ನು ನಿರ್ಮಿಸಲು ಸಹಾಯ ಮಾಡುತ್ತದೆ. ಫೈಟೊನ್ಯೂಟ್ರಿಯೆಂಟ್‌ಗಳು ನಮ್ಮ ದೇಹಕ್ಕೆ ಉತ್ಕರ್ಷಣ ನಿರೋಧಕ(ಆಂಟಿ ಇನ್ ಫ್ಲಮೇಟರಿ) ಮತ್ತು ಆಂಟಿ ಆಕ್ಸಿಡೆಂಟ್ ಅಂಶಗಳನ್ನು ಒದಗಿಸುತ್ತವೆ.

ಇತ್ತೀಚಿನ ಬೆಳವಣಿಗೆಯು ಪಾಮ್ ಆಯಿಲ್ ಉತ್ಪಾದನೆ ಸಮಯದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯದಿಂದ ನೀರಿನಲ್ಲಿ ಕರಗುವ ಆಂಟಿ ಆಕ್ಸಿಡೆಂಟ್ ಗಳ ಹೊರತೆಗೆಯುವಿಕೆ ಮತ್ತು ಸಾಂದ್ರತೆಯನ್ನು ಸಾಧ್ಯವಾಗಿಸಿದೆ. ಈ ತ್ಯಾಜ್ಯವು ಫೀನಾಲಿಕ್ ಆಸಿಡ್ ಗಳು ಮತ್ತು ಫ್ಲೇವನಾಯ್ಡ್ ಗಳಿಂದ ಪ್ರತ್ಯೇಕಿಸಲ್ಪಟ್ಟಿದೆ. ಈ ನೈಸರ್ಗಿಕ ಅಂಶಗಳ ಉಪಸ್ಥಿತಿಯು ಆಹಾರ ಮತ್ತು ನ್ಯೂಟ್ರಾಸ್ಯುಟಿಕಲ್ ಉದ್ಯಮಗಳಿಗೆ ಸವಾಲುಗಳು ಮತ್ತು ಅವಕಾಶ ಎರಡನ್ನೂ ಒದಗಿಸುತ್ತದೆ.

## ಬೆಂಗಳೂರಿನಲ್ಲಿ ರೀಟೇಲ್ ಹಾಜರಿ ವಿಸ್ತರಿಸಿದ ಕಾಂಟಿನೆಂಟಲ್




ಪ್ರಮುಖ ಟೈರ್ ತಯಾರಕರಲ್ಲಿ ಒಂದಾಗಿರುವ ಕಾಂಟಿನೆಂಟಲ್ ಟೈರ್ಸ್ ಸಂಸ್ಥೆ ಬೆಂಗಳೂರಿನಲ್ಲಿ ಕಾಂಟಿನೆಂಟಲ್ ಎಲೈಟ್ ಡ್ರೈವ್ (ಸಿಇಡಿ) ಡೀಲರ್ ಸ್ಟೋರ್ ಆರಂಭಿಸಿದೆ. ಈ ಮಳಿಗೆಯು ವೈವಿಧ್ಯಪೂರ್ಣ ಶ್ರೇಣಿಯ ಪ್ರಮುಖ ಉತ್ಪನ್ನಗಳು, ಇತ್ತೀಚಿನ ಉಪಕರಣಗಳು ಮತ್ತು ತಂತ್ರಜ್ಞಾನಗಳನ್ನು ಒಳಗೊಂಡಿದೆ. ವೀಲ್ ಬ್ಯಾಲೆನ್ಸಿಂಗ್ ಎಂಡ್ ಅಲೈನ್‌ಮೆಂಟ್, ನೈಟ್ರೋಜನ್ ಫಿಲ್ಲಿಂಗ್, ಟೈರ್ ಬದಲಾವಣೆ ಮುಂತಾದ ಟೈರ್-ಸಂಬಂಧಿತ ಸೇವೆಗಳು ಮುಂತಾದ ಸೇವೆಗಳನ್ನು ಇಲ್ಲಿ ಸಾದರಪಡಿಸಲಾಗುವುದು. ಸಿಇಡಿ ಸ್ಟೋರ್ ಮೂಲಕ, ಕಾಂಟಿನೆಂಟಲ್ ಟೈರ್ಸ್ ಗ್ರಾಹಕರಿಗೆ ಮಾರಾಟದ ನಂತರದ ಗ್ರಾಹಕರ ಅನುಭವ ಮತ್ತು ಸೇವಾಸಂಪರ್ಕ ಹೆಚ್ಚಿಸುವ ಕ್ರಮ ಕೈಗೊಳ್ಳಲಾಗುತ್ತಿದೆ ಅಲ್ಲದೇ ಗ್ರಾಹಕರು ವೈವಿಧ್ಯಪೂರ್ಣ ಶ್ರೇಣಿಯ ಉತ್ಪನ್ನಗಳನ್ನು ಪಡೆಯುವ ಖಾತ್ರಿ ಮಾಡಿಕೊಳ್ಳುವ ಗುರಿಯನ್ನು ಸಂಸ್ಥೆ ಹೊಂದಿದೆ.

ನೂತನವಾಗಿ ಪ್ರಾರಂಭಿಸಲಾದ ಸಿಇಡಿ (ಕಾಂಟಿ ಎಲೈಟ್ ಡ್ರೈವ್) ಡೀಲರ್ ಸ್ಟೋರ್‌ನಲ್ಲಿ ವಿಸ್ತಾರವಾದ ಶ್ರೇಣಿಯ ಪ್ರಯಾಣಿಕ ವಾಹನಗಳ ಟೈರ್‌ಗಳನ್ನು ಪ್ರದರ್ಶಿಸಲಾಗಿದೆ. ಈ ಮಳಿಗೆ ಬೆಂಗಳೂರಿನ ಕಮ್ಮನಹಳ್ಳಿಯಲ್ಲಿದ್ದು, 1100 ಚದರ ಅಡಿ (ಚೆರ್ರಿ ಟೈರ್‌ಪಾರ್ಕ್) ವಿಸ್ತೀರ್ಣ ಹೊಂದಿದೆ. ನಗರದಲ್ಲಿ ಅತ್ಯಂತ ಕ್ಷಿಪ್ರ ಗತಿಯಲ್ಲಿ ಬೆಳೆಯುತ್ತಿರುವ ವಾಣಿಜ್ಯ ಕೇಂದ್ರವಾಗಿ ಈ ಪ್ರದೇಶ ಖ್ಯಾತಿ ಗಳಿಸಿದೆ.

ತನ್ನ ಭೌಗೋಳಿಕ ಹಾಜರಿಯನ್ನು ಗರಿಷ್ಠಗೊಳಿಸಲು ಸಂಸ್ಥೆ 'ಮಾರುಕಟ್ಟೆಯಲ್ಲಿ, ಮಾರುಕಟ್ಟೆಗಾಗಿ' ಎಂಬ ಮಾರ್ಗ ಹೊಂದಿದೆ. ಇದಕ್ಕೆ ತಕ್ಕಂತೆ ಕಾಂಟಿನೆಂಟಲ್ ಎಲೈಟ್ ಡ್ರೈವ್ ಸ್ಟೋರ್‌ಗಳ ಪ್ರಾದೇಶಿಕ ವಿಸ್ತರಣೆ ಕೈಗೊಳ್ಳಲಾಗುತ್ತಿದೆಯಲ್ಲದೇ ಉತ್ತಮ ಸೇವೆಗಳು ಮತ್ತು ಗ್ರಾಹಕರ ಅನುಭವ ಪೂರೈಸಲು ಸಂಸ್ಥೆ ಮುಂದಾಗಿದೆ. ಹೆಚ್ಚುವರಿಯಾಗಿ, ಸುರಕ್ಷತೆ, ಅನುಕೂಲ ಮತ್ತು ಉತ್ತಮ ಪ್ರದರ್ಶನ ಸಂಸ್ಥೆ ಹೊಂದಿರುವ ಬದ್ಧತೆಗೆ ಈ ಪ್ರದೇಶದಲ್ಲಿನ ನೂತನ ಮಳಿಗೆಗಳು ಮತ್ತಷ್ಟು ಹತ್ತಿರವಾಗಿಸುತ್ತವೆ.

ಬೆಂಗಳೂರು ನಗರದಲ್ಲಿ ಸಿಇಡಿ (ಕಾಂಟಿ ಎಲೈಟ್ ಡ್ರೈವ್) ಅಭಿಯಾನ ಸಂದರ್ಭದಲ್ಲಿ ಕಾಂಟಿನೆಂಟಲ್ ಟೈರ್ಸ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರು ಮತ್ತು ಬಿಎ ಟೈರ್ಸ್ ಎಪಿಎಸಿಯ ಏಷ್ಯಾ ವಲಯದ ಮುಖ್ಯಸ್ಥರಾದ ಶ್ರೀ ಸಮೀರ್ ಗುಪ್ತಾ ಅವರು, ಮಾತನಾಡಿ, ''ನಾವು ದಕ್ಷಿಣ ಭಾರತದ ಮಾರುಕಟ್ಟೆಯಲ್ಲಿ ನೂತನ (ಸಿಇಡಿ) ಕಾಂಟಿ ಎಲೈಟ್ ಡ್ರೈವ್ ಸ್ಟೋರ್ ಆರಂಭಿಸಲು ಹರ್ಷಿಸುತ್ತೇವೆ. ಈ ವಿಸ್ತಾರವಾದ ಮಹಾನಗರದಲ್ಲಿ ಹೆಚ್ಚುವರಿ ಸಿಇಡಿ ಸ್ಟೋರ್ ಜೊತೆಗೆ, ಸಮಗ್ರ ಖರೀದಿ ಅನುಭವ ನೀಡುವ ಮೂಲಕ ಹೆಚ್ಚು ಉತ್ತಮ ಗ್ರಾಹಕ ಅನುಭವ ನೀಡುವ ಭರವಸೆಯನ್ನು ನಾವು ಹೊಂದಿದ್ದೇವೆ. ಈ ಮಳಿಗೆಯಲ್ಲಿ ಗ್ರಾಹಕರ ವಾಹನದ ಪ್ರದರ್ಶನ ಮತ್ತು ಚಾಲನಾ ಅನುಭವ ಸುಧಾರಿಸುವ ಉತ್ಪನ್ನಗಳನ್ನು ಅವರ ಅಗತ್ಯಗಳನ್ನು ಆಧರಿಸಿ ಶಿಫಾರಸು ಮಾಡುತ್ತೇವೆ ಎಂದರು.

ಚೆರ್ರಿ ಏಜೆನ್ಸೀಸ್ ಪ್ರೈವೇಟ್ ಲಿಮಿಟೆಡ್‌ನ ಮಾಲೀಕರಾದ ರಾಜೇಶ್ ಅಗರ್‌ವಾಲ್ ಅವರು ಮಾತನಾಡಿ, ''ಕಾಂಟಿನೆಂಟಲ್ ಟೈರ್ಸ್ ಜೊತೆಗಿನ ನಮ್ಮ ಸಹಯೋಗದೊಂದಿಗೆ, ಬೆಂಗಳೂರಿನ ಕಮ್ಮನಹಳ್ಳಿಯಲ್ಲಿ ಸಿಇಡಿ (ಕಾಂಟಿ ಎಲೈಟ್ ಡ್ರೈವ್) ಸ್ಟೋರ್ ಸೇರ್ಪಡೆ ಮಾಡಲು ನಾವು ರೋಮಾಂಚನಗೊಂಡಿದ್ದೇವೆ. ಬ್ರಾಂಡ್ ಹೆಸರಿನಡಿ ನಮ್ಮ ವ್ಯಾಪಾರವನ್ನು ಬೆಳೆಸುವ ಗುರಿಯನ್ನು ನಾವು ಹೊಂದಿದ್ದೇವೆ. ಅಲ್ಲದೇ ನಮ್ಮ ಗ್ರಾಹಕರಿಗೆ ಪ್ರಮುಖ ಉತ್ಪನ್ನಗಳು ಮತ್ತು ಉತ್ಕೃಷ್ಟ ಮಾರಾಟದ ನಂತರದ ವಿತರಣಾ ಅನುಭವಗಳೊಂದಿಗೆ ಸೇವೆ ಸಲ್ಲಿಸಲು ಹರ್ಷಿಸುತ್ತೇವೆ'' ಎಂದರು. ಕಾಂಟಿನೆಂಟಲ್ ಟೈರ್ಸ್ ಸಂಸ್ಥೆಯು ತನ್ನ ರೀಟೇಲ್ ಕ್ಷೇತ್ರದ ಹೆಜ್ಜೆಗುರುತನ್ನು ವಿಸ್ತರಿಸುವ ಮತ್ತು ಗ್ರಾಹಕರೊಂದಿಗೆ ಆಳವಾದ ಬ್ರ್ಯಾಂಡ್ ಸಂವಾದಕ್ಕೆ ಅವಕಾಶ ಮಾಡಿಕೊಡುವತ್ತ ಗಮನ ಹರಿಸುವುದರೊಂದಿಗೆ 200ಕ್ಕೂ ಹೆಚ್ಚಿನ ಬ್ರಾಂಡ್ ಸ್ಟೋರ್‌ಗಳೊಂದಿಗೆ ದೇಶದಾದ್ಯಂತ ಸಿಇಡಿ ಸ್ಟೋರ್‌ಗಳ ಜಾಲವನ್ನು ವಿಸ್ತರಿಸಿದೆ.

## ಹರ್ಬಲ್ 'ಫೇಸ್ ಪ್ಯಾಕ್'

### ಬ್ಯೂಟಿ ಟಿಪ್ಸ್



ನಾವು ಅದೆಷ್ಟೋ ಬಾರಿ ಜಂಕ್ ಫುಡ್ ಗಳಾದ ಪೇಸ್ಟ್ರೀಸ್, ಪಾನಿ ಪುರಿ , ಪಿಜ್ಜಾ, ಬರ್ಗರ್ ಇವುಗಳನ್ನು ತಿನ್ನಬಾರದೆಂದು ಅಂದುಕೊಂಡಿರುತ್ತೀವಿ. ಯಾಕೆಂದರೆ ನಮ್ಮ ತ್ವಚೆಯ ಮೇಲೆ ಇವುಗಳು ತ್ವರಿತವಾದ ಪರಿಣಾಮ ಬೀರುವುದಲ್ಲದೆ, ಮರುದಿನ ಬೆಳಗ್ಗೆಯೇ ಮೊಡವೆಗಳು ಹಾಗೂ ಇನ್ನಿತರ ಸ್ಕಿನ್ ಅಲರ್ಜಿಗಳಿಗೆ ಕಾರಣವಾಗುತ್ತದೆ. ಆದರೆ ಇವುಗಳಿಂದ ತ್ವಚೆಯನ್ನು ರಕ್ಷಣೆ ಮಾಡುವ ಕೆಲವು ಹರ್ಬಲ್ ವಿಧಾನಗಳನ್ನು ಇಲ್ಲಿ ಹೇಳಲಾಗಿದೆ. ಮೊಡವೆ ಮುಕ್ತ ತ್ವಚೆ ನಿಮ್ಮದಾಗಿಸಿಕೊಳ್ಳಬೇಕೇ, ಹಾಗಿದ್ದರೆ ಈ ಸರಳವಾದ ವಿಧಾನಗಳನ್ನು ಅನುಸರಿಸಿ. ನೀಮ್, ಅಲೋವೆರಾ ಮತ್ತು ಸೌತೆಕಾಯಿ ಫೇಸ್ ಪ್ಯಾಕ್ : 4-5 ಬೇವಿನ ಎಲೆಗಳು, 1 ಟೇಬಲ್ ಚಮಚ ಅಲೋವೆರಾ ಜೆಲ್ ಮತ್ತು 1-2 ಸಣ್ಣ ಸೌತೆಕಾಯಿ ಚೂರುಗಳು, ಎಲ್ಲವನ್ನು ಸೇರಿಸಿ ಬ್ಲೆಂಡರ್ ನಲ್ಲಿ ಗ್ರೈಂಡ್ ಮಾಡಿಕೊಳ್ಳಿ. ನಂತರ ಈ ಪೇಸ್ಟನ್ನು ಮುಖಕ್ಕೆ ಲೇಪಿಸಿ. ಇದು ತ್ವಚೆಯ ಮೇಲಿನ ಕಲೆಗಳನ್ನು ಹೋಗಲಾಡಿಸುವುದಲ್ಲದೇ, ಚರ್ಮವನ್ನು ಮೃದುವಾಗಿಸುತ್ತದೆ.

**ಮುಲ್ತಾನಿ ಮಿಟ್ಟಿ:** ರೋಸ್ ವಾಟರ್ ಜೊತೆಗೆ ಈ ಮುಲ್ತಾನಿ ಮಿಟ್ಟಿಯನ್ನು ಮಿಕ್ಸ್ ಮಾಡಿ ಹಚ್ಚುವುದರಿಂದ ಮೊಡವೆ ಮತ್ತು ಅದರಿಂದಾದ ಕಲೆಗಳು ಕಡಿಮೆಯಾಗಿ, ತ್ವಚೆಯು ಹೊಳಪನ್ನು ಪಡೆದುಕೊಳ್ಳುತ್ತದೆ.

**ಆಮ್ಲ ಫ್ರೂಟ್ ಪೌಡರ್:** ಇದರಲ್ಲಿ ವಿಟಮಿನ್ ಸಿ ಅಂಶ ಹೇರಳವಾಗಿದ್ದು, ನಮ್ಮ ತ್ವಚೆಗೆ ಬಹಳ ಪ್ರಯೋಜನಕಾರಿಯಾಗಿದೆ. ಒಂದು ಚಮಚ ಆಮ್ಲ ಪೌಡರ್ ಅನ್ನು ನೀರಿನೊಂದಿಗೆ ಕಲಸಿ ಪೇಸ್ಟ್ ತಯಾರಿಸಿಕೊಳ್ಳಿ. ಇದನ್ನು ಮುಖಕ್ಕೆ ಲೇಪಿಸುವುದರಿಂದ ಚರ್ಮದ ಕಾಂತಿಯನ್ನು ಸುಧಾರಿಸಿ, ತ್ವಚೆಯಲ್ಲಿರುವ ಡೆಡ್ ಸೆಲ್ ಗಳನ್ನು ತೆಗೆದುಹಾಕುವಲ್ಲಿ ಸಹಾಯ ಮಾಡುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಕುಟುಂಬಸ್ಥರೊಂದಿಗೆ ಉತ್ತಮ ಒಡನಾಟ, ಆರ್ಥಿಕ ಚೇತರಿಕೆ, ತಾಯಿಯಿಂದ ಸಹಾಯ, ಧಾರ್ಮಿಕ ಆಚರಣೆಗಳು.

**ವೃಷಭ:** ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ, ಬಂಧುಗಳಿಂದ ಸಹಾಯದ ನಿರೀಕ್ಷೆ, ಹತ್ತಿರದ ಪ್ರಯಾಣ, ದೈವಕಾರ್ಯಗಳು.

**ಮಿಥುನ:** ಪ್ರೀತಿ-ಪ್ರೇಮದಲ್ಲಿ ಒಲವು, ಐಷಾರಾಮಿ ಜೀವನದ ಕಲ್ಪನೆ, ಆರ್ಥಿಕ ನಷ್ಟಗಳು, ಕುಟುಂಬದಲ್ಲಿ ಮನಸ್ತಾಪ.

**ಕಟಕ:** ಉತ್ತಮ ಹೆಸರು ಗಳಿಸುವ ಪ್ರಯತ್ನ, ಸಂತೋಷದಿಂದ ಕಾಲ ಕಳೆಯುವ ನಿರ್ಧಾರ, ಮಾನಸಿಕ ಅಸ್ಥಿರತೆ, ಪೂಜಾ ಆಚರಣೆ.

**ಸಿಂಹ:** ಮಕ್ಕಳಿಂದ ಖರ್ಚು ಮತ್ತು ನಷ್ಟಗಳು, ಉದ್ಯೋಗದಲ್ಲಿ ವಿಘ್ನಗಳು, ಮೋಜು ಮಸ್ತಿಯ ಆಲೋಚನೆ, ಕಲ್ಪನೆಯಲ್ಲಿ ಕಾಲ ಕಳೆಯುವಿರಿ.

**ಕನ್ಯಾ:** ಪ್ರಯಾಣದಲ್ಲಿ ಅನುಕೂಲ, ಆಧ್ಯಾತ್ಮಿಕ ಚಿಂತನೆ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಪವಿತ್ರ ಸ್ಥಳ ದರ್ಶನ ಜ್ಞಾನ.

**ತುಲಾ:** ಉದ್ಯೋಗದಲ್ಲಿ ಅಡೆತಡೆ, ಜೀವನ ಮುನ್ನಡೆಸುವ ಚಿಂತೆ, ಅಪಘಾತಗಳು, ಮಾತಿನಿಂದ ತೊಂದರೆ.

**ವೃಶ್ಚಿಕ:** ಆಲೋಚನೆ, ವೈವಾಹಿಕ ಜೀವನದ ಚಿಂತೆ, ಪ್ರೀತಿ-ಪ್ರೇಮದಲ್ಲಿ ಮೋಸ, ಆರ್ಥಿಕ ಹಿನ್ನಡೆಗಳು.

**ಧನಸ್ಸು:** ಸಾಲಬಾಧೆ, ಶತ್ರು ಕಾಟಗಳು, ಕಿರಿಯರಿಂದ ನಿಂದನೆ, ಕೆಲಸಗಾರರೊಂದಿಗೆ ಮನಸ್ತಾಪ, ಸಾಲ ದೊರೆಯುವುದು.

**ಮಕರ:** ಶೃಂಗಾರ ಸಾಧನೆಗಳಿಗೆ ಖರ್ಚು, ಕಲಾಕ್ಷೇತ್ರದವರಿಗೆ ಹಿನ್ನಡೆ, ವಿವೇಚನೆ ಕಳೆದುಕೊಳ್ಳುವಿರಿ, ಮೋಜು ಮಸ್ತಿಯಿಂದ ತೊಂದರೆ.

**ಕುಂಭ:** ಸ್ಥಿರಾಸ್ತಿ ವಾಹನದ ಸಾಲದ ಚಿಂತೆ, ಧಾರ್ಮಿಕ ಆಚರಣೆಗಳು, ತಾಯಿಯ ಆರೋಗ್ಯದಲ್ಲಿ ವ್ಯತ್ಯಾಸ, ಮಹಿಳೆಯರಿಂದ ಸಹಾಯ.

**ಮೀನ:** ಹತ್ತಿರದ ಪ್ರಯಾಣ, ಉದ್ಯೋಗದ ಹುಡುಕಾಟ, ವಿದ್ಯಾಭ್ಯಾಸದಲ್ಲಿ ಸಮಸ್ಯೆ, ಪ್ರೀತಿ ಪ್ರೇಮದಲ್ಲಿ ಸಂಶಯಗಳು.

## ನೋ ಸೆಲ್ಫಿ ದಿನ



ನಾವು ಪ್ರತಿ ವರ್ಷ ಮಾರ್ಚ್ 16 ರಂದು ನೋ ಸೆಲ್ಫಿ ದಿನವನ್ನು ಆಚರಿಸುತ್ತೇವೆ. ಸೆಲ್ಫಿ ತೆಗೆದುಕೊಳ್ಳುವ ಕ್ರಿಯೆಯು ಸಾಮಾಜಿಕ ಮಾಧ್ಯಮಗಳು, ಸ್ಮಾರ್ಟ್ಫೋನ್ಗಳು ಮತ್ತು ಪದದ ಹಿಂದೆಯೇ ಇರಬಹುದು, ಸೆಲ್ಫಿಗಳು ಯಾವಾಗಲೂ ಜನಪ್ರಿಯವಾಗಿವೆ. ವರ್ಷಗಳಲ್ಲಿ, ಸೆಲ್ಫಿಗಳನ್ನು ತೆಗೆದುಕೊಳ್ಳಲು ಸುಲಭವಾಗಿದೆ ಮತ್ತು ಇಂದು ನೀವು ಪ್ರತಿಯೊಂದು ಸಾಧನದಲ್ಲಿ ಸೆಲ್ಫಿ ಕ್ಲಿಕ್ ಮಾಡಬಹುದು. ಸೆಲ್ಫಿ ಸ್ಟಿಕ್ಗಳು ಮತ್ತು ಮಲ್ಟಿ-ಫಂಕ್ಷನಲ್ ಕ್ಯಾಮೆರಾ ಫೋನ್ಗಳು ಸೆಲ್ಫಿ ಮತ್ತು ಗ್ರೂಪ್ ಸೆಲ್ಫಿ ಅಥವಾ 'ಗ್ರೂಪ್ಗಳನ್ನು' ತೆಗೆದುಕೊಳ್ಳಲು ತುಂಬಾ ಅನುಕೂಲಕರವಾಗಿದೆ. ಆದಾಗ್ಯೂ, ನೋ ಸೆಲ್ಫಿ ಡೇಯಲ್ಲಿ, ನಮಗೆ ಯಾವುದೇ ಸೆಲ್ಫಿ ಅಥವಾ ಗುಂಪುಗಳನ್ನು ತೆಗೆದುಕೊಳ್ಳಲು ಅನುಮತಿಸಲಾಗುವುದಿಲ್ಲ. ನೋ ಸೆಲ್ಫಿ ದಿನದ ಇತಿಹಾಸ, ಮೂಲ ಮತ್ತು ಸಂಸ್ಥಾಪಕರು ತಿಳಿದಿಲ್ಲ. ಅದರ ಮೊದಲ ಆಚರಣೆಯ ಬಗ್ಗೆ ಯಾವುದೇ ಉಲ್ಲೇಖವಿಲ್ಲ, ಆದರೆ ಸೆಲ್ ಫೋನ್ ಕ್ಯಾಮೆರಾವನ್ನು ಕಂಡುಹಿಡಿದ ಫಿಲಿಪ್ ಕಾನ್ ಅವರ ಜನ್ಮದಿನದಂದು ನಾವು ಇದನ್ನು ಆಚರಿಸುತ್ತೇವೆ. ಕಾಕತಾಳೀಯ? ಇಲ್ಲ ಎಂದು ನಾವು ಭಾವಿಸುತ್ತೇವೆ! ಈ ದಿನವು ಸೆಲ್ಫಿ ತೆಗೆದುಕೊಳ್ಳುವ ಗೀಳನ್ನು (ನಮ್ಮೆಲ್ಲರನ್ನೂ) ಮತ್ತು ಹಾನಿಕಾರಕ ಪರಿಣಾಮಗಳನ್ನು ಗುರಿಯಾಗಿಸುತ್ತದೆ. ಇಂದು ನಿಮ್ಮ ಚಿತ್ರವನ್ನು ತೆಗೆದುಕೊಳ್ಳದಿರಲು ಇದು ಸೌಮ್ಯವಾದ ಜ್ಞಾಪನೆಯಾಗಿದೆ. ಸೆಲ್ಫಿ ಚಟವು ಮಾನಸಿಕವಾಗಿ ಹಾನಿಕಾರಕ ನಡವಳಿಕೆಯೊಂದಿಗೆ ಸಂಬಂಧ ಹೊಂದಿದೆ. ಮಹಿಳೆಯು ಪ್ರತಿ ವಾರ ಸರಾಸರಿ 104 ನಿಮಿಷಗಳನ್ನು ಪರಿಪೂರ್ಣ ಸೆಲ್ಫಿಗಳನ್ನು ಸೆರೆಹಿಡಿಯಲು ಪ್ರಯತ್ನಿಸುತ್ತಾಳೆ ಎಂದು ಸಂಶೋಧನೆ ಬಹಿರಂಗಪಡಿಸಿದೆ! ಸೆಲ್ಫಿಗಳು ಒಂದು ಸಾಂಸ್ಕೃತಿಕ ವಿದ್ಯಮಾನವಾಗಿ ಮಾರ್ಪಟ್ಟಿವೆ ಏಕೆಂದರೆ ಅವುಗಳು ಗಮನಕ್ಕೆ, ಮೆಚ್ಚುಗೆಗೆ ಮತ್ತು ಗುರುತಿಸಲ್ಪಟ್ಟ ಭಾವನೆಯ ಮೂಲಭೂತ ಮಾನವ ಬಯಕೆಯನ್ನು ಬಹಿರಂಗಪಡಿಸುತ್ತವೆ. ವೇಗದ ಸಾಮಾಜಿಕ ಮಾಧ್ಯಮ ಅಭಿವೃದ್ಧಿಯಿಂದಾಗಿ, ಜನರು ಸೆಲ್ಫಿಗಳನ್ನು ತೆಗೆದುಕೊಳ್ಳುತ್ತಾರೆ ಮತ್ತು ಟ್ರೆಂಡ್ಗಳನ್ನು ಮುಂದುವರಿಸಲು ಇಷ್ಟಗಳು ಮತ್ತು ಕಾಮೆಂಟ್ಗಳಿಗಾಗಿ ಅವುಗಳನ್ನು ಅಪ್ಲೋಡ್ ಮಾಡುತ್ತಾರೆ. ಸೆಲ್ಫಿಗಳನ್ನು ಲೈಟ್ಗಳು, ಫಿಲ್ಟರ್‌ಗಳು, ಎಫೆಕ್ಟ್ಗಳು ಮತ್ತು ಹೆಚ್ಚಿನವುಗಳೊಂದಿಗೆ ವರ್ಧಿಸಲಾಗಿದೆ. ಪರಿಣಾಮವಾಗಿ, ಜನರು ಯಾರೊಬ್ಬರ ಆನ್ಲೈನ್ ಉಪಸ್ಥಿತಿ ಮತ್ತು ಅವರ ನಿಜ ಜೀವನದ ನಡುವೆ ಗೊಂದಲಕ್ಕೊಳಗಾಗುತ್ತಾರೆ, ಇದು ದೇಹದ ಡಿಸ್ಮಾರ್ಫಿಯಾ ಪ್ರಕರಣಗಳ ಹೆಚ್ಚಳಕ್ಕೆ ಕಾರಣವಾಗುತ್ತದೆ. ಯಾರಾದರೂ ನೋಯಿಸುವಂತಹದನ್ನು ಕಾಮೆಂಟ್ ಮಾಡಿದಾಗ, ನಮ್ಮ ಚಿತ್ರವನ್ನು ಇಷ್ಟಪಡದಿದ್ದಾಗ ಅಥವಾ ಚಿತ್ರವು ನಿರೀಕ್ಷಿಸಿದಷ್ಟು ಇಷ್ಟಗಳು ಅಥವಾ ಕಾಮೆಂಟ್ಗಳನ್ನು ಪಡೆಯದಿದ್ದರೂ ಸಹ ನಾವು ನಕಾರಾತ್ಮಕವಾಗಿ ಪರಿಣಾಮ ಬೀರಬಹುದು ಎಂದು ಅಧ್ಯಯನಗಳು ತೋರಿಸುತ್ತವೆ.

# ಸುಪ್ರೀಂ ಕೋರ್ಟ್ ಆದೇಶಕ್ಕೂ ಮುನ್ನ 571 ಕೋಟಿ ರೂ. ಮೌಲ್ಯದ ಚುನಾವಣಾ ಬಾಂಡ್‌ಗಳ ಖರೀದಿ

**ನವದೆಹಲಿ:** ಚುನಾವಣಾ ಬಾಂಡ್‌ಗಳ ಮಾರಾಟವನ್ನು ಸುಪ್ರೀಂ ಕೋರ್ಟ್ ನಿಷೇಧಿಸುವ ಮೊದಲು ಜನವರಿ 3 ಮತ್ತು ಜನವರಿ 11 ರ ನಡುವೆ, 571 ಕೋಟಿ ರೂ.ಗಳ ಬಾಂಡ್‌ಗಳನ್ನು ಖರೀದಿಸಲಾಗಿದೆ ಮತ್ತು ಈ ಮೊತ್ತದ ಅರ್ಧದಷ್ಟು ಕೇವಲ ಏಳು ಕಂಪನಿಗಳಿಂದ ಬಂದಿದೆ.

ಫ್ಯೂಚರ್ ಗೇಮಿಂಗ್ ಮತ್ತು ಹೋಟೆಲ್ ಸರ್ವೀಸಸ್ ಪಿಆರ್ 63 ಕೋಟಿ ರೂ.ಗಳ 63 ಬಾಂಡ್ಗಳನ್ನು ಖರೀದಿಸಿದರೆ, ಭಾರ್ತಿ ಏರ್ಟೆಲ್ 50 ಕೋಟಿ ರೂ.ಗಳೊಂದಿಗೆ 50 ಬಾಂಡ್ ಖರೀದಿಸಿದೆ ಎಂದು ಭಾರತದ ಚುನಾವಣಾ ಆಯೋಗದ ಅಂಕಿಅಂಶಗಳು ಗುರುವಾರ ತಡರಾತ್ರಿ, ಬಹಿರಂಗಪಡಿಸಿವೆ.

ಅಂಕಿಅಂಶಗಳ ಪ್ರಕಾರ, ರುಂಗ್ಟಾ ಸನ್ಸ್ ಪ್ರೈವೇಟ್ ಲಿಮಿಟೆಡ್ 50 ಕೋಟಿ ರೂ.ಗಳ ಮೌಲ್ಯದ 50 ಬಾಂಡ್ಗಳನ್ನು ಖರೀದಿಸಿದೆ. ಶಿರಡಿ ಸಾಯಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್ 40 ಕೋಟಿ ಮೌಲ್ಯದ 40 ಬಾಂಡ್ ಗಳನ್ನು ಖರೀದಿಸಿದೆ. ಹಲ್ದಿಯಾ ಎನರ್ಜಿ ಲಿಮಿಟೆಡ್ 35 ಕೋಟಿ ಮೌಲ್ಯದ 35 ಬಾಂಡ್ಗಳೊಂದಿಗೆ ಪಟ್ಟಿಯಲ್ಲಿ ಐದನೇ ಸ್ಥಾನದಲ್ಲಿದೆ.

ವೆಸ್ಟರ್ನ್ ಯುಪಿ ಪವರ್ ಟ್ರಾನ್ಸ್ಮಿಷನ್ ಕಂಪನಿ ಲಿಮಿಟೆಡ್ 30 ಕೋಟಿ ರೂ.ಗಳ 30 ಬಾಂಡ್ಗಳನ್ನು ಖರೀದಿಸಿದರೆ, ಟೊರೆಂಟ್ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್ 25.50 ಕೋಟಿ ರೂ.ಗಳ 30 ಬಾಂಡ್ಗಳನ್ನು ಖರೀದಿಸಿದೆ. ಜನವರಿ 3 ಮತ್ತು ಜನವರಿ 11 ರ ನಡುವೆ ವ್ಯಕ್ತಿಗಳು ಸೇರಿದಂತೆ 84 ಸಂಸ್ಥೆಗಳು ಒಟ್ಟು 571 ಕೋಟಿ ರೂ.ಗಳ ಸುಮಾರು 900 ಬಾಂಡ್ಗಳನ್ನು ಖರೀದಿಸಿವೆ. ಇದರಲ್ಲಿ 11% ಕ್ಕಿಂತ ಹೆಚ್ಚು ಫ್ಯೂಚರ್ ಗೇಮಿಂಗ್ ಮತ್ತು ಹೋಟೆಲ್ ಸರ್ವೀಸಸ್ ಪಿಆರ್‌ನಿಂದ ಬಂದಿದ್ದರೆ, ಸುಮಾರು 9% ಭಾರ್ತಿ ಏರ್ಟೆಲ್ ಮತ್ತು ರುಂಗ್ಟಾ ಸನ್ಸ್ ಪ್ರೈವೇಟ್ ಲಿಮಿಟೆಡ್ನಿಂದ ಬಂದವು. ಈ ಯೋಜನೆಯಡಿ, ಭಾರತದ ವ್ಯಕ್ತಿಗಳು ಮತ್ತು ಕಂಪನಿಗಳು ರಾಜಕೀಯಕ್ಕೆ ದೇಣಿಗೆ ನೀಡಬಹುದು.




## ಕರ್ತವ್ಯದ ವೇಳೆ ರಂಜಾನ್ ಉಪವಾಸ ಬೇಡ: ಪಾಕ್ ಏರ್ ಲೈನ್ ಸೂಚನೆ




**ದೆಹಲಿ:** ಮುಸ್ಲಿಂಮರ ಪವಿತ್ರ ರಂಜಾನ್ ತಿಂಗಳಿನಲ್ಲಿ ಕರ್ತವ್ಯದಲ್ಲಿರುವ ಪೈಲಟ್ ಗಳು ಉಪವಾಸ ಮಾಡದಂತೆ ಪಾಕ್ ಏರ್ ಲೈನ್ ಸಂಸ್ಥೆಯ ಪೈಲಟ್ಗಳಿಗೆ ಹಾಗೂ ವಿಮಾನದ ಸಿಬ್ಬಂದಿಗಳಿಗೆ ಸೂಚನೆ ನೀಡಲಾಗಿದೆ.

**ಆಲಸ್ಯ ಮತ್ತು ನಿದ್ರೆಗೆ ಸಂಬಂಧಿಸಿದ ಸಮಸ್ಯೆಗೆ ಕಾರಣ ಆಗುವ ಆತಂಕ**

ಉಪವಾಸವಿದ್ದ ವೇಳೆ ವ್ಯಕ್ತಿಗಳಲ್ಲಿ ನಿರ್ಜಲೀಕರಣ, ಆಲಸ್ಯ ಮತ್ತು ನಿದ್ರೆಗೆ ಸಂಬಂಧಿಸಿದ ಸಮಸ್ಯೆಗೆ ಕಾರಣವಾಗಬಹುದು. ಆದ್ದರಿಂದ ಪೈಲಟ್ ಹಾಗೂ ಸಿಬ್ಬಂದಿ ಉಪವಾಸ ಮಾಡುವುದು ಬೇಡ ಎಂಬ ವೈದ್ಯಕೀಯ ಸಲಹೆಯನ್ನು ಆಧರಿಸಿ ಈ ಸೂಚನೆ ನೀಡಲಾಗಿದೆ. ಕಾರ್ಪೋರೇಟ್ ಸುರಕ್ಷತಾ ನಿರ್ವಹಣೆ ಮತ್ತು ವಿಮಾನ ಸಿಬಂದಿ ವೈದ್ಯಕೀಯ ಕೇಂದ್ರವು ಈ ಶಿಫಾರಸನ್ನು ಅನುಮೋದಿಸಿದ್ದು ಪಾಕಿಸ್ತಾನ್ ಇಂಟರ್ ನ್ಯಾಷನಲ್ ಏರ್ ಲೈನ್ (ಪಿಐಎ)ನ ಪೈಲಟ್ಗಳು ಹಾಗೂ ಕ್ಯಾಬಿನ್ ಸಿಬಂದಿಗಳು ಕರ್ತವ್ಯದಲ್ಲಿರುವಾಗ ಉಪವಾಸ ನಡೆಸದಂತೆ ಸಲಹೆ ನೀಡಿದೆ. ಈ ಸಲಹೆಯನ್ನು ಆಧರಿಸಿ ಪಿಐಎ ತಕ್ಷಣ ಜಾರಿಯಾಗುವಂತೆ ಆದೇಶ ಜಾರಿಗೊಳಿಸಲಾಗಿದೆ.

## 24 ಗಂಟೆಯೂ ಆಯೋಧ್ಯೆ ರಾಮ ಮಂದಿರ ತೆರೆಯಲು ಸಿಎಂ ಯೋಗಿ ಸೂಚನೆ!



**ಆಯೋಧ್ಯೆ:** ಆಯೋಧ್ಯೆ ರಾಮ ಮಂದಿರದತ್ತ ಭಕ್ತರು ಆಗಮಿಸುತ್ತಿದ್ದು, ಬಲರಾಮನ ನೋಡಲು ಕಾತುರದಿಂದ ಆಗಮಿಸುತ್ತಿದ್ದಾರೆ. ಇದೀಗ ಶಾಲಾ ಕಾಲೇಜುಗಳು ಬೇಸಿಗೆ ರಜೆಯತ್ತ ದಾಪುಗಾಲಿಡುತ್ತಿದೆ. ಹೀಗಾಗಿ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದೆ.

ಹೀಗಾಗಿ ಸಿಎಂ ಯೋಗಿ ಆದಿತ್ಯನಾಥ್ ಮಹತ್ವದ ಸೂಚನೆ ನೀಡಿದ್ದಾರೆ.

ದಿನದ 24 ಗಂಟೆ ರಾಮ ಮಂದಿರ ತೆರೆಯಲು ಸೂಚನೆ ನೀಡಿದ್ದಾರೆ. ನವರಾತ್ರಿಯ ಅಂತಿಮ ಮೂರು ದಿನದಲ್ಲಿ 24 ಗಂಟೆಯೂ ರಾಮ ಮಂದಿರ ಭಕ್ತರ ದರುಶನಕ್ಕೆ ಅವಕಾಶ ನೀಡಲು ಸೂಚಿಸಿದ್ದಾರೆ.

ನವರಾತ್ರಿಯ ಅಷ್ಟಮಿ, ನವಮಿ ಹಾಗೂ ದಶಮಿಯ ಮೂರು ದಿನ 24 ಗಂಟೆ ರಾಮ ಮಂದಿರ ಭಕ್ತರಿಗೆ ದರುಶನ ನೀಡಲಿದೆ. ಈ ಮೂರು ದಿನ ವಿಶೇಷ ಪೂಜೆಗಳು ನಡೆಯಲಿದೆ.

24 ಗಂಟೆ ಭಕ್ತರು ರಾಮ ಮಂದಿರ ದರುಶನ ಪಡೆಯಲು ಎಲ್ಲಾ ವ್ಯವಸ್ಥೆ ಮಾಡಲು ಸೂಚಿಸಿದ್ದಾರೆ. ಜೊತೆಗೆ ಭಕ್ತರಿಗೆ ಎಲೆಕ್ಟ್ರಿಕ್ ಬಸ್ ಸೇವೆ ನೀಡಲು ಸೂಚನೆ ನೀಡಲಾಗಿದೆ.

ದೇಗುಲದಲ್ಲಿ ಶುಚಿತ್ವ ಕಾಪಾಡಲು ವಿಶೇಷ ಕಾಳಜಿ ವಹಿಸಬೇಕು. ಬೇಸಿಗೆ ಉರಿ ಹೆಚ್ಚಾಗಿರುವ ಕಾರಣ ಭಕ್ತರಿಗೆ ನೀರಿನ ವ್ಯವಸ್ಥೆ ಮಾಡಬೇಕು. ಭಕ್ತರು ಸರದಿ ಸಾಲಿನಲ್ಲಿ ಗರಿಷ್ಠ 2.5 ಕಿಲೋಮೀಟರ್ಗಿಂತ ಹೆಚ್ಚು ಇರಬಾರದು ಎಂದು ಯೋಗಿ ಸೂಚಿಸಿದ್ದಾರೆ.

ಇದೇ ವೇಳೆ ರಾಮ ನವಮಿ ಆಚರಣೆಗೆ ತಯಾರಿ ಕುರಿತು ಯೋಗಿ ಆದಿತ್ಯನಾಥ್ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದು, ಚುನಾವಣೆ ವೇಳೆ ರಾಮ ನವಮಿ ಆಗಮಿಸುತ್ತಿರುವ ಕಾರಣ ಯಾವುದೇ ಸಮಸ್ಯೆಯಾಗದಂತೆ ತಯಾರಿ ಮಾಡಲು ಸೂಚಿಸಿದ್ದಾರೆ.

# ಮೋದಿ ಸರ್ಕಾರ ಎಲ್ಲ ಅರ್ಹ ನಿರಾಶ್ರಿತರಿಗೆ ಪೌರತ್ವ ನೀಡಲಿದೆ



**ಅಮಿತ್ ಶಾ ಹೇಳಿಕೆ**

**ನದೆಹಲಿ:** ಕೇಂದ್ರ ಗೃಹ ಮತ್ತು ಸಹಕಾರ ಸಚಿವ, ಮತ್ತು ಭಾರತೀಯ ಜನತಾ ಪಕ್ಷದ ವರಿಷ್ಠ ನಾಯಕ ಅಮಿತ್ ಶಾ ಅವರು ಗುರುವಾರ ಸುದ್ದಿ ಸಂಸ್ಥೆ ಪಾಡ್ಕಾಸ್ಟ್ಗೆ ನೀಡಿದ ಸಂದರ್ಶನದಲ್ಲಿ, ಮೋದಿ ಸರ್ಕಾರವು ಎಲ್ಲಾ ಅರ್ಹ ನಿರಾಶ್ರಿತರಿಗೆ ಪೌರತ್ವವನ್ನು ನೀಡಲಿದೆ. ಸಿಎಎ ಪೌರತ್ವವನ್ನು ನೀಡುವ ಕಾನೂನಾಗಿದ್ದು, ಅದು ಯಾರ ಪೌರತ್ವವನ್ನು ಕಸಿದುಕೊಳ್ಳುವ ಕಾನೂನಲ್ಲ ಎಂದರು.

ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ, ಬಿಜೆಪಿ ಸರ್ಕಾರವು ತನ್ನ 2019 ರ ಲೋಕಸಭಾ ಚುನಾವಣಾ ಪ್ರಣಾಳಿಕೆಯಲ್ಲಿ ಸಿಎಎ ಅನುಷ್ಠಾನದ ಬಗ್ಗೆ ಪ್ರಸ್ತಾಪಿಸಿತ್ತು, ಈಗ 2024 ಲೋಕಸಭೆ ಚುನಾವಣೆ ಮುನ್ನ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರ ನುರಿತ ಮಾರ್ಗದರ್ಶನದಲ್ಲಿ ಸಿಎಎಯನ್ನು ದೇಶಾದ್ಯಂತ ಜಾರಿಗೆ ತರಲಾಗಿದೆ. ಸಿಎಎ ಬಿಜೆಪಿಗೆ ಮಾನವೀಯತೆಯ ವಿಷಯವಾಗಿದೆಯೇ ಹೊರತು ರಾಜಕೀಯ ಲಾಭದ ವಿಷಯವಲ್ಲ ಎಂಬುದು ಇದರಿಂದ ಸ್ಪಷ್ಟವಾಗಿದೆ. ರಾಹುಲ್ ಗಾಂಧಿಯಿಂದ ಓವೈಸಿವರೆಗೆ ಮತ್ತು ಅರವಿಂದ್ ಕೇಜ್ರಿವಾಲ್ನಿಂದ ಮಮತಾ ಬ್ಯಾನರ್ಜಿವರೆಗೆ ಎಲ್ಲಾ ವಿರೋಧ ಪಕ್ಷಗಳ ನಾಯಕರು ಸುಳ್ಳಿನ ರಾಜಕೀಯದಲ್ಲಿ ತೊಡಗಿದ್ದಾರೆ. ಅರವಿಂದ್ ಕೇಜ್ರಿವಾಲ್ ಅವರು ಬಾಂಗ್ಲಾದೇಶಿ ಮತ್ತು ರೋಹಿಂಗ್ಯಾ ನುಸುಳುಕೋರರನ್ನು ವಿರೋಧಿಸುವ ಬದಲು ವೋಟ್ ಬ್ಯಾಂಕ್ ರಾಜಕಾರಣಕ್ಕಾಗಿ ನಿರಾಶ್ರಿತರ ವಿರುದ್ಧ ತಪ್ಪು ಕಲ್ಪನೆಗಳನ್ನು ಬಿತ್ತುತ್ತಿದ್ದಾರೆ. ಮಮತಾ ಬ್ಯಾನರ್ಜಿ ಸಿಎಎ ವಿರೋಧಿಸುವ ಬದಲು ಒಳನುಸುಳುವಿಕೆಯನ್ನು ತಡೆಯುವತ್ತ ಗಮನಹರಿಸಬೇಕು. ಮಮತಾ ಬ್ಯಾನರ್ಜಿಯವರು ತಮ್ಮ ವೋಟ್ ಬ್ಯಾಂಕ್‌ಅನ್ನು ಸಮಾಧಾನಪಡಿಸಲು ಹಿಂದೂ ಮತ್ತು ಮುಸ್ಲಿಮರ ನಡುವೆ ದ್ವೇಷವನ್ನು ಬಿತ್ತಲು ಬಯಸುತ್ತಿದ್ದಾರೆ. ಪಶ್ಚಿಮ ಬಂಗಾಳದಲ್ಲೂ ಬಿಜೆಪಿ ವರ್ಚಸ್ಸು ಹೆಚ್ಚುತ್ತಿದ್ದು, ಬಿಜೆಪಿ ಸರ್ಕಾರ ಬರುವ ದಿನ ದೂರವಿಲ್ಲ ಎಂದ ಶಾ, ಒಳನುಸುಳುವಿಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು. ಸಿಎಎ ಜಾರಿಗೊಳಿಸುವುದಿಲ್ಲ ಎಂದು ಪ್ರತಿಪಾದಿಸುವ ಕೆಲ ರಾಜ್ಯಗಳಿಗೆ ಅಮಿತ್ ಶಾ ಅವರು 'ಪೌರತ್ವ ಕಾನೂನು ಕೇಂದ್ರ ಸರ್ಕಾರಕ್ಕೆ ಸಂಬಂಧಿಸಿದ ವಿಷಯ, ರಾಜ್ಯಗಳ ವಿರೋಧಕ್ಕೆ ಯಾವುದೇ ಆಧಾರವಿಲ್ಲ' ಎಂದು ಸ್ಪಷ್ಟ ಸಂದೇಶ ನೀಡಿದರು. ಪೌರತ್ವ ತಿದ್ದುಪಡಿ ಕಾಯಿದೆಯು ಡಿಸೆಂಬರ್ 31, 2014 ರ ಮೊದಲು ಆಫ್ಘಾನಿಸ್ತಾನ, ಪಾಕಿಸ್ತಾನ ಮತ್ತು ಬಾಂಗ್ಲಾದೇಶದಿಂದ ಬಂದ ಲಕ್ಷಾಂತರ ನಿರಾಶ್ರಿತರಿಗೆ ಹಕ್ಕುಗಳನ್ನು ನೀಡುವುದರ ಕುರಿತಾಗಿದೆ ಎಂದು ದೇಶದ ಜನರು ಅರ್ಥಮಾಡಿಕೊಂಡಿದ್ದಾರೆ. ಇದು ಅವರ ಕಷ್ಟಗಳಿಗೆ ಅಂತ್ಯ ಹಾಡಿ, ಅವರ ಮೂರು ತಲೆಮಾರುಗಳಿಗೆ ನ್ಯಾಯ ಒದಗಿಸಲಿದೆ. ಕಾಂಗ್ರೆಸ್ ಇದನ್ನು ಎಂದಿಗೂ ಮಾಡುತ್ತಿರಲಿಲ್ಲ. ಈ ಕಾನೂನು ಜಾರಿಗೆ ಬಂದಾಗಿನಿಂದಲೂ, 75 ವರ್ಷಗಳ ನಿರಾಶ್ರಿತರ ನೋವನ್ನು ಕೊನೆಗಾಣಿಸಲು ಮೋದಿ-ಶಾ ಜೋಡಿಯ ಶ್ರಮ ಸ್ಪಷ್ಟವಾಗಿ ಕಾಣುತ್ತಿದೆ.

ಪ್ರತಿಯೊಂದು ಪ್ರಮುಖ ನಿರ್ಧಾರವನ್ನು ಯಶಸ್ವಿಯಾಗಿ ಕಾರ್ಯರೂಪಕ್ಕೆ ತರುವ ಭಾರತೀಯ ರಾಜಕೀಯದ ಚಾಣಕ್ಯ, ಅಮಿತ್ ಶಾ ಅವರ ಕಾರ್ಯಶೈಲಿಯು ಇಂಡಿ ಒಕ್ಕೂಟ ಅಧಿಕಾರಕ್ಕೆ ಬರುವುದನ್ನು ತಡೆಯುವುದಲ್ಲದೇ, ಸಿಎಎ ಜಾರಿಯಾಗುವುದನ್ನು ಯಾವುದೇ ಕಾರಣಕ್ಕೂ ತಪ್ಪಿಸಲಾಗುವುದಿಲ್ಲ ಎಂಬುದನ್ನು ಸೂಚಿಸುತ್ತದೆ. ಯಾವುದೇ ಮುಸಲ್ಮಾನರಿಗೂ ಭಾರತೀಯ ಪೌರತ್ವದ ಬಾಗಿಲು ಸದಾ ತೆರೆದಿರುತ್ತದೆ ಎಂಬುದು ಗಮನಿಸಬೇಕಾದ ಸಂಗತಿ. ಸರ್ಜಿಕಲ್ ಸ್ಟ್ರೈಕ್, ವೈಮಾನಿಕ ದಾಳಿ, ಆರ್ಟಿಕಲ್ 370 ರದ್ದತಿ, ತ್ರಿವಳಿ ತಲಾಖ್ ರದ್ದತಿ ಇತ್ಯಾದಿಗಳಲ್ಲಿ ಕಂಡುಬಂದಂತೆ ಮೋದಿ ಸರ್ಕಾರದ ಪ್ರತಿಯೊಂದು ನಿರ್ಧಾರವನ್ನು ವಿರೋಧಿಸುವುದು ಪ್ರತಿಪಕ್ಷಗಳಿಗೆ ಅಭ್ಯಾಸವಾಗಿದೆ.

2024ರ ಲೋಕಸಭೆ ಚುನಾವಣೆಯಲ್ಲಿ ಪ್ರತಿಪಕ್ಷಗಳನ್ನು ನಿರ್ಣಾಯಕವಾಗಿ ಸೋಲಿಸಲು, ಮೋದಿ ಸರ್ಕಾರದ ಸಾಧನೆಗಳೊಂದಿಗೆ ಭಾರತದ ರಾಜಕೀಯದ ಚಾಣಕ್ಯ ಮತ್ತೊಮ್ಮೆ ಚುನಾವಣಾ ಕಣಕ್ಕೆ ಪ್ರವೇಶಿಸಿದ್ದಾರೆ. ಶಾ ಅಖಾಡಕ್ಕೆ ಇಳಿದರೆ ಕಮಲ ಅರಳುವುದು ಖಚಿತ ಎಂಬುದು ವಿರೋಧ ಪಕ್ಷಗಳಿಗೂ ಗೊತ್ತಿದೆ. ಭಾರತೀಯ ಜನತಾ ಪಕ್ಷಕ್ಕೆ ಯಾವುದೇ ಚುನಾವಣೆಯಲ್ಲಿ ಗೆಲುವು ಸಾಧಿಸಲು 'ಅಮಿತ್ ಶಾ' ಚಾಣಾಕ್ಷತೆ ಸಾಕು. ಕಳೆದ 10 ವರ್ಷಗಳ ಸಾಧನೆಯ ಆಧಾರದ ಮೇಲೆ ದೇಶದ ಜನತೆ ಮತ್ತೊಮ್ಮೆ ನರೇಂದ್ರ ಮೋದಿಯವರನ್ನು ಪ್ರಧಾನಿ ಮಾಡಲು ಮನಸ್ಸು ನಿರ್ಧರಿಸಿದ್ದಾರೆ.

## ಕಲ್ಲಿದಲು ಗಣಿ ಕುಸಿದು ಏಳು ಕಾರ್ಮಿಕರು ದುರಂತ ಸಾವು



**ಚೀನಾ:** ಉತ್ತರ ಚೀನಾದ ಶಾಂಕ್ಸಿ ಪ್ರಾಂತ್ಯದ ಕಲ್ಲಿದ್ದಲು ಗಣಿಯ ಭೂಗತ ಗೋದಾಮಿನಲ್ಲಿ ನಡೆದ ಅಪಘಾತದಲ್ಲಿ ಸಿಲುಕಿದ್ದ ಏಳು ಗಣಿ ಕಾರ್ಮಿಕರು ಮೃತಪಟ್ಟಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ಝೊಂಗ್ಯಾಂಗ್ ಕೌಂಟಿಯ ಟಾವೊಯುವಾನ್ ಕ್ಸಿನ್ಲಾಂಗ್ ಕಲ್ಲಿದ್ದಲು ಕೈಗಾರಿಕಾ ನಿಗಮದಲ್ಲಿ ಘಟನೆ ನಡೆದಿದ್ದು ಇಂದು ಬೆಳಗ್ಗೆ 6.25ಕ್ಕೆ ಶವಗಳನ್ನು ಹೊರ ತೆಗೆಯಲಾಗಿದೆ. ಉಳಿದ ಕಾರ್ಮಿಕರ ರಕ್ಷಣಾ ಕಾರ್ಯ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಿನ್ನೆ ರಾತ್ರಿ ಗಣಿಗಾರರು ಅಸಮರ್ಪಕ ಕಲ್ಲಿದ್ದಲು ಫೀಡರ್ ಅನ್ನು ದುರಸ್ತಿ ಮಾಡುತ್ತಿದ್ದಾಗ ಗೋದಾಮಿನಲ್ಲಿನ ಕಲ್ಲಿದ್ದಲು ರಾಶಿ ಕುಸಿದು ಏಳು ಜನರು ಸಮಾಧಿಯಾಗಿದ್ದಾರೆ ಎಂದು ಗಣಿಯ ಮುಖ್ಯಸ್ಥ ಗಾವೊ ನೈಚುನ್ ತಿಳಿಸಿದ್ದಾರೆ.

## ದೀದಿ ಗಾಯದ ತನಿಖೆಗೆ ಬಿಜೆಪಿ ಆಗ್ರಹ





**ಪಶ್ಚಿಮ ಬಂಗಾಳ:** ಮುಖ್ಯಮಮತ್ರಿ ಮಮತಾ ಬ್ಯಾನರ್ಜಿ ಹಣೆಗೆ ಗಾಯವಾಗಿದ್ದು, ಅವರನ್ನು ಯಾರೋ ಹಿಂದಿನಿಂದ ನೂಕಿದಂತಾಗಿ ಬಿದ್ದಿದ್ದಾರೆ ಎಂದಿರುವ ಬಿಜೆಪಿ ತನಿಖೆಗೆ ಆಗ್ರಹಿಸಿದೆ.

ಇದಕ್ಕೆ ಪ್ರತಿಕ್ರಿಯಿಸಿದ ತೃಣಮೂಲ ಕಾಂಗ್ರೆಸ್, ಈ ವಿಷಯದಲ್ಲಿ ರಾಜಕೀಯ ಮಾಡದಂತೆ ಬಿಜೆಪಿಗೆ ಎಚ್ಚರಿಸಿದೆ.

ಮಮತಾ ತಮ್ಮ ಮನೆಯಲ್ಲಿ ಬಿದ್ದು ಹಣೆ ಮತ್ತು ಮೂಗಿಗೆ ಪೆಟ್ಟು ಮಾಡಿಕೊಂಡಿದ್ದಾರೆ. ಹಿಂದಿನಿಂದ ಯಾರೋ ತಳ್ಳಿದಂತಾಗಿ ಅವರು ಬಿದ್ದಿದ್ದಾರೆ ಎಂದು ಆಸ್ಪತ್ರೆಯ ನಿರ್ದೇಶಕ ಮನಿಮೋಯ್ ಬಂಡೋಪಾಧ್ಯಾಯ ಮಾಹಿತಿ ನೀಡಿದರು. ಆಸ್ಪತ್ರೆಯ ನಿರ್ದೇಶಕರು ತಮ್ಮ ಹೇಳಿಕೆಯನ್ನು ಇದ್ದಕ್ಕಿದ್ದಂತೆ ಬದಲಿಸಿದ್ದು ಅನುಮಾನಗಳಿಗೆ ಎಡೆ ಮಾಡಿದೆ. ಇದನ್ನು ಗಂಭಿರವಾಗಿ ಪರಿಗಣಿಸಿ ಸೂಕ್ತ ತನಿಖೆಯ ಮೂಲಕ ಸತ್ಯವನ್ನು ಬಯಲು ಮಾಡಬೇಕೆಂದು ಬಿಜೆಪಿ ನಾಯಕ ದಿಲೀಪ್ ಘೋಷ್ ಆಗ್ರಹಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ನಾಯಕ ಶಶಿ ಪಂಜಾ, ಆರೋಗ್ಯದಲ್ಲಿ ಏರುಪೇರಾದಾಗ ಇಂತಹ ಅನುಭವಗಳಾಗುವುದು ಸಹಜ. ಈ ವಿಷಯವನ್ನು ರಾಜಕೀಯಗೊಳಿಸಬಾರದು ಎಂದಿದ್ದಾರೆ.

## ತಮಿಳುನಾಡಿನಲ್ಲಿ ಮೋದಿ ಪ್ರಚಾರಕ್ಕೆ ಶರತ್ತುಬದ್ಧ ಒಪ್ಪಿಗೆ ನೀಡಿದ ಹೈಕೋರ್ಟ್



**ಚೆನ್ನೈ:** ಕೊಯಂಬತ್ತೂರಿನಲ್ಲಿ ರೋಡ್ ಶೋ ನಡೆಸಲು ಪ್ರಧಾನಮಂತ್ರಿ, ನರೇಂದ್ರ ಮೋದಿಗೆ ಅನುಮತಿ ನೀಡುವಂತೆ ಮದ್ರಾಸ್ ಹೈಕೋರ್ಟ್ ತಮಿಳುನಾಡು ಪೊಲೀಸರಿಗೆ ಆದೇಶಿಸಿದ್ದು, ಕೆಲ ಶರತ್ತುಗಳನ್ನು ವಿಧಿಸಿದೆ. ನಗರದಲ್ಲಿ ಶಾಂತಿ ಕಾಪಾಡುವ ಉದ್ದೇಶದಿಂದ ಮತ್ತು ಪರೀಕ್ಷೆಗಳಿದ್ದುದರಿಂದ ರೋಡ್ ಶೋಗೆ ಅನುಮತಿ ನಿರಾಕರಿಸಲಾಗಿತ್ತು. ಯಾವ ಪಕ್ಷದ ಪ್ರಚಾರಗಳಿಗೂ ಅನುಮತಿ ಕೊಟ್ಟಿಲ್ಲವೆಂದು ತಿಳಿಸುವ ಮೂಲಕ ಇದರಲ್ಲಿ ಯಾವುದೇ ತಾರತಮ್ಯ ಇಲ್ಲವೆಂದು ಪೊಲೀಸರು ತಿಳಿಸಿದರು. ಲೋಕಸಭಾ ಚುನಾವಣೆಗಳು ಸಮೀಪಿಸುತ್ತಿರುವಾಗ ಪ್ರಧಾನಿಗಳು ಪ್ರಚಾರಕ್ಕೆಂದು ದಕ್ಷಿಣದ ರಾಜ್ಯಗಳ ಕಡೆ ಮುಖ ಮಾಡಿದ್ದಾರೆ.

## ರಷ್ಯಾ ಅಧ್ಯಕ್ಷರ ಆಯ್ಕೆಗೆ ಕೇರಳದಲ್ಲಿ ಮತದಾನ



**ಕೇರಳ:** ರಷ್ಯಾದ ಅಧ್ಯಕ್ಷರ ಚುನಾವಣೆಗೆ ಕೇರಳ ಸೇರಿ ವಿಶ್ವದಾದ್ಯಂತ ಇರುವ ರಷ್ಯಾದ ಮತದಾರರು ಗುರುವಾರ ಮತದಾನ ಮಾಡಿದ್ದಾರೆ. ಸ್ವತಂತ್ರ ಅಭ್ಯರ್ಥಿಯಾಗಿ ಕಣದಲ್ಲಿರುವ 71 ವರ್ಷದ ವ್ಲಾಡಿಮಿರ್ ಪುಟಿನ್ ವಿರುದ್ಧ ಲಿಬರಲ್ ಡೆಮಾಕ್ರಟಿಕ್ ಪಕ್ಷದ ಲಿಯೊನಿಡ್ ಸ್ಲಟ್ಸ್ಕಿ, ನ್ಯೂ ಪೀಪಲ್ ಪಾರ್ಟಿಯ ವ್ಲಾಡಿಸ್ಲಾವ್ ದವಾಂಕೋವ್ ಮತ್ತು ಕಮ್ಯುನಿಸ್ಟ್ ಪಕ್ಷದ ನಿಕೊಲಾಯ್ ಖರಿಟೋನೊವ್ ಸ್ಪರ್ಧಿಸುತ್ತಿದ್ದಾರೆ. ಈ ಮೂವರೂ ಉಕ್ರೇನ್ ವಿರುದ್ಧ ರಷ್ಯಾದ ಮಿಲಿಟರಿ ಕ್ರಮವನ್ನು ವಿರೋಧಿಸುದಿಲ್ಲ ಎನ್ನಲಾಗಿದೆ. ರಷ್ಯಾದ ಅಧ್ಯಕ್ಷರ ಆಯ್ಕೆಗೆ ಭಾರತದಲ್ಲಿಯೂ ಮತದಾನ ನಡೆಯುತ್ತಿದ್ದು, ಕೇರಳದಲ್ಲಿ ಗುರುವಾರ ಮತದಾನ ನಡೆದಿದೆ. ಈ ಬಾರಿಯೂ ವ್ಲಾಡಿಮಿರ್ ಪುಟಿನ್ ಗೆಲುವಿನ ನಿರೀಕ್ಷೆ ಇದೆ ಎನ್ನಲಾಗಿದೆ. ಕೇರಳದಲ್ಲಿರುವ ರಷ್ಯಾ ನಾಗರಿಕರು ತಿರುವನಂತಪುರದಲ್ಲಿರುವ ರಷ್ಯನ್ ಹೌಸ್ನಲ್ಲಿರುವ ರಷ್ಯಾದ ಒಕ್ಕೂಟದ ಗೌರವ ದೂತಾವಾಸದಲ್ಲಿ ವಿಶೇಷವಾಗಿ ವ್ಯವಸ್ಥೆಗೊಳಿಸಲಾದ ಮತಗಟ್ಟೆಯಲ್ಲಿ ಗುರುವಾರ ಸಾಕಷ್ಟು ಮಂದಿ ಮತದಾನ ಮಾಡಿದ್ದು, ಮಾರ್ಚ್ 17ರವರೆಗೆ ರಷ್ಯನ್ ನಾಗರಿಕರಿಗೆ ಮತ ಚಲಾವಣೆಗೆ ಅವಕಾಶವಿದೆ. ರಷ್ಯನ್ ಹೌಸ್ನ ನಿರ್ದೇಶಕ ರತೀಶ್ ನಾಯರ್ ಅವರು ಮತದಾನ ಪ್ರಕ್ರಿಯೆ ಸುಸೂತ್ರವಾಗಿ ನಡೆಯುವಂತೆ ವ್ಯವಸ್ಥೆಗೊಳಿಸಿದ್ದರು.

## ಕೆಸಿಆರ್ ಪುತ್ರಿಗೆ ಇಡಿ ಬಿಗ್ ಶಾಕ್



**ಹೈದರಾಬಾದ್:** ಬಹುಕೋಟಿ ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ತೆಲಂಗಾಣ ಮಾಜಿ ಸಿಎಂ ಕೆಸಿಆರ್ ಪುತ್ರಿ ಕೆ. ಕವಿತಾ ಅವರಿಗೆ ಸಂಕಷ್ಟ ಎದುರಾಗಿದೆ. ಅಬಕಾರಿ ನೀತಿ ಪ್ರಕರಣ ಹಾಗೂ ಅಕ್ರಮ ಹಣ ವರ್ಗಾವಣೆ ಹಾಗೂ ಆರೋಪದಲ್ಲಿ ಇಡಿ ಅಧಿಕಾರಿಗಳು ಮೆಗಾ ರೇಡ್ ಮಾಡಿ ಬಂಧಿಸಿದ್ದಾರೆ. ಹೈದರಾಬಾದ್ನಲ್ಲಿರುವ ಕೆ.ಕವಿತಾ ಅವರ ಮನೆಗೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಬಿಆರ್ ಎಸ್ ಪಕ್ಷದ ಎಂಎಲ್ಸಿಯೂ ಆಗಿರುವ ಕವಿತಾ ಅವರ ಮೇಲೆ ಗಂಭೀರ ಆರೋಪ ಕೇಳಿ ಬಂದಿದೆ. ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಕವಿತಾ ಅವರಿಗೆ ಕಳೆದ ಜನವರಿಯಲ್ಲೇ ಇಡಿ ನೋಟಿಸ್ ಜಾರಿ ಮಾಡಿತ್ತು. ಬಿಆರ್‌ಎಸ್ ನಾಯಕಿ ಕವಿತಾ ಅವರು ಜನವರಿ 16ರಂದೇ ವಿಚಾರಣೆಗೆ ಹಾಜರಾಗಬೇಕಿತ್ತು. ಆದರೆ ಇಡಿ ಅಧಿಕಾರಿಗಳು ನೀಡಿದ್ದ ಎರಡು ನೋಟಿಸ್ಗೆ ಹಾಜರಾಗದ ಹಿನ್ನೆಲೆಯಲ್ಲಿ ಕೆ. ಕವಿತಾ ಅವರ ಮನೆ ಮೇಲೆ ಈ ದಾಳಿ ನಡೆದಿದೆ. ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮಹತ್ವದ ದಾಖಲೆ ಪರಿಶೀಲನೆ ಮಾಡಿದ್ದಾರೆ.

# ಟರ್ಕಿ ಕರಾವಳಿಯಲ್ಲಿ ವಲಸಿಗರ ದೋಣಿ ಮುಳುಗಿ 16 ಮಂದಿ ಸಾವು

**ಟರ್ಕಿ:** ವಲಸಿಗರಿಂದ ತುಂಬಿದ ದೋಣಿ ಟರ್ಕಿಯ ಕರಾವಳಿಗೆ ಹತ್ತಿರವಿರುವ ಸಮುದ್ರದಲ್ಲಿ ಮುಳುಗಿದ್ದು, ಈ ದೋಣಿ ವಲಸಿಗರನ್ನ ಹೊತ್ತೊಯ್ಯುತ್ತಿತ್ತು ಎಂದು ಹೇಳಲಾಗುತ್ತಿದೆ. ಟರ್ಕಿಯ ಉತ್ತರ ಏಜಿಯನ್ ಕರಾವಳಿಯಲ್ಲಿ ಶುಕ್ರವಾರ ರಬ್ಬರ್ ದೋಣಿ ಮುಳುಗಿದ್ದು, ಈ ಅಪಘಾತದಲ್ಲಿ ಕನಿಷ್ಠ 16 ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ಈ ಮಾಹಿತಿ ನೀಡಿದ್ದಾರೆ. ಟರ್ಕಿಯ ಕೋಸ್ಟ್ ಗಾರ್ಡ್ ಸಿಬ್ಬಂದಿ ಕನಕ್ಕಲೆ ಪ್ರಾಂತ್ಯದ ಅಸೆಬಾತ್ ಪಟ್ಟಣದ ಬಳಿ ಸಮುದ್ರದಿಂದ ಇಬ್ಬರು ವಲಸಿಗರನ್ನ ರಕ್ಷಿಸಿದರೆ, ಇತರ ಇಬ್ಬರು ತಾವಾಗಿಯೇ ದಡವನ್ನ ತಲುಪುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಗವರ್ನರ್ ಇಲ್ಹಾಮಿ ಅಕ್ತಾಸ್ ತಿಳಿಸಿದ್ದಾರೆ. ದೋಣಿ ಮುಳುಗಿದಾಗ ಅದರಲ್ಲಿ ಎಷ್ಟು ಜನರು ಇದ್ದರು ಎಂಬುದು ಸ್ಪಷ್ಟವಾಗಿಲ್ಲ ಮತ್ತು ಕೋಸ್ಟ್ ಗಾರ್ಡ್ ಈ ಪ್ರದೇಶವನ್ನ ಶೋಧಿಸುತ್ತಿದೆ ಎಂದು ಅವರು ಹೇಳಿದರು. ಮೃತರಲ್ಲಿ ನಾಲ್ಕು ಶಿಶುಗಳು ಮತ್ತು ಮಕ್ಕಳು ಸೇರಿದ್ದಾರೆ ಎಂದು ಅಕ್ತಾಸ್ ಸರ್ಕಾರಿ ಸ್ವಾಮ್ಯದ ಅನಾಡೋಲು ಏಜೆನ್ಸಿಗೆ ತಿಳಿಸಿದ್ದಾರೆ. ವಲಸಿಗರ ರಾಷ್ಟ್ರೀಯತೆ ತಕ್ಷಣಕ್ಕೆ ತಿಳಿದುಬಂದಿಲ್ಲ. ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ಹತ್ತು ಕೋಸ್ಟ್ ಗಾರ್ಡ್ ದೋಣಿಗಳು ಮತ್ತು ಎರಡು ಹೆಲಿಕಾಪ್ಟರ್ಗಳು ಭಾಗಿಯಾಗಿವೆ. ಹತ್ತಿರದ ಬಂದರಿನಲ್ಲಿ ಹಲವಾರು ಆಂಬ್ಯುಲೆನ್ಸ್'ಗಳನ್ನ ಸಿದ್ಧವಾಗಿಡಲಾಗಿದೆ.



# ಪೌರತ್ವ ತಿದ್ದುಪಡಿ ಕಾಯ್ದೆ ಜಾರಿ ಕುರಿತು ಅಮೆರಿಕ ಕಳವಳ



**ವಾಷಿಂಗ್ಟನ್:** ಭಾರತದಲ್ಲಿ ಪೌರತ್ವ(ತಿದ್ದುಪಡಿ) ಕಾಯ್ದೆ ಬಗ್ಗೆ ಅಧಿಸೂಚನೆ ಹೊರಡಿಸಿರುವ ಬಗ್ಗೆ ಅಮೆರಿಕ ತೀವ್ರ, ಕಳವಳ ವ್ಯಕ್ತಪಡಿಸಿದೆ. ಇದರ ಅನುಷ್ಠಾನದ ಬಗ್ಗೆ ನಿಗಾ ವಹಿಸುವುದಾಗಿ ಹೇಳಿದೆ.

ಮಾರ್ಚ್ 11ರಂದು ಪೌರತ್ವ (ತಿದ್ದುಪಡಿ) ಕಾಯ್ದೆಯ ಅಧಿಸೂಚನೆ ಹೊರಡಿಸಿದ ಬಗ್ಗೆ ನಮಗೆ ತೀವ್ರ, ಆತಂಕವಿದೆ ಎಂದು ರಕ್ಷಣಾ ಇಲಾಖೆ ವಕ್ತಾರ ಮ್ಯಾಥ್ಯೂ ಮಿಲ್ಲರ್ ಹೇಳಿದ್ದಾರೆ.

ಇದನ್ನು ಹೇಗೆ ಅನುಷ್ಠಾನಗೊಳಿಸಲಾಗುತ್ತದೆ ಎಂಬ ಬಗ್ಗೆ ನಾವು ತೀವ್ರ, ಕಣ್ಗಾವಲು ಇಟ್ಟಿದ್ದೇವೆ. ಧಾರ್ಮಿಕ ಸ್ವಾತಂತ್ರ್ಯಕ್ಕೆ ಗೌರವ ಮತ್ತು ಎಲ್ಲ ಸಮುದಾಯಗಳಿಗೆ ಕಾನೂನಿಗಡಿ ಸಮಾನ ಪರಿಗಣನೆಯು ಪ್ರಜಾಸತ್ತಾತ್ಮಕ ತತ್ವಗಳ ಮೂಲಭೂತ ಅಂಶಗಳು ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಭಾರತ ಸರ್ಕಾರ ಪೌರತ್ವ (ತಿದ್ದುಪಡಿ) ಕಾಯ್ದೆ-2019ನ್ನು ಸೋಮವಾರ ಜಾರಿಗೊಳಿಸಿದ್ದು, ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಿಂದ 2014ರ ಡಿಸೆಂಬರ್ 31ಕ್ಕೆ ಮುನ್ನ ಭಾರತಕ್ಕೆ ಬಂದ ಮುಸ್ಲಿಮೇತರ ವಲಸೆಗಾರರಿಗೆ ಪೌರತ್ವ ಮಂಜೂರು ಮಾಡಲು ಇದು ಅವಕಾಶ ಮಾಡಿಕೊಡುತ್ತದೆ. ಇದು ಭಾರತೀಯ ಮುಸ್ಲಿಮರ ಪೌರತ್ವದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಅವರು ಹಿಂದೂಗಳಂತೆಯೇ ಎಲ್ಲ ಹಕ್ಕುಗಳನ್ನು ಹೊಂದಿರುತ್ತಾರೆ. ಆದ್ದರಿಂದ ಭಾರತೀಯ ಮುಸ್ಲಿಮರು ಸಿಎಎ ಬಗ್ಗೆ ಆತಂಕಪಡುವ ಅಗತ್ಯವಿಲ್ಲ ಎಂದು ಭಾರತ ಸರ್ಕಾರ ಹೇಳಿಕೆ ನೀಡಿತ್ತು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಡೆವಿಲ್ ಶೂಟಿಂಗ್'ಗೂ ಮುನ್ನ ಕುಕ್ಕೆಗೆ ಭೇಟಿ ನೀಡಿದ ದರ್ಶನ್ ಟೀಮ್






ಡೆವಿಲ್ ಚಿತ್ರತಂಡದಿಂದ ಹೊಸದೊಂದು ಅಪ್ ಡೇಟ್ ಸಿಕ್ಕಿದೆ. ಈಗಾಗಲೇ ದರ್ಶನ್ ನಟನೆಯ ಡೆವಿಲ್ ಚಿತ್ರೀಕರಣ ಶುರುವಾಗಿದೆ ಎಂದೇ ಹೇಳಲಾಗಿತ್ತು. ಆದರೆ, ಈವರೆಗೂ ಚಿತ್ರದ ಶೂಟಿಂಗ್ ಮಾಡಿಲ್ಲವೆಂದು ಗೊತ್ತಾಗಿದೆ. ಮೊದಲ ಹಂತದ ಚಿತ್ರೀಕರಣವು ಇದೇ ಸೋಮವಾರದಿಂದ ಬೆಂಗಳೂರಿನ ರಾಕ್ ಲೈನ್ ಸ್ಟುಡಿಯೋದಲ್ಲಿ ನಡೆಯಲಿದೆ. ಅದಕ್ಕೂ ಮುನ್ನ ಚಿತ್ರತಂಡ ಕುಕ್ಕೆ ಸುಬ್ರಮಣ್ಯಂ ಸ್ವಾಮಿ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿದೆ. ಈಗಾಗಲೇ 'ಡೆವಿಲ್' ಸಿನಿಮಾದ ಫಸ್ಟ್ ಲುಕ್ ರಿಲೀಸ್ ಆಗಿ ಭರ್ಜರಿ ಸೌಂಡ್ ಮಾಡ್ತಿದೆ. ದಚ್ಚು ಹುಟ್ಟುಹಬ್ಬದ ದಿನ ಫ್ಯಾನ್ಸ್‌ಗೆ ಇದೊಂದು ಸರ್ಪ್ರೈಸ್ ಗಿಫ್ಟ್ ಆಗಿತ್ತು. ದರ್ಶನ್ 'ಡೆವಿಲ್'ನಲ್ಲಿ ವಿಭಿನ್ನ ಲುಕ್‌ನಲ್ಲಿ ಕಾಣಿಸ್ಕೊಂಡಿದ್ದಾರೆ. ಹಾಗಾದ್ರೆ ಈ ಸಿನಿಮಾದ ಬ್ಲಾಕ್‌ಬಸ್ಟರ್ ಅಪ್‌ಡೇಟ್ ಏನು? ಶೂಟಿಂಗ್ ಶುರುವಾಗೋದು ಯಾವಾಗ? ಆ ಬಗ್ಗೆ ಖುದ್ದು ದರ್ಶನ್ ಬಿಚ್ಚಿಟ್ಟ ಮಾಹಿತಿ ಇಲ್ಲಿದೆ.

ದರ್ಶನ್ ಹುಟ್ಟುಹಬ್ಬದ ದಿನವೇ 'ಡೆವಿಲ್' ಚಿತ್ರದ ಫಸ್ಟ್ ಲುಕ್ ರಿವೀಲ್ ಆಯ್ತು. ಅಬ್ಬರಿಸುವ ಡೈಲಾಗ್ ಮೂಲಕ ದಚ್ಚು ಎಂಟ್ರಿ ಬಹಳ ಕುತೂಹಲಕಾರಿಯಾಗಿತ್ತು. 'ನಮ್ಮ ಮನೆಯಲ್ಲೊಂದು ಪುಟ್ಟ ಪಾಪು ಇರುವುದು' ಎಂಬ ವಿಭಿನ್ನ ಡೈಲಾಗ್ ಹೇಳುವ ಮೂಲಕ ದರ್ಶನ್ ಉಗ್ರವಾಗಿ ಕಾಣಿಸಿಕೊಂಡಿದ್ದಾರೆ. ಹೀಗಾಗಿ ನಿರೀಕ್ಷೆ ದುಪ್ಪಟ್ಟಾಗಿದೆ. ಮಾರ್ಚ್‌ನಿಂದ ಚಿತ್ರೀಕರಣ ಪ್ರಾರಂಭವಾಗುತ್ತದೆ ಎಂದಿದ್ದರು ದರ್ಶನ್. ಅದು ಈಗ ನಿಜವಾಗಿದೆ. ಮಿಲನ ಪ್ರಕಾಶ್ ಈ ಸಿನಿಮಾವನ್ನು ನಿರ್ದೇಶನ ಮಾಡಲಿದ್ದು, ಅಜನೀಶ್ ಲೋಕನಾಥ್ ಅವರ ಸಂಗೀತ ಸಂಯೋಜನೆ ಚಿತ್ರಕ್ಕೆ ಇರಲಿದೆ, ವೈಷ್ಣೋ ಬ್ಯಾನರ್ ಅಡಿಯಲ್ಲಿ ಈ ಸಿನಿಮಾ ನಿರ್ಮಾಣವಾಗಲಿದೆ.

ಡಿಬಾಸ್ ಕೈಯಲ್ಲಿ ಈಗ 9ಕ್ಕೂ ಹೆಚ್ಚು ಚಿತ್ರಗಳಿವೆ. ರಮೇಶ್ ಪಿಳ್ಳೈ, ಶೈಲಜಾ ನಾಗ್ ಮತ್ತು ಬಿ.ಸುರೇಶ, ಮೋಹನ್ ನಟರಾಜನ್, ಸೂರಪ್ಪ ಬಾಬು, ಸಚ್ಚಿದಾನಂದ ಇಂಡುವಾಳ, ಕೆ.ಮಂಜುನಾಥ್, ರಘುನಾಥ್ ಸೋಗಿ, ಮಹೇಶ್ ಸುಖಧರೆ, ರಾಘವೇಂದ್ರ ಹೆಗ್ಡೆ ಹೀಗೆ ಸಾಲು ಸಾಲು ನಿರ್ಮಾಪಕರು ದರ್ಶನ್‌ಗಾಗಿ ಸಿನಿಮಾ ಮಾಡಲು ಮುಂದೆ ಬಂದಿದ್ದಾರೆ. ದರ್ಶನ್ ಹುಟ್ಟುಹಬ್ಬದಂದು (ಫೆ.16) ಸಿನಿಮಾಗಳನ್ನು ಘೋಷಣೆ ಕೂಡ ಮಾಡಿದ್ದಾರೆ.

# 'ಅಪ್ಪುಗೆ' ಹಾಡು ರಿಲೀಸ್ ಮಾಡಿದ ಪುನೀತ್ ಪುತ್ರಿ ವಂದಿತಾ




ಯುವರಾಜ್ ಕುಮಾರ್ ಮುಖ್ಯ ಭೂಮಿಕೆಯಲ್ಲಿ ಮೂಡಿ ಬಂದಿರುವ ಯುವ ಚಿತ್ರದ ಮತ್ತೊಂದು ಹಾಡು ಇಂದು ಬಿಡುಗಡೆ ಆಗಿದೆ. 'ಅಪ್ಪುಗೆ' ಹೆಸರಿನಲ್ಲಿ ಮೂಡಿ ಬಂದಿರುವ ಈ ಹಾಡಿನ ಲಿರಿಕಲ್ ವಿಡಿಯೋವನ್ನು ಪುನೀತ್ ರಾಜ್ ಕುಮಾರ್ ಪುತ್ರಿ ವಂದಿತಾ ಇಂದು ಬಿಡುಗಡೆ ಮಾಡಿದರು.

ಅಪ್ಪುಗೆ ಮೇಲೆ ಚಿತ್ರಿತವಾದ ವಿಶೇಷ ಹಾಡು ಇದಾಗಿದ್ದು, ಸಂತೋಷ್ ಆನಂದ್ ರಾಮ್ ನಿರ್ದೇಶನದಲ್ಲಿ, ಹೊಂಬಾಳೆ ಫಿಲಂಸ್ ನಲ್ಲಿ ಬ್ಯಾನರ್ ಅಡಿ ವಿಜಯ್ ಕಿರಗಂದೂರ್ ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ. ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ನಡೆದ ಸಮಾರಂಭದಲ್ಲಿ ಈ ಹಾಡು ಬಿಡುಗಡೆ ಆಗಿದೆ.

ಲಿರಿಕಲ್ ವಿಡಿಯೋ ಬಿಡುಗಡೆ ಕಾರ್ಯಕ್ರಮದಲ್ಲಿ ನಟ ಯುವರಾಜ್, ನಿರ್ದೇಶಕ ಸಂತೋಷ್ ಆನಂದ್ ರಾಮ್, ಅಪ್ಪು ಮಗಳು ವಂದಿತಾ ಸೇರಿದಂತೆ ಹಲವರು ಭಾಗಿಯಾಗಿದ್ದಾರೆ. ತಂದೆ ಮಗನ ಬಾಂಧ್ಯವದ ಹಾಡು ಇದಾಗಿದ್ದು, ಯುವ ಸಿನಿಮಾದ ಬಹುಮುಖ್ಯ ಘಟ್ಟದಲ್ಲಿ ಹಾಡು ಇರಲಿದೆ. ಈ ಹಾಡನ್ನು ಬಿಡುಗಡೆ ಮಾಡಿದ ವಂದಿತಾಗೆ ಚಿತ್ರತಂಡದಿಂದ ಅಪ್ಪು ಫೋಟೋ ಉಡುಗೊರೆಯಾಗಿ ನೀಡಲಾಯಿತು. ಅಪ್ಪನ ಫೋಟೋ ನೋಡಿ ವಂದಿತಾ ಭಾವುಕರಾದರು.

ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆಯಲ್ಲಿ ಈ ಹಾಡು ಮೂಡಿ ಬಂದಿತ್ತು, ವಿಜಯ್ ಪ್ರಕಾಶ್ ಗೀತೆಗೆ ಧ್ವನಿಯಾಗಿದ್ದಾರೆ. ಈ ಹಾಡಿನ ಸಾಹಿತ್ಯ ಸಂತೋಷ್ ಆನಂದ್ ರಾವ್ ಅವರ ಬರವಣಿಗೆಯಲ್ಲಿ ಮೂಡಿ ಬಂದಿದೆ.

# ತಾಜಾ ಸುದ್ದಿಯ ಲಿರಿಕಲ್ ವೀಡಿಯೋ ಮೂಲಕ ನಿಗಿನಿಗಿಸಿತು ಗಂಟುಮೂಟೆ ತಂಡದ 'ಕೆಂಡ'!



'ಗಂಟುಮೂಟೆ' ಚಿತ್ರತಂಡದ ಕಡೆಯಿಂದ ರೂಪುಗೊಂಡಿರುವ 'ಕೆಂಡ' ಚಿತ್ರ ಹಂತ ಹಂತವಾಗಿ ಕುತೂಹಲದ ಕಾವೇರಿಸಿಕೊಂಡು ಸಾಗಿ ಬಂದಿತ್ತು. ಇದೀಗ ಕೆಂಡ ಬಿಡುಗಡೆಯ ಹೊಸ್ತಿಲಿನಲ್ಲಿ ನಿಂತಿದೆ. ಈ ಹೊತ್ತಿನಲ್ಲಿ ಜಯಂತ್ ಕಾಯ್ಕಣಿ ರಚಿಸಿದ 'ತಾಜಾ ತಾಜಾ ಸುದ್ದಿ' ಗೀತೆಗೆ ಪುತ್ರ ರಿತ್ವಿಕ್‌ಕಾಯ್ಕಣಿ ಪ್ರಥಮ ಬಾರಿ ಸಂಗೀತ ಸಂಯೋಜಿಸಿರುವ ಲಿರಿಕಲ್ ವಿಡಿಯೋ ಹಾಡಿನ ಬಿಡುಗಡೆ ಕಾರ್ಯಕ್ರಮ ಎಸ್‌ಆರ್‌ವಿ ಚಿತ್ರಮಂದಿರದಲ್ಲಿ ಅದ್ದೂರಿಯಾಗಿ ನಡೆಯಿತು. ತಂಡಕ್ಕೆ ಶುಭಹಾರೈಸಲು ಯೋಗರಾಜಭಟ್, ಸಂಗೀತ ಸಂಯೋಜಕ ವಿ.ಹರಿಕೃಷ್ಣ, ಡಿ.ಬೀಟ್ಸ್‌ನ ಶೈಲಜಾನಾಗ್ ಮತ್ತು ಜಯಂತ್‌ಕಾಯ್ಕಣಿ ಆಗಮಿಸಿದ್ದರು. ರೂಪಾ ರಾವ್ ಕೆಂಡ ಚಿತ್ರದ ಮೂಲಕ ನಿರ್ಮಾಪಕಿಯಾಗಿದ್ದಾರೆ. ಸಹದೇವ ಕೆಲವಡಿ ಛಾಯಾಗ್ರಹಣ, ನಿರ್ದೇಶನದ ಜೊತೆಗೆ ನಿರ್ಮಾಣದಲ್ಲಿಯೂ ಭಾಗಿಯಾಗಿದ್ದಾರೆ.

ವಿಕಟ ಕವಿ ಯೋಗರಾಜಭಟ್ ಮಾತನಾಡಿ, ಎರಡನೇ ಲಾಕ್‌ಡೌನ್ ಸಂದರ್ಭದಲ್ಲಿ ರಿತ್ವಿಕ್ ಕಾಯ್ಕಣಿ ಜೊತೆ ದೋಸ್ತಿ ಶುರುವಾಯಿತು. ಸದ್ಯದ ಪರಿಸ್ಥಿತಿಯಲ್ಲಿ ಹಾಡು ಇಲ್ಲದೆ ಸಿನಿಮಾ ಬಿಡುಗಡೆ ಅಂತ ಬಂದಾಗ ಎರಡು ತರದ ಅಪಾಯದಲ್ಲಿ ತಗಲಾಕೊಳ್ತಾರೆ. ಬೆಳಿಗ್ಗೆ ಸ್ನಾನದ ಮನೆಯಲ್ಲಿ ಇರುವಾಗ ನನ್ನ ಹಾಡು ಇಡೀ ಪ್ರಪಂಚ ತಿರುಗಿ ನೋಡುತ್ತೆ ಎನ್ನುವ ಕನಸು. ಹೊರಗೆ ಬಂದಾಗ ಯಾರಿಗೂ ಗೊತ್ತಿಲ್ಲವೆಂಬ ದುಗುಡ. ಒಂದು ವರ್ಷ ಕಷ್ಟಪಟ್ಟು ಚಿತ್ರ ಬಿಡುಗಡೆ ಮಾಡಿದ ನಂತರ, ಚಿತ್ರಮಂದಿರದಿಂದ ಆಚೆ ಬರುವ ಪ್ರೇಕ್ಷಕ ಮುಂದೆ ಯಾವುದು ಅಂತ ಕೇಳುತ್ತಾನೆ. ಆಗ ಅದಕ್ಕಿಂತಲೂ ಉತ್ತಮವಾದುದನ್ನು ಕೊಡಬೇಕು ಎನ್ನುವ ಛಲ ಹುಟ್ಟಿಕೊಳ್ಳುವುದು ಒಂಥರ ಡೇಂಜರ್. ನಾನು ಅಂದುಕೊಂಡಿದ್ದು ಏನು ಇಲ್ಲ. ಹಾಗೆ ನಾಲ್ಕು ಮಂದಿ ತಿರುಗಿ ನೋಡುವಂತೆ ಮಾಡೋದು ತುಂಬ ಕಷ್ಟದ ಕೆಲಸ. ಅಲ್ಲಿ ಸಕ್ಸಸ್ ಕಂಡರೆ, ಇಲ್ಲಿ ವಿರುದ್ಧವಾಗಿರುತ್ತದೆ. ಪ್ರತಿ ಸಿನಿಮಾವು ಇವರೆಡು ಡೇಂಜರ್ಗ್ಗೆ ಬದುಕಬೇಕು. ಇವರೆಡು ಡೇಂಜರ್ಗ್ಗಳ ಮಧ್ಯೆ ಇರೋದು ಸೃಜನಾತ್ಮಕ ಕ್ರಿಯೆ. ಇವೆಲ್ಲವು ನಿಮ್ಮೊಂದಿಗೆ ಸದಾ ಕಾಲ ಕಾಡಲಿ ಎಂದು ಮಾತಿಗೆ ವಿರಾಮ ಹಾಕಿದರು.

ಹಾಡು ಅನ್ನೋದು ಮಾರ್ಕೆಟ್‌ದಲ್ಲಿ ಎಷ್ಟು ಇದೆ ಅಂದರೆ, ನೂರಾರು ಹಾಡುಗಳ ಮಧ್ಯೆ ನಮ್ಮ ಗೀತೆಯನ್ನು ಹುಡುಕುವುದು ಸವಾಲಿನ ಕೆಲಸ ಆಗಿರುತ್ತದೆ. ಅವುಗಳ ಮಧ್ಯೆ ನಮ್ಮ ಸಾಂಗ್ ಗುರುತಿಸಿಕೊಳ್ಳಬೇಕೆಂಬುದು ಪ್ರತಿಯೊಬ್ಬ ಸಂಗೀತ ನಿರ್ದೇಶಕನ ಆಸೆಯಾಗಿರುತ್ತದೆ. ಬರಹಗಾರನ ಶ್ರಮ ಗೆದ್ದಾಗ ಖುಷಿ ಕೊಡುತ್ತೆ. ಸೋತಾಗ ಜವಬ್ದಾರಿ ಹೆಚ್ಚಾಗುತ್ತದೆ. ಇದರಲ್ಲಿರುವ ಮೂರು ಗೀತೆಗಳು ಯಾವುದೇ ಸಂಗೀತದ ಛಾಯೆ ಕಾಣಿಸುವುದಿಲ್ಲ. ಅದೇ ತಂಡದ ಮೊದಲ ಗೆಲುವು ಎನ್ನಬಹದು. ಅದನ್ನು ಆಲಿಸಿದಾಗ ಹೊಸತನ ಕಂಡುಬರುತ್ತದೆ. ಹೀಗೆ ನಿಮ್ಮಗಳ ವಿನೂತನ ಪ್ರಯತ್ನ ಯಶಸ್ವಿಯಾಗಲಿ ಅಂತಾರೆ ವಿ.ಹರಿಕೃಷ್ಣ.

ಶೈಲಜಾನಾಗ್ ಹೇಳುವಂತೆ ಪ್ರತಿಯೊಂದು ಸಿನಿಮಾದ ಹಿಂದೆ ಶ್ರಮ ಇದ್ದೇ ಇರುತ್ತದೆ. ಯಾವುದೇ ನಿರ್ಮಾಪಕ ಹಣ ವಾಪಸ್ಸು ಬರಲೆಂದೇ ಬಂಡವಾಳ ಹೂಡುತ್ತಾನೆ. ಸುಮ್ಮನೆ ತಮಾಷೆಗೆ ಮಾಡುವುದಿಲ್ಲ. ಇದು ಕೂಡ ವ್ಯಾಪಾರ. ಬೇರೆ ಭಾಷೆಗಳ ನಡುವೆ ನಮ್ಮ ಚಿತ್ರ ಗುರುತಿಸಿಕೊಳ್ಳುವಂತೆ ಮಾಡಬೇಕಾಗಿದೆ. ಆಗ ಮಾತ್ರ ಎಲ್ಲಾ ಕಡೆ ಗುರುತಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂಬುದು ಅವರ ಅಭಿಪ್ರಾಯವಾಗಿತ್ತು. ಕೆಲವು ಸಲ ಹಾಡು ಬರೆಯುವಾಗ, ಈ ಸಾಲು ಎಲ್ಲೋ ಬಂದಿದೆಯೆಲ್ಲಾ ಅಂತ ಪಕ್ಕಕ್ಕೆ ಇಟ್ಟಿದ್ದುಂಟು. ಆಮೇಲೆ ನಾನೇ ಬರೆದುದಲ್ಲ ಅಂತ ಗೊತ್ತಾಗುತ್ತದೆ. ತಂತ್ರಜ್ಞಾನ ಬದಲಾದಂತೆ ಮೂಲ ಹಾಡನ್ನು ಯಾರು ಕೇಳುವುದಿಲ್ಲ. ಕೇವಲ ನಾಲ್ಕು ಸಾಲುಗಳನ್ನು ಆಲಿಸುತ್ತಾರೆ. ಇದರಿಂದ ಕಲೆಯ ಮೇಲೆ ಜವಬ್ದಾರಿ ಮತ್ತು ಚ್ಯಾಲೆಂಜ್ ಬಹಳ ಜಾಸ್ತಿ ಇರುತ್ತದೆ. ಇದಕ್ಕಾಗಿ ತಂಡಕ್ಕೆ ಅಭಿನಂದನೆಗಳನ್ನು ಹೇಳ್ತನೆ. ಮಗ ತನಗೆ ಇಷ್ಟವಾದುದನ್ನು ಮಾಡಿದ್ದರಿಂದ ಖುಷಿಯಾಗಿದೆ. ನಿರ್ದೇಶಕರು ಹಾಡು ಬರೆದುಕೊಡಿ ಎಂದು ಕೇಳಿಕೊಂಡು ಬಂದಾಗ, ನನ್ನ ಹಾಡು ಹಿಟ್ ಆಗಲೆಂದು ಬರೆಯುತ್ತೇನೆ. ಅದರಿಂದ ನಿಮ್ಮ ಚಿತ್ರಕ್ಕೆ ಸಹಾಯವಾಗಲಿ. ಹಾಡು ಚಿತ್ರದ ನಿರೂಪಣೆಯ ಭಾಗವಾಗಿರುತ್ತದೆ. ಇಂತಹ ಹೊಸ ತಲೆಮಾರಿನ ಚಿತ್ರಗಳು ಜನರಿಗೆ ತಲುಪಲಿ ಎಂದು ಜಯಂತ್ ಕಾಯ್ಕಿಣಿ ಹೇಳಿದರು.

ಬೆಂಗಳೂರಿನಂಥ ಮಹಾನಗರಿಯಲ್ಲಿ ನಿರಾಸೆಗೊಳಗಾದ ಯುವ ಸಮೂಹ. ರಾಜಕೀಯ, ಅಪರಾಧ ಸೇರಿದಂತೆ ಒಂದಷ್ಟು ಸಾಮಾಜಿಕ ಅಂಶಗಳು ಚಿತ್ರದಲ್ಲಿದೆ. ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಕಥಾನಾಯಕ ಹೇಗೆ ಈ ವ್ಯವಸ್ಥೆಯ ಚಕ್ರವ್ಯೂಹಕ್ಕೆ ಸಿಲುಕುತ್ತಾನೆ. ಆತನನ್ನು ಪಟ್ಟಭದ್ರರು ಹೇಗೆಲ್ಲಾ ಬಳಸಿಕೊಳ್ಳುತ್ತಾರೆ. ಆ ಕ್ಷಣದೊಂದು ನಿರ್ಧಾರ ಆತನ ಬದುಕನ್ನು ಯಾವ ದಿಕ್ಕಿನತ್ತ ಮುನ್ನಡೆಸುತ್ತೆ ಎಂಬಂತಹ ಸನ್ನಿವೇಶಗಳನ್ನು ತೋರಿಸಲಾಗುತ್ತಿದೆ. ಒಟ್ಟಾರೆಯಾಗಿ ಈ ದಿನಮಾನದ ಮಟ್ಟಿಗೆ ವಿಭಿನ್ನ ಚಿತ್ರವಾಗಲಿದೆಯಂತೆ. ನಾಯಕನಾಗಿ ಬಿ.ವಿ.ಭರತ್, ಪ್ರಣವ್ ಶ್ರೀಧರ್, ವಿನೋದ್ ರವೀಂದ್ರನ್, ಗೋಪಾಲ್ ಕೃಷ್ಣ ದೇಶಪಾಂಡೆ ಉಳಿದಂತೆ ಬಹುತೇಕ ರಂಗಭೂಮಿ ಪ್ರತಿಭೆಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಆಸ್ಕರ್ ಪ್ರಶಸ್ತಿ ವಿಜೇತ ಎಲಿಫೆಂಟ್ ವಿಸ್ಪರ್ಸ್ ಚಿತ್ರದ ಭಾಗವಾಗಿದ್ದ ಶ್ರೇಯಾಂಕ್ ನಂಜಪ್ಪ ಶಬ್ಧ ಸಂಯೋಜನೆ ಮಾಡಿದ್ದಾರೆ. ಬೆಂಗಳೂರು ಸುತ್ತಮುತ್ತ, ಕೋಲಾರದಲ್ಲಿ ಚಿತ್ರೀಕರಣ ನಡೆಸಲಾಗಿದೆ.



## ಹಾಲಿ ಚಾಂಪಿಯನ್ಸ್ ಮುಂಬೈ ಮನೆಗೆ

# ಆರ್‌ಸಿಬಿ ಮೊದಲ ಬಾರಿ ಫೈನಲ್‌ಗೆ



ರೋಚಕ ಪಂದ್ಯದಲ್ಲಿ ಜಿದ್ದಾ-ಜಿದ್ದಿ ಹೋರಾಟ ನಡೆಸಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಹಾಲಿ ಚಾಂಪಿಯನ್ಸ್ ಮುಂಬೈ ಇಂಡಿಯನ್ಸ್‌ಗೆ ಸೋಲುಣಿಸಿ ಮಹಿಳಾ ಪ್ರೀಮಿಯರ್ ಲೀಗ್‌ನಲ್ಲಿ ಮೊದಲ ಬಾರಿಗೆ ಫೈನಲ್ ತಲುಪಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 135 ರನ್ ಗಳಿಸಿತ್ತು. ಈ ಗುರಿ ಬೆನ್ನತ್ತಿದ್ದ ಮುಂಬೈ ಇಂಡಿಯನ್ಸ್ ನಿಗದಿತ ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 130 ರನ್ ಗಳಿಸಿ 5 ರನ್‌ಗಳ ಅಂತರದಲ್ಲಿ ಸೋಲನುಭವಿಸಿತು.

**ಕೊನೇ ಓವರ್‌ನ ರೋಚಕತೆ ಹೇಗಿತ್ತು?:** ಕೊನೇ 6 ಎಸೆತಗಳಲ್ಲಿ ಮುಂಬೈ ಗೆಲುವಿಗೆ 12 ರನ್‌ಗಳ ಅಗತ್ಯವಿತ್ತು. ಮೊದಲ 2 ಎಸೆತಗಳಲ್ಲಿ 2 ರನ್ ಮುಂಬೈ ತಂಡಕ್ಕೆ ಸೇರ್ಪಡೆಯಾಯಿತು. 3ನೇ ಎಸೆತದಲ್ಲಿ 2 ರನ್ ತಂದು ಕೊಟ್ಟ ಪೂಜಾ ವಸ್ತಕಾರ್ 4ನೇ ಎಸೆತದಲ್ಲಿ ಸ್ಟಂಪ್ ಔಟ್‌ಗೆ ತುತ್ತಾದರು. ಇದರಿಂದ ಪಂದ್ಯ ಮತ್ತಷ್ಟು ರೋಚಕ ಹಂತಕ್ಕೆ ತಲುಪಿತ್ತು. ಅಭಿಮಾನಿಗಳ ಎದೆ ಬಡಿತ ಹೆಚ್ಚಾಗಿತ್ತು, ಪದೇ ಪದೇ ಆರ್‌ಸಿಬಿ ಆರ್‌ಸಿಬಿ ಎನ್ನುತ್ತಲೇ ಗುನುಗುತ್ತಿದ್ದರು. ಮುಂದಿನ ಎಸೆತ ಏನಾಗುತ್ತದೆ? ಸಿಕ್ಸರ್ ಸಿಡಿಯುತ್ತಾ- ಬೌಂಡರಿ ಬೀಳುತ್ತಾ? ಎಂಬ ಕುತೂಹಲ ಮೂಡಿತ್ತು. 5ನೇ ಎಸೆತದಲ್ಲಿ ಸ್ಟ್ರೈಕ್‌ನಲ್ಲಿದ್ದ ಅಮನ್‌ಜೋತ್ ಕೌರ್ 1 ರನ್ ತಂದುಕೊಟ್ಟರು. ಅಮೇಲಿಯಾ ಕೇರ್ ಸ್ಟ್ರೈಕ್‌ಗೆ ಬರುತ್ತಿದ್ದಂತೆ ಮುಂಬೈ ಅಭಿಮಾನಿಗಳ ಕಾತರ ಹೆಚ್ಚಾಯಿತು. ಹಿಂದಿನ ಪಂದ್ಯಗಳಲ್ಲಿ ಬಿರುಸಿನ ಬ್ಯಾಟಿಂಗ್ ಮಾಡಿದ್ದ ಅಮೇಲಿಯಾ ಸಿಕ್ಸರ್ ಬಾರಿಸುತ್ತಾರೆ ಎಂಬ ವಿಶ್ವಾಸವೂ ಇತ್ತು. ಆದ್ರೆ ಬೌಲಿಂಗ್‌ನಲ್ಲಿ ಚಾಣಾಕ್ಷತೆ ಮೆರೆದ ಆಶಾ ಸೋಭಾನ ಕೇವಲ ಒಂದು ರನ್ ಮಾತ್ರ ಬಿಟ್ಟುಕೊಡುವಲ್ಲಿ ಯಶಸ್ವಿಯಾದರು. ಇದರಿಂದ ಆರ್‌ಸಿಬಿ 5 ರನ್‌ಗಳ ರೋಚಕ ಗೆಲುವು ಸಾಧಿಸಿತು.

ಇದಕ್ಕೂ ಮುನ್ನ ಚೇಸಿಂಗ್ ಆರಂಭಿಸಿದ್ದ ಮುಂಬೈ ಇಂಡಿಯನ್ಸ್ ಸಹ ನಿಧಾನಗತಿಯ ಬ್ಯಾಟಿಂಗ್ ನಡೆಸಿತ್ತು. ಮೊದಲ 10 ಓವರ್‌ಗಳಲ್ಲಿ 60 ರನ್‌ಗಳಿಗೆ 2 ವಿಕೆಟ್ ಕಳೆದುಕೊಂಡಿತ್ತು. ಅಲ್ಲಿಯವರೆಗೂ ಇತ್ತಂಡಗಳ ನಡುವೆ ಜಿದ್ದಾಜಿದ್ದಿ ನಡೆದಿತ್ತು. ಆದ್ರೆ 4ನೇ ಕ್ರಮಾಂಕದಲ್ಲಿ ಕ್ರೀಸ್‌ಗಿಳಿದ ನಾಯಕಿ ಹರ್ಮನ್ ಪ್ರೀತ್‌ಕೌರ್ ಆರ್‌ಸಿಬಿ ಬೌಲರ್‌ಗಳನ್ನು ಹಿಗ್ಗಾಮುಗ್ಗಾ ಬೆಂಡೆತ್ತಿದರು. ಇದಕ್ಕೆ ಆಲ್‌ರೌಂಡರ್ ಅಮೇಲಿಯಾ ಕೇರ್ ಸಹ ಸಾಥ್ ನೀಡಿದರು. ಇದರಿಂದ ಗೆಲುವು ಮುಂಬೈ ತಂಡಕ್ಕೆ ಎಂದೇ ಭಾವಿಸಲಾಗಿತ್ತು. ಹರ್ಮನ್ ವಿಕೆಟ್ ಬೀಳುತ್ತಿದ್ದಂತೆ ಮತ್ತೆರಡು ವಿಕೆಟ್ ಉರುಳಿದ್ದು, ತಂಡಕ್ಕೆ ಭಾರೀ ದೊಡ್ಡ ಆಘಾತ ನೀಡಿತ್ತು. ಕೊನೆನೇ ಕ್ಷಣದಲ್ಲಿ ಸಜೀವನ್ ಸಜನ ಅವರ ಸ್ಟಂಪ್ ಔಟ್ ಸಹ ಮುಂಬೈ ಸೋಲಿಗೆ ಕಾರಣವಾಯಿತು.

ಮುಂಬೈ ಪರ ನಾಯಕಿ ಹರ್ಮನ್ ಪ್ರೀತ್ ಕೌರ್ 33 ರನ್, ಅಮೇಲಿಯಾ ಕೇರ್ 27 ರನ್, ಯಾಸ್ತಿಕಾ ಭಾಟಿಯಾ 19ರನ್, ಹೇಲಿ ಮ್ಯಾಥ್ಯೂಸ್ 15 ರನ್, ನಟಾಲಿ ಸ್ಕಿವರ್ ಬ್ರಂಟ್ 23ರನ್, ಗಳಿಸಿದ್ರೆ, ಪೂಜಾ ವಸ್ತಕಾರ್ 4 ರನ್, ಸಜೀವನ್ ಸಜನ, ಅಮನ್‌ಜೋತ್ ಕೌರ್ ತಲಾ ಒಂದೊಂದು ರನ್ ಗಳಿಸಿದರು. ಆರ್‌ಸಿಬಿ ಪರ ಶ್ರೇಯಾಂಕ ಪಾಟೀಲ್ 2 ವಿಕೆಟ್, ಎಲ್ಲಿಸ್ ಪೆರಿ, ಸೋಫಿ ಮೋಲಿನೆಕ್ಸ್, ಜಾರ್ಜಿಯಾ, ಸೋಭಾನಾ ತಲಾ ಒಂದೊಂದು ವಿಕೆಟ್ ಪಡೆದು ಮಿಂಚಿದರು.

# ಕೊಹ್ಲಿ ಜೊತೆಗೆ ಬಾಬರ್, ಧೋನಿ ಜೊತೆಗೆ ರಿಜ್ವಾನ್, ಬುಮ್ರಾ ಜೊತೆಗೆ ಶಾಹೀನ್ ಶಾ ಅಫ್ರಿದಿ?



ಇದೇ ಮಾರ್ಚ್ 22 ರಿಂದ ವಿಶ್ವದ ಶ್ರೀಮಂತ ಕ್ರಿಕೆಟ್ ಲೀಗ್ ಇಂಡಿಯನ್ ಪ್ರೀಮಿಯರ್ ಲೀಗ್ ಆರಂಭಗೊಳ್ಳುತ್ತಿದೆ. ಉದ್ಘಾಟನಾ ಪಂದ್ಯದಲ್ಲೇ ಹಾಲಿ ಚಾಂಪಿಯನ್ಸ್ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳ ನಡುವೆ ಸೆಣಸಾಟ ನಡೆಯಲಿದೆ. ಚೆನ್ನೈನ ಚಿದಂಬರಂ (ಚೆಪಾಕ್) ಕ್ರಿಕೆಟ್ ಕ್ರೀಡಾಂಗಣದಲ್ಲಿ ಇತ್ತಂಡಗಳು ನಡುವೆ ಕಾದಾಟ ನಡೆಸಲಿವೆ.

ಈ ನಡುವೆ ಐಪಿಎಲ್‌ನಲ್ಲಿ ತಮ್ಮ ದೇಶದ ಆಟಗಾರರು ಪಾಲ್ಗೊಳ್ಳಬೇಕು ಎಂದು ಪಾಕಿಸ್ತಾನದ ಕ್ರಿಕೆಟ್ ಅಭಿಮಾನಿಗಳು ಬಯಕೆ ವ್ಯಕ್ತಪಡಿಸಿದ್ದಾರೆ. ಅದಕ್ಕಾಗಿಯೇ ವಿಶೇಷ ಪೋಸ್ಟರ್‌ಗಳನ್ನು ತಾವೇ ತಮ್ಮ ಸೋಶಿಯಲ್ ಮೀಡಿಯಾ ಖಾತೆಗಳಲ್ಲಿ ಹಂಚಿಕೊಳ್ಳುತ್ತಿದ್ದಾರೆ. ಅದರಲ್ಲೂ ಮುಖ್ಯವಾಗಿ ಆರ್‌ಸಿಬಿ ತಂಡದಲ್ಲಿ ವಿರಾಟ್ ಕೊಹ್ಲಿ ಅವರೊಂದಿಗೆ ಪಾಕ್ ತಂಡದ ಮಾಜಿ ನಾಯಕ ಬಾಬರ್ ಆಜಂ ಇರಬೇಕು ಅನ್ನೋ ಬಯಕೆ ವ್ಯಕ್ತಪಡಿಸಿದ್ದಾರೆ.

ಅಲ್ಲದೇ ಮುಂಬೈ ಇಂಡಿಯನ್ಸ್‌ನಲ್ಲಿ ಜಸ್ಪ್ರೀತ್ ಬುಮ್ರಾ ಜೊತೆಗೆ ಶಾಹೀನ್ ಶಾ ಅಫ್ರಿದಿ, ಚೆನ್ನೈ ಸೂಪರ್ ಕಿಂಗ್ಸ್‌ನಲ್ಲಿ ಧೋನಿಯೊಂದಿಗೆ ಮೊಹಮ್ಮದ್ ರಿಜ್ವಾನ್ ಅವರನ್ನು ನೋಡಲು ಬಯಸುತ್ತೇನೆ ಎಂದು ಅಭಿಮಾನಿಯೊಬ್ಬರು ಖಾತೆಯಲ್ಲಿ ವಿಶೇಷ ಫೋಟೋಗಳೊಂದಿಗೆ ಹಂಚಿಕೊಂಡಿದ್ದಾರೆ. ಆದ್ರೆ ಪಾಕ್ ಅಭಿಮಾನಿಗಳ ಆಸೆಗೆ ಹರ್ಭಜನ್ ಸಿಂಗ್ ತಣ್ಣೀರು ಎರಚಿದ್ದಾರೆ. ಭಾರತೀಯರಿಗೆ ಅಂತಹ ಯಾವುದೇ ಕನಸುಗಳು ಇಲ್ಲ. ನೀವು ಕನಸು ಕಾಣೋದನ್ನ ನಿಲ್ಲಿಸಿ, ಈಗಲೇ ಎದ್ದೇಳಿ ಎಂದು ಟಾಂಗ್ ಕೊಟ್ಟಿದ್ದಾರೆ.

**ಐಪಿಎಲ್ ಆರಂಭ ಯಾವಾಗ?:** ಬಹುನಿರೀಕ್ಷಿತ 17ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಇದೇ ಮಾರ್ಚ್ 22 ರಿಂದ ಆರಂಭವಾಗಲಿದೆ. ಲೋಕಸಭಾ ಚುನಾವಣೆ ಹಿನ್ನೆಲೆ ಮೊದಲ 15 ದಿನಗಳು ಕಾಲ ನಡೆಯುವ 21 ಪಂದ್ಯಗಳ ವೇಳಾಪಟ್ಟಿಯನ್ನು ಮಾತ್ರ ಪ್ರಕಟಿಸಲಾಗಿದೆ. ಲೋಕಸಭಾ ಚುನಾವಣಾ ದಿನಾಂಕ ಪ್ರಕಟವಾದ ಬಳಿಕ ಮುಂದಿನ ವೇಳಾಪಟ್ಟಿ ಪ್ರಕಟಿಸುವುದಾಗಿ ಬಿಸಿಸಿಐ ಸ್ಪಷ್ಟಪಡಿಸಿದೆ. 2019ರ ಲೋಕಸಭಾ ಚುನಾವಣೆ ಅವಧಿಯಲ್ಲೂ ಇದೇ ವಿಧಾನ ಅನುಸರಿ ಎರಡು ಹಂತಗಳಲ್ಲಿ ಟೂರ್ನಿಯನ್ನು ನಡೆಸಲಾಗಿತ್ತು. ಸದ್ಯ ಮಾ. 22ರಿಂದ ಏಪ್ರಿಲ್ 7ರ ತನಕ 21 ಪಂದ್ಯಗಳು ನಡೆಯಲಿದ್ದು, ಈ ಪೈಕಿ 4 ಡಬಲ್ ಹೆಡ್ಡರ್ ಪಂದ್ಯಗಳು ನಡೆಯಲಿವೆ. ಉದ್ಘಾಟನಾ ಪಂದ್ಯವು ರಾತ್ರಿ 8 ಗಂಟೆಗೆ ಆರಂಭವಾಗಲಿದೆ. ಉಳಿದ ಪಂದ್ಯಗಳು ಸಂಜೆ 7.30ಕ್ಕೆ ಪ್ರಾರಂಭವಾಗಲಿವೆ. ಡಬಲ್ ಹೆಡ್ಡರ್ ದಿನದಂದು ಮೊದಲ ಪಂದ್ಯ ಮಧ್ಯಾಹ್ನ 3.30ಕ್ಕೆ ಆರಂಭವಾಗಲಿದೆ.

# ರಾಜ್ಯದ ಬಿಜೆಪಿ ನಾಯಕತ್ವ ಒಂದು ಕುಟುಂಬದ ಕಪಿಮುಷ್ಠಿಯಲ್ಲಿ ಸಿಲುಕಿದೆ



**ಶಿವಮೊಗ್ಗ:** ಹಾವೇರಿಯಿಂದ ಮಾಜಿ ಸಚಿವ ಕೆಎಸ್ ಈಶ್ವರಪ್ಪ ಅವರ ಪುತ್ರ ಕಾಂತೇಶ್‌ಗೆ ಟಿಕೆಟ್ ತಪ್ಪಿದ ಬಗ್ಗೆ ಈಶ್ವರಪ್ಪ ಆಕ್ರೋಶ ಇನ್ನೂ ತಣ್ಣಗಾಗಿಲ್ಲ. ಇದೀಗ ಮತ್ತೆ ಈಶ್ವರಪ್ಪ ಅವರು ಬಿಎಸ್ ಯಡಿಯೂರಪ್ಪ ವಿರುದ್ಧ ಕಿಡಿಕಾರಿದ್ದಾರೆ.

ಮಗನಿಗೆ ಹಾವೇರಿ ಟಿಕೆಟ್ ಕೈತಪ್ಪಿದ ಹಿನ್ನೆಲೆ ಮಾಧ್ಯಮದ ಜೊತೆ ಮಾತನಾಡಿದ ಮಾಜಿ ಶಾಸಕ ಕೆಎಸ್ ಈಶ್ವರಪ್ಪ, ಹಾವೇರಿ ಲೋಕಸಭೆ ಚುನಾವಣೆಗೆ ಯಡಿಯೂರಪ್ಪರ ಮನೆಗೆ ಹೋದಾಗ ಆ ಕ್ಷೇತ್ರದಲ್ಲಿ ನಿಲ್ಲಿಸಿ ಗೆಲ್ಲಿಸುತ್ತೇನೆ ಅಂತ ಹೇಳಿದ್ದರು. ಈಗ ಕಾಂತೇಶ್ ಗೆ ಟಿಕೆಟ್ ತಪ್ಪಿಸಿ ಯಡಿಯೂರಪ್ಪನವರು ಅನ್ಯಾಯ ಮಾಡಿದ್ದಾರೆ. ಯಡಿಯೂರಪ್ಪ ಹಾಗೂ ಅವರ ಮಗನೇ ನೇರವಾಗಿ ಟಿಕೆಟ್ ಕೈ ತಪ್ಪಿದ್ದಕ್ಕೆ ಕಾರಣ. ಐದು ಬಾರಿ ಶಿವಮೊಗ್ಗ ವಿಧಾನಸಭಾ ಕ್ಷೇತ್ರದಿಂದ ನನ್ನನ್ನು ಗೆಲ್ಲಿಸಿದ್ದಾರೆ. ಅನ್ಯಾಯ ಆಗಿರೋದು ಎಲ್ಲಾ ನಾಯಕರಿಗೂ ಗೊತ್ತಿದೆ ಎಂದು ಹೇಳಿದರು. ಇವತ್ತು ನಡೆಯುವ ಸಭೆಯಲ್ಲಿ ಭಾಗಿಯಾಗಿ ಎಲ್ಲರ ಅಭಿಪ್ರಾಯ ಸಂಗ್ರಹಣೆ ಮಾಡುತ್ತೇನೆ ಎಂದ ಕೆಎಸ್ ಈಶ್ವರಪ್ಪ, ನಾನು ಮುಂದಿನ ದಿನಗಳಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ನಿಲ್ಲಬೇಕೋ ಅಥವಾ ಬೇಡವೇ ಎಂಬುದನ್ನ ಅಲ್ಲೇ ಘೋಷಣೆ ಮಾಡುತ್ತೇನೆ. ಹಿಂದುತ್ವದ ವಾದವಾಗಿ ನಾನು, ಸಿಟಿ ರವಿಯಾಗಲಿ, ಪ್ರತಾಪ್ ಸಿಂಹ ಆಗ್ಲಿ ಎಲ್ಲರೂ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಹಿಂದುತ್ವವೇ ನನ್ನ ಉಸಿರು, ಎಲ್ಲರಿಗೂ ನೋವಾಗಿದೆ. ಯಡಿಯೂರಪ್ಪನವರಿಗೆ ಅವರ ಮಗ ಮುಖ್ಯ. ನನ್ನ ಮನಸಿನಲ್ಲಿ ಇರುವುದು ಮುಖ್ಯ ಅಲ್ಲ ಎಂದು ಹೇಳಿದರು.

**ಮಿಸ್ ಆಗೋದು ಖಚಿತ!:** ಕರ್ನಾಟಕ ರಾಜ್ಯದ ಬಿಜೆಪಿ ನಾಯಕತ್ವ ಒಂದು ಕುಟುಂಬದ ಕಪಿಮುಷ್ಠಿಯಲ್ಲಿ ಸಿಲುಕಿದೆ ಎಂದು ಬಿಎಸ್‌ವೈ ಫ್ಯಾಮಿಲಿ ವಿರುದ್ಧ ಕಿಡಿಕಾರಿದ ಈಶ್ವರಪ್ಪ, ಈ ಹಿನ್ನೆಲೆಯಲ್ಲಿ ಪಕ್ಷದ ಕಾರ್ಯಕರ್ತರ ನೋವಿಗೆ ನಾನು ದನಿಯಾಗಲು ನಾನು ನಿರ್ಧರಿಸಿದ್ದೇನೆ. ನನ್ನ ಮಗನಿಗೆ ಎಂಎಲ್ಸಿ ಮಾಡುವುದಾಗಿ ಯಡಿಯೂರಪ್ಪ ಆಡಿರುವ ಮಾತನ್ನು ನಾನು ನಂಬುವುದಿಲ್ಲ, ಈ ಹಿಂದೆ ಇಂತಹ ಅನೇಕ ಭರವಸೆಗಳು ಹುಸಿಯಾಗಿವೆ. ಯಾವ ಆಧಾರದ ಮೇಲೆ ಅವರ ಮಾತನ್ನು ನಾನು ನಂಬಬೇಕು? ಆ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದರು. ಇನ್ನು, ರಾಜ್ಯದ ಬಿಜೆಪಿ ನಿರ್ಧಾರಗಳು ಕೇವಲ ಒಂದು ಕುಟುಂಬದ ಕೈಯಲ್ಲಿದೆ ಎಂದ ಈಶ್ವರಪ್ಪ, ನೂತನ ರಾಜ್ಯ ಬಿಜೆಪಿಯ ಅಧ್ಯಕ್ಷರಾದ ಬಳಿಕ ಬಿಡುಗಡೆಯಾದ ಪದಾಧಿಕಾರಿಗಳ ಪಟ್ಟಿಗೆ ಇದಕ್ಕೆ ಸಾಕ್ಷಿ. ಯಾರ ಗಮನಕ್ಕೂ ತರದೆ ಪಟ್ಟಿಯನ್ನು ಬಿಡುಗಡೆ ಮಾಡುವುದಕ್ಕೆ

ಬಸವರಾಜ ಬೊಮ್ಮಾಯಿ ಆಕ್ಷೇಪ ವ್ಯಕ್ತಪಡಿಸಿದ್ದರು. ಈ ವಿಷಯದಲ್ಲಿ ತಪ್ಪಾಗಿದೆ ಎಂದು ವಿಜಯೇಂದ್ರ ಅವರು ಹೇಳಿದರು. ಅದಾದ ನಂತರವೂ ಅಂತಹ ನಿರ್ಧಾರಗಳೇ ಮುಂದುವರಿದಿದೆ. ಬಸವರಾಜ ಬೊಮ್ಮಾಯಿ ಸಿ.ಟಿ ರವಿ, ನಳಿನ್ ಕುಮಾರ್ ಕಟೀಲ್, ಪ್ರತಾಪ ಸಿಂಹ ಸೇರಿದಂತೆ ಬಹಳಷ್ಟು ಜನ ಪಕ್ಷದ ಹಿರಿಯ ನಾಯಕರಿಗೆ ಅನ್ಯಾಯವಾಗಿದೆ. ಇವರೆಲ್ಲ ಹಿಂದುತ್ವ ವಿಚಾರಕ್ಕಾಗಿ ಹೋರಾಟವನ್ನು ಮಾಡಿಕೊಂಡು ಬಂದವರು. ಆದರೆ ಹಿಂದುತ್ವ ಕುರಿತ ನಮ್ಮ ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ ಎಂದರು.

ಇನ್ನು, ಹಾವೇರಿಯಿಂದ ನನಗೆ ಟಿಕೆಟ್ ಬೇಡ, ಕಾಂತೇಶ್‌ಗೆ ನೀಡಿ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದರು. ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಕಾಂತೇಶ್‌ಗೆ ಟಿಕೆಟ್ ನೀಡುವಂತೆ ಅವರು ಹೇಳಿದ್ದರು. ನನಗೆ ಟಿಕೆಟ್ ಬೇಡ ನನ್ನ ಆರೋಗ್ಯ ಸರಿ ಇಲ್ಲ ಎಂದು ಕೂಡ ಅವರು ಹೇಳಿದ್ದರು. ಆದರೂ ಬಸವರಾಜ ಬೊಮ್ಮಾಯಿ ಅವರಿಗೆ ಟಿಕೆಟ್ ನೀಡಲಾಗಿದೆ ಎಂದ ಈಶ್ವರಪ್ಪ, ನನ್ನ ಮಗ ನಿಂತಿದ್ದರೆ 5 ಲಕ್ಷಕ್ಕೂ ಹೆಚ್ಚಿನ ಅಂತರದಿಂದ ಗೆಲ್ಲುತ್ತಿದ್ದ. ಹಾಗಂತಾ ಬಸವರಾಜ್ ಬೊಮ್ಮಾಯಿ ಅವರು ಸೋಲುತ್ತಾರೆ ಎಂದು ನಾನು ಹೇಳುವುದಿಲ್ಲ. 28 ಲೋಕಸಭಾ ಕ್ಷೇತ್ರಗಳನ್ನು ಗೆಲ್ಲುವುದು ನಮ್ಮ ಗುರಿ. ಎಲ್ಲ ಕ್ಷೇತ್ರಗಳನ್ನು ಗೆದ್ದು ಮೋದಿ ಮತ್ತೊಮ್ಮೆ ಪ್ರಧಾನಿಯಾಗುವುದೇ ನಮ್ಮ ಮುಖ್ಯ ಉದ್ದೇಶ ಎಂದರು.

ಈ ಪಕ್ಷ ಮತ್ತಷ್ಟು ಗಟ್ಟಿಯಾಗಿ ನೂರಾರು ವರ್ಷ ಇರಬೇಕು ಎಂಬ ಹಿನ್ನೆಲೆಯಲ್ಲಿ ನಾವು ಹೋರಾಟ ಮಾಡುತ್ತಿದ್ದೇವೆ ಎಂದ ಈಶ್ವರಪ್ಪ, ರಾಜ್ಯದ ಬೇರೆ ಬೇರೆ ಕಡೆಗಳಲ್ಲೂ ಟಿಕೆಟ್ ವಂಚಿತರ ಪರವಾಗಿ ಅವರ ಬೆಂಬಲಿಗರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹಾಗೆಂದ ಮಾತ್ರಕ್ಕೆ ಎಲ್ಲರಿಗೂ ಟಿಕೆಟ್ ಕೊಡಬೇಕು ಎಂದು ನಾನು ಹೇಳುವುದಿಲ್ಲ ಎಂದರು.

ಇನ್ನು, ಯಡಿಯೂರಪ್ಪನವರ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿರುವುದ ಹಿಂದೆ ಷಡ್ಯಂತ್ರ ಇದೆ ಎಂದ ಈಶ್ವರಪ್ಪ, ಅವರನ್ನು ರಾಜಕೀಯವಾಗಿ ದೂಷಿಸಲು ಈ ತರ ಆಗಿರಬಹುದು. ಆದರೆ ದೂರು ನೀಡಿರುವವರ ಹಿನ್ನೆಲೆಯೂ ಕೂಡ ಸರಿ ಇಲ್ಲ ಎಂದು ತಿಳಿದುಬಂದಿದೆ. ದೂರು ನೀಡುವ ವ್ಯಕ್ತಿ ಈ ಹಿಂದೆಯೂ ಸಾಕಷ್ಟು ಜನರ ವಿರುದ್ಧ ದೂರು ನೀಡಿದ್ದಾರೆ. ಯಡಿಯೂರಪ್ಪ ಅವರನ್ನು ವೈಯಕ್ತಿಕವಾಗಿ ನಾನು ಹತ್ತಿರದಿಂದ ಬಲ್ಲೆ. ಅವರು ಈ ಆರೋಪದಿಂದ ಮುಕ್ತರಾಗುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದರು.

40 ವರ್ಷಗಳಿಂದ ಯಡಿಯೂರಪ್ಪನವರನ್ನ ನಾನು ನೋಡುತ್ತಿದ್ದೇನೆ ಎಂದ ಈಶ್ವರಪ್ಪ, ಅವರ ವಿರುದ್ಧ ಷಡ್ಯಂತ್ರ ಮಾಡಲಾಗಿದೆ ಎಂದು ಅನಿಸುತ್ತಿದೆ. ಆ ಕೇಸ್ ಹಾಕಿದವರ 50 ಕೇಸ್ ಗಳನ್ನ ಈ ಹಿಂದೆ ಹಾಕಿದ್ದಾರೆ. ಇದೆ ಅವರ ದಂಥೆ ಅನಿಸುತ್ತದೆ ಎಂದರು.

# ನನಗೆ ಟಿಕೆಟ್ ಕೊಡಿಸಿದ್ದು ಪತ್ನಿ ಕುಟುಂಬ ಅಲ್ಲ



**ಮೈಸೂರು:** ನಾನು ಬಹಳಷ್ಟು ಹೋಂ ವರ್ಕ್ ಮಾಡಿಯೇ ರಾಜಕಾರಣಕ್ಕೆ ಬಂದಿದ್ದೇನೆ. ನನ್ನ ರಾಜಕೀಯ ಪ್ರವೇಶದ ಹಿಂದೆ ನನ್ನ ಪತ್ನಿಯ ಕುಟುಂಬದ ಪಾತ್ರ ಇಲ್ಲ ಎಂದು ಮೈಸೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಒಡೆಯರ್ ಸ್ಪಷ್ಟನೆ ನೀಡಿದ್ದಾರೆ. ಈ ಕುರಿತು ಮಾತನಾಡಿದ ಅವರು, ನನಗೆ ಬಿಜೆಪಿ ಟಿಕೆಟ್ ಕೊಡಿಸಿದ್ದು ಪತ್ನಿಯ ಕುಟುಂಬದವರಲ್ಲ ಎಂದರು. ಇನ್ನು ಪ್ರತಾಪ್ ಸಿಂಹಗೆ ಟಿಕೆಟ್ ತಪ್ಪಿರುವ ಬಗ್ಗೆ ಅವರಿಗೆ ನನ್ನ ಮೇಲೆ ಬೇಸರವಿಲ್ಲ. ಅವರೇ ಖುದ್ದಾಗಿ ನನ್ನ ಜೊತೆ ಮಾತನಾಡಿದ್ದಾರೆ. ಅವರು ಪ್ರಚಾರಕ್ಕೆ ಬರುತ್ತಾರೆ. ಅವರು ಮಾಡಿರೋ ಕೆಲಸದಿಂದ ನನ್ನ ಜವಾಬ್ದಾರಿ ಇನ್ನೂ ಹೆಚ್ಚಿದೆ ಎಂದು ಹೇಳಿದರು. ನಮ್ಮ ಮೈಸೂರು ಮತ್ತು ಕೊಡಗು ಅಭಿವೃದ್ಧಿ ಮಾಡಬೇಕು ಎಂಬ ಉದ್ದೇಶದಿಂದ ರಾಜಕೀಯಕ್ಕೆ ಬಂದಿದ್ದೇನೆ. ಇಲ್ಲಿನ ಸಾಂಸ್ಕೃತಿಕ ವಾತಾವರಣವನ್ನು ಸಂರಕ್ಷಣೆ ಮಾಡಬೇಕು ಹಾಗೂ ಅಧಿಕಾರದಲ್ಲಿದ್ದಾಗ ಜನರ ಸೇವೆ ಮಾಡಲು ಹೆಚ್ಚಿನ ಅವಕಾಶವಿದೆ. ಜನರ ನಿರೀಕ್ಷೆಯನ್ನು ನಾನು ಪೂರ್ತಿಮಾಡಲು ಪ್ರಯತ್ನಿಸುತ್ತೇನೆ ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com